ಸಂಪುಟ: 21, ಸಂಚಿಕೆ: 302, ಪುಟಗಳು: 8, ಶುಕ್ರವಾರ, 9 ಆಗಸ್ಟ್ 2024 RNI NO. KARKAN/2002/08054
epaper: www.sanjemugilu.com



ನೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3




ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines




**ಸುಭಾಷಿತ**

ಸಜ್ಜನರೇ ಸಜ್ಜನರ ಆಪತ್ತಿನಲ್ಲಿ ರಕ್ಷಣೆ ನೀಡಬಲ್ಲರು. ಕೆಸರಲ್ಲಿ ಸಿಲುಕಿದ ಆನೆಯನ್ನು ಮತ್ತೊಂದು ಆನೆ ಮಾತ್ರವೇ ರಕ್ಷಿಸಬಲ್ಲದಲ್ಲವೇ?

। ಅನಾಮಿಕ

## ಪಂಚಾಂಗ

(ಶುಕ್ರವಾರ 9, ಆಗಸ್ಟ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ವರ್ಷ ಋತು,
- ಶ್ರಾವಣ ಮಾಸ, ಶುಕ್ಲ ಪಕ್ಷ, ಚತುರ್ಥಿ,
- ಗುರುವಾರ, ಉತ್ತರಪಾಲ್ಗುಣಿ ನಕ್ಷತ್ರ
- ರಾಹುಕಾಲ: 02:03 ರಿಂದ 03:37
- ಗುಳಿಕಕಾಲ: 09:20 ರಿಂದ 10:54
- ಯಮಗಂಡಕಾಲ: 06:11 ರಿಂದ 07:46

## ಸಂಕ್ಷಿಪ್ತ ಸುದ್ದಿ

### ತಾಯಿಯ ಎದುರೇ ತಮ್ಮನನ್ನು ಕೊಂದ ಅಣ್ಣ




**ಬೆಂಗಳೂರು:** ತಾಯಿಯ ಎದುರೇ ತಮ್ಮನನ್ನು ಅಣ್ಣ ಬರ್ಬರವಾಗಿ ಕೊಲೆ ಮಾಡಿರುವ ಘಟನೆ ಬೆಂಗಳೂರಿನ ಬೇಗೂರಿನ ಲಕ್ಷ್ಮೀಪುರದಲ್ಲಿ ನಡೆದಿದೆ. ಪ್ರತಾಪ್ (18 ವರ್ಷ) ಮೃತದುರ್ದೈವಿ. ರಜನಿ (28 ವರ್ಷ) ಕೊಲೆ ಮಾಡಿದ ಆರೋಪಿ. ಬೇಗೂರು ಠಾಣೆ ಪೊಲೀಸರುಆರೋಪಿ ರಜನಿಯನ್ನು ಬಂಧಿಸಿದ್ದಾರೆ.

ಮೃತ ಪ್ರತಾಪ್ ಮೆಕ್ಯಾನಿಕ್ ಆಗಿದ್ದನು. ಅನಾರೋಗ್ಯ ಹಿನ್ನೆಲೆಯಲ್ಲಿ ಆರೋಪಿ ರಜನಿ ಕೆಲಸಕ್ಕೆ ಹೋಗದೆ ಮನೆಯಲ್ಲೇ ಇರುತ್ತಿದ್ದನು. ಕೆಲಸಕ್ಕೆ ಹೋಗದ ವಿಚಾರಕ್ಕೆ ರಜನಿ ಮತ್ತು ಪ್ರತಾಪ್ ನಡುವೆ ಗುರುವಾರ ಮಧ್ಯಾಹ್ನ ಜಗಳವಾಗಿದೆ. ಪುಟ 2

### ಇಡಿ, ಆರ್ ಬಿಐ ಹೆಸರು ಬಳಸಿಕೊಂಡು ಕೋಟ್ಯಾಂತರ ಹಣ ವಂಚನೆ!

**ಬೆಂಗಳೂರು:** ಜಾರಿ ನಿರ್ದೇಶನಾಲಯ ಮತ್ತು ಆರ್ ಬಿಐ ಹೆಸರು ಹೇಳಿ ಹಣ ದುಪಟ್ಟು ಮಾಡಿಕೊಡುತ್ತೇವೆ ಅಂತ ಕೋಟ್ಯಾಂತರ ರೂಪಾಯಿ ವಂಚಿಸಿದ್ದ ಮಹಿಳೆ ಸೇರಿದಂತೆ ಏಳು ಜನರನ್ನು ಹೆಬ್ಬಾಳ ಠಾಣೆ ಪೊಲೀಸರು ಬಂಧಿಸಿದ್ದಾರೆ.



ಚನ್ನರಾಯಪಟ್ಟಣ ಮೂಲದ ಆರೋಪಿ ಕಲ್ಪನಾ (47) ಸೇರಿದಂತೆ ಏಳು ಜನರ ಬಂಧನ.

ನಿವೃತ್ತ ಬ್ಯಾಂಕ್ ಮ್ಯಾನೇಜರ್ ನಾಗೇಶ್ವರ ರಾವ್ ಹಾಗೂ ಸುಜರಿತ ಎಂಬುವರು ತಮ್ಮ ಸಂಬಂಧಿಕರಾದ ಮಾಲಾ ಮತ್ತು ರಮೇಶ್ (ಹೆಸರು ಬದಲಾಯಿಸಾಗಿದೆ) ಎಂಬುವರನ್ನು ಕೊರೊನಾ ಸಮಯದಲ್ಲಿ ಕಲ್ಪನಾಗೆ ಪರಿಚಯಿಸುತ್ತಾರೆ. ನಂತರ ಕಲ್ಪನಾ ಕುಡುಮುಡಿ ಎಂಬಲಿ 100 ಕೋಟಿ ಆಸ್ತಿ ಇದೆ, ಕೋರ್ಟಿನಲ್ಲಿ ಕೇಸ್ ನಮ್ಮ ಪರವಾಗಿ ಆಗಿದೆ. ಪುಟ 2

## ಘಾಟಿ ಸುಬ್ರಹ್ಮಣ್ಯ ದೇವಸ್ಥಾನದಲ್ಲಿ ನಾಗರ ಪಂಚಮಿ ಸಂಭ್ರಮ

**ಬೆಂಗಳೂರು:** ರಾಜ್ಯಾದ್ಯಂತ ನಾಗರ ಪಂಚಮಿ ಹಬ್ಬದ ಸಂಭ್ರಮ ಮನೆ ಮಾಡಿದೆ. ಅದರಲ್ಲೂ ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರ ತಾಲೂಕಿನ ಶ್ರೀಕ್ಷೇತ್ರ ಘಾಟಿ ಸುಬ್ರಮಣ್ಯದಲ್ಲಿ ದೇವರ ದರ್ಶನಕ್ಕೆ ನೂರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದಾರೆ. ಇಂದು ಸುಬ್ರಹ್ಮಣ್ಯನ ದರ್ಶನ ಪಡೆದರೆ ದೋಷ ನಿವಾರಣೆಯಾಗುವ ನಂಬಿಕೆ ಇದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರ ತಾಲೂಕಿನ ಶ್ರೀಕ್ಷೇತ್ರ ಘಾಟಿ ಸುಬ್ರಮಣ್ಯದಲ್ಲಿ ನಾಗರ ಪಂಚಮಿ ಹಬ್ಬದ ಸಂಭ್ರಮ ಮನೆಮಾಡಿದೆ. ಘಾಟಿ ಸುಬ್ರಹ್ಮಣ್ಯ ದೇವಾಲಯದಲ್ಲಿ ವಿಶೇಷ ಪೂಜೆ, ಅಭಿಷೇಕ, ಅಲಂಕಾರ ಮಾಡಲಾಗಿದೆ.



ಬೆಂಗಳೂರು, ತೆಲಂಗಾಣ, ಆಂಧ್ರಪ್ರದೇಶದಿಂದ ಸಾವಿರಾರು ಭಕ್ತರು ಆಗಮಿಸುತ್ತಿದ್ದಾರೆ. ಸರತಿ ಸಾಲಿನಲ್ಲಿ ನಿಂತು ಭಕ್ತರು ದೇವರ ದರ್ಶನ ಪಡೆಯುತ್ತಿದ್ದಾರೆ. ಇಂದು ಸುಬ್ರಹ್ಮಣ್ಯನ ದರ್ಶನ ಪಡೆದರೆ ದೋಷ ನಿವಾರಣೆಯಾಗುವ ನಂಬಿಕೆ ಇದೆ.

ಶ್ರಾವಣ ಮಾಸದ ಮೊದಲ ಹಬ್ಬ ನಾಗರ ಪಂಚಮೀ. ಆದಿಶೇಷನ್ನು ಈ ಭೂಮಿಯನ್ನು ಹೊತ್ತಿದ್ದಾನೆ ಎಂದು ಪುರಾಣಗಳು ಹೇಳುತ್ತವೆ. ಭೂಮಿಯನ್ನು ರಕ್ಷಿಸಬೇಕಾದರೆ ಭೂಮಿಯನ್ನು ಹೊತ್ತ ಸರ್ಪಗಳ ರಾಜನನ್ನು ಪೂಜಿಸಬೇಕು. ಅಲ್ಲದೆ ಆದಿಶೇಷನು ವಿಷ್ಣುವಿನ ವಾಹನವೂ ಹೌದು. ಹೀಗಾಗಿ ಸರ್ಪ ಪೂಜೆಗೆ ವಿಶೇಷ ಮಹಾತ್ವವಿದೆ. ಪುಟ 2





### ಕಾಂಗ್ರೆಸ್ ಜನಾಂದೋಲನ ಸಮಾವೇಶ

## ಪೊಲೀಸ್ ಭದ್ರಕೋಟೆಯಾದ ಮೈಸೂರು

**ಮೈಸೂರು:** ಮುಡಾ ಹಗರಣ ಖಂಡಿಸಿ ಬಿಜೆಪಿ ಜೆಡಿಎಸ್ ನಡೆಸುತ್ತಿರುವ ಪಾದಯಾತ್ರೆಗೆ ಟಕ್ಕರ್ ಕೊಡಲು ಮತ್ತು ದಾಖಲೆಗಳನ್ನು ಜನರ ಮುಂದಿಡುವುದಕ್ಕಾಗಿ ಆಡಳಿತಾರೂಢ ಕಾಂಗ್ರೆಸ್ ಪಕ್ಷವು ಮೈಸೂರಿನಲ್ಲಿ ಬೃಹತ್ ಜನಾಂದೋಲನ ಸಮಾವೇಶ ಆಯೋಜಿಸಿದೆ. ಸಮಾವೇಶದ ಕಾರಣ ನಗರದಲ್ಲಿ ಬಿಗಿ ಬಂದೋಬಸ್ತ್ ಮಾಡಲಾಗಿದೆ. ಮೈಸೂರಿನಾದ್ಯಂತ ಪೊಲೀಸರ ನಿಯೋಜನೆ ಹೆಚ್ಚಿಸಲಾಗಿದೆ.

ಮೈಸೂರಿನಲ್ಲಿ ನಾಲ್ವರು ಡಿಐಜಿಗಳ ನೇತೃತ್ವದಲ್ಲಿ ಬಿಗಿ ಭದ್ರತೆ ಕಲ್ಪಿಸಲಾಗಿದೆ. ಅಲ್ಲದೆ 36 ಡಿವೈಎಸ್ ಪಿ, 77 ಇನ್ಸ್ ಪೆಕ್ಟರ್ಸ್, 175 ಪಿಎಸ್ ಐ, ಜಿಲ್ಲೆಯ 3 ಸಾವಿರ ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿದೆ.

ಹೊರ ಜಿಲ್ಲೆಯ 1500 ಪೊಲೀಸರು, 60 ಕೆಎಸ್ ಆರ್ ಪಿ ತುಕಡಿ, 20 ಸಿಎಆರ್ ತುಕಡಿ, 500 ಹೋಮ್ ಗಾರ್ಡ್ಸ್ ನಿಯೋಜನೆ ಮಾಡಲಾಗಿದೆ. ಜತೆಗೆ, ಸಮಾವೇಶದ ಪ್ರವೇಶ ದ್ವಾರದಲ್ಲಿ ಮೆಟಲ್ ಡಿಟೆಕ್ಟರ್ ಅಳವಡಿಕೆ ಮಾಡಲಾಗಿದೆ.

ಕಾಂಗ್ರೆಸ್ ಬೃಹತ್ ಜನಾಂದೋಲನ ಸಮಾವೇಶದ ಪ್ರಯುಕ್ತ ಮೈಸೂರು ನಗರದಲ್ಲಿ 'ಕೈ' ನಾಯಕರ ಫ್ಲೆಕ್ಸ್‌ಗಳು ರಾರಾಜಿಸುತ್ತಿವೆ. ಸೋನಿಯಾಗಾಂಧಿ, ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್, ಸಚಿವರು, ಕಾಂಗ್ರೆಸ್ ಶಾಸಕರ ಫ್ಲೆಕ್ಸ್‌ಗಳು ಎಲ್ಲೆಡೆ ಕಾಣಿಸುತ್ತಿವೆ. ಪುಟ 2







## ಸಿದ್ರಾಮಯ್ಯ ಮನೆಗೆ ಹೋಗೋ ಕಾಲ ಹತ್ತಿರವಾಗಿದೆ

**ಮೈಸೂರು:** ಮುಡಾದಲ್ಲಿ ಅಕ್ರಮ ಖಂಡಿಸಿ ಬಿಜೆಪಿ, ಜೆಡಿಎಸ್ ಪಾದಯಾತ್ರೆಗೆ ಭಾಗಿಯಾಗಲು ಮೈಸೂರಿಗೆ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಆಗಮಿಸಿದ್ದು ಚಾಮುಂಡೇಶ್ವರಿ ದರ್ಶನ ಪಡೆದು ನಂತರ ಸಿಎಂ ಸಿದ್ದರಾಮಯ್ಯ ಅವರ ಫೇವರೆಟ್ ಮೈಲಾರಿ ಹೋಟೆಲ್ ನಲ್ಲಿ ದೋಸೆ ಸೇವಿದ್ರು. ಈ ವೇಳೆ ಬಿಎಸ್ ಯಡಿಯೂರಪ್ಪನವರು ಸಿಎಂ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಯಾರು ನಿವೃತ್ತಿಯಾಗ್ತಾರೆ, ಏನಾಗ್ತಾರೆ ಅಂತಾ ಮುಂದೆ ಗೊತ್ತಾಗುತ್ತದೆ. ಅವರು ನಿವೃತ್ತಿ ಪಡೆಯುವಾಗ ಇನ್ನೊಬ್ಬರ ಬಗ್ಗೆ ಹೇಳೋದು ಸ್ವಾಭಾವಿಕ. ಸಿದ್ದರಾಮಯ್ಯ ಈಗ ಮನಬಂದಂತೆ ಮಾತಾಡುತ್ತಿದ್ದಾರೆ, ಮಾತಾಡಲಿ ಎಂದು



ಗುಡುಗಿದರು.

ನಾಳೆ ಮೂರು ಲಕ್ಷಕ್ಕೂ ಅಧಿಕ ಜನ ನಮ್ಮ ಬೃಹತ್ ಸಮಾವೇಶದಲ್ಲಿ ಭಾಗವಹಿಸುತ್ತಾರೆ. ಪಾದಯಾತ್ರೆಗೆ ಜನರಿಂದ ಉತ್ತಮ ಪ್ರತಿಕ್ರಿಯೆ ಸಿಕ್ತಾ ಇದೆ. ಪುಟ 2

## ಒಡಿಶಾದಲ್ಲಿ ನಿರ್ಮಾಣವಾಯ್ತು ಭಾರತದ ಮೊದಲ ಅಕ್ಕಿ ಎಟಿಎಂ

**ಒಡಿಶಾ:** ಭಾರತದ ಮೊದಲ ಅಕ್ಕಿ ಎಟಿಎಂಗೆ ಒಡಿಶಾ ಆಹಾರ ಸರಬರಾಜು ಮತ್ತು ಗ್ರಾಹಕರ ಕಲ್ಯಾಣ ಸಚಿವ ಕೃಷ್ಣ ಚಂದ್ರ ಪಾತ್ರ ಅವರು ಭುವನೇಶ್ವರದಲ್ಲಿ ಚಾಲನೆ ನೀಡಿದ್ದಾರೆ. ಮಂಚೇಶ್ವರದಲ್ಲಿರುವ ಗೋದಾಮಿನಲ್ಲಿ ಅಳವಡಿಸಲಾಗಿರುವ ಈ ಯಂತ್ರವನ್ನು ಸಾರ್ವಜನಿಕ ವಿತರಣಾ ವ್ಯವಸ್ಥೆ (ಪಿಡಿಎಸ್)ಯಲ್ಲಿ ಅಕ್ಕಿ ವಿತರಣೆಯನ್ನು ಸರಳೀಕರಿಸಲು ವಿನ್ಯಾಸಗೊಳಿಸಲಾಗಿದೆ.

ಅಕ್ಕಿ ಎಟಿಎಂ ಪಡಿತರ ಚೀಟಿದಾರರು ತಮ್ಮ ಪಡಿತರ ಚೀಟಿ ಸಂಖ್ಯೆಯನ್ನು ಟಚ್‌ಸ್ಕ್ರೀನ್ ನಲ್ಲಿ ನಮೂದಿಸಿದಾಗ 25ಕೆಜಿವರೆಗೆ ಅಕ್ಕಿಯನ್ನು ವಿತರಿಸಲು ಅನುಮತಿ ಸಿಗಲಿದೆ ನಂತರ ಬಯೋಮೆಟ್ರಿಕ್ ದೃಢೀಕರಣವಿರಲಿದೆ. ಅಕ್ಕಿ ವಿತರಣೆಯ ಈ ಹೊಸ ವ್ಯವಸ್ಥೆಯು ಸಾಂಪ್ರದಾಯಿಕ ವಿತರಣಾ ಕೇಂದ್ರಗಳಲ್ಲಿ ಫಲಾನುಭವಿಗಳು ದೀರ್ಘಕಾಲ ಸರತಿಯಲ್ಲಿ ನಿಂತು ಕಾಯುವ ಅಗತ್ಯವಿರುವುದಿಲ್ಲ. ಪುಟ 2




### ವಯನಾಡು ಭೂಕುಸಿತ

## ನಿಧಿ ಸಂಗ್ರಹಿಸಲು ಸತತ 3 ಗಂಟೆಗಳ ಕಾಲ ಭರತನಾಟ್ಯ ಪ್ರದರ್ಶಿಸಿದ ಬಾಲಕಿ

**ಕೇರಳ:** ಕೇರಳದ ವಯನಾಡಿನಲ್ಲಿ ಸಾಲು ಸಾಲು ಗುಡ್ಡಗಳು ಕುಸಿದಿರುವುದರ ಜತೆಗೆ ಪ್ರವಾಹದ ಪರಿಸ್ಥಿತಿಯೂ ನಿರ್ಮಾಣವಾಗಿದೆ. 300ಕ್ಕೂ ಅಧಿಕ ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ವಯನಾಡಿಗಾಗಿ ಎಲ್ಲರ ಹೃದಯ ಮಿಡಿಯುತ್ತಿದೆ. ತಮಿಳುನಾಡಿನಿಂದ ಹಿಡಿದು ಎಲ್ಲಾ ರಾಜ್ಯಗಳಲ್ಲಿ ನಿಧಿ ಸಂಗ್ರಹಿಸಲಾಗುತ್ತಿದೆ.

ನಿಧಿ ಸಂಗ್ರಹಿಸಲು 13 ವರ್ಷದ ಬಾಲಕಿಯೊಬ್ಬಳು ಸತತ 3 ಗಂಟೆಗಳ ಕಾಲ ಭರತನಾಟ್ಯ ಪ್ರದರ್ಶಿಸಿದ್ದು, ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಬಾಲಕಿಯನ್ನು ಶ್ಲಾಘಿಸಿದ್ದಾರೆ. ಹರಿಣಿ ಶ್ರೀ, ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರನ್ನು ಭೇಟಿ ಮಾಡಿ, ಮುಖ್ಯಮಂತ್ರಿಗಳ ಸಂಕಷ್ಟ ಪರಿಹಾರ ನಿಧಿಗೆ ತನ್ನ ಉಳಿತಾಯ ಸೇರಿದಂತೆ 15 ಸಾವಿರ ರೂ.ವನ್ನು ನೀಡಿದ್ದಾರೆ. ಪುಟ 2



### ನೈಸ್ ರಸ್ತೆಯಲ್ಲಿ ಲೇನ್ ಶಿಸ್ತು ಉಲ್ಲಂಘಿಸಿದರೆ ಕ್ರಮ

## ಪತ್ತೆ ಮಾಡುತ್ತೆ ಲೇಸರ್ ಟ್ರ್ಯಾಕ್ ಗನ್

**ಬೆಂಗಳೂರು:** ನೈಸ್ ರಸ್ತೆಯಲ್ಲಿ ಅತಿವೇಗದ ವಾಹನ ಚಾಲನೆ ಮಾಡುವವರನ್ನು ನಿಯಂತ್ರಿಸಲು ಬೆಂಗಳೂರು ಸಂಚಾರ ಪೊಲೀಸರು ಹೊಸ ಪ್ರಯೋಗಕ್ಕೆ ಮುಂದಾಗಿದ್ದಾರೆ. ನೈಸ್ ರಸ್ತೆಯಲ್ಲಿ ಓವರ್ ಸ್ಪೀಡ್ ಚಾಲನೆ ಮಾಡುವವರ ಮೇಲೆ ಕಣ್ಣಿಡಲು 'ಲೇಸರ್ ಟ್ರ್ಯಾಕ್ ಗನ್' ಅಳವಡಿಸಲಾಗಿದ್ದು, ಇದರ ಮೂಲಕ ಅತಿವೇಗದ ಚಾಲನೆ ಮಾಡಿದವರನ್ನು ಪತ್ತೆಹಚ್ಚಿ 1,000 ರೂ. ದಂಡ ವಿಧಿಸಲಾಗುತ್ತಿದೆ. ಕಳೆದ ಒಂದು ವಾರದಿಂದ 'ಲೇಸರ್ ಟ್ರ್ಯಾಕ್ ಗನ್' ಅಳವಡಿಸಲಾಗಿದೆ.

**ಏನಿದು ಲೇಸರ್ ಟ್ರ್ಯಾಕ್ ಗನ್:** ಲೇಸರ್ ಟ್ರ್ಯಾಕ್ ಗನ್ ಎಂಬುದು ವೇಹನಗಳು ಚಲಿಸುತ್ತಿರುವ ವೇಗವನ್ನು ಪತ್ತೆಹಚ್ಚುವ ಒಂದು ಸಾಧನ. ನೈಸ್ ರಸ್ತೆಯಲ್ಲಿ ಅಲ್ಲಲ್ಲಿ ಪ್ರಯಾಣಿಕರ ಅರಿವಿಗೆ ಬಾರದಂತೆ ಈ ಸಾಧನದೊಂದಿಗೆ ಸಂಚಾರ ಪೊಲೀಸರು ಇರಲಿದ್ದಾರೆ. ನಿಗದಿತ ಮಿತಿಗಿಂತ ವೇಗವಾಗಿ ವಾಹನ ಸಂಚರಿಸಿದರೆ ಲೇಸರ್ ಟ್ರ್ಯಾಕ್ ಗನ್ ಅದನ್ನು ಕ್ಯಾಪ್ಚರ್ ಮಾಡುತ್ತದೆ. ವಾಹನದ ನಂಬರ್ ಅನ್ನು ಈ ಯಂತ್ರ



ಡಿಟೆಕ್ಟ್ ಮಾಡುತ್ತದೆ. ಲೇಸರ್ ಟ್ರ್ಯಾಕ್ ಗನ್ ಇರಿಸಿದ ಜಾಗದಿಂದ ಟೋಲ್ ಬಳಿಗೆ ವಾಹನದ ಮಾಹಿತಿ ಹೋಗುತ್ತದೆ.

ವಾಹನದ ಫೋಟೊ ಹಾಗೂ ನಂಬರ್ ವಾಟ್ಸ್ ಆಯಪ್ ಮೂಲಕ ಟೋಲ್ ಬಳಿ ಇರುವ ಸಿಬ್ಬಂದಿಗೆ ರವಾನೆಯಾಗುತ್ತದೆ. ಟೋಲ್ ಬಳಿ ವಾಹನದ ವೇಗ ಕಡಿಮೆ ಆದಾಗ ವಾಹನ ತಡೆದು ಟ್ರಾಫಿಕ್ ಪೊಲೀಸರು ದಂಡ ಸ್ವೀಕರಿಸಲಿದ್ದಾರೆ.

**ಒಂದು ವಾರದಿಂದ ನಡೆಯುತ್ತಿದೆ ದಂಡ ವಸೂಲಿ:** ಕಳೆದ ಒಂದು ವಾರದಿಂದ ಲೇಸರ್ ಟ್ರ್ಯಾಕ್ ಗನ್ ಮೂಲಕ ಅತಿವೇಗದ ಚಾಲನೆ ಪತ್ತೆಹಚ್ಚಿ ದಂಡ ವಸೂಲಿ ಮಾಡಲಾಗುತ್ತಿದೆ. ಪುಟ 2

## ಪಿಎಸ್ಐ ಪರಶುರಾಮ ಮನೆಯಲ್ಲಿ ಶಾಸಕ ಚೆನ್ನಾರೆಡ್ಡಿ ಲೆಟರ್ ಹೆಡ್ ಪತ್ತೆ!



**ಯಾದಗಿರಿ:** ಪಿಎಸ್ಐ ಪರಶುರಾಮ ಅನುಮಾನಾಸ್ಪದ ಸಾವು ಪ್ರಕರಣದ ತನಿಖೆಯನ್ನು ಸಿಐಡಿ ಅಧಿಕಾರಿಗಳು ಚುರುಕುಗೊಳಿಸಿದ್ದಾರೆ. ಸಿಐಡಿ ಅಧಿಕಾರಿಗಳು ಗುರುವಾರ (ಆಗಸ್ಟ್.08) ರಂದು ಪೊಲೀಸ್ ವಸತಿ ಗೃಹದ ಪರಶುರಾಮ ಮನೆಗೆ ತೆರಳಿ ಸ್ಥಳ ಮಹಜರು ನಡೆಸಿದ್ದಾರೆ. ಮನೆಯಲ್ಲಿ ಕಾಂಗ್ರೆಸ್ ಶಾಸಕ ಚೆನ್ನಾರೆಡ್ಡಿ ಪಾಟೀಲ್ ಹೆಸರಿನ ಲೆಟರ್ ಹೆಡ್ ಪತ್ತೆಯಾಗಿದೆ. ಕಾನೂನು ಸುವ್ಯವಸ್ಥೆ ಪೋಸ್ಟಿಂಗ್ ಬೇರೆಯವರಿಗೆ ಕೊಟ್ಟ ಹಿನ್ನೆಲೆಯಲ್ಲಿ ಅಪರಾಧ ವಿಭಾಗದ ಪೋಸ್ಟಿಂಗ್ ಕೊಡಿ ಎಂದು ಪರಶುರಾಮ ಕೇಳಿದ್ದರು. ಇದೇ ಕಾರಣಕ್ಕೆ ಕಾಂಗ್ರೆಸ್ ಶಾಸಕ ಚೆನ್ನಾರೆಡ್ಡಿ ಪಾಟೀಲ್ ಯಾದಗಿರಿ ನಗರ ಠಾಣೆಯ ಅಪರಾಧ ವಿಭಾಗದ ಪಿಎಸ್ ಐ ಪೋಸ್ಟಿಂಗ್ ಗಾಗಿ ಲೆಟರ್ ಹೆಡ್ ನೀಡಿದ್ದರು. ಪುಟ 2

### 3 ಮತ್ತು 4ನೇ ವರ್ಷದ ಎಂಬಿಬಿಎಸ್ ವಿದ್ಯಾರ್ಥಿಗಳಿಗೆ ಸಿಕ್ಕಿಲ್ಲ ಸ್ಕಾಲರ್‌ಶಿಪ್

## ಭಾರಿ ಪ್ರತಿಭಟನೆ



**ಬೆಂಗಳೂರು:** ಗ್ಯಾರಂಟಿ ಭಾಗ್ಯಗಳ ಬೆನ್ನಲ್ಲೇ ಸರ್ಕಾರದ ಬೊಕ್ಕಸ ಖಾಲಿ ಆಗಿದೆಯಾ ಎಂಬ ಚರ್ಚೆ ಎಲ್ಲ ಕಡೆಯೂ ನಡೆಯುತ್ತಿದೆ. ಇದಕ್ಕೆ ಪುಷ್ಠಿ ಕೊಡುವಂತೆ ಅನುದಾನದ ಕಡಿತಗಳು ವರದಿಯಾಗುತ್ತಿವೆ. ಕೆಲವು ದಿನಗಳ ಹಿಂದಷ್ಟೇ ಯುವಿಸಿಇ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನ ಬಿಡುಗಡೆಗೆ ಒತ್ತಾಯಿಸಿ ಪ್ರತಿಭಟನೆ ನಡೆಸಿದ್ದರು. ಇದೀಗ ಎಂಬಿಬಿಎಸ್ ವಿದ್ಯಾರ್ಥಿಗಳು ಸ್ಕಾಲರ್‌ಶಿಪ್ ಕೊಡಿ ಎಂದು ಬೀದಿಗಿಳಿದಿದ್ದಾರೆ.

**ವರ್ಷದಿಂದ ಬಿಡುಗಡೆಯಾಗಿಲ್ಲ ಸ್ಕಾಲರ್ ಶಿಪ್:** ರಾಜ್ಯದೆಲ್ಲೆಡೆ ಮೂರು ಮತ್ತು ನಾಲ್ಕನೇ ವರ್ಷದ ಎಂಬಿಬಿಎಸ್ ವಿದ್ಯಾರ್ಥಿಗಳಿಗೆ ಸ್ಕಾಲರ್‌ಶಿಪ್ ಸಿಕ್ಕಿಲ್ಲ. ಪುಟ 2

## ಬೀದಿ ನಾಯಿಗಳ ಕಾಟಕ್ಕೆ ಮನೆ ಮಾರಾಟಕ್ಕೆ ಮುಂದಾದ ಜನ!

**ಬೆಂಗಳೂರು:** ಬೆಂಗಳೂರಿನ ಆ ಏರಿಯಾ ನಿವಾಸಿಗಳು ಮನೆಯಿಂದ ಹೊರಬರಬೇಕಾದರೂ ಸಾವಿರ ಸಲ ಯೋಚನೆ ಮಾಡಬೇಕು. ಯಾಕೆಂದರೆ ರಸ್ತೆಯಲ್ಲಿ ಹೋಗುವಾಗ ಯಾವ ಬೀದಿ ನಾಯಿ ಎಲ್ಲಿಂದ ಬಂದು ಕಚ್ಚುತ್ತೋ ಅನ್ನೋ ಆತಂಕದಲ್ಲೇ ದಿನದೂಡುತ್ತಿದ್ದಾರೆ. ಒಂದು ತಿಂಗಳಲ್ಲಿ 40ಕ್ಕೂ ಅಧಿಕ ಜನರ ಮೇಲೆ ಬೀದಿ ನಾಯಿಗಳು ದಾಳಿ ಮಾಡಿದೆ. ನಿತ್ಯ ನಾಯಿ ದಾಳಿಯಿಂದಾಗಿ ಜನರು ಆಸ್ಪತ್ರೆಪಾಲಾಗಿದ್ದಾರೆ. ಬೆಂಗಳೂರಿನ ಬಾಣಸವಾಡಿಯ ಓಎಂಬಿಆರ್ ಲೇಔಟ್ ಬರೋಬ್ಬರಿ 40 ಬೀದಿ ನಾಯಿಗಳು ಇವೆ. ಸ್ಥಳೀಯರು ಬೀದಿ ನಾಯಿಗಳಿಗೆ ಹೆದರಿ ಏರಿಯಾಗೆ ಹೋಗಲು ಭಯ ಪಡುವಂತಾಗಿದೆ. ಬೀದಿ ನಾಯಿಗಳ ಹಾವಳಿಗೆ ಬೇಸತ್ತು ಮನೆ ಖಾಲಿ ಮಾಡಲು ಮುಂದಾಗಿದ್ದಾರೆ. ಸಂಜೆ 7 ಗಂಟೆ ಮೇಲೆ ಮನೆಯಿಂದ ಹೊರಗೆ ಬಾರದ ಸ್ಥಿತಿ ನಿರ್ಮಾಣವಾಗಿದೆ. ಮನೆಗೆ ಸಂಬಂಧಿಕರು ಬರುತ್ತಿಲ್ಲ, ಮಕ್ಕಳು ಸ್ಕೂಲ್‌ಗೆ ಹೋಗುತ್ತಿಲ್ಲ. ವೃದ್ಧ ಹೊರಗೆ ಕಾಲಿಡುವಂತಿಲ್ಲ ಎಂದು ಗೋಳಾಡುತ್ತಿದ್ದಾರೆ. ದಿನಕ್ಕೆ ಕನಿಷ್ಠ ಇಬ್ಬರ ಮೇಲೆ ನಾಯಿಗಳು ದಾಳಿ ನಡೆಸುತ್ತಿವೆ. ಬಿಬಿಎಂಪಿ ಅಧಿಕಾರಿಗಳಿಗೆ ದೂರು ಕೊಟ್ಟು ಕೊಟ್ಟು ಸುಸ್ತಾದ ಏರಿಯಾದ ಜನರು ಸ್ವಂತ ಮನೆಗಳನ್ನೇ ಮಾರಾಟಕ್ಕಿಟ್ಟಿದ್ದಾರೆ.




## ಅಹವಾಲು ಆಲಿಸಲು ನಾನೇ ಕನಕಪುರಕ್ಕೆ ಬರುವೆ

**ಬೆಂಗಳೂರು:** ಪ್ರತಿ ತಿಂಗಳು 2 ಮತ್ತು 3ನೇ ಶನಿವಾರ ಕನಕಪುರಕ್ಕೆ ಡಿಸಿಎಂ ಡಿಕೆ ಶಿವಕುಮಾರ್ ಅವರು ಭೇಟಿ ನೀಡಲಿದ್ದು ಕ್ಷೇತ್ರದ ಜನರ ಸಮಸ್ಯೆ ಆಲಿಸಲಿದ್ದಾರೆ. ಕ್ಷೇತ್ರದ ಜನರು ಭೇಟಿ ಮಾಡಲು ಬೆಂಗಳೂರಿಗೆ ಬರುವುದು ಬೇಡ. ನಾನೇ ಕನಕಪುರಕ್ಕೆ ಬಂದು ನಿಮ್ಮ ಕಷ್ಟ-ಸುಖ ವಿಚಾರಿಸುತ್ತೇನೆ. ಕನಕಪುರಕ್ಕೆ ಬಂದು ಕ್ಷೇತ್ರದ ಜನರ ಅಹವಾಲನ್ನು ಸ್ವೀಕರಿಸುವೆ ಎಂದು ಕನಕಪುರ ಕ್ಷೇತ್ರದ ಜನರಿಗೆ ಡಿ.ಕೆ.ಶಿವಕುಮಾರ್ ಸಂದೇಶ ನೀಡಿದ್ದಾರೆ. ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಪ್ರತಿ ತಿಂಗಳು 2 ನೇ ಮತ್ತು 3 ನೇ ಶನಿವಾರ ಕನಕಪುರ ವಿಧಾನಸಭೆ ಕ್ಷೇತ್ರಕ್ಕೆ ಭೇಟಿ ನೀಡಲಿದ್ದಾರೆ. ಆ ದಿನಗಳಂದು ಕ್ಷೇತ್ರದ ಜನರ ಸಮಸ್ಯೆ, ಅಹವಾಲು ಆಲಿಸಲಿದ್ದಾರೆ.

ಕನಕಪುರ ಕ್ಷೇತ್ರದ ಜನರು ತಮ್ಮನ್ನು ಭೇಟಿ ಮಾಡಲು ಬೆಂಗಳೂರಿಗೆ ಬರುವುದು ಬೇಡ. ತೊಂದರೆ ತೆಗೆದುಕೊಳ್ಳುವುದು ಬೇಡ. ನಾನೇ ಕನಕಪುರಕ್ಕೆ ಬಂದು ನಿಮ್ಮ ಕಷ್ಟ-ಸುಖ ವಿಚಾರಿಸಿ, ಅಹವಾಲು ಸ್ವೀಕರಿಸಲಿದ್ದೇನೆ ಎಂದು ಡಿ.ಕೆ. ಶಿವಕುಮಾರ್ ಅವರು ಮಾಧ್ಯಮ ಹೇಳಿಕೆಯಲ್ಲಿ ತಿಳಿಸಿದ್ದಾರೆ.




# ರಾಜಧಾನಿಯಲ್ಲಿಯುವ ಮಹಿಳೆಯರು ಹೆಚ್ಚು ನಾಪತ್ತೆ!

**ಬೆಂಗಳೂರು:** ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಹೆಣ್ಣುಮಕ್ಕಳ ನಾಪತ್ತೆ ಪ್ರಕರಣಗಳು ಹೆಚ್ಚಾಗಿವೆ. ಅಲ್ಲದೆ ಕಾಣೆಯಾದವರನ್ನು ಪತ್ತೆ ಹಚ್ಚುವಲ್ಲಿ ಬೆಂಗಳೂರು ಪೊಲೀಸರು ವಿಫಲರಾಗುತ್ತಿದ್ದಾರಾ ಎಂಬ ಪ್ರಶ್ನೆ ಕಾಡತೊಡಗಿದೆ. ಏಕೆಂದರೆ ಕಳೆದ 12 ವರ್ಷಗಳಲ್ಲಿ 485 ಮಹಿಳೆಯರು ಮತ್ತು ಹುಡುಗಿಯರು ನಾಪತ್ತೆಯಾಗಿದ್ದಾರೆ. ಆದರೆ ಇದುವರೆಗೂ ಅವರು ಯಾರೂ ಪತ್ತೆಯೇ ಆಗಿಲ್ಲವಂತೆ! ವರದಿಯ ಪ್ರಕಾರ 19 ರಿಂದ 21 ವರ್ಷ ವಯಸ್ಸಿನ 173 ಹುಡುಗಿಯರು ಇನ್ನೂ ಪತ್ತೆಯಾಗಿಲ್ಲ. 16 ವರ್ಷದೊಳಗಿನ 162 ಹುಡುಗಿಯರು ಕಾಣೆಯಾಗಿದ್ದಾರೆ. 17 ರಿಂದ 18 ವರ್ಷ ವಯಸ್ಸಿನ 92 ಹುಡುಗಿಯರು ಮತ್ತು 22 ವರ್ಷ ಮೇಲ್ಪಟ್ಟ ವಯಸ್ಸಿನ 58 ಮಹಿಳೆಯರು ಸಹ ಪತ್ತೆಯಾಗಿಲ್ಲ. ಕಾಣೆಯಾದವರಲ್ಲಿ ಶೆ. 70 ರಷ್ಟು ಮಹಿಳೆಯರು ಮತ್ತು ಹುಡುಗಿಯರು ಆರ್ಥಿಕವಾಗಿ ಹಿಂದುಳಿದ ಮತ್ತು ಹಿಂದುಳಿದ ಕುಟುಂಬಗಳಿಗೆ ಸೇರಿದವರು ಎಂದು ಅಂಕಿಅಂಶಗಳ ಮೂಲಕ ತಿಳಿದುಬಂದಿದೆ. ಪ್ರೇಮ ಪ್ರಕರಣಗಳು, ಕೌಟುಂಬಿಕ ಕಲಹ, ಮನಸ್ತಾಪ, ಆರ್ಥಿಕ ಪರಿಸ್ಥಿತಿ, ಸಾಮಾಜಿಕ ಜಾಲತಾಣದಲ್ಲಿ ಪರಿಚಿತರ ಪ್ರಭಾವ, ಅಪಹರಣ, ಕಳ್ಳಸಾಗಣೆ ಮತ್ತಿತರ ಕಾರಣದಿಂದ ಬಾಲಕಿಯರು, ಮಹಿಳೆಯರು ನಾಪತ್ತೆ ಆಗುತ್ತಿದ್ದಾರೆ.

ಕೆಲ ಪ್ರಕರಣಗಳಲ್ಲಿ ತಮ್ಮ ಮನೆಯವರು ನಾಪತ್ತೆಯಾಗಿದ್ದಾರೆ ಎಂಬ ಗಂಭೀರ ಅಂಶವನ್ನು ಮರೆಮಾಚುವ ಕುಟುಂಬಸ್ಥರು ಅವರನ್ನು ಪತ್ತೆಹಚ್ಚಲು ತಮ್ಮದೆ ಮಾರ್ಗಗಳನ್ನು ಹುಡುಕಿಕೊಂಡು ಹೊರಡುತ್ತಾರೆ. ಅಂತಿಮವಾಗಿ ನಾಪತ್ತೆಯಾದವರನ್ನು ಪತ್ತೆಹಚ್ಚಿಕೊಳ್ಳುತ್ತಾರೆ. ಕಾಣೆಯಾದ ವ್ಯಕ್ತಿಯನ್ನು ಪತ್ತೆಹಚ್ಚಲು ಈ ಕುಟುಂಬಗಳು ಪೊಲೀಸ್ ತನಿಖೆಗಳನ್ನೂ ಮೀರಿದ ವಿಧಾನಗಳು, ಮಾರ್ಗಗಳನ್ನು ಬಳಸುತ್ತವೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಪರಿಸ್ಥಿತಿಯ ಸೂಕ್ಷ್ಮತೆ ಮತ್ತು ಗಂಭೀರತೆಯನ್ನು ಬಿಚ್ಚಿಟ್ಟಿದ್ದಾರೆ.

ಇನ್ನು ಕೆಲ ಕುಟುಂಬಗಳಲ್ಲಿ ಕಾಣೆಯಾದ ಯುವತಿ ಹಿಂದಿರುಗಿ ಮನೆಗೆ ಬಂದರೆ ನೆರೆಹೊರೆಯವರು ಬಾಯಿಗೆ ಬಂದಂತೆ ಮಾತನಾಡುತ್ತಾರೆ. ಇಲ್ಲ ಸಲ್ಲದ ಆರೋಪಗಳನ್ನು ಮಾಡಿ ಅವಮಾನ ಮಾಡುತ್ತಾರೆ ಎಂದು ಹೆದರಿ ಕುಟುಂಬಸ್ಥರು ಪ್ರಕರಣದ ತನಿಖೆಗೆ ಸರಿಯಾಗಿ ಸ್ಪಂದಿಸುವುದಿಲ್ಲ. ಹಾಗೂ ತನಿಖೆಯ ಬಗ್ಗೆ ತಿಳಿದುಕೊಳ್ಳುವ ಪ್ರಯತ್ನಗಳನ್ನೂ ಮಾಡುವುದಿಲ್ಲ. ಅಂತಿಮವಾಗಿ ತನಿಖಾಧಿಕಾರಿಗಳಿಗೆ ಪ್ರತಿಕ್ರಿಯಿಸುವುದನ್ನೂ ನಿಲ್ಲಿಸುತ್ತಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪೊಲೀಸರು ನಿರಂತರವಾಗಿ ದೂರುದಾರರನ್ನು ಸಂಪರ್ಕಿಸುತ್ತಾರೆ, ಆದರೆ ಅವರಿಂದಲೇ ಸ್ಪಂದನೆ ಸಿಗಲ್ಲ. ಆಗ ಪ್ರಕರಣಗಳನ್ನು ಕೈಬಿಡಲಾಗುತ್ತೆ. ಅಪ್ರಾಪ್ತ ಬಾಲಕಿಯು ಓಡಿಹೋಗಿ ಮದುವೆಯಾಗಿ ಹಿಂದಿರುಗಿದಾಗ, ದೂರುದಾರರು ಹುಡುಗನ ವಿರುದ್ಧ ಪೋಕ್ಸೋ ಪ್ರಕರಣ ದಾಖಲಾಗುವುದನ್ನು ತಡೆಯಲು ಪೊಲೀಸರಿಗೆ ಮಾಹಿತಿ ನೀಡುವುದನ್ನೇ ತಪ್ಪಿಸುತ್ತಾರೆ. ಇದರಿಂದಾಗಿ ಅನೇಕ ನಾಪತ್ತೆ ಪ್ರಕರಣಗಳು ಕ್ಲೋಸ್ ಆಗುವುದಿಲ್ಲ ಎಂದು ಅ ಅಧಿಕಾರಿ ತಿಳಿಸಿದ್ದಾರೆ.

## ಅಕ್ರಮವಾಗಿ ಮರ ಕಡಿದು ಮಾರಾಟ ಮಾಡಿದ್ರೆ 50 ಸಾವಿರ ರೂ. ದಂಡ

**ಬೆಂಗಳೂರು:** ಇನ್ನುಮುಂದೆ ಅಕ್ರಮವಾಗಿ ಮರ ಕಡಿದು, ಮಾರಾಟ ಮಾಡಿದರೆ 50 ಸಾವಿರ ರೂ. ದಂಡ ತೆರಬೇಕಾಗುತ್ತದೆ. ರಾಜ್ಯದಲ್ಲಿ ಸದಾ ಹಸಿರು ನೆಲೆಸಿರುವಂತೆ ಮಾಡಲು ಅಕ್ರಮವಾಗಿ ಮರ ಕಡಿಯುವವರ ವಿರುದ್ಧದ ಕ್ರಮಕ್ಕೆ ಮಹಾರಾಷ್ಟ್ರ ಸರ್ಕಾರ ಮುಂದಾಗಿದೆ. ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಅಕ್ರಮವಾಗಿ ಮರಗಳನ್ನು ಕಡಿಯುವವರಿಗೆ ವಿಧಿಸುವ ದಂಡವನ್ನು 1000 ರೂ.ಗಳಿಂದ 50,000 ರೂ.ಗಳಿಗೆ ಹೆಚ್ಚಿಸುವ ಪ್ರಸ್ತಾವನೆಯನ್ನು ಕೃಷಿ ಇಲಾಖೆ ಮಂಡಿಸಿತು.

ಇದನ್ನು ರಾಜ್ಯದಲ್ಲಿ ಜಾರಿಗೆ ತರಲು ಕೃಷಿ ಇಲಾಖೆ ಸರ್ಕಾರದ ನಿರ್ಣಯವನ್ನು ಹೊರಡಿಸುತ್ತದೆ. ಅಸ್ತಿತ್ವದಲ್ಲಿರುವ ಮಹಾರಾಷ್ಟ್ರ ಮರ ಕಡಿಯುವ ಕಾಯಿದೆ 1964 ಅನ್ನು ಸೆಕ್ಷನ್ 4 ರಲ್ಲಿ ತಿದ್ದುಪಡಿ ಮಾಡಲಾಗುವುದು, ಇದರಿಂದಾಗಿ ಮರ ಕಡಿಯುವವರು, ಅಕ್ರಮವಾಗಿ ಕತ್ತರಿಸಿದ ಮರವನ್ನು ಸಾಗಿಸುವ ವಾಹನಗಳನ್ನು ವಶಪಡಿಸಿಕೊಳ್ಳುವುದು ಮುಂತಾದ ಕಠಿಣ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತದೆ ಎಂದು ಹೇಳಲಾಗಿದೆ.

ಮಹಾರಾಷ್ಟ್ರ ಸರ್ಕಾರವು ರಾಜ್ಯದಲ್ಲಿ ಹರ್ ಘರ್ ತಿರಂಗ ಅಭಿಯಾನದ ಭಾಗವಾಗಿ ಆಗಸ್ಟ್ 9 ರಿಂದ 15 ರವರೆಗೆ 2.5 ಕೋಟಿ ಮನೆಗಳಲ್ಲಿ ತ್ರಿವರ್ಣ ಧ್ವಜವನ್ನು ಹಾರಿಸಲು ನಿರ್ಧರಿಸಿದೆ. ಶಿಂಧೆ, ಉಪಮುಖ್ಯಮಂತ್ರಿ ಅಜಿತ್ ಪವಾರ್ ಮತ್ತು ಮತ್ತೊಬ್ಬ ಡಿಸಿಎಂ ದೇವೇಂದ್ರ ಫಡ್ನವಿಸ್ ಆಗಸ್ಟ್ ಕ್ರಾಂತಿ ಮೈದಾನಕ್ಕೆ ಭೇಟಿ ನೀಡಿ ಮುಂಬೈನಲ್ಲಿ ಧ್ವಜಾರೋಹಣದಲ್ಲಿ ಭಾಗವಹಿಸಲಿದ್ದಾರೆ. ರೈತರ ಆತ್ಮಹತ್ಯೆ ಹೆಚ್ಚುತ್ತಿರುವ ಜಿಲ್ಲೆಗಳಲ್ಲಿ ನೀರಾವರಿ ವ್ಯವಸ್ಥೆಯನ್ನು ಸುಧಾರಿಸಲು ಸಂಪುಟ ನಿರ್ಧರಿಸಿದೆ ಎಂದು ಶಿಂಧೆ ಹೇಳಿದರು. 87,342.96 ಕೋಟಿ ಮೌಲ್ಯದ ನೀರಾವರಿ ಯೋಜನೆಗಳು ಮತ್ತು ಮಹತ್ವಾಕಾಂಕ್ಷೆಯ ವೈಗಂಗಾ ಮತ್ತು ನಲ್ಗಂಗಾ ನದಿ ಜೋಡಣೆ ಯೋಜನೆಗೆ ಸಂಪುಟ ಅನುಮೋದನೆ ನೀಡಿದೆ ಎಂದರು.

ಇದು ಬರಪೀಡಿತ ಮರಾಠವಾಡ ಪ್ರದೇಶದಲ್ಲಿ 3.75 ಲಕ್ಷ ಹೆಕ್ಟೇರ್ ಭೂಮಿಯನ್ನು ನೀರಾವರಿಗೆ ಒಳಪಡಿಸಲು ಸಹಾಯ ಮಾಡುತ್ತದೆ. ಅಲ್ಲದೆ, ವಿದರ್ಭ ಪ್ರದೇಶಗಳಲ್ಲಿ ಮುಖ್ಯವಾಗಿ ನಾಗ್ಪುರ, ವಾರ್ಧಾ, ಅಮರಾವತಿ, ಯವತ್ಮಾಲ್, ಅಕೋಲಾ ಮತ್ತು ಬುಲ್ಧಾನ ಜಿಲ್ಲೆಗಳಲ್ಲಿ ಕಾಲುವೆಗಳನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಹೇಳಿದರು.

# ರೇವ್ ಪಾರ್ಟಿಯಲ್ಲಿ ಭಾಗವಹಿಸಿದ್ದ 85 ಜನರ ಮೇಲೆ ಚಾರ್ಜ್‌ಶೀಟ್

**ಬೆಂಗಳೂರು:** ರಾಜಧಾನಿಯ ಎಲೆಕ್ಟ್ರಾನಿಕ್ ಸಿಟಿ ಬಳಿ ರೇವ್ ಪಾರ್ಟಿ ನಡೆಸಿದ ಪ್ರಕರಣದಲ್ಲಿ ಸಿಸಿಬಿ ಪೊಲೀಸರ ತನಿಖೆ ಪೂರ್ಣಗೊಂಡಿದ್ದು, ಚಾರ್ಜ್‌ಶೀಟ್ ಸಲ್ಲಿಕೆಗೆ ಸಿದ್ಧತೆ ಮಾಡಿಕೊಂಡಿದ್ದಾರೆ.



ರೇವ್ ಪಾರ್ಟಿಯಲ್ಲಿ ಭಾಗವಹಿಸಿದ್ದ ತೆಲುಗು ನಟಿ ಹೇಮಾ ಸೇರಿ ಒಟ್ಟು 85ಕ್ಕೂ ಹೆಚ್ಚು ಜನರ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಕೆಗೆ ತಯಾರಿ ಮಾಡಿಕೊಳ್ಳಲಾಗಿದೆ. ಹೇಮಾ ವಿರುದ್ಧವೂ ಸಾಕ್ಷಿಗಳಿದ್ದು, ಸಿಸಿಬಿ ಚಾರ್ಜ್ ಫ್ರೇಮ್ ಮಾಡಿದೆ. ಈಕೆ ಡ್ರಗ್ಸ್ ಸೇವನೆ ಮಾಡಿದ್ದಕ್ಕೆ ಸಾಕ್ಷಿ ಲಭ್ಯವಾಗಿದೆ.

ಡ್ರಗ್ಸ್ ಸೇವನೆ ಮಾಡಿದ್ದೂ ಅಲ್ಲದೇ ಪೊಲೀಸರ ತನಿಖೆ ವೇಳೆ ದಿಕ್ಕು ತಪ್ಪಿಸುವ ಕೆಲಸ ಮಾಡಿದ್ದಾಳೆ. ಪೊಲೀಸರಿಗೆ ತನಿಖೆ ವೇಳೆ ಸುಳ್ಳು ಮಾಹಿತಿ ನೀಡಿದ್ದಾಳೆ. ಪ್ರಭಾವ ಬಳಸಿ ತನಿಖೆಯಿಂದ ತಪ್ಪಿಸಿಕೊಳ್ಳುವ ಯತ್ನ ಮಾಡಿರುವ ಬಗ್ಗೆಯೂ ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖ ಮಾಡಲಾಗಿದೆ. ತಾನು ರೇವ್ ಪಾರ್ಟಿಯಲ್ಲಿ ಭಾಗವಹಿಸಿಯೇ ಇಲ್ಲ ಎಂದು ಈಕೆ ಪಾರ್ಟಿಯ ಸ್ಥಳದಿಂದಲೇ ಮಾಧ್ಯಮಗಳಿಗೆ ವಿಡಿಯೋ ಕಳಿಸಿ ದಿಕ್ಕು ತಪ್ಪಿಸುವ ಯತ್ನ ಮಾಡಿದ್ದಳು.

ಪಾರ್ಟಿ ಆಯೋಜನೆ ಮಾಡಿದ್ದ ಐವರು ಸೇರಿ ಒಟ್ಟು 85ಕ್ಕೂ ಹೆಚ್ಚು ಜನರ ವಿರುದ್ಧ ಚಾರ್ಜ್‌ಶೀಟ್ ಮಂಡಿಸಲಾಗುತ್ತಿದೆ. ಇನ್ನೂ ಕೆಲವೇ ದಿನದಲ್ಲಿ ನ್ಯಾಯಾಲಯಕ್ಕೆ ಇದನ್ನು ಸಿಸಿಬಿ ಸಲ್ಲಿಕೆ ಮಾಡಲಿದೆ ಎಂದು ತಿಳಿದುಬಂದಿದೆ. ಪಾರ್ಟಿಯಲ್ಲಿ 85ಕ್ಕೂ ಹೆಚ್ಚು ಜನರು ಭಾಗವಹಿಸಿರುವುದು ಪತ್ತೆಯಾಗಿತ್ತು. ಪಕ್ಕದ ಆಂಧ್ರಪ್ರದೇಶದ ಅನೇಕ ಪ್ರಭಾವಿಗಳು, ಶ್ರೀಮಂತ ಉದ್ಯಮಿಗಳು ಈ ಪಾರ್ಟಿಯಲ್ಲಿ ಪಾಲ್ಗೊಂಡಿದ್ದರು.

ರೇವ್ ಪಾರ್ಟಿ ಪ್ರಕರಣದಲ್ಲಿ ನಟಿ ಹೇಮಾ ಅವರನ್ನು ಬಂಧಿಸಲಾಗಿತ್ತು. 14 ದಿನಗಳ ಕಾಲ ನ್ಯಾಯಾಂಗ ಬಂಧನವನ್ನು ಕೋರ್ಟ್ ಆಕೆಗೆ ವಿಧಿಸಿತ್ತು. ನಂತರ ಜಾಮೀನು ಮಂಜೂರಾಗಿತ್ತು. ಬೆಂಗಳೂರು ಗ್ರಾಮಾಂತರ ಎನ್‌ಡಿಪಿಎಸ್ ವಿಶೇಷ ಕೋರ್ಟ್, ನಟಿಗೆ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ.

ನಟಿ ಹೇಮಾಳಿಂದ ಯಾವುದೇ ಮಾದಕ ವಸ್ತು ವಶಕ್ಕೆ ಪಡೆಯಲಾಗಿಲ್ಲ. ಹಲವು ದಿನಗಳ ನಂತರ ವೈದ್ಯಕೀಯ ಪರೀಕ್ಷೆ ನಡೆಸಲಾಗಿದೆ ಎಂದು ಹೇಮಾ ಅಲಿಯಾಸ್ ಕೊಲ್ಲ ಹೇಮಾ ಪರ ವಕೀಲ ಮಹೇಶ್ ಕಿರಣ್ ಶೆಟ್ಟಿ ವಾದ ಮಂಡಿಸಿದ್ದಾರೆ. ಹೀಗಾಗಿ ನಟಿ ಷರತ್ತುಬದ್ಧ ಜಾಮೀನು ನೀಡಲಾಗಿದೆ.

ರೇವ್ ಪಾರ್ಟಿ ಪ್ರಕರಣದಲ್ಲಿ ವಿಚಾರಣೆಗೆ ಆಗಮಿಸಿದ್ದ ತೆಲುಗು ನಟಿ ಹೇಮಾ ಅವರನ್ನು ಜೂನ್ 3ರಂದು ಬಂಧಿಸಲಾಗಿತ್ತು. ಬಳಿಕ ಪ್ರಕರಣದ ವಿಚಾರಣೆ ನಡೆಸಿದ ಆನೇಕಲ್‌ನ 4ನೇ ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶೆ ಸಲ್ಮಾ .ಎ.ಎಸ್ ಅವರು, ನಟಿ ಹೇಮಾ ಅವರನ್ನು ಜೂನ್ 14ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲು ಆದೇಶಿಸಿದ್ದರು. ಮೇ 19ರಂದು ಎಲೆಕ್ಟ್ರಾನಿಕ್ ಸಿಟಿಯ ಫಾರ್ಮ್ ಹೌಸ್‌ನಲ್ಲಿ ನಡೆದ ರೇವ್ ಪಾರ್ಟಿಯಲ್ಲಿ ಭಾಗಿಯಾಗಿದ್ದ 103 ಮಂದಿ ವಿರುದ್ಧ ಹೆಬ್ಬಗೋಡಿ ಪೊಲೀಸ್ ಠಾಣೆಯಲ್ಲಿ ಎಫ್ ಐಆರ್ ದಾಖಲಾಗಿತ್ತು. ವೈದ್ಯಕೀಯ ತಪಾಸಣೆಯಲ್ಲಿ ನಟಿ ಹೇಮಾ ಸೇರಿ 86 ಮಂದಿ ಮಾದಕ ವಸ್ತು ಸೇವನೆ ಮಾಡಿರುವುದು ದೃಢಪಟ್ಟಿತ್ತು. ಹೀಗಾಗಿ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಿದ್ದ ಹಿನ್ನೆಲೆಯಲ್ಲಿ ಸಿಸಿಬಿ ಕಚೇರಿಗೆ ನಟಿ ಹೇಮಾ ಹಾಜರಾಗಿದ್ದಾಗ ಅವರನ್ನು ಅಧಿಕಾರಿಗಳು ಬಂಧಿಸಿದ್ದರು.

# ಬಿಜೆಪಿ, ಎನ್‌ಡಿಎ ಸರ್ಕಾರ ಅಲ್ಪಸಂಖ್ಯಾತ ವಿರೋಧಿಗಳು

**ಬೆಂಗಳೂರು:** ಬಿಜೆಪಿಯವರು, ಎನ್‌ಡಿಎ ಸರ್ಕಾರ ಸಂಪೂರ್ಣವಾಗಿ ಅಲ್ಪಸಂಖ್ಯಾತ ವಿರೋಧಿಗಳು ಅವರಿಗೆ ಸಾಮಾಜಿಕ ನ್ಯಾಯ ಗೊತ್ತಿಲ್ಲ ಎಂದು ಸಿಎಂ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.



ಮಾಜಿ ಸಿಎಂ ಎಸ್. ನಿಜಲಿಂಗಪ್ಪ ಅವರ ಪುಣ್ಯ ಸ್ಮರಣೆ ಹಿನ್ನೆಲೆಯಲ್ಲಿ ವಿಧಾನಸೌಧದಲ್ಲಿರೋ ನಿಜಲಿಂಗಪ್ಪ ಪ್ರತಿಮೆಗೆ ಸಿಎಂ ಪುಷ್ಪ ನಮನ ಸಲ್ಲಿಸಿದರು. ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಂಸತ್‌ನಲ್ಲಿ ಕೇಂದ್ರದಿಂದ ವಕ್ಫ್ ಕಾಯ್ದೆ ತಿದ್ದುಪಡಿ ಮಸೂದೆ ಮಂಡನೆ ವಿಚಾರಕ್ಕೆ ಪ್ರತಿಕ್ರಿಯಿಸಿದರು.

ಬಿಜೆಪಿಯವರು, ಎನ್‌ಡಿಎ ಸರ್ಕಾರ ಸಂಪೂರ್ಣವಾಗಿ ಅಲ್ಪಸಂಖ್ಯಾತ ವಿರೋಧಿಗಳು. ಎನ್‌ಡಿಎ ಸರ್ಕಾರ ಜಾತ್ಯಾತೀತ ಸರ್ಕಾರ ಅಲ್ಲ. ಅವರಿಗೆ ಸಾಮಾಜಿಕ ನ್ಯಾಯ ಗೊತ್ತಿಲ್ಲ. ಎನ್‌ಡಿಎ ಕೂಟ ಕಮ್ಯುನಲ್ ಪಾರ್ಟಿಗಳು, ಫ್ಯಾಸಿಸ್ಟ್ ಮನಸ್ಥಿತಿ ಇರೋರು ಎಂದು ವಾಗ್ದಾಳಿ ನಡೆಸಿದರು. ಶುಕ್ರವಾರ (ಆ.9) ಮೈಸೂರಿನಲ್ಲಿ ಜನಾಂದೋಲನ ಸಮಾವೇಶ ನಡೆಯಲಿದೆ. ಅಲ್ಲಿ ಎಲ್ಲ ಮಾತಾಡ್ತೀನಿ ಎಂದರು.

ಇದೇ ವೇಳೆ ಬಿ.ಕೆ ಹರಿಪ್ರಸಾದ್ ಭೇಟಿ ವಿಚಾರಕ್ಕೆ ಪ್ರತಿಕ್ರಿಯಿಸಿ, ಹರಿಪ್ರಸಾದ್ ನಮ್ಮ ಪಕ್ಷದ ನಾಯಕರು. ಅವರು ಭೇಟಿಯಾಗೋದ್ರಲ್ಲಿ ಯಾವುದೇ ವಿಶೇಷ ಇಲ್ಲ. ಬುಧವಾರ 1 ಗಂಟೆಗಳ ಕಾಲ ಮಾತುಕತೆ ನಡೆಸಿದರು. ತುಂಬಾ ದಿನಗಳಿಂದ ಅವರು ಭೇಟಿಯಾಗಿರಲಿಲ್ಲ. ಹೀಗಾಗಿ ನಿನ್ನೆ ಭೇಟಿಯಾಗಿ ಮಾತಾಡಿದ್ದಾರೆ. ಉಭಯ ಕುಶಲೋಪರಿ ಮಾತಾಡಿದ್ದೇವೆ ಅಷ್ಟೆ ಎಂದು ತಿಳಿಸಿದರು.

## ಮಾಂಸಾಹಾರ ಸೇವನೆ ಬಳಿಕ ಕುಟುಂಬದ ನಾಲ್ವರು ಸಾವು ಪ್ರಕರಣ: ಸಾವಿನ ಸಂಖ್ಯೆ ಐದಕ್ಕೆ ಏರಿಕೆ

**ರಾಯಚೂರು:** ಜಿಲ್ಲೆಯ ಸಿರವಾರ ತಾಲೂಕಿನ ಕಲ್ಲೂರು ಗ್ರಾಮದಲ್ಲಿ ಆಹಾರ ಸೇವನೆ ಬಳಿಕ ಒಂದೇ ಕುಟುಂಬದ ನಾಲ್ವರು ಸಾವನ್ನಪ್ಪಿದ ಪ್ರಕರಣದಲ್ಲಿ ಸಾವಿನ ಸಂಖ್ಯೆ ಈಗ ಐದಕ್ಕೆ ಏರಿಕೆಯಾಗಿದೆ.

ಕಳೆದ ಒಂದು ವಾರದಿಂದ ರಾಯಚೂರಿನ ರಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ 23 ವರ್ಷದ ಮಲ್ಲಮ್ಮ ಚಿಕಿತ್ಸೆ ಫಲಕಾರಿಯಾಗದೆ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾಳೆ. ಆಗಸ್ಟ್ 1ರಂದು ಆಸ್ಪತ್ರೆಗೆ ದಾಖಲಾಗಿದ್ದ ಒಂದೇ ಕುಟುಂಬದ ಐದು ಜನರಲ್ಲಿ ಮೂವರು ಬಹು ಅಂಗಾಂಗ ವೈಫಲ್ಯದಿಂದ ಸಾವನ್ನಪ್ಪಿದ್ದರು. 60 ವರ್ಷದ ಭೀಮಣ್ಣ ಹೃದಯಾಘಾತದಿಂದ ಸಾವನ್ನಪ್ಪಿದ್ದರು. ಬಳಿಕ 57 ವರ್ಷದ ಈರಮ್ಮ, 21 ವರ್ಷದ ಮಲ್ಲೇಶ, 19 ವರ್ಷದ ಪಾರ್ವತಿ ಮನೆಯಲ್ಲಿ ಸೇವಿಸಿದ್ದ ಮಾಂಸಾಹಾರದಿಂದ ಅನಾರೋಗ್ಯ ಉಂಟಾಗಿ ಒಂದೇ ದಿನ ಸಾವನ್ನಪ್ಪಿದ್ದರು.

ಮರಣೋತ್ತರ ಪರೀಕ್ಷಾ ವರದಿ ಮತ್ತು ಎಫ್‌ಎಸ್ ಎಲ್ ವರದಿ ಬರುವುದು ಇನ್ನೂ ಬಾಕಿಯಿದೆ. ಒಂದೇ ಕುಟುಂಬದ ಎಲ್ಲಾ ಸದಸ್ಯರ ಸಾವಿಗೆ ನಿಖರವಾದ ಕಾರಣ ಇನ್ನೂ ತಿಳಿದು ಬಂದಿಲ್ಲ. ಆಹಾರದಲ್ಲಿ ಕೀಟನಾಶಕ ಬೆರೆತಿರುವ ಶಂಕೆಯಿದೆ. ಘಟನೆ ಹಿನ್ನೆಲೆ ಸಿರವಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಸದ್ಯ ತನಿಖೆ ಮುಂದುವರೆದಿದೆ.

## ನಾಗರ ಪಂಚಮಿ ಸಂಭ್ರಮ

ವಿಷ್ಣುವು ವಿಶ್ವದ ರಕ್ಷಕ. ಆದ್ದರಿಂದ ಆದಿಶೇಷನೂ ವಿಷ್ಣುವಿಗೂ ಭೂಮಿಗೂ ಅವಿನಾಭಾವ ಸಂಬಂಧವಿದೆ. ನಾಗದೇವತೆಯನ್ನು ಲೌಕಿಕ ಹಾಗು ಅಲೌಕಿಕ ಉನ್ನತಿಗೆ ಪೂಜಿಸುತ್ತಾರೆ. ಲೌಕಿಕವಾಗಿ ಸಂತಾನ, ಸುಖ, ಸಂಪತ್ತಿಗೆ ಮೂಲ ಕಾರಣ ಸರ್ಪವಾಗಿದೆ.

ನಾಗ ದೇವರನ್ನು ಪೂಜಿಸುವುದರಿಂದ ವ್ಯಕ್ತಿಯು ಎಲ್ಲಾ ತೊಂದರೆಗಳು ದೂರವಾಗುತ್ತವೆ ಎನ್ನುವ ನಂಬಿಕೆಯಿದೆ. ನಾಗರ ಪಂಚಮಿಯ ದಿನದಂದು ಹಾವುಗಳನ್ನು ಪೂಜಿಸುವ ಜನರು ಹಾವು ಕಡಿತದಿಂದ ರಕ್ಷಣೆಯನ್ನು ಪಡೆದುಕೊಳ್ಳುತ್ತಾರೆ.

ಈ ದಿನ ಹಾವಿಗೆ ಹಾಲಿನಿಂದ ಅಭಿಷೇಕವನ್ನು ಮಾಡಿದರೆ ಶಾಶ್ವತ ಪುಣ್ಯ ಪ್ರಾಪ್ತಿಯಾಗುತ್ತದೆ ಎಂಬ ನಂಬಿಕೆ ಇದೆ. ಈ ದಿನ ಮನೆಯ ಪ್ರವೇಶ ದ್ವಾರದಲ್ಲಿ ನಾಗ ಮೂರ್ತಿ ಮಾಡುವ ಸಂಪ್ರದಾಯವಿದೆ. ಇದು ಹಾವಿನ ಕಾಟದಿಂದ ಮನೆಯನ್ನು ರಕ್ಷಿಸುತ್ತದೆ ಎನ್ನುವ ನಂಬಿಕೆಯಿದೆ.

## ಭದ್ರಕೋಟೆಯಾದ ಮೈಸೂರು

ಈ ನಡುವೆ ವಿಭಿನ್ನ ಫ್ಲೆಕ್ಸ್ ಮೈಸೂರಲ್ಲಿ ಎಲ್ಲರ ಗಮನ ಸೆಳೆಯುತ್ತಿದೆ. ಹೆಚ್ .ಡಿ.ದೇವೇಗೌಡ ಕುಟುಂಬದ ಭೂ ಕಬಳಿಕೆ ಪಕ್ಷಿನೋಟದ ಫ್ಲೆಕ್ಸ್ ಅನ್ನು ಕಾಂಗ್ರೆಸ್ ಅಳವಡಿಸಿದೆ. ಅದರಲ್ಲಿ ಹೆಚ್ .ಡಿ.ದೇವೇಗೌಡ, ಕುಮಾರಸ್ವಾಮಿ ಬಗ್ಗೆ ಮಾಹಿತಿ ಇವೆ. ಹೆಚ್ ಡಿಕೆ ನಿವೇಶನಕ್ಕೆ ಮುಡಾಗೆ ನೀಡಿರುವ ಅರ್ಜಿಯ ಕಾಪಿ ಕೂಡ ಇದೆ. ಹೆಚ್ ಡಿಡಿ ಕುಟುಂಬ ಪಡೆದಿದ್ದಾರೆ ಎನ್ನಲಾದ ನಿವೇಶನಗಳ ಮಾಹಿತಿ ಇದೆ.

ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ನಡೆಯುವ ಸಮಾವೇಶಕ್ಕಾಗಿ ಎರಡು ಬೃಹತ್ ವೇದಿಕೆಗಳು ಸಿದ್ಧವಾಗಿವೆ. ಕಣ್ಣು ಹಾಯಿಸದ ಕಡೆಗಳಲೆಲ್ಲಾ ಬ್ಯಾನರ್‌ಗಳು ಪೋಸ್ಟರ್‌ಗಳು ಕಾಣಿಸುತ್ತಿವೆ. ಲಕ್ಷಾಂತರ ಜನರನ್ನು ಸೇರಿಸುವ ಉದ್ದೇಶವನ್ನು ಕಾಂಗ್ರೆಸ್ ಹೊಂದಿದೆ.

## ಕಾಲ ಹತ್ತಿರವಾಗಿದೆ

ಭ್ರಷ್ಟ ಸರ್ಕಾರ ಕಿತ್ತೋಗೆಯಲು ಪಾದಯಾತ್ರೆ ಮಾಡ್ತಾ ಇದ್ದೀವಿ. ಸರ್ಕಾರದ ವಿರುದ್ಧ ಜನರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ ಎಂದರು. ಇದೇ ವೇಳೆ ಯಡಿಯೂರಪ್ಪ ರಾಜಕೀಯ ನಿವೃತ್ತಿ ತೆಗೆದುಕೊಳ್ಳಬೇಕು ಎಂಬ ಸಿದ್ದರಾಮಯ್ಯ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಬಿಎಸ್ ವೈ, ಸಿದ್ದರಾಮಯ್ಯ ಅವರು ಹೇಳಬೇಕು ಪಾಪ. ಅವರು ನಿವೃತ್ತಿ ತಗೊಂಡು ಮನೆಗೆ ಹೋಗುವಾಗ ಇನ್ನೊಬ್ಬರ ಬಗ್ಗೆ ಹೇಳೋದು ಸ್ವಾಭಾವಿಕ. ಯಾರು ನಿವೃತ್ತಿಯಾಗ್ತಾರೆ, ಏನ್ ಆಗ್ತಾರೆ ಅನ್ನೊದು ಮುಂದೆ ಗೊತ್ತಾಗುತ್ತದೆ. ಪೋಕ್ಸೋ ಕೇಸ್‌ನಲ್ಲಿ ನಾಳೆ ಕೋರ್ಟ್‌ನಲ್ಲಿ ತೀರ್ಮಾನ ಆದಾಗ ಎಲ್ಲಾ ಬಹಿರಂಗವಾಗುತ್ತೆ. ಅಲ್ಲಿಯವರೆಗೆ ನಾನು ಏನು ಮಾತಾಡಲ್ಲ, ಅದಾದ ಬಳಿಕ ಸಿದ್ದರಾಮಯ್ಯಗೆ ಉತ್ತರ ಸಿಗುತ್ತೆ. ಅವರು ಈಗ ಮನಬಂದಂತೆ ಮಾತಾಡುತ್ತಿದ್ದಾರೆ ಮಾತಾಡಲಿ. ಹತಾಶೆಯ ಮನೋಭಾವದಲ್ಲಿ ಇರೋದನ್ನು ಜನರೇ ತೀರ್ಮಾನ ಮಾಡ್ತಾರೆ ಎಂದರು.

ನಾನು ತಪ್ಪು ಮಾಡಿಲ್ಲ ಎಂದು ಸಿದ್ದರಾಮಯ್ಯ ಹೇಳಿಕೆ ವಿಚಾರ ಸಂಬಂಧ ಮಾತನಾಡಿದ ಬಿಎಸ್ ವೈ, ಸಿಎಂ ತಮ್ಮ ಪತ್ನಿಗೆ ಬೆಲೆ ಬಾಳುವ ಸೈಟ್ ಗಳನ್ನು ಕೊಟ್ಟಿದ್ದಾರೆ. ಮನೆಯವರಿಗೆ ಬೆಲೆ ಬಾಳುವ ಸೈಟ್ ಕೊಟ್ಟ ಉದಾಹರಣೆ ಇದ್ಯಾ. ಇದು ಅಕ್ಷಮ್ಯ ಅಪರಾಧ, ಅದಕ್ಕಾಗಿ ಹೋರಾಟ ಮಾಡ್ತಿದ್ದೇವೆ ಎಂದರು.

## ಮೊದಲ ಅಕ್ಕಿ ಎಟಿಎಂ

ಸಬ್ಸಿಡಿ ಅಕ್ಕಿಯ ಕಳ್ಳತನ ಹಾಗೂ ಬ್ಲ್ಯಾಕ್ ಮಾರ್ಕೆಟ್‌ಗೆ ಸಂಬಂಧಿಸಿದ ಸಮಸ್ಯೆಗಳನ್ನು ಗಣನೀಯವಾಗಿ ಕಡಿಮೆ ಮಾಡುವ ನಿರೀಕ್ಷೆ ಇದೆ. ನಾವು ಫಲಾನುಭವಿಗಳಿಗೆ ಅಕ್ಕಿ

## ಮೊದಲನೇ ಪುಟದಿಂದ...

ಎಟಿಎಂ ಅನ್ನು ಪರೀಕ್ಷಿಸಿದ್ದೇವೆ. ಇದು ಭಾರತದ ಮೊದಲ ಅಕ್ಕಿ ಎಟಿಎಂ ಆಗಿದ್ದು, ಪ್ರಾಯೋಗಿಕವಾಗಿ ಉದ್ಘಾಟನೆಯಾಗಿದೆ.

ಫಲಾನುಭವಿಗಳು ಸರಿಯಾದ ತೂಕದಲ್ಲಿ ಅಕ್ಕಿಯನ್ನು ಪಡೆಯುವುದನ್ನು ಖಚಿತಪಡಿಸಿಕೊಳ್ಳುವುದು ಗುರಿಯಾಗಿದೆ ಇದರಲ್ಲಿ ಯಾವುದೇ ಮೋಸಕ್ಕೂ ಅವಕಾಶವಿರುವುದಿಲ್ಲ.

ಅಕ್ಕಿ ಎಟಿಎಂ ಅನ್ನು ಆರಂಭದಲ್ಲಿ ಭುವನೇಶ್ವರದಲ್ಲಿ ಪರಿಚಯಿಸಲಾಗುವುದು ಮತ್ತು ಅಂತಿಮವಾಗಿ ಒಡಿಶಾದ ಎಲ್ಲಾ 30 ಜಿಲ್ಲೆಗಳಿಗೆ ವಿಸ್ತರಿಸಲಾಗುವುದು. ಈ ಮಾದರಿಯನ್ನು ಒನ್ ನೇಷನ್ ಒನ್ ರೇಷನ್ ಕಾರ್ಡ್ ಯೋಜನೆಯಡಿ ಇತರ ರಾಜ್ಯಗಳಿಗೆ ವಿಸ್ತರಿಸಬಹುದು. ವಿವಿಧ ರಾಜ್ಯಗಳ ಜನರು ಈ ಸ್ವಯಂಚಾಲಿತ ವ್ಯವಸ್ಥೆಯ ಮೂಲಕ ತಮ್ಮ ಪಡಿತರವನ್ನು ಪಡೆಯಲು ಸಾಧ್ಯವಾಗುತ್ತದೆ.

## ಪ್ರದರ್ಶಿಸಿದ ಬಾಲಕಿ

ತಮ್ಮ ಭರತನಾಟ್ಯವನ್ನು ಫೋನ್ ನಲ್ಲಿ ರೆಕಾರ್ಡ್ ಮಾಡಿ ಮುಖ್ಯಮಂತ್ರಿಗೆ ತೋರಿಸಿದ್ದಾರೆ.

ಜುಲೈ 30ರಂದು ಸುರಿದ ಧಾರಾಕಾರ ಮಳೆ ಮುಂಡಕ್ಕೈ ಮತ್ತು ಚೂರಲ್ಮಲಾ ಪ್ರದೇಶಗಳಲ್ಲಿ ಭೂಕುಸಿತವನ್ನುಂಟು ಮಾಡಿತು. ನೂರಾರು ಮನೆಗಳು ಬೃಹತ್ ಗುಡ್ಡ ಕುಸಿತಕ್ಕೆ ಸಿಲುಕಿ ನೆಲಸಮಗೊಂಡಿವೆ. ಜನರು ಅವಶೇಷಗಳಡಿ ಸಿಲುಕಿದರು.ದುರಂತದಲ್ಲಿ ಇದುವರೆಗೆ 417 ಮಂದಿ ಸಾವನ್ನಪ್ಪಿದ್ದಾರೆ.

ವಿಪತ್ತನ್ನು ರಾಷ್ಟ್ರೀಯ ವಿಪತ್ತು ಎಂದು ಘೋಷಿಸುವಂತೆ ರಾಹುಲ್ ಗಾಂಧಿ ಸೇರಿದಂತೆ ಪ್ರತಿಪಕ್ಷಗಳ ನಾಯಕರ ಕರೆಗಳ ನಡುವೆ ಪ್ರಧಾನಿ ನರೇಂದ್ರ ಮೋದಿ ಶನಿವಾರ (ಆಗಸ್ಟ್ 10) ವಯನಾಡಿಗೆ ಭೇಟಿ ನೀಡಲಿದ್ದಾರೆ.

ವಯನಾಡು ಭೂಕುಸಿತವನ್ನು ರಾಷ್ಟ್ರೀಯ ವಿಪತ್ತು ಎಂದು ಘೋಷಿಸುವುದರಿಂದ ಪರಿಹಾರ ಮತ್ತು ಪುನರ್ವಸತಿಗಾಗಿ ಹೆಚ್ಚುವರಿ ಹಣವನ್ನು ಬಿಡುಗಡೆ ಮಾಡಲಾಗುತ್ತದೆ ಎಂದು ಖಚಿತಪಡಿಸಲಾಗಿದೆ. ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮುಖ್ಯಮಂತ್ರಿ ವಿಜಯನ್, ಭೂಕುಸಿತವನ್ನು ರಾಷ್ಟ್ರೀಯ ವಿಪತ್ತು ಮತ್ತು ತೀವ್ರ ವಿಪತ್ತು ಎಂದು ಘೋಷಿಸಲು ಕೇರಳ ಸರ್ಕಾರವು ಕೇಂದ್ರವನ್ನು ಕೇಳಿದೆ ಎಂದು ಹೇಳಿದರು.

ದುರಂತದ ತೀವ್ರತೆಯನ್ನು ಪರಿಶೀಲಿಸಿ ವರದಿ ಸಲ್ಲಿಸಲು ಕೇಂದ್ರ ಗೃಹ ಸಚಿವಾಲಯ ಒಂಬತ್ತು ಸದಸ್ಯರ ಸಮಿತಿಯನ್ನು ನೇಮಿಸಿದೆ ಎಂದರು .

ವಿಪತ್ತು ಎದುರಿಸಲು ಕೇಂದ್ರದಿಂದ ಸಕಾರಾತ್ಮಕ ಪ್ರತಿಕ್ರಿಯೆ ವ್ಯಕ್ತವಾಗಿದೆ ಎಂದು ವಿಜಯನ್ ಹೇಳಿದರು. ರಾಜ್ಯ ಸರ್ಕಾರಕ್ಕೆ ಕೇಂದ್ರದ ನೆರವು ಮತ್ತು ಸಮಗ್ರ ಪುನರ್ವಸತಿ ಪ್ಯಾಕೇಜ್ ಸಿಗುತ್ತದೆ ಮತ್ತು ಈ ನಿಟ್ಟಿನಲ್ಲಿ ಪ್ರಧಾನಿ ಮೋದಿ ನಿರ್ಣಯ ತೆಗೆದುಕೊಳ್ಳುತ್ತಾರೆ ಎಂದು ಭರವಸೆ ವ್ಯಕ್ತಪಡಿಸಿದರು.

## ಭಾರಿ ಪ್ರತಿಭಟನೆ

ತಾಂತ್ರಿಕ ದೋಷದ ನೆಪಹೇಳಿ ಸರ್ಕಾರ ಕಳೆದೊಂದು ವರ್ಷದಿಂದ ನಯಾಪೈಸೆ ಬಿಡುಗಡೆ ಮಾಡಿಲ್ಲ, ಬೆಂಗಳೂರಿನ ಬಿಎಂಸಿಆರ್ ಐ, ಅಟಲ್ ಬಿಹಾರಿ ವಾಜಪೇಯಿ ಕಾಲೇಜು, ಡಾ.ಬಿ.ಆರ್.ಅಂಬೇಡ್ಕರ್ ವೈದ್ಯಕೀಯ ಕಾಲೇಜು ಸೇರಿ ಹಲವು ವೈದ್ಯಕೀಯ ಕಾಲೇಜು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಬಿಡುಗಡೆಯಾಗಿಲ್ಲ.

ವಿದ್ಯಾರ್ಥಿ ವೇತನ ಬಿಡುಗಡೆ ಮಾಡದ ಸರ್ಕಾರ ಅತ್ತ ಖಾಲಿ ಹುದ್ದೆಗಳ ನೇಮಕಾತಿ ಕೂಡ ನಡೆಸುತ್ತಿಲ್ಲ, ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ದಿನೇ ದಿನೇ ಕಳಪೆ ಆಹಾರಗಳ ಸೇವನೆ ಜನರ ಜೀವ ಹಿಂಡುತ್ತಿದೆ. ಇಂತಹ ಹೊತ್ತಿನಲ್ಲಿ ಪ್ರಮುಖ ಪಾತ್ರ ವಹಿಸುವ ಆರೋಗ್ಯ ನಿರೀಕ್ಷಣಾಧಿಕಾರಿಗಳ ಹುದ್ದೆಗಳು ಕೂಡ ಭರ್ತಿ ಆಗಿಲ್ಲ. ಸುಮಾರು 2692 ಹುದ್ದೆಗಳು ಖಾಲಿ ಇವೆ. ಈ ಹಿನ್ನೆಲೆಯಲ್ಲಿ ಹುದ್ದೆ ಭರ್ತಿ ಮಾಡುವಂತೆ ಒತ್ತಾಯಿಸಿ ಉದ್ಯೋಗಾಂಕ್ಷಿಗಳು ಫ್ರೀಡಂ ಪಾರ್ಕ್ ನಲ್ಲಿ ಗುರುವಾರ ಪ್ರತಿಭಟನೆ ನಡೆಸಿದ್ದಾರೆ.

ಅನುದಾನ ಬಿಡುಗಡೆ ಮಾಡಲು ಸರ್ಕಾರದ ಬಳಿ ಹಣವೇ ಇಲ್ಲ, ಹೀಗಾಗಿ ಪೋರ್ಟಲ್ ಓಪನ್ ಮಾಡದೇ ತಾಂತ್ರಿಕ ದೋಷ ಎಂದು ನಾಟಕ ಮಾಡಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ.

## ಪತ್ತೆ!

ಈ ಲೆಟರ್ ಹೆಡ್ ಸಿಐಡಿ ಅಧಿಕಾರಿಗಳು ಮಹಜರು ವೇಳೆ ಪತ್ತೆಯಾಗಿದ್ದು, ವಶಕ್ಕೆ ಪಡೆದಿದ್ದಾರೆ.

ಯಾದಗಿರಿ ನಗರ ಠಾಣೆಯ ಅಪರಾಧ ವಿಭಾಗದ ಪಿಎಸ್ ಐ ಪೋಸ್ಟಿಂಗ್ ಗಾಗಿ ಶಾಸಕ ಚೆನ್ನಾರೆಡ್ಡಿ 15 ಲಕ್ಷ ರೂ. ಕೇಳಿದ್ದರು ಎನ್ನಲಾಗಿದೆ. ಹೀಗಾಗಿ ಪಿಎಸ್ ಐ ಪರಶುರಾಮ ಹಣ ಹೊಂದಿಸುತ್ತಿದ್ದರು. ವಸತಿ ಗೃಹದಲ್ಲಿ ಪೋಸ್ಟಿಂಗ್ ಗಾಗಿ ಕೂಡಿಟ್ಟ 7.33 ಲಕ್ಷ ನಗದು ಸಿಕ್ಕಿದ್ದು, ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಪರಶುರಾಮ ಅವರಿಗೆ ಸೇರಿದ ನಾಲ್ಕು ಬ್ಯಾಂಕ್ ಖಾತೆಯಲ್ಲಿನ ಹಣದ ಮಾಹಿತಿಯನ್ನೂ ಸಹ ಸಿಐಡಿ ಅಧಿಕಾರಿಗಳು ಪಡೆದುಕೊಂಡಿದ್ದಾರೆ. ಜೊತೆಗೆ ಇಲಾಖಾ ರಿವಾಲ್ವರ್ (ಬಂದೂಕು), ಸಿಮ್ ಕಾರ್ಡ್ , ಮೊಬೈಲ್ ಮತ್ತು ವಾಕಿಟಾಕಿ ಜಪ್ತಿ ಮಾಡಿದ್ದಾರೆ. ಪರಶುರಾಮ ಮೃತಪಟ್ಟ ಜಾಗದಲ್ಲಿ ಮುಗಿನಿಂದ ಬಾಯಿಂದ ಬಂದ ರಕ್ತದ ಮಾದರಿ ಸಹ ಸಂಗ್ರಹಿಸಲಾಗಿದೆ.

**ಮೊಬೈಲ್ ನಲ್ಲಿವೆ ಮಹತ್ವದ ಆಡಿಯೋಗಳು:** ಮೃತ ಪಿಎಸ್ ಐ ಪರಶುರಾಮ ಪ್ರತಿಯೊಂದು ಕರೆಗಳನ್ನು ರೆಕಾರ್ಡ್ ಮಾಡಿಕೊಳ್ಳುತ್ತಿದ್ದರು. ಪೋಸ್ಟಿಂಗ್ ಆಗದೆ ಇರುವ ಬಗ್ಗೆ, ಸ್ನೇಹಿತರು ಮತ್ತು ಕಟುಂಬಸ್ಥರ ಮುಂದೆ ಪೋಸ್ಟಿಂಗ್ ಹಣ ಕೇಳಿರುವ ದೂರವಾಣಿ ಮೂಲಕ ಸಂಭಾಷಣೆ ಮಾಡಿದ್ದಾರೆ. ಎಲ್ಲ ಸಂಭಾಷಣೆಗಳ ಆಡಿಯೋ ಮೊಬೈಲ್ ನಲ್ಲಿವೆ.

ಯಾದಗಿರಿ ಸೈಬರ್ ಕ್ರೈಂ ಠಾಣೆಯ ಪಿಎಸ್ ಐ ಆಗಿದ್ದ ಪರಶುರಾಮ ಮನೆಯಲ್ಲಿ ಅನುಮಾನಸ್ಪದವಾಗಿ ಮೃತಪಟ್ಟಿದ್ದಾರೆ. ಪಿಎಸ್ ಐ ಪರಶುರಾಮ ಸಾವಿಗೆ ಕಾಂಗ್ರೆಸ್ ಶಾಸಕ ಚೆನ್ನಾರೆಡ್ಡಿ ಮತ್ತು ಅವರ ಪುತ್ರ ಪಂಪಾಗೌಡ ಕಾರಣವೆಂದು ಕುಟುಂಬಸ್ಥರು ಆರೋಪ ಮಾಡಿದ್ದಾರೆ. ಈಗಾಗಲೆ ಶಾಸಕ ಚೆನ್ನಾರೆಡ್ಡಿ ವಿರುದ್ಧ ಜಾತಿ ನಿಂದನೆ ಆರೋಪಪಡಿ ದೂರು ದಾಖಲಾಗಿದೆ. ಪಿಎಸ್ ಐ ಪರಶುರಾಮ ಸಾವು ರಾಜ್ಯ ಸರ್ಕಾರಕ್ಕೆ ತಲೆನೋವಾಗಿದೆ. ಮತ್ತು ಪಿಎಸ್‌ಐ ಪರಶುರಾಮ ಸಾವು ಬಳಿಕ ಶಾಸಕ ಚೆನ್ನಾರೆಡ್ಡಿ ನಾಪತ್ತೆಯಾಗಿದ್ದಾರೆ.

## ಲೇಸರ್ ಟ್ರ್ಯಾಕ್ ಗನ್

ಒಂದೊಂದು ಮಾದರಿಯ ವಾಹನಕ್ಕೆ ಒಂದೊಂದು ವೇಗದ ಮಿತಿ ನಿಗದಿಪಡಿಸಲಾಗಿದೆ. ಆ ವೇಗದ ಮಿತಿ ಮೀರಿ ಚಾಲನೆ ಮಾಡಿದರೆ ದಂಡ ಬೀಳಲಿದೆ. ಇಷ್ಟೇ ಅಲ್ಲದೆ, ನಿಗದಿತ ಟ್ರ್ಯಾಕ್ ನಲ್ಲಿಯೇ ವಾಹನಗಳು ಸಂಚರಿಸಬೇಕು. ಟ್ರ್ಯಾಕ್ ದಾಟಿ ಬಂದರೂ ಫೈನ್ ಬೀಳುವುದು ಖಚಿತವಾಗಿದೆ.

**ಯಾವ ವಾಹನಕ್ಕೆ ಎಷ್ಟು ವೇಗದ ಮಿತಿ:** 8 ಜನಕ್ಕಿಂತ ಕಡಿಮೆ ಸಾಮರ್ಥ್ಯ ಹೊಂದಿರುವ ವಾಹನಗಳಿಗೆ 120 ಕಿಮೀ ವೇಗದ ಮಿತಿ ನಿಗದಿಪಡಿಸಲಾಗಿದೆ. 8 ಜನರಿಗಿಂತ ಅಧಿಕ ಸಾಮರ್ಥ್ಯ ಇರುವ ವಾಹನ ವೇಗದ ಮಿತಿ 80 ಕಿಮೀ ಆಗಿದೆ.

**ಯಾವ ವಾಹನ ಯಾವ ಟ್ರ್ಯಾಕ್ ನಲ್ಲಿ ಸಂಚರಿಸಬೇಕು :** ನೈಸ್ ರಸ್ತೆಯ ಬಲ ಭಾಗದಲ್ಲಿ ಕಾರುಗಳು ಸಂಚರಿಸಬೇಕು. ಬಲ ಭಾಗದಲ್ಲಿ ಸಂಚರಿಸುವ ಕಾರಿನ ವೇಗದ ಮಿತಿ ಗಂಟೆಗೆ 120 ಕಿ.ಮೀ ಇರಬೇಕು. 121 ಕಿಮೀ ಹಾಗೂ ಅದಕ್ಕಿಂತ ಹೆಚ್ಚು ವೇಗವಾಗಿ ಸಾಗಿದರೆ ದಂಡ ಬೀಳಲಿದೆ.

ರಸ್ತೆಯ ಎಡಭಾಗದ ಟ್ರ್ಯಾಕ್ ನಲ್ಲಿ ಬೈಕ್ ಹಾಗೂ ಗೂಡ್ಸ್ ವಾಹನಗಳು ಸಂಚರಿಸಬೇಕು. ಈ ವಾಹನಗಳ ವೇಗದ ಮಿತಿ ಗಂಟೆಗೆ 80 ಕಿಮೀ ಆಗಿದೆ. 81 ಕಿಮೀ ಹಾಗೂ ಅಧಿಕ ವೇಗದಲ್ಲಿ ಚಾಲನೆ ಮಾಡಿದರೆ ದಂಡ ತೆರಬೇಕಾಗಲಿದೆ. ಲೇಸರ್ ಟ್ರ್ಯಾಕ್ ಗನ್ ಸಹಾಯದಿಂದ ದಿನಕ್ಕೆ 30 ರಿಂದ 35 ಪ್ರಕರಣಗಳು ದಾಖಲಾಗುತ್ತಿವೆ.

## ಅಣ್ಣ

ಜಗಳದ ನಡುವೆ ಪ್ರತಾಪ್ ರಜನಿಗೆ ದಂಡಪಿಂಡ ಎಂದು ಬೈದಿದ್ದಾನೆ. ಇದರಿಂದ ಜಗಳ ಇನ್ನಷ್ಟು ತಾರಕಕ್ಕೇರಿದೆ. ಬಳಿಕ ಇಬ್ಬರೂ ಪರಸ್ಪರ ಹಲ್ಲೆ ಮಾಡಿಕೊಂಡಿದ್ದಾರೆ. ಈ ವೇಳೆ ತಾಯಿ ಬಿಡಿಸಲು ಬಂದರೂ ಅಣ್ಣ-ತಮ್ಮಂದಿರ ಜಗಳ ನಿಂತಿಲ್ಲ.

ಬಳಿಕ ರಜನಿ ಅಡುಗೆ ಮನೆಗೆ ತೆರಳಿ ಚಾಕು ತಂದು, ತಮ್ಮ ಪ್ರತಾಪ್ ನ ಎದೆಗೆ ಇರಿದಿದ್ದಾನೆ. ತೀವ್ರ ರಕ್ತಸ್ರಾವವಾಗಿ ಪ್ರತಾಪ್ ಕುಸಿದು ಬಿದ್ದಿದ್ದಾನೆ. ಘಟನೆ ಬಳಿಕ ರಜಿನಿ ನಾಪತ್ತೆಯಾಗಿದ್ದನು. ಕೂಡಲೆ ಪ್ರತಾಪ್ ನನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಯಿತು. ಆದರೆ ಚಿಕಿತ್ಸೆ ಫಲಿಸದೆ ಪ್ರತಾಪ್ ಮೃತಪಟ್ಟಿದ್ದಾನೆ. ಬೇಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿ, ಆರೋಪಿ ರಜನಿಯನ್ನು ಪೊಲೀಸರು ಬಂಧಿಸಿದ್ದಾರೆ.

## ವಂಚನೆ!

ದಾಖಲೆಗಳನ್ನು ತೆಗೆದುಕೊಳ್ಳಲು ನನಗೆ ಹಣದ ಅವಶ್ಯಕತೆ ಇದೆ. ಹೀಗಾಗಿ ತುರ್ತಾಗಿ 15 ಲಕ್ಷ ಬೇಕು ಶೇಕಡ 3ರಷ್ಟು ಬಡ್ಡಿ ಸೇರಿಸಿ 15 ದಿನಗಳ ಒಳಗಡೆ ಹಣ ವಾಪಸ್ ಕೊಡುತ್ತೇನೆಂದು ಮಾಲಾ ಮತ್ತು ರಮೇಶ್ ಗೆ ಹೇಳಿದ್ದಾಳೆ.

ಮಾಲಾ ಮತ್ತು ರಮೇಶ್ ಸಂಬಂಧಿಯಾದ ನಾಗೇಶ್ವರ ರಾವ್ ಹಾಗೂ ಸುಜರಿತ, ಹಾಗೂ ಡ್ರೈವರ್ ಮಂಜುರವರ ಸಮಕ್ಷಮ ಹಣ ಪಡೆದುಕೊಂಡಿದ್ದಾಳೆ. ನಂತರ ಮಾಲಾ ಮತ್ತು ರಮೇಶ್ 15 ದಿನಗಳ ನಂತರ ಕಲ್ಪನಾಗೆ ಹಣ ಕೇಳಿದ್ದಾರೆ. ಆಗ ಕಲ್ಪನಾ ನಾವು ಕಪ್ಪು ಹಣವನ್ನು ಕಾನೂನು ಬದ್ಧ ಹಣವನ್ನಾಗಿ ಪರಿವರ್ತಿಸಲು ನೂರು ಕೋಟಿ ರೂಗಳಿಗೆ ಶೇ 30ರಂತೆ 30 ಕೋಟಿ ರೂಗಳನ್ನು ಕಟ್ಟಬೇಕು, ನೀವು ನಮಗೆ ಕೊಟ್ಟಿರುವ ಹಣಕ್ಕೆ, ಅದರ ಹತ್ತು ಪಟ್ಟು ಹಣವನ್ನು ಹೆಚ್ಚುವರಿ ಕೊಡುತ್ತೇನೆ ಮತ್ತು 2 ಕೆಜಿ ಚಿನ್ನ ಮತ್ತು 20 ಕೆಜಿ ಬೆಳ್ಳಿ ವಿಗ್ರಹಗಳನ್ನು ನಿಮಗೆ ಕೊಡುತ್ತೇನೆ. ಆರ್ ಬಿಐ ಉನ್ನತ ಅಧಿಕಾರಿಗಳು ನಮ್ಮ ಜೊತೆ ಇರುತ್ತಾರೆ, ಅಲ್ಲದೆ ವರುಣ್ ಎಂಬುವವನು ಇಡಿ ಇಲಾಖೆಯಲ್ಲಿ ಕೆಲಸ ಮಾಡುತ್ತೇನೆಂದು ನಂಬಿಸಿದ್ದಾಳೆ.

ಗೋಡೌನ್ ನಲ್ಲಿರುವ ಹಣದ ಕಂತೆಗಳಿಗೆ ಔಷದಿ ಹಾಕಬೇಕು ಇಲ್ಲದಿದ್ದರೆ ಹಣವು ಒಂದಕ್ಕೊಂದು ಅಂಟಿಕೊಂಡು ನಾಶವಾಗುತ್ತದೆ. ಹಣವನ್ನು ಈಗಲೇ ಕೊಟ್ಟರೆ 2-3 ದಿನಗಳಲ್ಲಿ ನಿಮಗೆ ಹತ್ತು ಪಟ್ಟು ಹೆಚ್ಚಿನ ಹಣ ಕೊಡುತ್ತೇವೆಂದು ಹೇಳಿ ಪರಿಪರಿಯಾಗಿ ನಂಬಿಸಿದ್ದಾಳೆ.

ಇವಳ ಮಾತನ್ನು ನಂಬಿದ ಮಾಲಾ ಮತ್ತು ರಮೇಶ್ ಒಟ್ಟು 4 ಕೋಟಿ ರೂ. ಹಣವನ್ನು ವಿವಿಧ ದಿನಾಂಕಗಳಂದು ನಾಗೇಶ್ವರ ರಾವ್ ಹೆಂಡತಿ ಸುಜರಿತ, ಕಲ್ಪನಾ, ದಿಲೀಪ್, ತರುಣ, ಗೌತಮ್, ಚಾಲಕ ಮಂಜು ಅವರಿಗೆ ನೀಡಿದ್ದಾರೆ. ನಂತರ ಮಾಲಾ ಮತ್ತು ರಮೇಶ್ ಹಣವನ್ನು ವಾಪಸ್ ಕೇಳಿದಾಗ ನಾವು ಹಣವನ್ನು ಕೊಡುವುದಿಲ್ಲ. ನೀವು ನಮ್ಮ ತಂಟೆಗೆ ಬಂದರೆ ಜೀವ ಸಹಿತ ಬಿಡುವುದಿಲ್ಲ ಎಂದು ಜೀವ ಬೆದರಿಕೆ ಹಾಕಿದ್ದಾರೆ ಎಂದು ದೂರಿನಲ್ಲಿ ದಾಖಲಾಗಿದೆ

ಪ್ರಕರಣ ಸಂಬಂಧ ಉತ್ತರ ವಿಭಾಗ ಡಿಸಿಪಿ ಸೈದುಲ್ಲಾ ಅಡಾವತ್ ಮಾತನಾಡಿ, ಆರೋಪಿಗಳು ಆರ್ ಬಿಐ ಮತ್ತು ಇಡಿ ಹೆಸರು ದುರ್ಬಳಕೆ ಮಾಡಿಕೊಂಡು ವಂಚನೆ ಮಾಡಿದ್ದಾರೆ. ಆರ್ ಬಿಐ, ಇಡಿ ಬಳಿ ಜಪ್ತಿಯಾಗಿರುವ ಹಣವಿದೆ. ಈ ಹಣ ನಿಮಗೆ ಮರಳಿ ಬರಲಿದೆ. ಆದರೆ ನೀವು ಮೊದಲು ಹೂಡಿಕೆ ಮಾಡಬೇಕು. ಹೂಡಿಕೆ ಮಾಡಿದ ಹಣಕ್ಕಿಂತ ಡಬಲ್, ತ್ರಿಬಲ್ ಹಣ ಕೊಡುತ್ತೇವೆ, ಜಮೀನು ಕೊಡಿಸುತ್ತೇವೆ ಎಂದು ನಂಬಿಸಿ ಹಣ ಪಡೆದು ವಂಚನೆ ಮಾಡಿದ್ದಾರೆ. ಪ್ರಕರಣ ಸಂಬಂಧ ಏಳು ಆರೋಪಿಗಳ ಬಂಧಿಸಲಾಗಿದೆ. ಹೆಬ್ಬಾಳ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಾಗಿದ್ದು ತನಿಖೆ ಮುಂದುವರೆಸಿದ್ದೇವೆ ಎಂದು ತಿಳಿಸಿದರು.

## ಮುಡಾ ಹಗರಣ: ತನಿಖೆ ಮುಗಿದು ವರದಿ ಬರುವ ವರೆಗೆ ಆ ನಿವೇಶನಗಳು ನಮ್ಮದಲ್ಲವೆಂದ ಯತೀಂದ್ರ

**ಮೈಸೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಮುಡಾ ಹಗರಣಕ್ಕೆ ಸಂಬಂಧಪಟ್ಟಂತೆ ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರತಿಪಕ್ಷಗಳಾದ ಬಿಜೆಪಿ ಜೆಡಿಎಸ್ ಹೋರಾಟ ತೀವ್ರಗೊಂಡಿದೆ. ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಪಾದಯಾತ್ರೆಯೂ ನಡೆಯುತ್ತಿದೆ. ಈ ಮಧ್ಯೆ, ಮುಡಾ ನಿವೇಶನ ಹಂಚಿಕೆ ಸಂಬಂಧ ತನಿಖೆ ನಡೆದು ವರದಿ ಬರುವವರೆಗೂ ಆ ನಿವೇಶನಗಳು ನಮ್ಮದಲ್ಲ ಎಂದು ಸಿಎಂ ಸಿದ್ದರಾಮಯ್ಯ ಪುತ್ರ ಡಾ. ಯತೀಂದ್ರ ಹೇಳಿದ್ದಾರೆ.

ಮೈಸೂರಿನಲ್ಲಿ ಮಾತನಾಡಿದ ಅವರು, ಮುಡಾ ನಿವೇಶನ ಹಂಚಿಕೆ ಸಂಬಂಧ ನ್ಯಾಯಾಂಗ ತನಿಖೆ ಆಗುತ್ತಿದೆ. ಈಗಾಗಲೇ ಮುಡಾ ಸೈಟ್ ವಾಪಸ್ ಕೊಡುವ ಬಗ್ಗೆ ಹೇಳಾಗಿದೆ. 2005 ರಿಂದ ಯಾರಿಗೆಲ್ಲಾ ನಿವೇಶನ ಕೊಟ್ಟಿದ್ದಾರೆ ಎಂಬ ಬಗ್ಗೆ ತನಿಖೆ ನಡೆಯುತ್ತಿದೆ. ಅದರ ಅರ್ಥ ನಮಗೆ ಕೊಟ್ಟಿರುವ ನಿವೇಶನವೂ ರದ್ದಾಗಿದೆ ಎಂಬುದು. ಈಗ ಆ ನಿವೇಶನಗಳು ನಮ್ಮ ಸುಪರ್ದಿಗೆ ಬರುವುದಿಲ್ಲ ಎಂದು ಹೇಳಿದ್ದಾರೆ.

ನ್ಯಾಯಾಂಗ ತನಿಖೆ ನಡೆದು ವರದಿ ಬರುವವರೆಗೂ ಸೈಟ್ ನಮ್ಮದಲ್ಲ. ತನಿಖೆ ಮಾಡಿ ನಮ್ಮದು ಎಂದರೆ ನಿವೇಶನ ನಮಗೆ ಕೊಡುತ್ತಾರೆ. ಇಲ್ಲದಿದ್ದರೆ ಕುಟುಂಬದವರು ನ್ಯಾಯಾಲಯದ ಮೊರೆ ಹೋಗುತ್ತೇವೆ. ನಮ್ಮ ತಂದೆ ಭ್ರಷ್ಟಾಚಾರ ಮಾಡಿದ್ದಾರೆಂದು ಬಿಂಬಿಸುವುದು ಸರಿಯಲ್ಲ ಎಂದು ಯತೀಂದ್ರ ಹೇಳಿದ್ದಾರೆ.

ಈ ಮಧ್ಯೆ, ಬಿಜೆಪಿ ಜೆಡಿಎಸ್ ಪಾದಯಾತ್ರೆ 7ನೇ ದಿನಕ್ಕೆ ಕಾಲಿಟ್ಟಿದೆ. ಒಂದೆಡೆ ಪಾದಯಾತ್ರೆ ಮೈಸೂರಿನ ಬಳಿ ಸಮೀಪಿಸುತ್ತಿದ್ದಂತೆಯೇ ಅತ್ತ ಕಾಂಗ್ರೆಸ್ ಜನಾಂದೋಲನ ಸಮಾವೇಶ ಆಯೋಜಿಸಿದೆ. ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಸೇರಿದಂತೆ ಕಾಂಗ್ರೆಸ್ ಗಣ್ಯರು ಸಮಾವೇಶದಲ್ಲಿ ಭಾಗವಹಿಸುತ್ತಿದ್ದು, ಪ್ರತಿಪಕ್ಷಗಳ ಆರೋಪಗಳಿಗೆ ಕೌಂಟರ್ ಕೊಡಲಿದ್ದಾರೆ.

## ಭಯ-ಭಕ್ತಿ ಇಲ್ಲದ ಜನ ನಾಗರ ಪಂಚಮಿಯಂದು ನಾಗರಾಜನ ಮುಂದೆ ಕೇಕ್ ಕಟ್ ಮಾಡಿ ಯುವಕರ ಹುಚ್ಚಾಟ

ಸನಾತನ ಧರ್ಮವಾದ ಹಿಂದೂ ಧರ್ಮದಲ್ಲಿ ವ್ರತ, ಹಬ್ಬಗಳಿಗೆ ವಿಶೇಷ ಮಹತ್ವವನ್ನು ನೀಡಲಾಗಿದೆ. ಪ್ರತಿಯೊಂದು ಹಬ್ಬಕ್ಕೂ ಅದರದ್ದೇ ಆದ ಪದ್ಧತಿ, ಆಚರಣೆಯ ವಿಧಿ-ವಿಧಾನಗಳು ಇರುತ್ತದೆ. ಈ ಹಬ್ಬಗಳಲ್ಲಿ ನಾಗರ ಪಂಚಮಿಯೂ ಒಂದು. ಶ್ರಾವಣ ಮಾಸದ ಶುಕ್ಲ ಪಕ್ಷದ ಪಂಚಮಿ ತಿಥಿಯಂದು ಆಚರಿಸಲಾಗುವ ನಾಗರ ಪಂಚಮಿಯನ್ನು ಭಕ್ತಿ-ಪೂರ್ವಕವಾಗಿ ಆಚರಿಸಲಾಗುತ್ತದೆ. ಈ ದಿನ ಶ್ರದ್ಧಾ ಭಕ್ತಿಯಿಂದ ನಾಗರ ಕಲ್ಲಿಗೆ ಅಥವಾ ಹುತ್ತಗಳಿಗೆ ಹಾಲೆರೆದು ಪೂಜೆ ಸಲ್ಲಿಸಲಾಗುತ್ತದೆ. ಆದರೆ ಇಲ್ಲೊಂದಷ್ಟು ಯುವಕರು ಭಯ-ಭಕ್ತಿ ಇಲ್ಲದೆ, ಸಂಪ್ರದಾಯ ಆಚರಣೆಗಳಿಗೆ ಬೆಲೆ ಕೊಡದೆ ನಾಗರಾಜನ ಮುಂದೆ ಕೇಕ್ ಇಟ್ಟು ನಗುತಾ ನಗುತಾ ಬಾಳು ನೀನು ನೂರು ವರುಷ ಎಂಬ ಹಾಡನ್ನು ಹಾಡುತ್ತಾ ನಾಗರ ಪಂಚಮಿಯ ಈ ದಿನ ಹುಚ್ಚಾಟ ಮೆರೆದಿದ್ದಾರೆ. ಈ ವಿಡಿಯೋ ಇದೀಗ ಭಾರೀ ವೈರಲ್ ಆಗುತ್ತಿದ್ದು, ಯುವಕರ ಈ ದುರ್ವರ್ತನೆಗೆ ಭಾರೀ ಆಕ್ರೋಶ ವ್ಯಕ್ತವಾಗುತ್ತಿದೆ.

ವೈರಲ್ ವಿಡಿಯೋದಲ್ಲಿ ಒಂದಷ್ಟು ಯುವಕರು ನಾಗರ ಹಾವಿನ ಮುಂದೆ ಕೇಕ್ ಇಟ್ಟು ನಾಗರ ಪಂಚಮಿ ಆಚರಿಸಿದ ದೃಶ್ಯವನ್ನು ಕಾಣಬಹುದು. ಈ ಯುವಕರು ಹಾವಿನ ಮುಂದೆ ನಿಂತು ನಗುತಾ ನಗುತಾ ಬಾಳು ನೀನು ನೂರು ವರುಷ ಎಂಬ ಹಾಡನ್ನು ಹಾಡುತ್ತಾ ಹ್ಯಾಪಿ ಬರ್ತ್ ಡೇ ನಾಗು ಭಾಯ್ ಎನ್ನುತ್ತಾ ಭಯ-ಭಕ್ತಿ ಇಲ್ಲದೆ ನಮ್ಮ ಸಂಪ್ರದಾಯ, ಆಚರಣೆಗಳಿಗೆ ತಮಾಷೆ ಮಾಡುತ್ತಾ ಹುಚ್ಚಾಟ ಮೆರೆದಿದ್ದಾರೆ.

# ಹುದ್ದೆಗಳ ಭರ್ತಿಗೆ ನೇರ ಸಂದರ್ಶನ

**ಚಿಕ್ಕಬಳ್ಳಾಪುರ:** ರಕ್ಸಾ ಟೆಕ್ನೋ ಸೆಕ್ಯೂರಿಟಿ ಸೊಲ್ಯೂಷನ್ ಕಂಪನಿ ವತಿಯಿಂದ ವಿವಿಧ ಹುದ್ದೆಗಳ ನೇಮಕಾತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಚಿಕ್ಕಬಳ್ಳಾಪುರ ಮತ್ತು ಶ್ರೀ ಜಚನಿ ಪ್ರಥಮ ದರ್ಜೆ ಕಾಲೇಜು, ಚಿಕ್ಕಬಳ್ಳಾಪುರ ಇವರ ಸಂಯುಕ್ತ ಆಶ್ರಯದಲ್ಲಿ ನೇರ ಸಂದರ್ಶನ ಕಾರ್ಯಕ್ರಮವನ್ನು ಆಗಸ್ಟ್ 9 ರಂದು ನಗರದ ಶ್ರೀ ಜಚನಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಲಾಗಿದೆ. ಉದ್ಯೋಗಾಕಾಂಕ್ಷಿಗಳು ಇದರ ಸದುಪಯೋಗ ಪಡೆದುಕೊಳ್ಳಬಹುದೆಂದು ಜಿಲ್ಲಾ ಉದ್ಯೋಗಾಧಿಕಾರಿ ಎಂ. ಪ್ರಸಾದ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅಗತ್ಯ ದಾಖಲೆಗಳು: ಹಾಜರಾಗುವಾಗ 2 ಸೆಟ್ ಬಯೋಡಾಟ, ಅಂಕಪಟ್ಟಿ, ಆಧಾರ್ ಕಾರ್ಡ್, ವೋಟರ್ ಐಡಿ ತರುವುದು ಕಡ್ಡಾಯವಾಗಿರುತ್ತದೆ. 08156-277121, 8861734824 ಗೆ ಸಂಪರ್ಕಿಸಬಹುದು.

# ದ್ರಾಕ್ಷಿ, ಮಾವು ಬೆಳೆ ವಿಮೆಗೆ ನೋಂದಾಯಿಸಿ

**ಬೆಂಗಳೂರು ಗ್ರಾಮಾಂತರ:** ತೋಟಗಾರಿಕಾ ಇಲಾಖೆ ವತಿಯಿಂದ 2024-25ನೇ ಸಾಲಿನ ಮುಂಗಾರು ಹಂಗಾಮಿನ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯಡಿ ವಿವಿಧ ತೋಟಗಾರಿಕೆ ಬೆಳೆಗಳಿಗೆ ವಿಮೆ ಮಾಡಿಸ ಬಹುದಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಅಧೀನ ತಾಲ್ಲೂಕುಗಳಾದ ದೇವನಹಳ್ಳಿ, ದೊಡ್ಡಬಳ್ಳಾಪುರ, ಹೊಸಕೋಟೆ ಮತ್ತು ನೆಲಮಂಗಲ ತಾಲ್ಲೂಕುಗಳನ್ನು ವಿಮೆಯ ವ್ಯಾಪ್ತಿಗೆ ಒಳಪಡಿಸಲಾಗಿದೆ.

ಹವಾಮಾನ ಅಂಶಗಳಾದ ತಾಪಮಾನ, ಗಾಳಿಯ ವೇಗ, ಮಳೆಯ ಪ್ರಮಾಣ, ಆದ್ರ್ರತೆ ಇತ್ಯಾದಿ ಮಾಹಿತಿಗಳನ್ನು ಸರ್ಕಾರದಿಂದ ಅಧಿಸೂಚಿತ ಟೆಲಿ ಮೆಟ್ರಿಕ್ ಮಳೆ ಮಾಪನ ಕೇಂದ್ರ, ಮತ್ತು ಸ್ವಯಂಚಾಲಿತ ಹವಾಮಾನ ಕೇಂದ್ರಗಳಲ್ಲಿ ದಾಖಲಾಗುವ ಅಂಶಗಳ ಆಧಾರದ ಮೇಲೆ ಬೆಳೆ ವಿಮೆ ನಷ್ಟವನ್ನು ತೀರ್ಮಾನಿಸಲಾಗುತ್ತದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿನ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ ಮತ್ತು ನೆಲಮಂಗಲ ತಾಲ್ಲೂಕಿನ ಮಾವು ಬೆಳೆಯಲ್ಲಿ ಪ್ರತಿ ಹೆಕ್ಟೇರ್ ಗೆ ವಿಮಾ ಮೊತ್ತ-80,000ರೂ, ರೈತರು ಪಾವತಿಸಬೇಕಾದ ದರ (ಶೇ.5%)-4,000, ದ್ರಾಕ್ಷಿ



ಬೆಳೆಯಲ್ಲಿ ಪ್ರತಿ ಹೆಕ್ಟೇರ್ ಗೆ ವಿಮಾ ಮೊತ್ತ-2,80,000ರೂ, ರೈತರು ಪಾವತಿಸಬೇಕಾದ ದರ (ಶೇ.5%ಗಳಲ್ಲಿ)-14,000 ಮಾವು ಮತ್ತು ದ್ರಾಕ್ಷಿ ಬೆಳೆಯುವ ರೈತ ಬಾಂಧವರು ಈ ಯೋಜನೆಯಡಿ ನೋಂದಾಯಿಸಿ ಉಪಯೋಗ ಪಡೆದುಕೊಳ್ಳುವುದು.

ಬೆಳೆ ಸಾಲ ಪಡೆದ ರೈತರನ್ನು ಸಂಬಂಧಿಸಿದ ಬ್ಯಾಂಕಿನವರು ವಿಮೆ ವ್ಯಾಪ್ತಿಗೆ ನೋಂದಾಯಿಸಲಿದ್ದು, ಯೋಜನೆಯಲ್ಲಿ ನೋಂದಾಯಿಸಿಕೊಳ್ಳಲು ಇಚ್ಚಿಸದ ರೈತರು ಸಂಬಂಧಿಸಿದ ಬ್ಯಾಂಕ್ ಶಾಖೆಯ ವ್ಯವಸ್ಥಾಪಕರಿಗೆ ನೋಂದಣಿಯ ಅಂತಿಮ ದಿನಾಂಕಕ್ಕಿಂತ 7 ದಿನಗಳು ಮುಂಚಿತವಾಗಿ ಮುಚ್ಚಳಿಕೆ ಪತ್ರವನ್ನು ನೀಡಿದ್ದಲ್ಲಿ ಅಂತಹ ರೈತರನ್ನು ಯೋಜನೆಯಿಂದ ಕೈಬಿಡಲು ಅವಕಾಶವಿರುತ್ತದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಮರು ವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಗೆ ಏಖಊಇಒ(ಕ್ಷೇಮ) ಅಧಿಸೂಚಿತ ವಿಮಾ ಸಂಸ್ಥೆಯಾಗಿದೆ. ವಿಮೆ ನೋಂದಣಿಗೆ ಕೊನೆಯ ದಿನಾಂಕ ಆಗಸ್ಟ್ 16 ಆಗಿರುತ್ತದೆ.

ಹೆಚ್ಚಿನ ಮಾಹಿತಿಗೆ ದೇವನಹಳ್ಳಿ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ)- 9480461234, ದೊಡ್ಡಬಳ್ಳಾಪುರ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ)-9880210892, ಹೊಸಕೋಟೆ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ)-8217210320, ನೆಲಮಂಗಲ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ)- 9880461607, ರೈತ ಸಂಪರ್ಕ ಕೇಂದ್ರದ ಅಧಿಕಾರಿ, ಹತ್ತಿರದ ಬ್ಯಾಂಕ್ ಶಾಖೆ ಹಾಗೂ ವಿಮಾ ಕಂಪನಿಯ ದೂ.ಸಂ-8884141262 ಸಹಾಯವಾಣಿ ಸಂಖ್ಯೆ- 080 26564537 ಈ ಸಂಖ್ಯೆಗಳಿಗೆ ಸಂಪರ್ಕಿಸಬಹುದು ಎಂದು ತೋಟಗಾರಿಕೆ ಇಲಾಖೆ ಉಪ ನಿರ್ದೇಶಕರಾದ ಗುಣವಂತ. ಜೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಆನ್‌ಲೈನ್ ಮೂಲಕ ಅರ್ಜಿ

**ಬೆಂಗಳೂರು:** ಪ್ರಸಕ್ತ ಸಾಲಿಗೆ ಹಿಂದುಳಿದ ವರ್ಗಗಳ ನಿಗಮಗಳಾದ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮ, ವೀರಶಯವ ಲಿಂಗಾಯತ ಸಮುದಾಯ ಅಭಿವೃದ್ಧಿ ನಿಗಮ, ಉಪ್ಪಾರ ಅಭಿವೃದ್ಧಿ ನಿಗಮ, ಸವಿತಾ ಸಮಾಜ ಅಭಿವೃದ್ಧಿ ನಿಗಮ, ಮರಾಠ ಸಮುದಾಯ ಅಭಿವೃದ್ಧಿ ನಿಗಮ, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ, ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ, ಕರ್ನಾಟಕ ಅಲೆಮಾರಿ/ ಅರೆ ಅಲೆಮಾರಿ ಅಭಿವೃದ್ಧಿ ನಿಗಮ, ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ, ಕರ್ನಾಟಕ ಕಾಡುಗೊಲ್ಲ ಅಭಿವೃದ್ಧಿ ನಿಗಮಗಳಲ್ಲಿ ವಿವಿಧ ಯೋಜನೆಗಳಡಿ ಸೌಲಭ್ಯ ಒದಗಿಸಲು ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಗಂಗಾ ಕಲ್ಯಾಣ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕ್‌ಗಳ ಸಹಯೋಗದೊಂದಿಗೆ), ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ ಕೌಶಲ್ಯಾಭಿವೃದ್ಧಿ ತರಬೇತಿ, ಹೊಲಿಗೆ ಯಂತ್ರ ವಿತರಣೆ ಯೋಜನೆ,-ಡಿ.ದೇವರಾಜ ಅರಸು ನಿಗಮದ ಫಲಾಪೇಕ್ಷಿಗಳಿಗೆ ಮಾತ್ರ. ಮರಾಠ ಮಿಲಿಟರಿ ಹೋಟೆಲ್ ಯೋಜನೆ (ಮರಾಠ ಸಮುದಾಯದವರಿಗೆ ಮಾತ್ರ), ಭೋಜನಾಲಯ ಕೇಂದ್ರ ಮತ್ತು ವಿಭೂತಿ ನಿರ್ಮಾಣ ಘಟಕಕ್ಕೆ (ವೀರಶೈವ ಲಿಂಗಾಯತ ಸಮುದಾಯದವರಿಗೆ ಮಾತ್ರ). ಪಂಚವೃತ್ತಿ ಸಾಲ ಯೋಜನೆ (ವಿಶ್ವಕರ್ಮ ಸಮುದಾಯದವರಿಗೆ ಮಾತ್ರ) ಈ ನಿಗಮಗಳ ಯೋಜನೆಗಳಡಿ ಸಾಲ-ಸೌಲಭ್ಯ ಪಡೆಯಲಿಚ್ಛಿಸುವ ಆಯಾ ಸಮುದಾಯದವರು ಯೋಜನಾವಾರು ಸೌಲಭ್ಯ ಕೋರಿ ಆನ್‌ಲೈನ್ ಮೂಲಕ ಸೇವಾ ಸಿಂಧು ಪೋರ್ಟಲ್‌ನಲ್ಲಿ https://sevasindhu.karnataka.gov.in ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಸೇವಾ ಕೇಂದ್ರಗಳಲ್ಲಿ ಆಗಸ್ಟ್ 31, 2024 ರೊಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಆಯಾ ನಿಗಮಗಳ ವೆಬ್‌ಸೈಟ್‌ಗಳನ್ನು ಸಂಪರ್ಕಿಸಬಹುದು. (bcwdcorporations.karnataka.gov.in), ಬೆಂಗಳುರು ಗ್ರಾಮಾಂತರ ಜಿಲ್ಲಾ ಕಚೇರಿ ದೂರವಾಣಿ ಸಂಖ್ಯೆ : 080-29605761 ನ್ನು ಸಂಪರ್ಕಿಸಬಹುದು ಎಂದು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪತ್ರಕರ್ತರ ನಿಯೋಗಕ್ಕೆ ಸಚಿವರ ಭರವಸೆ

**ಬೆಂಗಳೂರು:** ಪತ್ರಕರ್ತರಿಗಾಗಿಯೇ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಏರ್ಪಡಿಸಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ.

ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ನೇತೃತ್ವದಲ್ಲಿ ವಿಕಾಸಸೌಧದಲ್ಲಿ ಭೇಟಿ ಮಾಡಿದ್ದ ನಿಯೋಗದ ಮನವಿಗೆ ಕೂಡಲೇ ಸ್ಪಂಧಿಸಿದ ಅವರು, ಮೊದಲ ಹಂತದಲ್ಲಿ ಜಯದೇವ ಹೃದ್ರೋಗ ಆಸ್ಪತ್ರೆಯ ಸಹಯೋಗದಲ್ಲಿ ಬೆಂಗಳೂರು, ಕಲಬುರಗಿ ಮತ್ತು ಮೈಸೂರಿನಲ್ಲಿ ಶಿಬಿರ ನಡೆಸಲು ಸೂಚಿಸುವುದಾಗಿ ತಿಳಿಸಿದರು.

ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಆದ್ಯತೆ ಮೇರೆಗೆ ಪತ್ರಕರ್ತರಿಗೆ ಪ್ರತ್ಯೇಕ ಕೊಠಡಿಯನ್ನು ಆದ್ಯತೆ ಮೇಲೆ ಕಾಯ್ದಿರಿಸಿ ಚಿಕಿತ್ಸೆ ನೀಡುವ ವ್ಯವಸ್ಥೆ ಆಗಬೇಕು ಎನ್ನುವ ಪತ್ರಕರ್ತರ ಸಂಘದ ಬೇಡಿಕೆಯನ್ನು ಪರಿಗಣಿಸಲಾಗುವುದು. ಈ ಬಗ್ಗೆ ಆಸ್ಪತ್ರೆಯ ಮುಖ್ಯಸ್ಥರಿಗೆ ಸೂಚನೆ ನೀಡಲಾಗುವುದು ಎಂದರು.

ಯಶಸ್ವಿನಿ ಯೋಜನೆ ವ್ಯಾಪ್ತಿಯಲ್ಲಿಯೇ ಪತ್ರಕರ್ತರನ್ನು ಸೇರ್ಪಡೆಯಾದರೆ ಸಾಕಷ್ಟು ಅನುಕೂಲವಾಗಲಿದೆ. ಪತ್ರಕರ್ತರಿಗಾಗಿಯೇ ಪ್ರತ್ಯೇಕ ಆರೋಗ್ಯ ಯೋಜನೆ ಮಾಡಿದರೂ ಉತ್ತಮ. ಈ ಬಗ್ಗೆ ತಮ್ಮ ಬೇಡಿಕೆ ಬಗ್ಗೆ ಮುಖ್ಯಮಂತ್ರಿಗಳ ಜೊತೆಗೆ ಚರ್ಚೆ ಮಾಡುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಪತ್ರಕರ್ತರು, ಫೋಟೋಗ್ರಾಸ್ರ್, ವಿಡಿಯೋ ಜರ್ನಲಿಸ್ಟ್ ಸೇರಿದಂತೆ ಒತ್ತಡದಲ್ಲಿ ಬದುಕುತ್ತಿರುವ ಪತ್ರಕರ್ತರಿಗೆ ಆರೋಗ್ಯ ಸಮಸ್ಯೆ ಬಂದಾಗ ತಕ್ಷಣವೇ ಸ್ಪಂಧಿಸಿ ಚಿಕಿತ್ಸೆ ನೀಡುವ ವ್ಯವಸ್ಥೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಮಾಡಬೇಕು ಎಂದು ಮನವಿ ಮಾಡಿದರು. ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಉಪಾಧ್ಯಕ್ಷರುಗಳಾದ ಅಜ್ಜಮಾಡ ರಮೇಶ್ ಕುಟ್ಟಪ್ಪ, ಭವಾನಿಸಿಂಗ್ ಠಾಕೂರ್, ಪುಂಡಲೀಕ ಬಾಳೋಜಿ, ಕಾರ್ಯದರ್ಶಿಗಳಾದ ಸೋಮಶೇಖರ ಕೆರಗೋಡು, ಖಜಾಂಚಿ ವಾಸುದೇವ ಹೊಳ್ಳ, ಶರಣ ಬಸಪ್ಪ, ಸಚಿವರ ಮಾಧ್ಯಮ ಸಂಯೋಜಕ ಅನಿಲ್ ಕುಮಾರ್ ಹಾಜರಿದ್ದರು.



# ಮಕ್ಕಳಿಗೆ ಕಾನೂನು ಅರಿವು ಅಗತ್ಯ

## ಜಿಲ್ಲಾ ವಕೀಲರ ಸಂಘದ ನಿಕಟಪೂರ್ವ ಅಧ್ಯಕ್ಷ ಉಮ್ಮತ್ತೂರು ಇಂದುಶೇಖರ್ ಹೇಳಿಕೆ

**ಚಾಮರಾಜನಗರ:** ಶೈಕ್ಷಣಿಕ ಹಂತದಲ್ಲಿ ಇಂದಿನ ಮಕ್ಕಳಿಗೆ ಕಾನೂನು ಅರಿವು ಮೂಡಿಸುವುದು ಅತ್ಯಗತ್ಯವಾಗಿದೆ ಎಂದು ಜಿಲ್ಲಾ ವಕೀಲರ ಸಂಘದ ನಿಕಟಪೂರ್ವ ಅಧ್ಯಕ್ಷ ಉಮ್ಮತ್ತೂರು ಇಂದುಶೇಖರ್ ತಿಳಿಸಿದರು.

ನಗರದ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪರಿಶಿ?ಟ ವರ್ಗಗಳ ಕಲ್ಯಾಣ ಇಲಾಖೆ, ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿಯ ವಿಶ್ವ ವಿದ್ಯಾಲಯ ಮತ್ತು ಆಸರೆ ಚಾರಿಟಬಲ್ ಟ್ರಸ್ಟ್, ಚಾಮರಾಜನಗರ ಇವರ ಸಹಯೋಗದಲ್ಲಿ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ವ್ಯಕ್ತಿತ್ವ ಬೆಳವಣಿಗೆ ಮತ್ತು ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತಾನಾಡಿದರು.

ವಿದ್ಯಾರ್ಥಿಗಳಿಗೆ ಸೂಕ್ತ ಕಾನೂನಿನ ಜ್ಞಾನ ಇದ್ದರೆ ಯೋಗ್ಯ ಸಮಾಜ ನಿರ್ಮಾಣ ಮಾಡಲು ಸಾಧ್ಯ. ಎಲ್ಲರೂ ಪರಿಪೂರ್ಣವಾದ ಕಾನೂನಿನ ಅರಿವು ಹೊಂದಲು ಸಾಧ್ಯವಿಲ್ಲ. ಆದರೂ ದಿನನಿತ್ಯದ ಅವಶ್ಯಕತೆಗಾಗಿ ಕೆಲವು ಕಾನೂನು ವಿ?ಯಗಳನ್ನು ತಿಳಿಯಬೇಕಾಗಿರುವುದು ಅವಶ್ಯಕ. ಕಾನೂನಿನ ವಿರುದ್ಧ ಮಾಡುವ ಚಟುವಟಿಕೆಗಳಿಗೆ ಕ್ಷಮೆ ಇರುವುದಿಲ್ಲ. ಕಾನೂನು ನಿಮ್ಮ ರಕ್ಷಣೆಗಾಗಿ ಇರುವುದರಿಂದ ಕಾನೂನಿಗೆ ಯಾರೂ ವಿರುದ್ಧವಾಗಿ ನಡೆದು ಕೊಳ್ಳಬಾರದು ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿಯ ವಿಶ್ವ ವಿದ್ಯಾಲಯದ ಸಂಚಾಲಕರಾದ ರಾಜಯೋಗಿನಿ ಬ್ರಹ್ಮಕುಮಾರಿ ದಾನೇಶ್ವರಿ ಜೀ ಸಾನಿಧ್ಯ ವಹಿಸಿ ಮಾತನಾಡಿ



ಪ್ರಸ್ತುತ ಯುವ ಜನಾಂಗ ಕಾನೂನಿನ ಚೌಕಟ್ಟಿನಲ್ಲಿ ಕಾರ್ಯ ನಿರ್ವಹಿಸುವ ಅಗತ್ಯವಿದೆ. ಶಿಕ್ಷಣ ಉದ್ಯೋಗ ನೀಡುತ್ತದೆ.ನಮಗಾಗಿ, ಸಮಾಜಕ್ಕಾಗಿ ದುಡಿಯುವ ಮೂಲಕ ಸಮಾಜಸೇವೆ ಮಾಡುವ ಛಲವಿದ್ದರೆ ಮಾತ್ರ ಸಮಾಜದಲ್ಲಿ ಸುಸಂಸ್ಕೃತ ವಾತಾವರಣ ಕಾಣಬಹುದು. ದೇಶದ ನಾಗರೀಕರಾದ ಪ್ರತಿಯೊಬ್ಬರೂ ದೇಶದ ಅಭಿವೃದ್ಧಿ ಬಗ್ಗೆ ನಮ್ಮದೇ ಆದಂತಹ ಜವಾಬ್ದಾರಿ ಇರುತ್ತದೆ. ಅದನ್ನು ನಿರ್ವಹಿಸಿದರೆ ಉತ್ತಮ ಸತ್ಪ್ರಜೆ ಎಂಬ ಹೆಗ್ಗಳಿಕೆಗೆ ವಿದ್ಯಾರ್ಥಿಗಳು ಪಾತ್ರರಾಗುತ್ತಾರೆ ಎಂದರು.

ಬಾಲ ನ್ಯಾಯ ಮಂಡಳಿ ಸದಸ್ಯ ಟಿ. ಜೆ. ಸುರೇಶ್ ಮಾತನಾಡಿ ಇತ್ತೀಚೀನ ದಿನಗಳಲ್ಲಿ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯಗಳಾಗುತ್ತಿವೆ. ಓದುವ ವಯಸ್ಸಿನಲ್ಲಿ ಜಾಗೃತರಾಗಿರಬೇಕು. ಮೊಬೈಲ್, ಸಿನಿಮಾ, ಧಾರಾವಾಹಿಗಳಿಂದ ದೂರವಿದ್ದು, ಒಳ್ಳೆಯ ವಿಚಾರಗಳಿರುವುದನ್ನು ವೀಕ್ಷಣೆ ಮಾಡಬೇಕು.ಆಗಿದ್ದಲ್ಲಿ ಮಾತ್ರ ವಿದ್ಯಾರ್ಥಿಗಳ ಭವಿ?ಯ ಉಜ್ವಲಗೊಳ್ಳಲಿದೆ ಎಂದರು. ವಿದ್ಯಾರ್ಥಿ ನಿಲಯ ಪಾಲಕ ಬಸವಣ್ಣ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತಾನಾಡಿದರು. ಪೊಲೀಸ್ ಇಲಾಖೆಯ ಎಸ್. ಜೆ. ಪಿ. ಯು ಯೂನಿಟ್ ನ ಪ್ರಸನ್ನಮೂರ್ತಿ, ಯುವ ಸ್ಪಂದನ ಕೇಂದ್ರದ ಯುವ ಪ್ರವರ್ತಕ ಗುರುರಾಜ್, ಪ್ರಜಾಪಿತ ಬ್ರಹ್ಮಕುಮಾರಿ ವಿಶ್ವ ವಿದ್ಯಾಲಯದ ಆರಾಧ್ಯ ಇದ್ದರು.

# ಶಿಕ್ಷಕರಿಂದ ಆಗಸ್ಟ್ 12 ರಂದು ಬೆಂಗಳೂರು ಚಲೋ

**ಹುಳಿಯಾರು:** ಪ್ರಾಥಮಿಕ ಶಾಲಾ ಶಿಕ್ಷಕರಿಗಾದ ಅನ್ಯಾಯವನ್ನು ಸರಿಪಡಿಸಲು ಬೆಂಗಳೂರಿನ ಫ್ರೀಡಂ ಪಾರ್ಕನಲ್ಲಿ ಆಗಸ್ಟ್ 12 ರಂದು ರಾಜ್ಯ ಮಟ್ಟದ ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಆರ್.ಪರಶಿವಮೂರ್ತಿ ತಿಳಿಸಿದ್ದಾರೆ. ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ 2017 ರ ವೃಂದ ಮತ್ತು ನೇಮಕಾತಿ ನಿಯಮಗಳು 2016 ಕ್ಕಿಂತ ಮುಂಚೆ ನೇಮಕಾತಿ ಹೊಂದಿದ



ಶಿಕ್ಷಕರಿಗೆ ಅನ್ವಯವಾಗುವುದಿಲ್ಲ ಎಂದು ಕಾರ್ಯಾದೇಶ ಹೊರಡಿಸಿ, ಮೂಲತ: 1 ರಿಂದ 7/8 ಕ್ಕೆ ನೇಮಕ ಹೊಂದಿದವರನ್ನು ಪಿ.ಎಸ್.ಟಿ ಎಂದು ಪದನಾಮ ಮಾಡಿ 1 ರಿಂದ 5 ಕ್ಕೆ ಹಿಂಬಡ್ತಿ ನೀಡಿದ್ದನ್ನು ಹಿಂಪಡೆಯಬೇಕು. 2016 ಕ್ಕಿಂತ ಮುಂಚೆ ನೇಮಕ ಹೊಂದಿದ ಎನ್.ಸಿ.ಟಿ. ಈ ನಿಯಮಾವಳಿ ಪ್ರಕಾರ ಪದವಿ ವಿದ್ಯಾರ್ಹತೆಯನ್ನು ಹೊಂದಿದ ಎಲ್ಲ ಸೇವಾನಿರತ ಶಿಕ್ಷಕರನ್ನು ಜಿಪಿಟಿ ಶಿಕ್ಷಕರೆಂದು ಸೇವಾಜೇಷ್ಠತೆಯೊಂದಿಗೆ ಪುನರ್ ಪದನಾಮಕರಣ ಮಾಡಬೇಕು ಎಂದು ಒತ್ತಾಯಿಸಲು ಹೋರಾಟ ರೂಪಿಸಲಾಗಿದೆ ಎಂದು ವಿವರಿಸಿದರು. ಈ ಮೊದಲಿನ ಪ್ರೌಢಶಾಲಾ ಬಡ್ತಿ ನಿಯಮಾವಳಿಯಂತೆ 2016 ರ ಮುಂಚೆ ನೇಮಕಾತಿ ಹೊಂದಿದ ಹಾಗೂ ಬಿ.ಇಡಿ ಪದವಿ ಪಡೆದ ಪ್ರಾಥಮಿಕ ಶಾಲಾ ಶಿಕ್ಷಕರು ಖಾಲಿಯಾಗುವವರೆಗೂ ಪ್ರೌಢಶಾಲೆಗೆ ಬಡ್ತಿ ನೀಡಬೇಕು. ತದನಂತರದಲ್ಲಿ ಹೊಸದಾಗಿ ನೇಮಕಗೊಂಡ ಜಿಪಿಟಿ ಶಿಕ್ಷಕರನ್ನು ಪರಿಗಣಿಸಬೇಕು. ಈ ಮುಂಚಿನ ನಿಯಮಾವಳಿಯಂತೆ ಮುಖ್ಯ ಶಿಕ್ಷಕರ ಹುದ್ದೆಗೆ ವಿದ್ಯಾರ್ಹತೆಯನ್ನು ಪರಿಗಣಿಸದೇ ಅಖಂಡ ಸೇವಾಹಿರಿತನದ ಆಧಾರದ ಮೇಲೆ ಬಡ್ತಿ ನೀಡಬೇಕು ಎಂದು ಒತ್ತಾಯಿಸಿದ್ದಾರೆ. ಬೆಂಗಳೂರಿನಲ್ಲಿ ಹಮ್ಮಿಕೊಂಡಿರುವ ಈ ಬೃಹತ್ ಪ್ರತಿಭನೆ ಅಂಗವಾಗಿ ಆ.1 ರಿಂದಲೇ ವಿವಿಧ ಸ್ವರೂಪದ ಹೋರಾಟಗಳನ್ನು ರಾಜ್ಯದಾಂದ್ಯಂತ ನಡೆಸಲಾಗುತ್ತಿದೆ. ಈ ಹೋರಾಟದಲ್ಲಿ ಬಾಧಿತ 1 ಲಕ್ಷಕ್ಕೂ ಹೆಚ್ಚು ಪ್ರಾಥಮಿಕ ಶಿಕ್ಷಕರು ಭಾಗವಹಿಸಲಿದ್ದಾರೆ ಎಂದು ಪರಶಿವಮೂರ್ತಿ ತಿಳಿಸಿದ್ದಾರೆ.

# ವಿವಿಧೆಡೆ ಜಿಪಂ ಸಿಇಒ ಪರಿಶೀಲನೆ

**ಬೆಂಗಳೂರು ಗ್ರಾಮಾಂತರ:** ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ ಕೆ ಎನ್ ಅನುರಾಧ ರವರು ಇಂದು ದೊಡ್ಡಬಳ್ಳಾಪುರ ತಾಲ್ಲೂಕಿನ ಕೊನಘಟ್ಟ ಮತ್ತು ರಾಜಘಟ್ಟ ಗ್ರಾಮ ಪಂಚಾಯಿತಿಯ ಕೊನಘಟ್ಟ ಗ್ರಾಮದಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ನಿರ್ಮಿಸಿರುವ ಕೂಸಿನ ಮನೆಗೆ ಭೇಟಿ ನೀಡಿ ಕಾರ್ಯವೈಖರಿ ಬಗ್ಗೆ ಮಕ್ಕಳ ಪೋಷಣೆ ಮತ್ತು ಪೌಷ್ಟಿಕಾಹಾರ ನೀಡುತ್ತಿರುವ ಬಗ್ಗೆ ಪರಿಶೀಲಿಸಿದರು.

ನಂತರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಮಕ್ಕಳಿಗೆ ಬಿಸಿ ಊಟದ ಅಡುಗೆ ಕೋಣೆ ಅಡುಗೆ ಪರಿಶೀಲಿಸಿದರು, ಎಎಒ ಕಾಮಗಾರಿ ಪರಿಶೀಲಿಸಿದರು, ಅರಿವು ಕೇಂದ್ರವಾದ ಗ್ರಂಥಾಲಯಕ್ಕೆ ಭೇಟಿ ನೀಡಿ ಗ್ರಂಥಾಪಾಲಕರ ಜೊತೆಗೆ ಮಾತನಾಡಿ ಗ್ರಂಥಾಲಯದಲ್ಲಿ ನೊಂದಣಿ ಪುಸ್ತಕ ಪರಿಶೀಲಿಸಿದರು. ಉತ್ತಮ ಪುಸ್ತಕ ಮತ್ತು ಸ್ಪರ್ಧಾತ್ಮಕ ಪರೀಕ್ಷೆ ಗೆ ಸಂಬಂಧಿಸಿದ ಪುಸ್ತಕ ಇಡುವ ವಂತೆ ನ ಅಧಿಕಾರಿಗಳಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇತರೆ ಸಿಬ್ಬಂದಿ ಉಪಸ್ಥಿತರಿದ್ದರು.

ಗಡ್ಡಂಬಚ್ಚಹಳ್ಳಿ ಗ್ರಾಮದಲ್ಲಿ ಕೃಷಿ ಭಾಗ್ಯ ಯೋಜನೆಯಡಿ ರೈತರು ನಿರ್ಮಾಣ ಮಾಡಿಕೊಂಡಿರುವ ಕೃಷಿ ಹೊಂಡ ವೀಕ್ಷಿಸಿದರು. ನಂತರ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಅಭಿವೃದ್ಧಿಪಡಿಸಿರುವ ಎರೆಹುಳು ಗೊಬ್ಬರ ಘಟಕವನ್ನು ಪರಿಶೀಲಿಸಿದರು.ಅಈ ಸಂದರ್ಭದಲ್ಲಿ ಕೃಷಿ ಇಲಾಖೆ ಅಧಿಕಾರಿಗಳು ಮತ್ತು ಸಹಾಯಕ ನಿರ್ದೇಶಕರು ಉಪಸ್ಥಿತರಿದ್ದರು.

# ಚಿಕ್ಕ ಪ್ರತಿಭೆಯಿಂದಲೇ ದೊಡ್ಡ ಪ್ರತಿಭೆಯಾಗಲು ಸಾಧ್ಯ

**ಚಾಮರಾಜನಗರ:** ಚಿಕ್ಕ ಪ್ರತಿಭೆಯಿಂದಲೇ ದೊಡ್ಡ ಪ್ರತಿಭೆಯಾಗಲು ಸಾಧ್ಯವಾಗುತ್ತದೆ. ಚಿಕ್ಕವಯಸ್ಸಿನಲ್ಲಿ ಆಟೋಟಗಳನ್ನು ಆಡಿಕೊಂಡು ನಂತರ ಕ್ರೀಡೆಗಳಲ್ಲಿ ಭಾಗವಸುತ್ತಿದ್ದರು. ಇತ್ತೀಚಿನ ದಿನಗಳಲ್ಲಿ ಮೊಬೈಲ್ ನಲ್ಲಿ ಆಟವಾಡಲು ಮಕ್ಕಳು ಇಷ್ಟ ಪಡುತ್ತಾರೆ. ಇದರಿಂದ ದೂರವಿರಲು ಪೋ?ಕರು ಮುಂದಾಗಬೇಕು ಎಂದು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕ್ಷೇತ್ರ ಶಿಕ್ಷಣ ಇಲಾಖೆ ಕ್ಷೇತ್ರ ಸಂಪಮ್ಮೂಲ ಅಧಿಕಾರಿ ರಾಜೀವ್ ತಿಳಿಸಿದರು.

ನಗರದ ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಮಂಗಳವಾರ ಚಾಮರಾಜನಗರ ಜಿಲ್ಲಾ ಪಂಚಾಯಿತ್, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಶಾಲಾ ಶಿಕ್ಷಣಾ ಇಲಾಖೆ ಇವರ ಸಹಯೋಗದಲ್ಲಿ ನಡೆಸಿದ ಹಿರಿಯ ಪ್ರಾಥಮಿಕ ಪ್ರೌಢಶಾಲೆಗಳ ರಾಮಸಮುದ್ರ ವಲಯ ಮಟ್ಟದ 2024-25ನೇ ಸಾಲಿನ ಕ್ರೀಡಾಕೂಟದಲ್ಲಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು. ಪ್ರತಿಯೊಂದು ಮಕ್ಕಳಿನಲ್ಲಿ ಒಂದೊಂದು ಪ್ರತಿಭೆ ಇರುತ್ತದೆ ಅಂತಹ ಮಕ್ಕಳನ್ನು ಗುರುತಿಸಿ ವೇದಿಕೆ ನಿರ್ಮಿಸುವುದು ಶಿಕ್ಷಕರ ಹಾಗೂ ಪೋಷಕರ ಕರ್ತವ್ಯವಾಗಿದೆ. ಪ್ರಾಥಮಿಕ ಶಾಲಾ ಹಂತದಲ್ಲಿ ವಿದ್ಯಾರ್ಥಿಗಳಿಗೆ ಪಠ್ಯ ಚಟುವಟಿಕೆಯ ಜೊತೆಯಲ್ಲಿ ಕ್ರೀಡಾಸಕ್ತಿ ಹೆಚ್ಚುವಂತೆ ಮಾಡಬೇಕು. ಮಕ್ಕಳಲ್ಲಿ ಬುದ್ದಿ,ಶಕ್ತಿಯು ಹೆಚ್ಚುತ್ತದೆ ಎಂದರು. ವಯಲ ಮಟ್ಟದ ಕ್ರೀಡಾಕೂವನ್ನು ನಡೆಸಲು ಸರ್ಕಾರದ ಜೊತೆ ದಾನಿಗಳಿಗಳು ಬಂದಿರುವುದು ಸಂತೋಷದ ವಿಷಯ ಮಕ್ಕಳ ಪ್ರತಿಭೆಗಳಿಗೆ ಸಾರ್ವಜನಿಕರ ಪ್ರೊತ್ಸಾಹ ನೀಡಿದರೆ



ಉತ್ತಮ ವಿದ್ಯಾರ್ಥಿ ಹಾಗೂ ಕ್ರೀಡಾಪಟುವಾಗಲು ಸಾಧ್ಯ ಎಂದು ಹೇಳಿದರು. ಕ್ಷೇತ್ರ ಶಿಕ್ಷಣ ಇಲಾಖೆಯ ದೈಹಿಕ ಶಿಕ್ಷಣಾಧಿಕಾರಿ ಬಸವರಾಜು, ಎ.ಇ.ಇ ಅಧಿಕಾರಿ ನಟರಾಜು, ಹೋಟೆಲ್ ಉದ್ಯಾಮಿ ಮಹದೇವಸ್ವಾಮಿ, ಶಿವಣ್ಣ, ಮಾದಯ್ಯ, ಭಾಗ್ಯಮ್ಮ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸಿ.ಕೆ.ರಾಮಸ್ವಾಮಿ, ಸರ್ಕಾರಿ ನೌಕರರ ಸಂಘದ ಪ್ರದಾನ ಕರ್ಯದರ್ಶಿ ಮಹದೇವಸ್ವಾಮಿ, ಮಲ್ಲಿಕಾರ್ಜುನ, ದೈಹಿಕ ಶಿಕ್ಷಕರ ಗ್ರೇಡ್-2 ಸಂಘದ ದೈಹಿಕ ಶಿಕ್ಷಕ ಜೋಸೆಫ್, ಸಹ ಶಿಕ್ಷಕರು ಹಾಜರಿದ್ದರು.

# ಟೌನ್ ಕೋ ಆಪರೇಟಿವ್ ಸೊಸೈಟಿಯಿಂದ ಪ್ರತಿಭಾ ಪುರಸ್ಕಾರ

**ಹುಳಿಯಾರು:** ಹುಳಿಯಾರಿನ ಟೌನ್ ವಿವಿಧೋದ್ದೇಶ ಕೋ ಆಪರೇಟಿವ್ ಸೊಸೈಟಿಯಿಂದ 2023-2024 ರಲ್ಲಿ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿ.ಯು.ಸಿ. ಯಲ್ಲಿ ಶೇಕಡ 85 ಅಂಕ ತೆಗೆದುಕೊಂಡ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ನ ಪ್ರತಿಭಾ ಪುರಸ್ಕಾರವನ್ನು ಮಾಡಲಾಗುತ್ತದೆ. ಸಂಘದ ಷೇರುದಾರರ ಪರೀಕ್ಷೆ ಬರೆದಿರುವ ಅರ್ಹ ಮಕ್ಕಳು ತಮ್ಮ ಎಸ್.ಎಸ್.ಎಲ್.ಸಿ. / ಪಿ.ಯು.ಸಿ ಅಂಕಪಟ್ಟಿ, ಆಧಾರ್ ಕಾರ್ಡ್, 2 ಪಾಸ್‌ಪೋರ್ಟ್ ಸೈಜಿನ ಪೋಟೋಗಳನ್ನು ಸೆಪ್ಟೆಂಬರ್ 5 ರೊಳಗೆ ಹೆಚ್.ಎನ್.ಸತೀಶ್, ಅಧ್ಯಕ್ಷರು, ಟೌನ್ ವಿವಿಧೋದ್ದೇಶ ಕೋ ಆಪರೇಟಿವ್ ಸೊಸೈಟಿ ಶಿಲ್ಪ ಸ್ಟೋರ್ ಹಿಂಭಾಗ, ಹುಳಿಯಾರು, ಮೊಬೈಲ್ : 9480785118, ಮಂಗಳ ಎಸ್.ಬಿ ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು, ಟೌನ್ ವಿವಿಧೋದ್ದೇಶ ಕೋ ಆಪರೇಟಿವ್ ಸೊಸೈಟಿ ಮೊಬೈಲ್ : 9902292406 ತಲುಪಿಸುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.



**ಕೋಲಾರ ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ಪ್ರಾಣಿ ಸಂತಾನ ನಿಯಂತ್ರಣ ಕಾರ್ಯಕ್ರಮ, ಎಸ್.ಪಿ.ಸಿ.ಎ. ಕಾರ್ಯಕ್ರಮಗಳ ಸಭೆ ನಡೆಯಿತು.**

# ಲ್ಯಾಪ್ ಟಾಪ್, ಧನಸಹಾಯಕ್ಕೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಗೌರಿಬಿದನೂರು ನಗರಸಭಾ ವ್ಯಾಪ್ತಿಯಲ್ಲಿ ವಾಸವಾಗಿರುವ ಪರಿಶಿಷ್ಟ ಜಾತಿ,ಪರಿಶಿಷ್ಟ ಪಂಗಡದವರಿಗೆ 2024-25ನೇ ಸಾಲಿನ ಎಸ್.ಎಫ್.ಸಿ ಮುಕ್ತನಿಧಿ ಅನುದಾನದಲ್ಲಿ ಕ್ರಿಯಾ ಯೋಜನೆಯಡಿ ಅನುಮೋದನೆಯಾಗಿರುವಂತೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜನಾಂಗದವರಿಗೆ ಲ್ಯಾಪ್ ಟಾಪ್ ವಿತರಣೆ, ಪರಿಶಿಷ್ಟ ಜಾತಿಯ ಅರ್ಹ ವಿದ್ಯಾರ್ಥಿಗಳ ವ್ಯಾಸಂಗಕ್ಕಾಗಿ ಧನ ಸಹಾಯ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತಿವುಳ್ಳವರು ಈ ಕಚೇರಿಯಿಂದ ಅರ್ಜಿಗಳನ್ನು ಪಡೆದು ಪೂರ್ಣ ಪ್ರಮಾಣದಲ್ಲಿ ಭರ್ತಿ ಮಾಡಿ ಸಂಬಂಧಪಟ್ಟ ದಾಖಲಾತಿಗಳನ್ನು ಲಗತ್ತಿಸಿ ಆಗಸ್ಟ್ 31 ರೊಳಗೆ ನಗರಸಭೆ ಕಚೇರಿಗೆ ಸಲ್ಲಿಸಬೇಕು.

ಅಗತ್ಯ ದಾಖಲೆಗಳು: 2024-25ನೇ ಸಾಲಿನ ವ್ಯಾಸಂಗ ದೃಢೀಕರಣ ಪತ್ರ (ಮೂಲ ಪ್ರತಿ), ಚಾಲ್ತಿ ಸಾಲಿನ ಜಾತಿ ಹಾಗೂ ಆದಾಯ ಪ್ರಮಾಣ ಪತ್ರ,ಆಹಾರ ಪಡಿತರ ಚೀಟಿ,ಚುನಾವಣಾ ಗುರುತಿನ ಚೀಟಿ, ಬ್ಯಾಂಕ್ ಖಾತೆಯ ಜೆರಾಕ್ಸ್ ಪ್ರತಿ,ಪಾಸ್ ಪೋರ್ಟ್ ಅಳತೆಯ ಎರಡು ಭಾವಚಿತ್ರ, ಅಂಕಪಟ್ಟಿಗಳನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಗೌರಿಬಿದನೂರು ನಗರಸಭೆಯ ಶೇ.24.10ರ ಯೋಜನೆಯ ವಿಷಯ ನಿರ್ವಾಹಕರನ್ನು ಸಂಪರ್ಕಿಸಬಹುದೆಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಸ್‌ಗೆ ಸಿಲುಕಿ ಗರ್ಭಿಣಿ ಸಾವು

**ಚಾಮರಾಜನಗರ:** ಸಾರಿಗೆ ಇಲಾಖೆ ಬಸ್ ಅತೀ ವೇಗಕ್ಕೆ ರಸ್ತೆ ದಾಟುತ್ತಿದ್ದ ಗರ್ಭಿಣಿ ಯುವತಿ ಸಿಲುಕಿ ದಾರುಣ ಸಾವು ರೊಚ್ಚಿಗೆದ್ದ ಗ್ರಾಮಸ್ಥರಿಂದ ರಸ್ತೆ ತಡೆದು ಪ್ರತಿಭಟನೆ ಚಾಮರಾಜನಗರ ಜಿಲ್ಲೆಯ ಕಾಮಗೆರೆ ಬಳಿ ನಡೆದಿದೆ.

ಕೊಳ್ಳೇಗಾಲ ತಾಲೂಕಿನ ಕಾಮಗೆರೆ ಗ್ರಾಮದ ಹೋಲಿಕ್ರಾಸ್ ಆಸ್ಪತ್ರೆ ಮುಂಭಾಗ ಬಸ್ ನಿಲ್ದಾಣದಲ್ಲಿ ಆಸ್ಪತ್ರೆಯಿಂದ ರಸ್ತೆ ದಾಟುತಿದ್ದ ಅಜ್ಜಿಪುರ ಗ್ರಾಮದ 22 ವರ್ಷದ ನಮಿತಾ ಅತಿವೇಗದಿಂದ ಬರುತ್ತಿದ್ದ ಸಾರಿಗೆ ವಾಹನಕ್ಕೆ ಸಿಲುಕಿ ಮೃತ ಪಟ್ಟಿದ್ದಾರೆ.

ನಮಿತಾ ರವರು ಮೂಲತಃ ಪಿಜಿ ಪಾಳ್ಯ ಗ್ರಾಮದವರಾಗಿದ್ದು ಅಜ್ಜಿಪುರ ಗ್ರಾಮಕ್ಕೆ ಮದುವೆಯಾಗಿದ್ದರು. ನಮಿತಾ ಅವರು ಎರಡು ತಿಂಗಳ ಗರ್ಭಿಣಿಯಾಗಿದ್ದು ಕಾಮಗೆರೆ ಹೋಲಿಕ್ರಾಸ್ ಆಸ್ಪತ್ರೆಗೆ ವೈದ್ಯಕೀಯ ತಪಾಷಣೆಗಾಗಿ ಬಂದಿದ್ದರು ಎನ್ನಲಾಗಿದೆ.

ತಮ್ಮ ಗ್ರಾಮಕ್ಕೆ ತೆರಳಲು ರಸ್ತೆ ದಾಟುವಾಗ ಈ ದಾರುಣ ಘಟನೆ ನಡೆದಿದೆ. ಈ ಘಟನೆಯಿಂದ ರೊಚ್ಚಿಗೆದ್ದ ಸ್ಥಳೀಯ ಗ್ರಾಮಸ್ಥರು ಹಾಗು ಮೃತ ಯುವತಿಯ ಸಂಬಧಿಕರು ರಸ್ತೆ ತಡೆ ನಡೆಸಿ ಸಾರಿಗೆ ಇಲಾಖೆ ವಿರುದ್ಧ ಬಾರಿ ಆಕ್ರೋಶ ವ್ಯಕ್ತಪಡಿಸಿ ಸಾರಿಗೆ ಬಸ್ ಚಾಲಕರು ನಿಧಾನವಿಲ್ಲದೆ ಯಾರ್‍ರ ಬೀರಿ ಗಾಡಿ ಚಲಾಯಿಸುತ್ತಾರೆ.ಕಾಮಗೆರೆ ಗ್ರಾಮದಲ್ಲಿ ಕಳೆದ ನಾಲ್ಕೈದು ತಿಂಗಳಿಂದ ಅಪಘಾತದಿಂದ ಸಾವನಪ್ಪಿರುವುದು ಇದು ಮೂರನೇ ಘಟನೆ ಹಲವಾರು ಸಣ್ಣ ಪುಟ್ಟ ಅಪಘಾತಗಳು ಆಗುತ್ತಿದ್ದೂ ಬ್ಯಾರಿಕೆಡ್ ಅಳವಡಿಸುವಂತೆ ನಾಲ್ಕು ತಿಂಗಳ ಹಿಂದೆ ಪೊಲೀಸ್ ಇಲಾಖೆಗೆ ಹಾಗು ಡಿಪೋ ವ್ಯವಸ್ಥಾಪಕರಿಗೆ ಮನವಿ ಮಾಡಿದ್ದೆವು ಆದರೂ ಕೂಡ ಎಚ್ಚೆತ್ತುಕೊಂಡಿಲ್ಲ ಇಂತಹ ಅಪಘಾತಗಳು ಪುನಹ ಸಂಭವಿಸದೆ ಇರಲಿ ಎಂಬ ಉದ್ದೇಶದಿಂದ ಈ ರಸ್ತೆಯಲ್ಲಿ ರಸ್ತೆ ಡುಬ್ಬ ಅಥವಾ ಬ್ಯಾರಿಕೆಡ್ ಹಾಕುವ ಮೂಲಕ ವಾಹನಗಳಿಗೆ ವೇಗ ನಿಯಂತ್ರಣ ಮಾಡಬೇಕು ಎಂದು ಒತ್ತಾಯಿಸಿ ಸ್ಥಳೀಯ ಗ್ರಾಮಸ್ಥರು ರಸ್ತೆ ತಡೆದು ಪ್ರತಿಭಟನೆ ನಡೆಸಿದರು. ಇದರಿಂದ ಕೆಲಕಾಲ ಟ್ರಾಫಿಕ್ ಜಾಮ್ ಉಂಟಾಯಿತು. ಮೃತರ ಸಂಬಂದಿಕರ ಆಕ್ರಂದನವಂತೂ ಮುಗಿಲು ಮುಟ್ಟಿತು

ಕೊಳ್ಳೇಗಾಲ ಡಿಪೋ ವ್ಯವಸ್ಥಾಪಕ ಶಂಕರ್ ಘಟನ ಸ್ಥಳಕ್ಕೆ ಆಗಮಿಸಿ ಯುವತಿಯ ಸಾವಿಗೆ ಸಂತಾಪ ಸೂಚಿಸಿ ಪರಿಹಾರದ ಹಣವಾಗಿ 25 ಸಾವಿರ ಅಂತ್ಯ ಸಂಸ್ಕಾರದ ಖರ್ಚು ನೀಡುವ ಆದೇಶವಿದೆ ನಂತರ ಚಾರ್ಜ್ ಶೀಟ್ ಆದ ಬಳಿಕ 25 ಸಾವಿರ ನೀಡಲಾಗುವುದು ಅನಂತರ ಕೋರ್ಟ್ ಮೂಲಕ ಕುಟುಂಬಸ್ಥರಿಗೆ ಪರಿಹಾರದ ಹಣ ಒದಗಿಸಿಕೊಡಲಾಗುವುದು ಎಂದು ತಿಳಿಸಿದರು. ಕೊಳ್ಳೇಗಾಲ ಮತ್ತು ಹನೂರು ತಾಲೂಕಿನ ಪೊಲೀಸರು ಸ್ಥಳಕ್ಕೆ ಆಗಮಿಸಿ ರಸ್ತೆ ತಡೆ ಮಾಡುತ್ತಿದ್ದವರ ಮನವೊಲಿಸಿದರು.

## ದಲಿತ ಮಹಿಳಾ ಒಕ್ಕೂಟ, ಸಮಾನ ಮನಸ್ಕ ಮಹಿಳಾ ಒಕ್ಕೂಟದಿಂದ ಸಮಾಲೋಚನಾ ಸಭೆ

# ಭ್ರಷ್ಟರನ್ನು ಶಿಕ್ಷಿಸುವ ಕಠಿಣ ಕಾನೂನು ಬರಲಿ

**ಬೆಂಗಳೂರು:** ಬೆಂಗಳೂರಿನ ವೈಯಾಲಿಕಾವಲ್ನ ಘಾಟೇ ಭವನದಲ್ಲಿ ದಲಿತ ಮಹಿಳಾ ಒಕ್ಕೂಟ ಮತ್ತು ಸಮಾನ ಮನಸ್ಕ ಮಹಿಳಾ ಒಕ್ಕೂಟ, ಸಂಯುಕ್ತವಾಗಿ ಹಮ್ಮಿಕೊಂಡಿದ್ದ ಸಮಾಲೋಚನಾ ಸಭೆಯಲ್ಲಿ ಚಿಂತಕರು, ಹಲವು ಆಯೋಗಗಳ ಅಧ್ಯಕ್ಷರು ಆಗಿರುವ ನಿವೃತ್ತ ನ್ಯಾ|| ನಾಗಮೋಹನದಾಸ್ ಅವರು ''ಪರಿಷ್ಕೃತ ಕ್ರಿಮಿನಲ್ ಕಾನೂನುಗಳಲ್ಲಿ ಮಹಿಳೆ ಮತ್ತು ದಲಿತ ಪರ ಕಾನೂನು ಸುಧಾರಣೆಗಳು'' ಎಂಬ ವಿಷಯದಲ್ಲಿ ಮಾತನಾಡಿ, ಕೆಲವು ಕಾನೂನುಗಳನ್ನು ಸ್ವಾಗತ ಮಾಡಬಹುದಾಗಿದೆ. ಕೆಲವು ಕಾನೂನುಗಳನ್ನು ಚರ್ಚೆಗೆ ಒಳಪಡಿಸುವಂಥಹದ್ದಾಗಿದೆ. ಇದಕ್ಕೂ ಮೊದಲು ಈಗ ಮಾಡಿರುವ ಕ್ರಿಮಿನಲ್ ಕಾನೂನು ತಿದ್ದುಪಡಿ ಅವಶ್ಯಕವೇ? ಆದ್ಯತಾ ಮಾನದಂಡಗಳನ್ನು ರೂಪಿಸಿಕೊಂಡು, ನಂತರ ಕ್ರಮವಹಿಸಬೇಕು. ಭ್ರಷ್ಟರನ್ನು ಶಿಕ್ಷಿಸುವ ಕಠಿಣ ಕಾನೂನು ಬರಬೇಕು. ದೇಶ - ಆಡಳಿತ ಲಂಚಮುಕ್ತವಾಗಬೇಕು ಎಂದರು.

ವಿಮರ್ಶಕ ಶಿವಸುಂದರ್ ಮಾತನಾಡಿ, ದೇಶದ 90% ಜನ ತೆರಿಗೆ ಕಟ್ಟುತ್ತೇವೆ. ಎಲ್ಲಾ ವಸ್ತುಗಳ ಮೇಲಿನ ಜಿ.ಎಸ್.ಟಿ. ಕಟ್ಟುತ್ತೇವೆ. ಸಂಬಳದಲ್ಲೇ ವೇತನದಾರರ ಜಿ.ಎಸ್.ಟಿ. ಕಡಿತಗೊಳ್ಳುತ್ತೆ. ದುಡಿಯುವ ಜನ, ಸಾಮಾನ್ಯ ಜನ ತೆರಿಗೆ ಕಟ್ತಾ ಇದ್ದಾರೆ. ಕೇಂದ್ರ ಸರ್ಕಾರದ, ''ಸಬ್ ಕಾ ಸಾಥ್, ಸಬ್ ಕಾ ವಿಕಾಸ್''



ಎಂದರು. ಆದರೆ ''ಯಾರೊಂದಿಗೆ ಯಾರ ವಿಕಾಸ'' ಹೇಳಿ. ಸಂವಿಧಾನದಲ್ಲಿ ತಾರತಮ್ಯವಿಲ್ಲದ, ವ್ಯಕ್ತಿ ಘನತೆಯ, ಸರಿಸಮಾನ ಹಕ್ಕು ಅವಕಾಶಗಳಿವೆ. ಸರ್ಕಾರಗಳು ಜನಪರ ಯೋಜನೆಗಳನ್ನು ರೂಪಿಸುವಾಗ, ಬಡವರ ದೈನಂದಿನ ಜೀವನಾವಶ್ಯಕತೆಗಳು ಹೊರೆಯಾಗದಂತೆ ಆಯವ್ಯಯ ಮಾಡಬೇಕಾಗುತ್ತದೆ. ಆದರೆ ಈಗಿನ ಆಯವ್ಯಯ, ಬೆಲೆ ಏರಿಕೆಗೆ ಸಮಾನವಾಗಿ ಆದಾಯ ಏರಿಕೆಯ ಯೋಜನೆಗಳನ್ನು ರೂಪಿಸಿಲ್ಲ. ಇದರಿಂದಾಗಿ ಸಾಮಾನ್ಯ ಜನರ ಘನತೆಯ ಬದುಕು ದುಸ್ತರವಾಗುತ್ತಿದೆ ಎಂದು ಅಭಿಪ್ರಾಯ ಪಟ್ಟರು. ಶಿಕ್ಷಣದ ವಿಚಾರದ ಬಗ್ಗೆ ಡಾ. ಎ.ಎನ್. ನಿರಂಜನಾರಾಧ್ಯ ಅವರು ಮಾತನಾಡುತ್ತ ಪ್ರಾಚೀನ ಭಾರತದ ಶಿಕ್ಷಣಾ ವ್ಯವಸ್ಥೆಯಿಂದ ಹಿಡಿದು ವರ್ತಮಾನದ ಶಿಕ್ಷಣ ಕುರಿತಾಗಿ ವಿಶ್ಲೇಷಣೆ ಮಾಡಿದರು. ಭಾರತ ಸ್ವಾತಂತ್ರ?ಯ ಚಳುವಳಿಯ ಪ್ರಮುಖ ಉದ್ದೇಶಗಳಲ್ಲಿ ಶಿಕ್ಷಣವೂ ಒಂದಾಗಿತ್ತು. 1848ರಲ್ಲಿ ಸಾವಿತ್ರಿಬಾ ಮತ್ತು ಜ್ಯೋತಿಬಾ ಫುಲೆ ಅವರ ಶಿಕ್ಷಣದ ಹೋರಾಟ, 1882ರಲ್ಲಿ ಹಂಟರ್ ಆಯೋಗದ ಮುಂದೆ ಮಂಡಿಸಲಾದ ಬೇಡಿಕೆಯಲ್ಲಿ ''ಶಿಕ್ಷಣ''ದ ಅಂಶ ಪ್ರಧಾನವಾಗಿತ್ತು. 1857ರ ಭಾರತ ಸ್ವಾತಂತ್ರ?ಯ ಹೋರಾಟದ ನಂತರ ಎಲ್ಲಾ ಚಳುವಳಿಯಲ್ಲಿ ಶಿಕ್ಷಣವೇ ಆದ್ಯತೆಯಾಗಿತ್ತು, ಹೀಗಿದ್ದರೂ ಭಾರತದ ಅಂದಿನ ಸ್ವಾತಂತ್ರ ಚಳುವಳಿಯ ನೇತಾರರ ದಾರ್ಶನಿಕತ್ವದಿಂದ ಶಿಕ್ಷಣದ ಹಕ್ಕು ಮುನ್ನಲೆಗೆ ಬಂದಿದ್ದು, ಸಂವಿಧಾನದಲ್ಲಿ ''ಶಿಕ್ಷಣದ ಹಕ್ಕನ್ನು'' ಮೂಲಭೂತ ಹಕ್ಕನ್ನಾಗಿಸಲು ಚರ್ಚೆ ನಡೆದಿತ್ತು. ಇಂಟರ್ ನ್ಯಾಷನಲ್ ಶಾಲೆಗಳಿಂದ ಹಿಡಿದು, ಖಾಸಗಿ ಶಿಕ್ಷಣ ವ್ಯವಸ್ಥೆಯ ನಡುವೆ ಸರ್ಕಾರಿ ಶಾಲೆಗಳು ನಲುಗಿ ಹೋಗುತ್ತಿವೆ. ಯಾವಾಗ ಭಾರತ ಖಾಸಗೀಕರಣ, ಉದಾರೀಕರಣ ನೀತಿ, ಗ್ಯಾಟ್ ಒಪ್ಪಂದಗಳಿಗೆ ಸಹಿ ಹಾಕಿದ ನಂತರ ಸರ್ವರಿಗೂ ಸಮಾನ ಶಿಕ್ಷಣ - ಗುಣಮಟ್ಟದ ಶಿಕ್ಷಣ ಮೂಲೋದ್ಧೇಶವೇ ಪಲ್ಲಟಗೊಂಡಿತು. ಅಲ್ಲಿಂದಾಚೆಗೆ ಈಗಿರುವ 46000 ಸರ್ಕಾರಿ ಶಾಲೆಗಳಲ್ಲಿ 2125 ಶಾಲೆಗಳು ಮುಚ್ಚಿವೆ, ಇನ್ನೂ ನೂರಾರು ಶಾಲೆಗಳು ಮುಚ್ಚುತ್ತಲಿವೆ.ಸಂವಿಧಾನದಲ್ಲಿ ಶಿಕ್ಷಣದ ಆದ್ಯತೆಯನ್ನು ಗಮನದಲ್ಲಿಟ್ಟುಕೊಂಡು, ಆಯವ್ಯಯದಲ್ಲಿ ಯೋಜನೆ ರೂಪಿಸಬೇಕಾಗುತ್ತದೆ ಎಂದರು.

## ಅರ್ಜಿ ಆಹ್ವಾನ

**ರಾಮನಗರ:** ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ಮತ್ಸ್ಯವಾಹಿನಿ ಯೋಜನೆಯಡಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದ ಮೂಲಕ ಚಲಿಸಬಲ್ಲ ಪರಿಸರ ಸ್ನೇಹಿ ಕಿಯೋಸ್ಕ್ ತ್ರಿಚಕ್ರ ವಾಹನಗಳಲ್ಲಿ ತಾಜಾ ಮೀನು ಮತ್ತು ಮೀನು ಉತ್ಪನ್ನಗಳ ಮಾರಾಟಕ್ಕಾಗಿ ವಾಹನಗಳನ್ನು ಪರವಾನಗಿ ಆಧಾರದಲ್ಲಿ ಪಡೆಯಲು ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯಡಿ ಸಾಮಾನ್ಯ ವರ್ಗದವರಿಗೆ 1 ಲಕ್ಷ ರೂ. ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಮಹಿಳಾ ವರ್ಗದವರಿಗೆ 0.50 ಲಕ್ಷ ರೂ.ಗಳ ಭದ್ರತಾ ಠೇವಣಿ ಹಾಗೂ 3,000 ರೂ.ಗಳ ಮಾಸಿಕ ಬಾಡಿಗೆ ಮೊತ್ತ ನಿಗಧಿಪಡಿಸಲಾಗಿದೆ. ಆಸಕ್ತರು ಅರ್ಜಿ ನಮೂನೆಯನ್ನು ಸಂಬಂಧಿಸಿದ ತಾಲ್ಲೂಕು ಮಟ್ಟದ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗಳಿಂದ ಪಡೆದು ಎಲ್ಲಾ ಅಗತ್ಯ ದಾಖಲಾತಿಗಳೊಂದಿಗೆ ಆ. 20ರೊಳಗೆ ಕಚೇರಿಯ ವೇಳೆಯಲ್ಲಿ ಸಂಬಂಧಪಟ್ಟ ತಾಲ್ಲೂಕು ಮಟ್ಟದ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಮೀನುಗಾರಿಕೆ ಸಹಾಯಕ ನಿರ್ದೇಶಕರು, ರಾಮನಗರ ತಾಲ್ಲೂಕು ಮೊ:9986883110 ಮೀನುಗಾರಿಕೆ ಸಹಾಯಕ ನಿರ್ದೇಶಕರು, ಚನ್ನಪಟ್ಟಣ ತಾಲ್ಲೂಕು ಮೊ:9880347733, ಮೀನುಗಾರಿಕೆ ಸಹಾಯಕ ನಿರ್ದೇಶಕರು, ಕನಕಪುರ ತಾಲ್ಲೂಕು ಮೊ:8618277242 ಹಾಗೂ ಮೀನುಗಾರಿಕೆ ಸಹಾಯಕ ನಿರ್ದೇಶಕರು, ಮಾಗಡಿ ತಾಲ್ಲೂಕು ಮೊ:7795621180 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಮೀನುಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫಲಾನುಭವಿಗಳಿಂದ ಅರ್ಜಿ ಆಹ್ವಾನ

**ರಾಮನಗರ:** ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ 2020-21, 2021-22, 2022-23 ಮತ್ತು 2023-24ನೇ ಸಾಲಿನಲ್ಲಿ ಉಳಿಕೆಯಾಗಿರುವ ಗುರಿಗಳಿಗೆ ವಿವಿಧ ಯೋಜನೆಗಳಾದ ಮೀನು ಮರಿ ಪಾಲನೆ ಕೊಳಗಳ ನಿರ್ಮಾಣ, ಮೀನು ಕೃಷಿ ಕೊಳಗಳ ನಿರ್ಮಾಣ, ಮಧ್ಯಮ ಪ್ರಮಾಣದ ಅಲಂಕಾರಿಕಾ ಮೀನು ಸಾಕಾಣಿಕೆ ಘಟಕ ನಿರ್ಮಾಣ, ಮೀನು ಮಾರಾಟಕ್ಕೆ ಕಿಯೋಸ್ಕ್‌ಗಳ ಸ್ಥಾಪನೆಗೆ ಸಹಾಯಧನ ನೀಡಲು ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಗಳಡಿ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ 40ರಷ್ಟು ಸಹಾಯಧನ ಮತ್ತು ಪರಿಶಿಷ್ಟ ಜಾತಿ/ಪಂಗಡ ಹಾಗೂ ಮಹಿಳಾ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ 60ರಷ್ಟು ಸಹಾಯಧನ ನೀಡಲಾಗುವುದು. ಆಸಕ್ತರು ಅರ್ಜಿ ನಮೂನೆಯನ್ನು ಸಂಬಂಧಿಸಿದ ತಾಲ್ಲೂಕು ಮಟ್ಟದ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗಳಿಂದ ಪಡೆದು ಎಲ್ಲಾ ಅಗತ್ಯ ದಾಖಲಾತಿಗಳೊಂದಿಗೆ ಆ. 20 ರೊಳಗೆ ಕಚೇರಿಯ ವೇಳೆಯಲ್ಲಿ ಸಂಬಂಧಪಟ್ಟ ತಾಲ್ಲೂಕು ಮಟ್ಟದ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಲು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಮೀನುಗಾರಿಕೆ ಸಹಾಯಕ ನಿರ್ದೇಶಕರು, ರಾಮನಗರ ತಾಲ್ಲೂಕು ಮೊ:9986883110 ಮೀನುಗಾರಿಕೆ ಸಹಾಯಕ ನಿರ್ದೇಶಕರು, ಚನ್ನಪಟ್ಟಣ ತಾಲ್ಲೂಕು ಮೊ:9880347733, ಮೀನುಗಾರಿಕೆ ಸಹಾಯಕ ನಿರ್ದೇಶಕರು, ಕನಕಪುರ ತಾಲ್ಲೂಕು ಮೊ:8618277242, ಮೀನುಗಾರಿಕೆ ಸಹಾಯಕ ನಿರ್ದೇಶಕರು, ಮಾಗಡಿ ತಾಲ್ಲೂಕು ಮೊ:7795621180 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಮೀನುಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 13ರಂದು ಕಾರ್ಯಾಗಾರ

**ರಾಮನಗರ:** 2023-24ನೇ ಸಾಲಿನಲ್ಲಿ ದ್ವಿತೀಯ ಪಿಯುಸಿಯಲ್ಲಿ ಶೇ.70ಕ್ಕಿಂತ ಹೆಚ್ಚು ಅಂಕಗಳೊಂದಿಗೆ ತೇರ್ಗಡೆಯಾದ ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗದ ವಿದ್ಯಾರ್ಥಿಗಳಿಗೆ ಎಚ್ ಸಿಎಲ್ ಟೆಕ್ ಸಂಸ್ಥೆಯಿಂದ ಶಿಷ್ಯವೇತನದೊಂದಿಗೆ ತರಬೇತಿ, ಖಾಯಂ ಉದ್ಯೋಗವಕಾಶ ಹಾಗೂ ಸಂಸ್ಥೆಯ ಹಣಕಾಸಿನ ನೆರವಿನೊಂದಿಗೆ ಉನ್ನತ ಪದವಿ ಶಿಕ್ಷಣ ಪಡೆಯುವ ಅವಕಾಶವನ್ನು ಕಲ್ಪಿಸಲಾಗಿದೆ. ಈ ಸಂಬಂಧ ರಾಮನಗರ ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ, ಪದವಿಪೂರ್ವ ಶಿಕ್ಷಣ ಇಲಾಖೆ ಹಾಗೂ ಗೌಸಿಯಾ ಇಂಜಿನಿಯರಿಂಗ್ ಕಾಲೇಜು ಇವರ ಸಹಭಾಗಿತ್ವದಲ್ಲಿ ಆ. 13ರ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಉಚಿತ ಕಾರ್ಯಾಗಾರವನ್ನು ನಗರದ ಗೌಸಿಯಾ ಇಂಜಿನಿಯರಿಂಗ್ ಕಾಲೇಜಿನಲ್ಲಿ ಆಯೋಜಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು, ಎಸ್.ಎಸ್.ಎಲ್.ಸಿ, ದ್ವಿತೀಯ ಪಿಯುಸಿ ಅಂಕಪಟ್ಟಿ, ಆಧಾರ್ ಕಾರ್ಡ್‌ಗಳ ಜೆರಾಕ್ಸ್ ಪ್ರತಿ ಹಾಗೂ ನೋಂದಣಿಗಾಗಿ ಸ್ಮಾರ್ಟ್ ಫೋನ್‌ನೊಂದಿಗೆ ಹಾಜರಾಗಬಹುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ: 8050475672, 8722790340, 9845454471 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಲ-ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ರಾಮನಗರ:** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ನಿ) ವತಿಯಿಂದ 2024-25ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಜನಾಂಗದವರಿಗೆ ವಿವಿಧ ಯೋಜನೆಗಳಡಿ ನಿಗಮದಿಂದ ಸಾಲ ಹಾಗೂ ಸೌಲಭ್ಯಗಳನ್ನು ನೀಡಲು ಆನ್ ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ವಿದೇಶಿ ವಿದ್ಯಾಭ್ಯಾಸ ಸಾಲ ಯೋಜನೆ, ರೇಷ್ಮೆ ನೂಲು ಬಿಚ್ಚಾಣಿಕೆ ಉದ್ಯಮಕ್ಕೆ ಪ್ರೋತ್ಸಾಹ ಯೋಜನೆ, ಅಲ್ಪಸಂಖ್ಯಾತ ಸಮುದಾಯದ ಮಹಿಳಾ ಸ್ವಸಹಾಯ ಗುಂಪುಗಳಿಗೆ ಸಹಾಯಧನ ಯೋಜನೆ ಹಾಗೂ ಸಿಖ್ಖಲಿಗಾರ ಸಮುದಾಯದ ಜನರ ಆರ್ಥಿಕ ಸಬಲೀಕರಣಕ್ಕೆ ಪ್ರೋತ್ಸಾಹ ಸೌಲಭ್ಯಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಆ. 31 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗೆ ಜಿಲ್ಲಾ ವ್ಯವಸ್ಥಾಪಕರ ಕಚೇರಿ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ನಿ) ಕೊಠಡಿ ಸಂಖ್ಯೆ 404, 3ನೇ ಮಹಡಿ, ಜಿಲ್ಲಾಧಿಕಾರಿಗಳ ನೂತನ ಕಚೇರಿ ಸಂಕೀರ್ಣ, ರಾಮನಗರ. ದೂ.ಸಂಖ್ಯೆ: 080-27271029. ಈ ಕಚೇರಿಯನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸುವಂತೆ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬರಚುಕ್ಕಿ ಜಲಪಾತೋತ್ಸವಕ್ಕೆ ಜಿಲ್ಲೆ ಕಲಾವಿದರಿಗೆ ಅವಕಾಶ ಕೊಡಿ

**ಚಾಮರಾಜನಗರ:** ಕೊಳ್ಳೇಗಾಲ ತಾಲೂಕಿನ ಭರಚುಕ್ಕಿ ಜಲಪಾತ ಉತ್ಸವ ಆಗಸ್ಟ್ 10, 11, ಅದ್ದೂರಿಯಾಗಿ ನಡೆಯಲಿದೆ.

ಆದರೆ ಜಿಲ್ಲೆಯ ಕಲಾವಿದರನ್ನು ಕಡೆಗಣನೆ ಮಾಡಲು ಸರಿಯಲ್ಲ ಎಂದು ಕನ್ನಡ ಜನಪದ ಪರಿಷತ್ ಜಿಲ್ಲಾಧ್ಯಕ್ಷ ಸುರೇಶ್ ನಾಗ್ ತಿಳಿಸಿದ್ದಾರೆ.

ನಗರದ ಜಿಲ್ಲಾಡಳಿತ ಭವನ ದಲ್ಲಿ. ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಅಂಬೇಡ್ಕರ್ ಪ್ರತಿಭೆ ಮುಂಭಾಗ. ಜಿಲ್ಲಾಧಿಕಾರಿ ಕಚೇರಿಗೆ ಮನವಿ ಪತ್ರ ಸಲ್ಲಿಸಿ. ನಂತರ ಮಾತನಾಡಿ ಆಗಸ್ಟ್ 10 11. ಕೊಳ್ಳೇಗಾಲ ತಾಲೂಕು ಬರಚುಕ್ಕಿ ಜಲಪಾತ ಉತ್ಸವ ಬಗ್ಗೆ ಕಲಾವಿದರಿಗೆ ಮಾಹಿತಿ ದೊರಕಿಲ್ಲ. ಸಂಘ ಸಂಸ್ಥೆ ಸಭೆ ಕರೆದಿಲ್ಲ. ಕೇವಲ ಎರಡು ದಿವಸದಲ್ಲಿ ಉತ್ಸವ ಮಾಡುತ್ತಿದ್ದಾರೆ. ಮಳೆ ಹಿನ್ನೆಲೆ. ಎಷ್ಟೋ ಜನರಿಗೆ ತೊಂದರೆ ಆಗಿದೆ. ಒಂದು ದಿವಸ ಕಾರ್ಯಕ್ರಮ ಮಾಡಿ. ಇನ್ನೊಂದು ಇನ್ನೊಂದು ದಿವಸದ ಕಾರ್ಯಕ್ರಮದ ಹಣವನ್ನು ಸಂಕಟದಲ್ಲಿ ಸಿಲುಕಿರುವ ಜನರಿಗೆ ವಿತರಣೆ



ಮಾಡಲಿ ಎಂಬುದು ನಮ್ಮ ಮನವಿ. ಎಂದು ತಿಳಿಸಿದರು . ಹಾಗೂ ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಕಲಾವಿದರನ್ನು ವಿಶ್ವಕ್ಕೆ ತೆಗೆದುಕೊಂಡು ಮಾಡಬೇಕು ಎಂದು ತಿಳಿಸಿದರು.

ಆಕಾಶವಾಣಿ ಕಲಾವಿದೆ ಹೊನ್ನಮ್ಮ. ಕಲಾವಿದರಾದ ದೇವಮ್ಮ ,ಪುಟ್ಟನಂಜಮ್ಮ. ಶಿವಣ್ಣ. ರಾಜಣ್ಣ. ರಂಗಸ್ವಾಮಿ. ಜಿ ಬಂಗಾರು. ಗೌರಿಶಂಕರ. ಸಿದ್ದನಾಯಕ. ಕನ್ನಡ ಗಾನಕೋಗಿಲೆ. ಮಹೇಶ್. ಸೇರಿದಂತೆ ಹಲವಾರು ಕಲಾವಿದರು ಹಾಜರಿದ್ದರು.

# ಗ್ರಾಪಂ ಅಧ್ಯಕ್ಷೆಯಿಂದ ಅಧಿಕಾರ ದುರುಪಯೋಗ

**ಚಾಮರಾಜನಗರ:** ಗ್ರಾಮ ಪಂಚಾಯತಿ ಅಧ್ಯಕ್ಷೆಯ ವಿರುದ್ಧ ಸಿಡಿದೆದ್ದಿರುವ ಸದಸ್ಯರು ಅಧಿಕಾರ ಹಾಗೂ ಹಣ ದುರ್ಬಳಕೆ ವಿರೋಧಿಸಿ ಗ್ರಾಮ ಪಂಚಾಯತಿ ಮುಂದೆ ಧರಣಿ ನಡೆಸಿದ ಘಟನೆ ಚಾಮರಾಜನಗರ ತಾಲ್ಲೂಕಿನ ಕೂಡ್ಲೂರು ಗ್ರಾಮ ಪಂಚಾಯತಿಯಲ್ಲಿ ಬುಧವಾರ ನಡೆದಿದೆ.

ಚಾಮರಾಜನಗರ ತಾಲ್ಲೂಕಿನ ಕೂಡ್ಲೂರು ಗ್ರಾಮ ಪಂಚಾಯ್ತಿ ಮುಂದೆ ಸದಸ್ಯರು ಹಾಗೂ ಸಾರ್ವಜನಿಕರು ಧರಣಿ ನಡೆಸಿ ಅಧ್ಯಕ್ಷರ ವಿರುದ್ಧ ಘೋಷಣೆ ಕೂಗಿ ಅಧಿಕಾರ ದುರ್ಬಳಕೆ ಮಾಡಿ ಹಣ ದುರುಪಯೋಗ ಪಡಿಸಿಕೊಂಡಿರುವುದನ್ನು ಖಂಡಿಸಿ ಪ್ರತಿಭಟಿಸಿದರು. ಗ್ರಾಮ ಪಂಚಾಯತಿ ಅಧ್ಯಕ್ಷೆ ಹೆಚ್ ಎಸ್ ಗಗನಾ ರವರು ಅಧ್ಯಕ್ಷೆಯಾಗುವ ಮುನ್ನ ಪಂಚಾಯತಿ ಯಲ್ಲಿ ನಡೆಸಿರುವ 11 ಸಭೆ ಗೆ ಹಾಜರಾಗಿಲ್ಲ ಆದರೂ ಸಹ ಅಧ್ಯಕ್ಷರಾದ ಬಳಿಕ ಅಧಿಕಾರ ದುರ್ಬಳಕೆ ಮಾಡಿಕೊಂಡು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಗೆ ಬೆದರಿಸಿ ಗೌರವ ಧನವನ್ನು ಒಟ್ಟಿಗೆ ಡ್ರಾ ಮಾಡಿಕೊಂಡಿದ್ದಾರೆ ಎಂದು ಗಂಭೀರವಾಗಿ ಆರೋಪಿಸಿದರು.

ಅಧ್ಯಕ್ಷೆಯಾಗಿ ಆಯ್ಕೆ ಬಳಕ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೇ ಏಕಪಕ್ಷೀಯವಾಗಿ ನಿರ್ಧಾರ ಕೈಗೊಂಡು ಪಂಚಾಯತ್ ಅಭಿವೃದ್ಧಿ ಕುಂಠಿತವಾಗಲು ಕಾರಣರಾಗಿದ್ದಾರೆ ಎಂದು ದೂರಿದರು. ಪಂಚಾಯತಿ ಸದಸ್ಯರ ಮನಸ್ತಾಪದ ನಡುವೆ ಸರಿಯಾಗಿ ಸಭೆಗಳು ನಡೆಯುತ್ತಿಲ್ಲ, ಸಾರ್ವಜನಿಕರಿಗೆ



ಅನುಕೂಲವಾಗುವ ಕೆಲಸ ಕಾರ್ಯ ನಡೆಯುತ್ತಿಲ್ಲ, ಈ ಸ್ವತ್ತು ಗಳು ನೀಡುತ್ತಿಲ್ಲ ಎಂದು ಸದಸ್ಯರುಗಳು ಗಂಭೀರವಾಗಿ ಆರೋಪಿಸಿದರು. ಅಧ್ಯಕ್ಷರ ಅಧಿಕಾರ ದುರುಪಯೋಗ ಹಾಗೂ ಹಣ ದುರ್ಬಳಕೆ ಮತ್ತು 11 ಸಭೆಗೆ ಗೈರಾಗಿರುವ ಬಗ್ಗೆ ಜಿಲ್ಲಾ ಪಂಚಾಯತಿ ಹಿರಿಯ ಅಧಿಕಾರಿಗಳಿಗೆ ಲಿಖಿತ ದೂರು ಸಲ್ಲಿಸಿದರು ಅಧಿಕಾರಿಗಳು ಕ್ರಮ ವಹಿಸದ ಬಗ್ಗೆ ಸದಸ್ಯರು ಅಸಮಧಾನ ವ್ಯಕ್ತಪಡಿಸಿದರು. ಧರಣಿಯಲ್ಲಿ ಮಾಜಿ ಅಧ್ಯಕ್ಷ. ಹಾಗೂ ಹಾಲಿ ಸದಸ್ಯ ಮಹದೇವಸ್ವಾಮಿ ( ಕಲರ್) ಸದಸ್ಯರಾದ ಗಿರೀಶ್, ಮಹದೇವಸ್ವಾಮಿ ಹಾಗೂ ಮಾಜಿ ಅಧ್ಯಕ್ಷ ಲಿಂಗಾರಾಜು, ಮಾಜಿ ಸದಸ್ಯ ಮುತ್ತುರಾಜ್ ಹಾಗೂ ಮಹಿಳಾ ಸದಸ್ಯರುಗಳು ಭಾಗವಹಿಸಿದ್ದರು. ಸ್ಥಳಕ್ಕೆ ತಾಲ್ಲೂಕು ಪಂಚಾಯತಿ ಸಹಾಯಕ ನಿರ್ದೇಶಕ ಪ್ರಕಾಶ್ ಭೇಟಿ ನೀಡಿ ಮಾಹಿತಿ ಕಲೆಹಾಕಿ ಹಿರಿಯ ಅಧಿಕಾರಿಗಳ ಗಮನಕ್ಕೆ ತರಲಾಗುವುದು ಎಂದರು.

### ಸಕಲ ಸಿದ್ದತೆಗೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಸೂಚನೆ

# ನಾಳೆ ಭರಚುಕ್ಕಿ ಜಲಪಾತೋತ್ಸವ



**ಚಾಮರಾಜನಗರ:** ಜಿಲ್ಲೆಯ ಪ್ರಸಿದ್ದ ಪ್ರವಾಸಿ ತಾಣ ಭರಚುಕ್ಕಿಯಲ್ಲಿ ಇದೇ ಆಗಸ್ಟ್ 10ರಂದು ಜಲಪಾತೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಇದಕ್ಕಾಗಿ ಸಕಲ ಸಿದ್ದತೆ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ಭರಚುಕ್ಕಿ ಜಲಪಾತೋತ್ಸವ ಆಯೋಜನೆ ಸಂಬಂಧ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರರು,.

ಜಿಲ್ಲೆಯು ವೈವಿಧ್ಯಮಯ ಹಲವು ಪ್ರವಾಸಿ ತಾಣಗಳನ್ನು ಹೊಂದಿದ್ದು, ಚಲುವ ಚಾಮರಾಜನಗರ ಹೆಸರಿನಡಿ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ಜಲಪಾತೋತ್ಸವವನ್ನು ಆಗಸ್ಟ್ 10ರಂದು ಆಯೋಜನೆ ಮಾಡಲಾಗುತ್ತಿದೆ. ಈ ಕಾರ್ಯಕ್ರಮಕ್ಕೆ ಆಗಸ್ಟ್ 10ರಂದು ಸಂಜೆ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು ಚಾಲನೆ ನೀಡಲಿದ್ದು, ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ವಿವಿಧ ಇಲಾಖೆಗಳ ಸಚಿವರು, ಶಾಸಕರು, ಗಣ್ಯರು ಆಗಮಿಸಲಿದ್ದಾರೆ. ಈ ವೈಶಿಷ್ಟ್ಯ ಕಾರ್ಯಕ್ರಮ ಯಶಸ್ವಿಗೆ ಅಧಿಕಾರಿಗಳು ಪೂರ್ಣ ಪ್ರಮಾಣದಲ್ಲಿ ತೊಡಗಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಯವರು ನಿರ್ದೇಶನ ನೀಡಿದರು.

ಜಲಪಾತದ ಸೊಬಗನ್ನು ಬಣ್ಣದ ಬೆಳಕಿನಲ್ಲಿ ನೋಡುವ ಅವಕಾಶವನ್ನು ಮಾಡಲಾಗುತ್ತಿದೆ. ಜಲಪಾತೋತ್ಸವ ವೇದಿಕೆ ಕಾರ್ಯಕ್ರಮವು ನಡೆಯಲಿದ್ದು, ವಿವಿಧ ಬಗೆಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗುತ್ತಿದೆ. ಈ ಎಲ್ಲವು ಸುಸೂತ್ರವಾಗಿ ನೆರವೇರಲು ಅಧಿಕಾರಿಗಳಿಗೆ ಜವಾಬ್ದಾರಿ ನೀಡಲಾಗಿದೆ. ನಿಯೋಜನೆಗೊಂಡ ಅಧಿಕಾರಿಗಳು ಎಲ್ಲ ಸಿದ್ದತೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕೆಂದು ತಿಳಿಸಿದರು.

ಕಾರ್ಯಕ್ರಮಕ್ಕೆ ಹೆಚ್ಚಿನ ಜನರು ಪ್ರವಾಸಿಗರು ಆಗಮಿಸಲಿರುವ ಹಿನ್ನೆಲೆಯಲ್ಲಿ ವಾಹನ ಸಂಚಾರಕ್ಕೆ ಯಾವುದೇ ಅಡಚಣೆಯಾಗದಂತೆ ವ್ಯವಸ್ಥೆ ಕೈಗೊಳ್ಳಬೇಕು. ವಾಹನಗಳ ನಿಲುಗಡೆಗೆ ನಿಗದಿತ ಸ್ಥಳವನ್ನು ಗೊತ್ತು ಮಾಡಬೇಕು. ವಿವಿಧ ಭಾಗಗಳಿಂದ ಬರುವ ವಾಹನಗಳಿಗೆ ಸಂಚರಿಸಬೇಕಾದ ಮಾರ್ಗಗಳ ಬಗ್ಗೆ ಮಾಹಿತಿ ನೀಡಬೇಕು. ಜನ, ವಾಹನ ದಟ್ಟಣೆ ಆಗದಂತೆ ಎಲ್ಲ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಜಲಪಾತೋತ್ಸವ ವೇದಿಕೆ ಬಳಿ ವಿವಿಧ ಮಳಿಗೆಗಳನ್ನು ತೆರೆಯಬೇಕು. ಆಹಾರ ತಿನಿಸು ಮಳಿಗೆಗಳಿಗೂ ಅವಕಾಶ ಮಾಡಿಕೊಡಲಾಗುತ್ತಿದೆ. ಬರುವ ಸಾರ್ವಜನಿಕರಿಗೆ, ಪ್ರವಾಸಿಗರಿಗೆ ಆಕರ್ಷಿಸುವ ರೀತಿಯಲ್ಲಿ ಎಲ್ಲಾ ವ್ಯವಸ್ಥೆಗಳು ಇರಬೇಕಿದೆ. ಹೀಗಾಗಿ ಎಲ್ಲ ಅವಶ್ಯಕ ಕ್ರಮಗಳನ್ನು ತುರ್ತಾಗಿ ನಿರ್ವಹಿಸುವಂತೆ ಜಿಲ್ಲಾಧಿಕಾರಿಯವರು ಸೂಚಿಸಿದರು.

ಕುಡಿಯುವ ನೀರು, ಶೌಚಾಲಯ, ಇತರೆ ಮೂಲ ಸೌಕರ್ಯಗಳು ಇರಬೇಕು. ಹೆಚ್ಚು ಜನರು ಆಗಮಿಸುವ ಹಿನ್ನೆಲೆಯಲ್ಲಿ ವೈದ್ಯಕೀಯ ತಂಡವು ನಿಯೋಜನೆಯಾಗಬೇಕು. ಸ್ವಚ್ಚತೆಯನ್ನೂ ಸಹ ಕಾಪಾಡಬೇಕು. ಪ್ಲಾಸ್ಟಿಕ್ ಬಳಸದಂತೆ ಜಾಗೃತಿ ಮೂಡಿಸಬೇಕು. ಒಟ್ಟಾರೆ ಕಾರ್ಯಕ್ರಮವು ಅರ್ಥಪೂರ್ಣ ಹಾಗೂ ವಿಶಿಷ್ಟವಾಗಿ ನಡೆಯಲು ಅಧಿಕಾರಿಗಳು ಮುಂದಾಗಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿ?ಾ?ಠಧಿಕಾರಿ ಡಾ. ಬಿ.ಟಿ. ಕವಿತಾ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಉಪವಿಭಾಗಾಧಿಕಾರಿ ಮಹೇಶ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಪಿ. ಲಕ್ಷ್ಮೀ, ಡಿವೈಎಸ್ಪಿಗಳಾದ ಲಕ್ಷ್ಮಯ್ಯ, ಧರ್ಮೇಂದ್ರ, ತಹಶೀಲ್ದಾರರಾದ ಮಂಜುಳಾ, ಗಿರಿಜಾ, ಜಯಪ್ರಕಾಶ್, ರಮೇಶ್ಬಾಬು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕಾಧಿಕಾರಿ ಪೂರ್ಣಿಮ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಎಂಜಿನಿಯರ್ ಮಹೇಶ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ರಾಜು, ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕರಾದ ಮಂಜುಳಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉದಯ್ ಕುಮಾರ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಸಭೆಯ ಬಳಿಕ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ,ಜಿಲ್ಲಾ ಪೊಲೀಸ್ ವರಿ?ಾ?ಠಧಿಕಾರಿ, ಹೆಚ್ಚುವರಿ ಜಿಲ್ಲಾಧಿಕಾರಿಗಳು ,ಉಪವಿಭಾಗಾಧಿಕಾರಿಗಳು ಸೇರಿದಂತೆ ಹಿರಿಯ ಅಧಿಕಾರಿಗಳು ಭರಚುಕ್ಕಿಗೆ ತೆರಳಿ ಸಿದ್ದತೆಗಳನ್ನು ಪರಿಶೀಲಿಸಿದರು.

# ಮಾಜಿ ರಾಜ್ಯಪಾಲ ಬಿ. ರಾಚಯ್ಯ ಸ್ಮಾರಕ ಉದ್ಘಾಟನಾ ಸಮಾರಂಭ

**ಚಾಮರಾಜನಗರ:** ಮಾಜಿ ರಾಜ್ಯಪಾಲರಾದ ದಿವಂಗತ ಬಿ. ರಾಚಯ್ಯ ರವರ ಸ್ಮಾರಕ ಉದ್ಘಾಟನೆ ಸಮಾರಂಭವು ತಾಲೂಕಿನ ಆಲೂರು ಗ್ರಾಮದಲ್ಲಿ ಆಗಸ್ಟ್10ರಂದು ಆಯೋಜಿತವಾಗಿದ್ದು, ಇದಕ್ಕಾಗಿ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು ಸೇರಿದಂತೆ ಸಚಿವರು ಹಾಗೂ ಇತರೆ ಗಣ್ಯರು ಆಗಮಿಸುವ ಹಿನ್ನೆಲೆಯಲ್ಲಿ ಎಲ್ಲಾ ಸಿದ್ದತೆಗಳನ್ನು ಅಧಿಕಾರಿಗಳು ಶೀಘ್ರ ಪೂರ್ಣಗೊಳಿಸಬೇಕೆಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಮುಖ್ಯಮಂತ್ರಿಗಳ ಜಿಲ್ಲಾ ಭೇಟಿ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಕರೆಯಲಾಗಿದ್ದ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಗಣ್ಯರ ಸ್ವಾಗತ, ವೇದಿಕೆ ಅಲಂಕಾರ, ಇನ್ನಿತರ ಎಲ್ಲಾ ಸಿದ್ದತೆಗಳನ್ನು ಪರಿಶೀಲಿಸಿಕೊಳ್ಳಬೇಕು. ವಿದ್ಯುತ್ ವ್ಯವಸ್ಥೆಯ ಬಗ್ಗೆ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಅಧಿಕಾರಿಗಳು ಮುಂಚಿತವಾಗಿಯೇ ಭೇಟಿ ನೀಡಿ ಸಮರ್ಪಕವಾಗಿರುವ ಬಗ್ಗೆ ದೃಢೀಕರಿಸಬೇಕು. ಛಾಯಾಚಿತ್ರ ಪ್ರದರ್ಶನ, ಇನ್ನಿತರ ಕಾರ್ಯಕ್ರಮಗಳ ಸಿದ್ದತೆಗೆ ನಿಯೋಜಿತರಾಗಿರುವ ಅಧಿಕಾರಿಗಳು ಎಲ್ಲಾ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುವಂತೆ ತಿಳಿಸಿದರು. ಕಾರ್ಯಕ್ರಮಕ್ಕೆ ಬರುವ ಸಾರ್ವಜನಿಕರು ಹಾಗೂ ವಾಹನಗಳಿಗೆ ಸುಗಮ ಸಂಚಾರಕ್ಕಾಗಿ ಎಲ್ಲಾ ವ್ಯವಸ್ಥೆಗಳನ್ನು ಮುಂಜಾಗ್ರತವಾಗಿ ಕೈಗೊಳ್ಳಬೇಕು. ಸಮಾರಂಭದ ಸ್ಥಳದಲ್ಲಿ ಕುಡಿಯುವ ನೀರು, ಮೊಬೈಲ್ ಶೌಚಾಲಯಗಳ ವ್ಯವಸ್ಥೆಯಾಗಬೇಕು. ಆಸನಗಳ ವ್ಯವಸ್ಥೆ, ಶಿಷ್ಟಾಚಾರ ಪಾಲನೆಗೆ ನಿಯೋಜಿತರಾಗಿರುವ ಅಧಿಕಾರಿಗಳು ಸಂಬಂಧಿಸಿದ ಕೆಲಸಗಳನ್ನು ಜವಾಬ್ದಾರಿಯಾಗಿ ಕೈಗೊಳ್ಳುವಂತೆ ಜಿಲ್ಲಾಧಿಕಾರಿಯವರು ತಿಳಿಸಿದರು. ಕಾರ್ಯಕ್ರಮಕ್ಕಾಗಿ ನಿಯೋಜನೆಗೊಂಡಿರುವ ಅಧಿಕಾರಿಗಳು ಪೂರ್ವಭಾವಿಯಾಗಿ ಕಾರ್ಯಕ್ರಮದ ಸ್ಥಳಕ್ಕೆ ತೆರಳಿ ಎಲ್ಲಾ ಸಿದ್ದತೆಗಳನ್ನ ಮತ್ತೊಮ್ಮೆ ಪರಿಶೀಲಿಸಿಕೊಳ್ಳಬೇಕು. ಯಾವುದೇ ಲೋಪಗಳಿಗೆ ಅವಕಾಶವಾಗದಂತೆ ಕಾರ್ಯಕ್ರಮ ಯಶಸ್ವಿಗೆ ಮುಂದಾಗಬೇಕೆಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಉಪವಿಭಾಗಾಧಿಕಾರಿ ಮಹೇಶ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಪಿ. ಲಕ್ಷ್ಮೀ, ಡಿವೈಎಸ್ಪಿಗಳಾದ ಲಕ್ಷ್ಮಯ್ಯ, ಧರ್ಮೇಂದ್ರ, ತಹಶೀಲ್ದಾರರಾದ ಮಂಜುಳಾ, ಗಿರಿಜಾ, ಜಯಪ್ರಕಾಶ್, ರಮೇಶ್ಬಾಬು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕಾಧಿಕಾರಿ ಪೂರ್ಣಿಮ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಎಂಜಿನಿಯರ್ ಮಹೇಶ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ರಾಜು, ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕರಾದ ಮಂಜುಳಾ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಡಿಪ್ಲೊಮಾ ಕೋರ್ಸ್‌ಗಳಿಗೆ ಪ್ರವೇಶ ಅವಧಿ ವಿಸ್ತರಣೆ

**ಚಿಕ್ಕಬಳ್ಳಾಪುರ:** ಮೈಸೂರಿನಲ್ಲಿರುವ ಕೇಂದ್ರೀಯ ಪೆಟ್ರೋಕೆಮಿಕಲ್ಸ್ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆ , ಕೌಶಲ್ಯ ಮತ್ತು ತಾಂತ್ರಿಕ ತರಬೇತಿ ಕೇಂದ್ರ (ಸಿಪೆಟ್) ಸಂಸ್ಥೆಯು ಭಾರತ ಸರ್ಕಾರದ ರಸಾಯನ ಪೆಟ್ರೋರಸಾಯನ ಮತ್ತು ರಸಗೊಬ್ಬರ ಸಚಿವಾಲಯದ ಸ್ವಾಯತ್ತ ಸಂಸ್ಥೆಯಾಗಿದೆ. CIPET ಕರ್ನಾಟಕದ ವಿದ್ಯಾರ್ಥಿಗಳು ಪಾಲಿಮರ್,ಪೆಟ್ರೋಕೆಮಿಕಲ್ಸ್, ಪ್ಲಾಸ್ಟಿಕ್ಸ್ ಸಂಬಂಧಿತ ಕೈಗಾರಿಕಾ ವಲಯಕ್ಕೆ ಬೇಕಾದ ಮಾನವ ಸಂಪನ್ಮೂಲದ ಬೇಡಿಕೆಯಿಂದ ಜಾಗತಿಕವಾಗಿ ಗುರುತಿಸಲ್ಪಟ್ಟಿದ್ದಾರೆ. ಈ ವೃತ್ತಿಪರ ಡಿಪ್ಲೊಮಾ ದ ಕೊನೆಯ ಸೆಮಿಸ್ಟರ್ ನಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಗೂ ಕ್ಯಾಂಪಸ್ ಆಯ್ಕೆಯ ಮೂಲಕ ಉದ್ಯೋಗ ದೊರಕಿಸಿಕೊಡಲಾಗುತ್ತದೆ.

ಡಿಪ್ಲೊಮಾ ಇನ್ ಪ್ಲಾಸ್ಟಿಕ್ಸ್ ಟೆಕ್ನಾಲಜಿ ಡಿಪ್ಲೊಮಾ ಇನ್ ಪ್ಲಾಸ್ಟಿಕ್ಸ್ ಮೌಲ್ಡ್ ಟೆಕ್ನಾಲಜಿ ಕೋರ್ಸ್ ಗಳಿಗೆ ಪ್ರವೇಶ ಪಡೆಯಬಹುದು ಎಂದು ಸಿಪೆಟ್ ಸಂಸ್ಥೆಯ ನಿರ್ದೇಶಕರು ಮತ್ತು ಮುಖ್ಯಸ್ಥರು ತಿಳಿಸಿದ್ದಾರೆ. ಎಸ್.ಎಸ್.ಎಲ್.ಸಿ, ಪಿ.ಯು.ಸಿ (ವಿಜ್ಞಾನ), ಐಟಿಐ ಪರೀಕ್ಷೆಯಲ್ಲಿ 35% ಮೇಲ್ಪಟ್ಟ ಅಂಕ ಪಡೆದು ತೇರ್ಗಡೆಯಾದವರು ನೇರ ಪ್ರವೇಶ ಪಡೆಯಲು ಸೆಪ್ಟೆಂಬರ್ 01 ರವರೆಗೆ ಅವಧಿ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ CIPET, 437/A, Hebbal Indl. Area Mysore -570016 Ph: 0821 ಹಾಗೂ Website: www.cipet.gov.in ಮೂಲಕ ಸಂಪರ್ಕಿಸಬಹುದು.



ಕೋಲಾರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕೋಲಾರ ಘಟಕ ಕಂದಾಯ ಇಲಾಖಾಧಿಕಾರಿಗಳು, ರಾಜಸ್ವ ನಿರೀಕ್ಷಕರು ಹಾಗೂ ಗ್ರಾಮ ಆಡಳಿತ ಅಧಿಕಾರಿಗಳೊಂದಿಗೆ ಇಲಾಖಾ ಪ್ರಗತಿ ಪರಿಶೀಲನಾ ಸಭೆಯನ್ನು ನಡೆಸಲಾಯಿತು. ಈ ಸಂದರ್ಭದಲ್ಲಿ ಅಪರಜಿಲ್ಲಾಧಿಕಾರಿಗಳು ಹಾಜರಿದ್ದರು.

# ಸ್ತನ್ಯಪಾನ ಹುಟ್ಟಿದ ಪ್ರತಿ ಮಗುವಿನ ಹಕ್ಕು

**ಹುಳಿಯಾರು:** ಸ್ತನ್ಯಪಾನ ಹುಟ್ಟಿದ ಪ್ರತಿ ಮಗುವಿನ ಹಕ್ಕಾಗಿದ್ದು ಪ್ರತಿ ಬಾಣಂತಿ ತಾಯಿ ಎದೆಹಾಲಿನ ಮಹತ್ವ ತಿಳಿದು ಮಗು ಸ್ತನ್ಯಪಾನದಿಂದ ವಂಚಿತವಾಗದಂತೆ ನೋಡಿಕೊಳ್ಳಬೇಕು ಎಂದು ಹುಳಿಯಾರು ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ನಿರೀಕ್ಷಣಾಧಿಕಾರಿ ಬಿ.ಸಿ.ರೇಣುಕರಾಜ್ ಹೇಳಿದರು.

ಹುಳಿಯಾರು ಹೋಬಳಿಯ ವಳಗೆರೆಹಳ್ಳಿಯ ಅಂಗನವಾಡಿ ಕೇಂದ್ರದಲ್ಲಿ ನಡೆದ ವಿಶ್ವ ಸ್ತನ್ಯಪಾನ ಸಪ್ತಾಹಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸ್ತನ್ಯಪಾನದಿಂದ ಆರೋಗ್ಯವಂತ ಮಗು ಪಡೆಯಬಹುದು. ಆರು ತಿಂಗಳವರೆಗೆ ಬೇರೆ ಯಾವುದೇ ಪದಾರ್ಥ ನೀಡದೆ ಕೇವಲ ಎದೆ ಹಾಲನ್ನು ಮಾತ್ರ



ಮಕ್ಕಳಿಗೆ ನೀಡಬೇಕು. ಇದರಿಂದ ಇರುಳುಗಣ್ಣು, ಅತಿಸಾರ ತಡೆಗಟ್ಟುವ ಸಂಜೀವಿನಿಯಾಗಿದೆ ಎಂದರು. ಶಿಕ್ಷಕರು ರಾಮಚಂದ್ರಪ್ಪ ಮಾತನಾಡಿ ಆರೋಗ್ಯವಂತ ಶಿಶು ಸದೃಢ ಪ್ರಜೆಯಾಗಿ ಸಮಾಜದಲ್ಲಿ ಬದುಕಬೇಕಾದರೆ ಇದಕ್ಕೆ ಒಂದೇ ಮದ್ದು ತಾಯಿ ಹಾಲು. ತಾಯಿ ಹಾಲು ಮಕ್ಕಳಿಗೆ ಸಂಜೀವಿನಿ, ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಉತ್ತಮವಾದ ಆಹಾರ. ಹಿಂದಿನ ಕಾಲದಲ್ಲಿ ಈ ಹಾಲುಣಿಸುವ ಬಗ್ಗೆ ಅರಿವು ನೀಡುವುದು ತಾಯಂದರಿಂದ ಮಕ್ಕಳಿಗೆ ಮುಂದುವರಿಯುತ್ತಿತ್ತು. ಆದರೆ, ಇಂದು ವಿದ್ಯಾವಂತರಿಗೆ ಹಾಲುಣಿಸುವ ಕುರಿತು ಅರಿವು ಮೂಡಿಸಲು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳುವ ಪರಿಸ್ಥಿತಿ ಬಂದಿದೆ ಎಂದು ಹೇಳಿದರು. ಅಂಗನವಾಡಿ ಕಾರ್ಯಕರ್ತೆ ಜಯಲಕ್ಷ್ಮಿ, ಆಶಾ ಕಾರ್ಯಕರ್ತೆ ಮಂಜುಳಾ ಬಾಯಿ, ಪಪಂ ಸದಸ್ಯ ಚಂದ್ರಶೇಖರ್, ಸರಸ್ವತಿ ಮತ್ತಿತರರು ಇದ್ದರು.

# ಶ್ರಾವಣದ ಮೂಲಕ ಮನಸ್ಸಿಗೆ ನೆಮ್ಮದಿ, ಸಮಸ್ಯೆಗಳಿಗೆ ಪರಿಹಾರ

**ವಿಜಯಪುರ:** ಶ್ರಾವಣಮಾಸವು ಭಕ್ತಿಯ ಪ್ರತೀಕವಾಗಿದ್ದು ಸತ್ಕಾರ್ಯಗಳನ್ನು ಕೈಗೊಳ್ಳುವುದರ ಜೊತೆಗೆ ಪ್ರಸನ್ನ ಭಕ್ತಿಯ ಉಪನ್ಯಾಸ, ಮಹಾತ್ಮರ ಪುರಾಣ, ಶರಣರ ಜೀವನಚರಿತ್ರೆ ಮತ್ತು ಪ್ರವಚನಗಳನ್ನು ಅಧ್ಯಯಿಸುವ ಮತ್ತು ಶ್ರವಣ ಮಾಡಲು ಪ್ರಶಸ್ತವಾದುದಾಗಿದ್ದು, ಅದರಿಂದ ಮನಸ್ಸಿಗೆ ನೆಮ್ಮದಿ, ನಿತ್ಯ ಎದುರಾಗಬಹುದಾದ ಸಮಸ್ಯೆಗಳಿಗೆ ಭಕ್ತಿಮಾರ್ಗದ ಮೂಲಕ ಪರಿಹಾರ ಸಿಗುತ್ತದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಶರಣಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಎಚ್.ಎಸ್.ರುದ್ರೇಶಮೂರ್ತಿ ತಿಳಿಸಿದರು.

ಮಂಗಳವಾರದಂದು ಪಟ್ಟಣದ ಮೇಲೂರು ಮುಖ್ಯರಸ್ತೆಯಲ್ಲಿರುವ ಅರಿವಿನಮನೆಯಲ್ಲಿ ಶ್ರೀ ವೀರಭದ್ರಸ್ವಾಮಿಗೋಷ್ಠಿ, ಅಕ್ಕನಬಳಗ ಸೇವಾಟ್ರಸ್ಟ್ ವತಿಯಿಂದ ಹಮ್ಮಿಕೊಂಡಿದ್ದ ಶ್ರಾವಣಮಾಸದ ಪುರಾಣ ಪ್ರವಚನ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಇಂದಿನ ಒತ್ತಡದ ಬದುಕಿನಲ್ಲಿ ಧರ್ಮಕಾರ್ಯಗಳಲ್ಲಿ ತೊಡಗಿಸಿಕೊಳ್ಳಲು ಸಮಯವಿಲ್ಲದಂತಾಗಿದೆ. ಶಿವಶರಣರ ಜೀವನಚರಿತ್ರೆಯನ್ನು ಓದುವ, ಕೇಳುವ ಮೂಲಕ ಪ್ರತಿಯೊಬ್ಬರೂ ಶಿವಶರಣರ ಅನುಭಾವದ ಬದುಕನ್ನು ಹೊಕ್ಕು ಶರಣರ ಮೌಲ್ಯಗಳನ್ನು ಅಳವಡಿಸಿಕೊಂಡು ಜೀವನಸಾರ್ಥಕ್ಯವನ್ನು ಪಡೆಯಬಹುದಾಗಿದೆ ಎಂದರು.

ಶರಣಲೀಲಾಮೃತ ಹಾಡುಗಬ್ಬ: ಚನ್ನಪ್ಪಕವಿ ಕೃತ ಶರಣಲೀಲಾಮೃತ ಗ್ರಂಥದಲ್ಲಿ ಬಸವಾದಿ ಶರಣರ ಚರಿತೆಯು ಹಾಡುಗಬ್ಬವಾಗಿ ಗಾನದೊಳಗೆ ಕೂಡಿದ್ದು,



ಯಕ್ಷಗಾನ ಬಸವಪುರಾಣವಾಗಿದೆ. ಅದರಲ್ಲಿ ಹಲವು ಶಿವಶರಣರ ಕತೆಗಳು ಪ್ರಾಸಂಗಿಕವಾಗಿ ಬರುತ್ತವೆಯಾದರೂ ಪ್ರಮುಖವಾಗಿ ಬಸವಣ್ಣನವರ ಜೀವನಚರಿತ್ರೆಯಿದೆ. ಸಂಸ್ಕೃತ ಭೂಯಿಷ್ಟ ಸಾಹಿತ್ಯವಿದ್ದ ಕಾಲದಲ್ಲಿ ಮತದ ಪೂರ್ವಾಚಾರ್ಯರ ಚರಿತ್ರೆ, ಶಿವಶರಣರ ಕತೆಗಳನ್ನು ಸರಳವಾದ ಸುಲಭ ದೇಸೀ ಶೈಲಿಯನ್ನು ಬರೆದ ಕೀರ್ತಿ ಶಿವಬಸವಸ್ವಾಮಿಗಳಿಗೆ ಸಲ್ಲಬೇಕು. ಶರಣಲೀಲಾಮೃತವು ಯಕ್ಷಗಾನದ ತ್ರಿವುಡೆ, ದ್ವಿಪದಿ, ಏಕತಾಳ, ಆಟತಾಳ, ಜಂಪೆ, ಕೊಂಚಜಂಪೆ, ಸಾಂಗತ್ಯ, ರಗಳೆ, ಷಟ್ಪದಿ, ಕಂದ ಮತ್ತಿತರ ಎಲ್ಲಾ ಪ್ರಕಾರದ ಚಂದಸಿನಲ್ಲಿ ರಚಿತವಾಗಿದೆ ಎಂದು ಅವರು ವಿವರಿಸಿದರು.

ಶ್ರೀ ವೀರಭದ್ರಸ್ವಾಮಿ ಗೋಷ್ಠಿ ಅಕ್ಕನಬಳಗ ಸೇವಾಟ್ರಸ್ಟ್‌ನ ಅಧ್ಯಕ್ಷ ವಿ.ಅನಿಲ್‌ಕುಮಾರ್ ಅಧ್ಯಕ್ಷತೆ ವಹಿಸಿ ಮಾತನಾಡಿ, ಇಡೀ ಜಗತ್ತು ಒಪ್ಪಿಕೊಳ್ಳಬಹುದಾದ ತತ್ವಸಿದ್ಧಾಂತಗಳು ವಚನಸಾಹಿತ್ಯದಲ್ಲಿ ಲಭ್ಯವಾದುದಾದ್ದರಿಂದ ವಚನಸಾಹಿತ್ಯವು ವಿಶ್ವಮಾನ್ಯವಾದುದು. ವಚನಧರ್ಮವು ಬದುಕಿನ ಮಾರ್ಗಗಳನ್ನು ಅರುಹಬಲ್ಲದು. ಸತ್ಸಂಗಗಳ ಮೂಲಕ ಶರಣರ ಜೀವನಚರಿತ್ರೆಯನ್ನು ಓದುವುದರಿಂದ ಅನುಭಾವದ ಮೆಟ್ಟಿಲುಗಳನ್ನು ಏರಲು ಸುಲಭಸಾಧ್ಯ ಎಂದರು.

ಗೋಷ್ಟಿಬಳಗ ಸೇವಾಟ್ರಸ್ಟ್‌ನ ಕಾರ್ಯದರ್ಶಿ ಮ. ಸುರೇಶ್‌ಬಾಬು ಮಾತನಾಡಿ, ಕಳೆದ ಹೋದ ಕಾಲ ಮತ್ತೆ ಸಿಗದು. ಆ ಕಾಲದಲ್ಲಿ ಮಹಾತ್ಮರ ಬಗೆಗಿನ ಚಿಂತನೆಯು ಬದುಕನ್ನು ಹಸನಾಗಿಸಬಲ್ಲದು. ಜನರ ಆಡುಭಾಷೆಯಲ್ಲಿ ಜೀವನದ ಸೂತ್ರಗಳನ್ನು ಅನುಭಾವದ ನೆಲೆಗಟ್ಟಿನಲ್ಲಿ ಹೇಳಬಯಸಿದವರು ಶಿವಶರಣರು. ವಚನಗಳನ್ನು ಅಧ್ಯಯನಮಾಡಿ ಮೌಲ್ಯಗಳನ್ನು ತಿಳಿದುಕೊಳ್ಳಬಲ್ಲ ಇಚ್ಛಾಶಕ್ತಿಯು ಎಲ್ಲರಲ್ಲಿ ಬರಬೇಕು ಎಂದರು.

ಗೋಷ್ಟಿಬಳಗ ಸೇವಾ ಟ್ರಸ್‌ನ ನಿಕಟಪೂರ್ವ ಅಧ್ಯಕ್ಷ ಸಿ.ಬಸಪ್ಪ ಮಾತನಾಡಿ, ಸರ್ವರಲ್ಲಿಯೂ ಧಾರ್ಮಿಕ, ಸಾಮಾಜಿಕ, ಆರ್ಥಿಕ ಸಮಾನತೆಯ ಸ್ವಾತಂತ್ರ್ಯವನ್ನು ಒಳಮೂಡಿಸಲು ಶರಣರು ರೂಪಿಸಿದ ಮಾರ್ಗವು ಇಂದಿಗೆ ಪ್ರಸ್ತುತವೆನಿಸುತ್ತದೆ. ಶರಣರು ಇಡೀ ಬ್ರಹ್ಮಾಂಡವನ್ನೇ ಮನೆಯಂತೆ ಚಿಂತನೆ ನಡೆಸಿ ದೇವರನ್ನೇ ಮನೆಯೊಡೆಯನನ್ನಾಗಿಸಿದ ರೀತಿ ಶ್ರೇಷ್ಟವಾದುದು ಎಂದರು.

ಗೌರವಾಧ್ಯಕ್ಷ ಪಿ.ಚಂದ್ರಪ್ಪ, ಉಪಾಧ್ಯಕ್ಷೆ ಅಂಬಾಭವಾನಿ, ಖಜಾಂಚಿ ಎಂ.ಶಿವಪ್ರಸಾದ್, ನಿರ್ದೇಶಕ ಕೃಷ್ಣಾನಂದ ಮಾತನಾಡಿದರು.

ಅರಿವಿನ ಮನೆಯ ವಿಮಲಾಂಬ ಅನಿಲ್‌ಕುಮಾರ್, ರಾಧಾಮನೋಹರ್, ಮೀನಾಸುರೇಶ್, ಮಹಾದೇವಮ್ಮ ಅವರಿಂದ ಶರಣಲೀಲಾಮೃತ ಪ್ರವಚನ, ವ್ಯಾಖ್ಯಾನ ನಡೆಯಿತು. ಅರಿವಿನ ಮನೆಯ ಪಾರ್ವತಮ್ಮ ಮುನಿಯಪ್ಪ, ರಾಧಾಚಂದ್ರಪ್ಪ, ನಿರ್ಮಲ, ದಾಕ್ಷಾಯಿಣಮ್ಮ, ಅನ್ನಪೂರ್ಣಮ್ಮ, ಗಾಯಿತ್ರಮ್ಮ, ಶೀಲಾರಾಣಿಸುರೇಶ್, ಅನಿತಾ, ಸುಮಂತ್, ಮತ್ತಿತರರು ಪಾಲ್ಗೊಂಡಿದ್ದರು.

# ಶೋಷಿತ ಸಮುದಾಯಗಳ ನಾಯಕನ ತೇಜೋವಧೆ

**ಹುಳಿಯಾರು:** ಶೋಷಿತ ಸಮುದಾಯಗಳ ಜನನಾಯಕ ಮುಖ್ಯಮಂತ್ರಿ ಸಿದ್ದರಾಮಯ್ಯರ ತೇಜೋವಧೆ ಮಾಡಲಾಗುತ್ತಿದೆ. ರಾಜ್ಯ ಸರ್ಕಾರವನ್ನು ರಾಜ್ಯಪಾಲರು ಅಸ್ಥಿರಗೊಳಿಸಲು ಹೊರಟಿದ್ದಾರೆ ಎಂದು ಕರ್ನಾಟಕ ಪ್ರದೇಶ ಕುರುಬರ ಸಂಘದ ಮಾಜಿ ನಿರ್ದೇಶಕ ಹಾಗೂ ಜಿಪಂ ಮಾಜಿ ಸದಸ್ಯ ವೈ.ಸಿ.ಸಿದ್ಧರಾಮಯ್ಯ ಆರೋಪಿಸಿದ್ದಾರೆ.



ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು ಸಿದ್ದರಾಮಯ್ಯ ಅವರ ಕಡೆಯಿಂದ ಯಾವುದೇ ಮನವಿ ಇಲ್ಲದೇ ಬಿಜೆಪಿ ಸರ್ಕಾರ ಇರುವಾಗಲೇ ಈ ನಿವೇಶನ ಹಂಚಿಕೆ ಮಾಡಿದ್ದು ಅದನ್ನು ಸಹ ಕಾನೂನಿನ ಕಾಯ್ದೆ ಅಡಿಯಲ್ಲಿಯೇ ನೀಡಲಾಗಿದೆ. ಇದರಲ್ಲಿ ಸಿದ್ದರಾಮಯ್ಯ ಅವರ ಹಸ್ತಕ್ಷೇಪ ಇಲ್ಲ. ವಿನಾಕಾರಣ ಅವರ ಮೇಲೆ ಆರೋಪ ಮಾಡಿ ರಾಜಕೀಯವಾಗಿ ಸಿದ್ದರಾಮಯ್ಯ ಅವರನ್ನು ಮುಗಿಸಲು ಕೇಂದ್ರ ಸರ್ಕಾರ ರಾಜ್ಯಪಾಲರನ್ನು ದುರ್ಬಳಕೆ ಮಾಡಿಕೊಳ್ಳಲು ಮುಂದಾಗಿದೆ. ಇದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಮಾರಕವಾದ ಬೆಳವಣಿಗೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಬಿಜೆಪಿ ಮತ್ತು ಜೆಡಿಎಸ್ ನಾಯಕರು ದೊಡ್ಡ ಮಟ್ಟದ ಷಡ್ಯಂತ್ರ ರೂಪಿಸಿದ್ದಾರೆ ಎಂದು ಆರೋಪಿಸಿದರು. ಕಳಂಕವಿಲ್ಲದೇ 40 ವರ್ಷಗಳಿಂದ ಸಿದ್ದರಾಮಯ್ಯ ರಾಜಕೀಯ ಮಾಡುತ್ತಿದ್ದಾರೆ. 2ನೇ ಬಾರಿಗೆ ಸಿಎಂ ಆಗಿ ಸರ್ವ ಸಮುದಾಯದ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಇದನ್ನು ಸಹಿಸಿಕೊಳ್ಳಲು ಪ್ರತಿಪಕ್ಷಗಳಿಗೆ ಆಗುತ್ತಿಲ್ಲ. ಹಾಗಾಗಿಯೇ ಮುಡಾ ಮತ್ತು ವಾಲ್ಮೀಕಿ ನಿಗಮದ ವಿವಾದದಲ್ಲಿ ಅವರ ಹೆಸರನ್ನು ತಳಕು ಹಾಕಲಾಗುತ್ತಿದೆ. ತಮ್ಮ ಮೇಲಿನ ಆರೋಪಕ್ಕೆ ಸ್ವತಃ ತನಿಖಾ ಆಯೋಗ ರಚಿಸಿರುವ ದೇಶದ ಏಕೈಕ ನಾಯಕ ಮುಖ್ಯಮಂತ್ರಿ ಸಿದ್ದರಾಮಯ್ಯ ಎಂಬುದು ಇವರಿಗೆ ಅರ್ಥವಾಗಬೇಕು ಎಂದಿದ್ದಾರೆ.

## ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ. ಎಸ್. ಪಾಟೀಲ ಹೇಳಿಕೆ

# ಕೈಮಗ್ಗ ನೇಕಾರರನ್ನು ಪ್ರೋತ್ಸಾಹಿಸಲು 81 ಕೋಟಿ ರೂ.

**ಬೆಂಗಳೂರು** : ಕೈಮಗ್ಗ ನೇಕಾರರನ್ನು ಪ್ರೋತ್ಸಾಹಿಸಲು ಸರ್ಕಾರ ಪ್ರಸಕ್ತ ಸಾಲಿನಲ್ಲಿ 81 ಕೋಟಿ ರೂ.ಗಳನ್ನು ವಿನಿಯೋಗಿಸಲಾಗುವುದು ಎಂದು ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ. ಎಸ್. ಪಾಟೀಲ ತಿಳಿಸಿದರು.

ಇಂದು ಕೈಮಗ್ಗ ಮತ್ತು ಜವಳಿ ಇಲಾಖೆ, ಕೈಮಗ್ಗ ಅಭಿವೃದ್ಧಿ ನಿಗಮ, ಕಾವೇರಿ ಹ್ಯಾಂಡ್ಲೂಮ್ಸ್ ನೇಕಾರರ ಸೇವಾ ಕೇಂದ್ರ ಮತ್ತು ಎಫ್.ಐ.ಸಿ.ಸಿ.ಐ- ಎಫ್.ಎಲ್.ಓ ವತಿಯಿಂದ ವಿಧಾನಸೌಧದ ಬ್ಯಾಕ್ವೆಂಟ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ 10ನೇ ರಾಷ್ಟ್ರೀಯ ಕೈಮಗ್ಗ ದಿನಾಚರಣೆ 2024ರ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ನೇಕಾರಿಕೆಯಿಂದು ಅನೇಕರು ವಲಸಿ ಹೋಗುತ್ತಿದ್ದಾರೆ. ಪಾರಂಪರಿಕೆ ನೇಯ್ಗೆಯಿಂದ ತಮ್ಮ ಜೀವನೋಪಾಯಕ್ಕೆ ಬೇಕಾದಂತ ಲಾಭ ಸಿಗದ ಸಂದಿಗ್ದತೆಯಲ್ಲಿ ವೃತ್ತಿಯನ್ನು ಬಿಡುತ್ತಿದ್ದಾರೆ. ನೇಕಾರಿಕೆಯ ಜೊತೆಗೆ ವೈಜ್ಞಾನಿಕತೆ ಅಳವಡಿಸಿಕೊಳ್ಳದಿದ್ದರೆ ಪರಿಶ್ರಮಕ್ಕೆ ತಕ್ಕ ಫಲ ಸಿಗುವುದಿಲ್ಲ ಎಂದರು.

54 ಸಾವಿರ ಇದ್ದ ನೇಕಾರರ ಕುಟುಂಬ ಇಂದು 29 ಸಾವಿರ ಕುಟುಂಬಗಳಿವೆ. ಇದನ್ನು ಮನಗಂಡಿರುವ ಸರ್ಕಾರ ನೇಕಾರರನ್ನು ಪ್ರೋತ್ಸಾಹಿಸಲು ಕೈಮ್ಮಗ್ಗ ಮತ್ತು ಜವಳಿ ಇಲಾಖೆಯ ವತಿಯಿಂದ ಉದ್ಯೋಗ ನೀಡುತ್ತಿದೆ. ಕಿಸಾನ್ ಸಮ್ಮಾನ್ ಯೋಜನೆಯಡಿ ನೀಡುತ್ತಿದ್ದ 2 ಸಾವಿರ ರೂ.ಗಳನ್ನು 5 ಸಾವಿರ ರೂ.ಗಳಿಗೆ ಹೆಚ್ಚಿಸಲಾಗಿದೆ. ಮಕ್ಕಳ ಉನ್ನತ ವ್ಯಾಸಂಗಕ್ಕಾಗಿ ಈಗಾಗಲೇ ವರ್ಷಕ್ಕೆ 2 ರಿಂದ 3 ಕೋಟಿ ರೂ.ಗಳನ್ನು ವಿನಿಯೋಜಿಸಲಾಗಿದೆ. ನೇಕಾರರಿಗೆ ಶೇಕಡ 1 ರ ಬಡ್ಡಿ ದರರಿಂದ 3ರ ಬಡ್ಡಿ ದರದಲ್ಲಿ ಸಾಲ ನೀಡುವ ವ್ಯವಸ್ಥೆ ಮಾಡಲಾಗಿದೆ ಎಂದರು.

ನೇಕಾರರಿಗೆ ಸ್ಮಾರ್ಟ್ ನೀಡುವ ಯೋಜನೆಯನ್ನು ಹಮ್ಮಿಕೊಂಡಿದ್ದು, 1 ಲಕ್ಷ 17 ಸಾವಿರ ನೇಕಾರರಿಗೆ ಸ್ಮಾರ್ಟ್ ಕಾರ್ಡ್ ನೀಡಲಾಗಿದೆ. ಮೀಟರ್ ಕೈಮಗ್ಗದಿಂದ ತಯಾರಿಸಿದ ಉತ್ಪನ್ನಗಳ ಮೇಲೆ ಶೇ. 20ರ ರಿಯಾಯಿತಿ ನೀಡುತ್ತಿದ್ದು, ಮುಂಬರುವ ದಿನಗಳಲ್ಲಿ ಸರ್ಕಾರ ಶೇ.30 ರಿಂದ 40 ರ ವರೆಗೆ ಹೆಚ್ಚಿಸುವ ಪ್ರಯತ್ನ ಮಾಡಲಾಗುವುದು ಎಂದರು.

ನೇಕಾರರಿಗೆ 1 ರಿಂದ 10 ಹೆಚ್ಪಿ ವಿದ್ಯುತ್ತನ್ನು ಉಚಿತವಾಗಿ ನೀಡಲಾಗುತ್ತಿದೆ. ನೇಕಾರರ ಪರವಾಗಿ ವಿದ್ಯುತ್ ಸಂಸ್ಥೆಗೆ 150 ಕೋಟಿ ರೂ.ಗಳನ್ನು ನೀಡಲಾಗುತ್ತಿದೆ. ಎಂದರು.

''ನನ್ನ ಕೈಮಗ್ಗ ನನ್ನ ಹೆಮ್ಮೆ'' ಎಂಬ ಘೋಷ ವಾಕ್ಯದೊಂದಿಗೆ 10ನೇ ರಾಷ್ಟ್ರೀಯ ಕೈಮಗ್ಗ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು, ಕೈಮಗ್ಗ ಉತ್ಪನ್ನಗಳನ್ನು ಪ್ರೋತ್ಸಾಹಿಸಿ ಕೈಮಗ್ಗ ನೇಕಾರರನ್ನು ಬೆಂಬಲಿಸಲು ರೇಷ್ಮೆ, ಹತ್ತಿ ಮತ್ತು ಉಣ್ಣೆ ಕ್ಷೇತ್ರದಲ್ಲಿ ಕೈಮಗ್ಗ ನೇಕಾರರು ಹೊಂದಿರುವ ನೈಪುಣ್ಯತೆ, ಶ್ರೇಷ್ಠತೆ, ತಾಂತ್ರಿಕತೆ, ಹೊಂದಿದವರನ್ನು ಗುರುತಿಸಿ ರಾಜ್ಯ ಪ್ರಶಸ್ತಿ ನೀಡಲಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ 2024ನೇ ಸಾಲಿನಲ್ಲಿ ರಾಜ್ಯ ಪ್ರಶಸ್ತಿ ವಿಜೇತರಾದ ಬೆಂಗಳೂರು ನಗರ ಜಿಲ್ಲೆಯ ಆರ್. ಮಂಜುನಾಥ್ ಅವರು ರೇಷ್ಮೆ ಕೈಮಗ್ಗ ಕ್ಷೇತ್ರದಲಿ ಅಮೃತವರ್ಷಿಣಿ ರೇಷ್ಮೆ ಸೀರೆ ಉತ್ಪನ್ನದಲ್ಲಿ ಪ್ರಥಮ ಸ್ಥಾನ, ಚಿಕ್ಕಬಳ್ಳಾಪುರ ಜಿಲ್ಲೆಯ ರಮೇಶ್ ಅವರು ಅಪ್ಪಟ ರೇಷ್ಮೆಯ ಕುಟ್ಟು ಮೀನಾ ಸೀರೆ ಉತ್ಪನ್ನದಲ್ಲಿ ದ್ವಿತೀಯ ಸ್ಥಾನ. ಹತ್ತಿ ಕ್ಷೇತ್ರದಲ್ಲಿ ಬಳ್ಳಾರಿಯ ಹನುಮಂತಮ್ಮ ಬಾಣದ ಅವರು ಹತ್ತಿ ಕ್ಷೇತ್ರದಲ್ಲಿ ಕೊಂಡಿ ಡಿಸೈನ್ ಕಾಟನ್ ಬೆಡ್ಶೀಟ್, ಟೇಬಲ್ ಕ್ಲಾತ್, ಹ್ಯಾಂಡ್ ಕರ್ಚೀಪ್ ಉತ್ಪನ್ನದಲ್ಲಿ ಪ್ರಥಮ ಸ್ಥಾನ, ದಾವಣಗೆರೆಯ ತುಕಾರಾಮ ಹನುಮಂತಪ್ಪ ವದ್ದಿ ಅವರು ಹತ್ತಿಶಾಲು ಉತ್ಪಾದನೆಯಲ್ಲಿ ದ್ವಿತೀಯ ಸ್ಥಾನ, ಬಳ್ಳಾರಿಯ ತಿಪ್ಪೇಸ್ವಾಮಿ ಅವರು ಉಣ್ಣೆ ಕ್ಷೇತ್ರದಲ್ಲಿ ಬಣ್ಣ ಬಣ್ಣದ ಉಣ್ಣೆ ಚೆಕ್ಸ್ ಕಂಬಳಿ ಉತ್ಪನ್ನದಲ್ಲಿ ಪ್ರಥಮ ಸ್ಥಾನ ಪಡೆದಿದ್ದು, ಇವರುಗಳಿಗೆ ಸಚಿವರು ರಾಜ್ಯ ಪ್ರಶಸ್ತಿ ಪ್ರದಾನ ಮಾಡಿ ಜವಳಿ ಕ್ಷೇತ್ರದ ಸಾಧಕರಿಗೆ ಸನ್ಮಾನ ಮಾಡಿದರು. ರೇಷ್ಮೆ ಉತ್ಪನ್ನದಲ್ಲಿ ಪ್ರಥಮ ಸ್ಥಾನ ಪಡೆದವರಿಗೆ 25 ಸಾವಿರ ರೂ.ಗಳ ನಗದು ಬಹುಮಾನ, ದ್ವಿತೀಯ ಸ್ಥಾನ ಪಡೆದವರಿಗೆ 20 ಸಾವಿರ ನಗದು ಬಹುಮಾನ, ಹತ್ತಿ ಉತ್ಪನ್ನದಲ್ಲಿ ಪ್ರಥಮ ಸ್ಥಾನ ಪಡೆದವರಿಗೆ 20 ಸಾವಿರ ರೂ.ಗಳ ಹಾಗೂ ದ್ವಿತೀಯ ಸ್ಥಾನ ಪಡೆದವರಿಗೆ 15 ಸಾವಿರ ರೂ. ಹಾಗೂ ಉಣ್ಣೆಯಲ್ಲಿ ಪ್ರಥಮ ಸ್ಥಾನ ಪಡೆದವರಿಗೆ 15 ಸಾವಿರ ರೂ.ಗಳ ನಗದು ಬಹುಮಾನ ಹಾಗೂ ಪ್ರಮಾಣ ಪತ್ರ ಮತ್ತು ಸ್ಮರಣಿಕೆಯನ್ನು ನೀಡಿ ಗೌರವಿಸಿದರು.

ಕಾರ್ಯಕ್ರಮದಲ್ಲಿ ವಿಧಾನಪರಿಷತ್ ಸಭಾಪತಿಗಳಾದ ಬಸವರಾಜು ಎಸ್.ಹೊರಟ್ಟಿ, ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ.ಶಾಲಿನಿ ರಜನೀಶ್, ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ಕೈಮಗ್ಗ ಮತ್ತು ಜವಳಿ ಇಲಾಖೆಯ ನಿರ್ದೇಶಕರಾದ ಶ್ರೀಮತಿ ಕೆ.ಜ್ಯೋತಿ, ಕರ್ನಾಟಕ ರಾಜ್ಯ ಸಹಕಾರ ಕೈಮಗ್ಗ ನೇಕಾರರ ಮಹಾಮಂಡಳ ನಿಯಮಿತದ ಅಧ್ಯಕ್ಷರಾದ ಬಿ.ಜೆ.ಗಣೇಶ್, ವ್ಯವಸ್ಥಾಪಕ ನಿರ್ದೇಶಕರಾದ ಜೆ.ಪಿ. ಶ್ರೀನಿವಾಸ ಮೂರ್ತಿ ಹಾಗೂ ಇತರರು ಉಪಸ್ಥಿತರಿದ್ದರು.



## ಸರ್ಕಾರಿ ವಕೀಲರ ಹುದ್ದೆಗೆ ಅರ್ಜಿ

**ಮಂಡ್ಯ:** ಜಿಲ್ಲೆಯ ಜಿಲ್ಲಾ ಸರ್ಕಾರಿ ವಕೀಲರ ಹುದ್ದೆಯನ್ನು ಭರ್ತಿ ಮಾಡಲು ಕರ್ನಾಟಕ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳು, 1977ರ ನಿಯಮ 5 ಮತ್ತು 26(2) ಹಾಗೂ 12 (ಎ) (ಬಿ) ಮತ್ತು (ಸಿ)ರನ್ವಯ ಆಸಕ್ತಿಯುಳ್ಳ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಪ್ರಸ್ತುತ ಸದರಿ ಹುದ್ದೆಗೆ ಕರ್ನಾಟಕ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳು, 1977ರ ನಿಯಮ 26(2) ರನ್ವಯ ಮೂರು ವರ್ಷಗಳ ಅವಧಿಗೆ ಹೊಸದಾಗಿ ನೇಮಕಾತಿ ಮಾಡಲು ಉದ್ದೇಶಿಸಲಾಗಿರುತ್ತದೆ. ಆಸಕ್ತ ಅಭ್ಯರ್ಥಿಗಳು ಆಗಸ್ಟ್ 22 ರ ಸಂಜೆ 5.00 ಗಂಟೆಯೊಳಗಾಗಿ ಖುದ್ದಾಗಿ ಜಿಲ್ಲಾಧಿಕಾರಿಗಳ ಕಚೇರಿಗೆ ಅರ್ಜಿ ಸಲ್ಲಿಸುವುದು. ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಕರ್ನಾಟಕ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳು 1977ರ ನಿಯಮ 5ರನ್ವಯ ಕನಿಷ್ಠ 10 ವರ್ಷಗಳ ಕಾಲ ವಕೀಲಿ ವೃತ್ತಿಯನ್ನು ಪೂರೈಸಿರಬೇಕು. ಸ್ಥಳೀಯ ಸಂಸ್ಥೆಗಳ ಅಧಿಕಾರ ವ್ಯಾಪ್ತಿಯಲ್ಲಿ ಕಾನೂನು ಸಲಹೆಗಾರರಾಗಿ ನೇಮಕವಾಗಿರಬಾರದು, ಕೇಂದ್ರ/ರಾಜ್ಯ ಸರ್ಕಾರಿ ನೌಕರರಾಗಿರಬಾರದು. ಕರ್ನಾಟಕ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳು, 1977ರ ನಿಯಮ 5 ಮತ್ತು 26(2) ಹಾಗೂ 12 (ಎ) (ಬಿ) ಮತ್ತು (ಸಿ) ರನ್ವಯ ದಾಖಲಾತಿಗಳನ್ನು ಸಲ್ಲಿಸುವುದು. ಸರ್ಕಾರಿ ಅಥವಾ ಅರೆ ಸರ್ಕಾರಿ/ ನಿಗಮ ಮಂಡಳಿಗಳಲ್ಲಿ ಯಾವುದೇ ಹುದ್ದೆಯನ್ನು ಪಡೆದಿರಬಾರದು.ನೋಟರಿಯಿಂದ ಅಫಿಡವಿಟ್ ಪಡೆದು ಸ್ವವಿವರದೊಂದಿಗೆ ಅರ್ಜಿ ಸಲ್ಲಿಸುವು ಎಂದು ಜಿಲ್ಲಾಧಿಕಾರಿ ಡಾ: ಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪರ ಸರ್ಕಾರಿ ವಕೀಲ ಹುದ್ದೆಗೆ ಅರ್ಜಿ

**ಮಂಡ್ಯ:** ಜಿಲ್ಲೆಯ ಹಿರಿಯ ಶ್ರೇಣಿ ನ್ಯಾಯಾಲಯದ ಅಪರ ಸರ್ಕಾರಿ ವಕೀಲರ ಹುದ್ದೆಯನ್ನು ಭರ್ತಿ ಮಾಡಲು ಕರ್ನಾಟಕ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳು, 1977ರ ನಿಯಮ 5 ಮತ್ತು 26(2) ಹಾಗೂ 12 (ಎ) (ಬಿ) ಮತ್ತು (ಸಿ)ರನ್ವಯ ಆಸಕ್ತಿಯುಳ್ಳ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಸದರಿ ಹುದ್ದೆಗೆ ನಿಯಮ 26(2)ರನ್ವಯ ಮೂರು ವರ್ಷಗಳ ಅವಧಿಗೆ ಹೊಸದಾಗಿ ನೇಮಕಾತಿ ಮಾಡಲು ಉದ್ದೇಶಿಸಲಾಗಿರುತ್ತದೆ. ಆಸಕ್ತ ಅಭ್ಯರ್ಥಿಗಳು ಖುದ್ದಾಗಿ ಆಗಸ್ಟ್ 22 ರ ಸಂಜೆ 5 ಗಂಟೆಯೊಳಗೆ ಜಿಲ್ಲಾಧಿಕಾರಿಗಳ ಕಛೇರಿಗೆ ಅರ್ಜಿ ಸಲ್ಲಿಸುವುದು. ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಕರ್ನಾಟಕ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳು 1977ರ ನಿಯಮ 5ರನ್ವಯ ಕನಿಷ್ಠ 07 ವರ್ಷಗಳ ಕಾಲ ವಕೀಲಿ ವೃತ್ತಿಯನ್ನು ಪೂರೈಸಿರಬೇಕು, ಸರ್ಕಾರಿ ಅಥವಾ ಅರೆ ಸರ್ಕಾರಿ/ ನಿಗಮ ಮಂಡಳಿಗಳಲ್ಲಿ ಯಾವುದೇ ಹುದ್ದೆಯನ್ನು ಪಡೆದಿರಬಾರದು, ಸ್ಥಳೀಯ ಸಂಸ್ಥೆಗಳ ಅಧಿಕಾರ ವ್ಯಾಪ್ತಿಯಲ್ಲಿ ಕಾನೂನು ಸಲಹೆಗಾರರಾಗಿ ನೇಮಕವಾಗಿರಬಾರದು ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ: ಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಣೆಯಾದವರ ಪತ್ತೆಗೆ ಮನವಿ

**ಮಂಡ್ಯ:** ಮಂಡ್ಯ ನಗರದ ಉಮೇಶ್ ಆರ್ (34) ಎಂಬುವವರು ಕಾಣೆಯಾಗಿದ್ದಾರೆ ಎಂದು ಮಂಡ್ಯ ಪೂರ್ವ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ಕಾಣೆಯಾದ ವ್ಯಕ್ತಿಯು 5.6 ಅಡಿ ಎತ್ತರ, ದುಂಡು ಮುಖ, ಎಣ್ಣೆಗೆಂಪು ಮೈಬಣ್ಣ, ದೃಢಕಾಯ ಶರೀರ ಹೊಂದಿದ್ದು ಕಾಣೆಯಾದ ದಿನ ಪಿಂಕ್ ಬಣ್ಣದ ಶರ್ಟ್ ಅದರ ಮೇಲೆ ನೀಲಿ ಬಣ್ಣದ ಶರ್ಟ್ ಮತ್ತು ಕಪ್ಪು ಬಣ್ಣಸ ಪ್ಯಾಂಟ್ ಧರಿಸಿರುತ್ತಾರೆ. ಇವರ ಸುಳಿವು ಸಿಕ್ಕಲ್ಲಿ ದೂ.ಸಂ: 08232-224500/9480804846 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಪೂರ್ವ ಪೊಲೀಸ್ ಠಾಣೆಯ ಠಾಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ವಾರಸುದಾರರ ಪತ್ತೆಗೆ:** ಮಂಡ್ಯ ನಗರದ ಮಹಾವೀರ ಸರ್ಕಲ್ ಬಳಿ ಮೃತ ಅಪರಿಚಿತನ ಶವ ಪತ್ತೆಯಾಗಿದೆ ಎಂದು ಮಂಡ್ಯ ಪೂರ್ವ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ಮೃತನಿಗೆ ಸುಮಾರು 65 ವರ್ಷ ವಯಸ್ಸಾಗಿದ್ದು, 5.4 ಅಡಿ ಎತ್ತರ, ಸಾಧಾರಣ ಶರೀರ, ಗೋದಿ ಮೈಬಣ್ಣ, ತಲರಯಲ್ಲಿ ಬಿಳಿ ಕೂದಲು, ಬಿಳಿ ಮೀಸೆ, ಬಿಳಿ ಗಡ್ಡ ಇದ್ದು, ಮೈಮೇಲೆ ಕಪ್ಪು ಬಣ್ಣದ ಮೇಲೆ ಬಿಳಿ ಗೆರೆಗಳುಳ್ಳ ತುಂಬು ತೋಳಿನ ಶರ್ಟ್, ನೇರಳೆ ಬಣ್ಣದ ಬನಿಯನ್, ಪಾಚಿ ಹಸಿರು ಬಣ್ಣದ ಪ್ಯಾಂಟ್ ಇರುತ್ತದೆ. ವಾರಸುದಾರರಿದ್ದಲ್ಲಿ ದೂ.ಸಂ: 08232-224500/9480804830 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಪೂರ್ವ ಪೊಲೀಸ್ ಠಾಣೆಯ ಠಾಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಮಂಡ್ಯ:** ಮಳವಳ್ಳಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಯಲ್ಲಿ 2024-25ನೇ ಶೈಕ್ಷಣಿಕ ಸಾಲಿಗೆ ಪ್ರವೇಶಾತಿ ಪಡೆಯಲು ಡಿ.ಎಂ.ಎಂ. ಚರಕೀಯ, ಎಂ.ಇ, ಐ.ಆರ್.ಡಿ.ಎಂ ವೃತ್ತಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದ್ದು, ಅರ್ಜಿ ಸಲ್ಲಿಸುವವರು 2024-25ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಯಲ್ಲಿ ಉತ್ತೀರ್ಣರಾಗಿರಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 9880175939 ಮತ್ತು 9731715151 ಅನ್ನು ಸಂಪರ್ಕಿಸಬಹುದು.

## ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

**ಬೆಂಗಳೂರು:** 2024-25ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೃಷಿ ಪ್ರಶಸ್ತಿಯಡಿ ಬೆಳೆ ಸ್ಪರ್ಧೆಗೆ ಭಾಗವಹಿಸಲಿಚ್ಛಿಸುವ ರೈತ ಮತ್ತು ರೈತ ಮಹಿಳೆಯರಿಂದ ಪ್ರತ್ಯೇಕವಾಗಿ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ರಾಜ್ಯ, ಜಿಲ್ಲಾ, ತಾಲ್ಲೂಕು ಮಟ್ಟದ ಕೃಷಿ ಪ್ರಶಸ್ತಿಗೆ ಅನ್ವಯಿಸುವಂತೆ ನಿಗಧಿತ ನಮೂನೆಯಲ್ಲಿ ಒಂದೇ ಅರ್ಜಿಯನ್ನು ಸಲ್ಲಿಸಬೇಕು. ಆಸಕ್ತ ರೈತ ಮತ್ತು ರೈತ ಮಹಿಳೆಯರು ಪ್ರತ್ಯೇಕವಾಗಿ ಕೃಷಿ ಇಲಾಖೆಯ ಇ-ಇಚಟಿ ಕಠಡಿಣಚಟ ನಲ್ಲಿ ಅಗತ್ಯ ದಾಖಲೆಗಳೊಂದಿಗೆ ತಮ್ಮ ಎಫ್ಐಡಿ ಸಂಖ್ಯೆಯನ್ನು ಬಳಸಿಕೊಂಡು ಸಿಟಿಜನ್ ಲಾಗಿನ್ ಅಥವಾ ಆರ್‌ಎಸ್‌ಕೆ ಲಾಗಿನ್ ಮೂಲಕ ಹತ್ತಿರದ ರೈತ ಸಂಪರ್ಕ ಕೇಂದ್ರ, ಸಾರ್ವಜನಿಕ ಸೇವಾ ಕೇಂದ್ರದ ಮೂಲಕ ಅರ್ಜಿ ಸಲಿಸಲು ಅವಕಾಶ ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 31, 2024 ಕೊನೆಯ ದಿನವಾಗಿದೆ. ಸ್ಪರ್ಧೆಗೆ ಸ್ಪರ್ಧಿಸಬಹುದಾದ ಬೆಳೆಗಳ ವಿವರಗಳು, ಅರ್ಜಿ ನಮೂನೆ ಮತ್ತಿತರ ಹೆಚ್ಚಿನ ಮಾಹಿರಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರನ್ನು ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ತಿಳಿಸಿದೆ.

# ತಾಯಿ ಹೆಸರಲ್ಲಿ ಮರ ನೆಟ್ಟು ಪರಿಸರ ಸಂರಕ್ಷಣೆಗೆ ಮುಂದಾಗಿ

ಬೆಂಗಳೂರು/ತುಮಕೂರು: ದೇಶ ಮತ್ತು ಪ್ರಪಂಚದಲ್ಲಿ ಪರಿಸರ ಅಸಮತೋಲನದ ಗಂಭೀರ ಸಮಸ್ಯೆ ಇದೆ. ಪರಿಸರವನ್ನು ರಕ್ಷಿಸುವ ಮತ್ತು ಸುಧಾರಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು.

ತುಮಕೂರು ವಿಶ್ವವಿದ್ಯಾಲಯದ 17ನೇ ಘಟಿಕೋತ್ಸವದ ಅಧ್ಯಕ್ಷತೆವಹಿಸಿ, ಅವರು ಮಾತನಾಡಿದರು. ತಾಯಿಯ ಹೆಸರಿನಲ್ಲಿ ಒಂದು ಮರ ಅಭಿಯಾನದಲ್ಲಿ ಮರಗಳನ್ನು ನೆಡುವ ಮೂಲಕ, ಪರಿಸರ ಸಂರಕ್ಷಣೆಗೆ ಮುಂದಾಗಬೇಕು. ತಾಯಿ ಹೇಗೆ ಮಕ್ಕಳನ್ನು ಪೋಷಿಸುತ್ತಾರೋ ಹಾಗೆ ಸಸಿ ನೆಡುವುದರ ಜೊತೆಗೆ ಪೋಷಿಸಿ ಸಂರಕ್ಷಿಸಬೇಕು ಎಂದು ಹೇಳಿದರು.

ಪ್ರಾಚೀನ ಕಾಲದಲ್ಲಿ ನಮ್ಮ ಭಾರತ ದೇಶವನ್ನು ವಿಶ್ವ ಗುರು ಎಂದು ಕರೆಯಲಾಗುತ್ತಿತ್ತು. ನಳಂದ, ತಕ್ಷಶಿಲಾ, ವಿಕ್ರಮಶಿಲಾ ಮುಂತಾದ ವಿಶ್ವದರ್ಜೆಯ ಶಿಕ್ಷಣ ಸಂಸ್ಥೆಗಳಿದ್ದವು. ಈ ಸಂಸ್ಥೆಗಳಲ್ಲಿ ಓದಲು ಭಾರತ ಮತ್ತು ವಿದೇಶಗಳಿಂದ ವಿದ್ಯಾರ್ಥಿಗಳು ಬರುತ್ತಿದ್ದರು. ತಾಂತ್ರಿಕ ಶಿಕ್ಷಣವು ದೇಶದ ಮಾನವ ಸಂಪನ್ಮೂಲ ಅಭಿವೃದ್ಧಿಯಲ್ಲಿ ನುರಿತ ಮಾನವ ಸಂಪನ್ಮೂಲವನ್ನು ಸೃಷ್ಟಿಸುವ ಮೂಲಕ, ಪ್ರತಿಯೊಂದು ಕ್ಷೇತ್ರದಲ್ಲೂ ಪ್ರಗತಿ ಸಾಧಿಸುವ ಮೂಲಕ, ಜನರ ಜೀವನದ ಗುಣಮಟ್ಟವನ್ನು ಸುಧಾರಿಸುವ ಮೂಲಕ ಪ್ರಮುಖ ಪಾತ್ರವನ್ನು ವಹಿಸುತ್ತಿದೆ ಎಂದು ತಿಳಿಸಿದರು.

ಪ್ರಸ್ತುತ ತಂತ್ರಜ್ಞಾನವು ಊಹಿಸುವುದಕ್ಕಿಂತ ವೇಗವಾಗಿ ಬದಲಾಗುತ್ತಿದೆ. ಆದ್ದರಿಂದ, ನಮ್ಮ ಸಂಶೋಧಕರು, ವಿಜ್ಞಾನಿಗಳು ಮತ್ತು ತಜ್ಞರು ಪ್ರತಿಯೊಂದು ಪ್ರದೇಶವನ್ನು ನಿರೀಕ್ಷಿಸುವುದು ಮತ್ತು ಅದಕ್ಕೆ ಅನುಗುಣವಾಗಿ ಯೋಜಿಸುವುದು ಅವಶ್ಯಕ. ಒನ್ ಇಂಡಿಯಾ, ಬೆಸ್ಟ್ ಇಂಡಿಯಾ ಮತ್ತು ಡೆವಲಪ್ಡ್ ಇಂಡಿಯಾಗಾಗಿ ಮೇಡ್ ಇನ್ ಇಂಡಿಯಾ ಮತ್ತು ಮೇಕ್ ಇನ್ ಇಂಡಿಯಾ ಗುರಿಯನ್ನು ಸಾಧಿಸುವಲ್ಲಿ ಯುವಜನತೆ ಕೊಡುಗೆ ನೀಡಬೇಕು ಮತ್ತು ದೇಶವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲು ಪ್ರಯತ್ನಿಸಬೇಕು ಎಂದು ಕರೆ ನೀಡಿದರು. ಘಟಿಕೋತ್ಸವದಲ್ಲಿ ಸಚಿವರಾದ ಡಾ ಎಂ.ಸಿ. ಸುಧಾಕರ್, ಇಸ್ರೋ ಬೆಂಗಳೂರು ವಿಶ್ರಾಂತ ಅಧ್ಯಕ್ಷರಾದ ಡಾ ಎ.ಎಸ್ ಕಿರಣ್ ಕುಮಾರ್, ಕುಲಪತಿ ಪ್ರೊ.ಎಂ ವೆಂಕಟೇಶ್ವರಲು, ಜಿಲ್ಲಾಧಿಕಾರಿಗಳಾದ ಶ್ರೀಮತಿ ಶುಭ ಕಲ್ಯಾಣ್, ಸಿಇಓ ಪ್ರಭು.ಜಿ ವಿ.ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.



## ಗೆಳತಿ ಯೋಜನೆಯಡಿ ಸಂತ್ರಸ್ಥರಿಗೆ ಮಹಿಳಾ ಆಯೋಗದಿಂದ

# 5ಲಕ್ಷ ರೂ.ಬಡ್ಡಿ ರಹಿತ ಸಾಲ ವಿತರಣೆ

**ಬೆಂಗಳೂರು :** ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಪದ್ಮಾವತಿ ಅವರು ನಿಗಮದ ಸಭಾಂಗಣದಲ್ಲಿ ಗೆಳತಿ ಯೋಜನೆಯಡಿಯಲ್ಲಿ ರಾಜ್ಯದಲ್ಲಿನ ಆಸಿಡ್ ದಾಳಿ ಸಂತ್ರಸ್ಥರಿಗೆ ಬಡ್ಡಿ ರಹಿತ ಸಾಲದ ಆದೇಶ ಪತ್ರಗಳನ್ನು ವಿತರಿಸಿದರು. ನಂತರ ಮಾತನಾಡಿದ ಅವರು ಸಂತ್ರಸ್ಥ ಮಹಿಳೆಯರು ಮತ್ತು ಧಮನಿತ ಮಹಿಳೆಯರನ್ನು ಸಮಾಜದ ಮುಖ್ಯ ವಾಹಿನಿಗೆ ತರುವ ಉದ್ದೇಶದಿಂದ ಸರ್ಕಾರದಿಂದ ಗೆಳತಿ ಯೋಜನೆ ಪ್ರಾರಂಭವಾಗಿದೆ ಎಂದರು.



ಗೆಳತಿ ಯೋಜನೆಯಲ್ಲಿ ಫಲಾನುಭವಿಗೆ 2.50 ಲಕ್ಷ ರೂ.ಗಳ ಬಡ್ಡಿ ರಹಿತ ಸಾಲ ಹಾಗೂ ರೂ.2.50 ಲಕ್ಷ ಸಹಾಯಧನ ಅಥವಾ ಯೋಜನಾ ವರದಿಯಂತೆ ಘಟಕ ವೆಚ್ಚವನ್ನು ಆಧರಿಸಿ ಶೇಕಡ 50 ರಷ್ಟು ಸಹಾಯಧನವನ್ನು ನಿಗಮದ ಮೂಲಕ ಒದಗಿಸಲಾಗುವುದು ಹಾಗೂ ಫಲಾನುಭವಿಗಳಿಗೆ ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ ರೂ.05 ಲಕ್ಷಗಳ ವಸತಿ ಸೌಲಭ್ಯವನ್ನು ಒದಗಿಸಿ ಪ್ರೋತ್ಸಾಹಿಸಲಾಗುತ್ತಿದೆ ಎಂದರು.ರಾಜ್ಯಾಂದ್ಯಂತ ಸುಮಾರು 80 ಮಹಿಳೆಯರಿಗೆ ಆಸಿಡ್ ದಾಳಿ ಪ್ರಕರಣಗಳಿರುವ ಬಗ್ಗೆ ತಿಳಿದು ಬಂದಿದ್ದು, ಅದರಲ್ಲಿ ನಿಗಮದಿಂದ ಆನ್‌ಲೈನ್ ಅರ್ಜಿ ಕರೆದಾಗ 47 ಜನ ಅರ್ಜಿ ಸಲ್ಲಿಸಿರುತ್ತಾರೆ. ಅವುಗಳಲ್ಲಿ ಇಲ್ಲಿಯವರೆಗೂ ನಿಗಮದಿಂದ 23 ಫಲಾನುಭವಿಗಳಿಗೆ ಬಡ್ಡಿ ರಹಿತ ಸಾಲ ಮಂಜೂರು ಮಾಡಿದ್ದು, ಅದರಲ್ಲಿ ಬೆಂಗಳೂರು ನಗರದ ಮಂಜುಳ, ಕೋಲಾರದ ಶಬೀನ ಮತ್ತು ಸುಷ್ಮಾ, ದಕ್ಷಿಣ ಕನ್ನಡ ಜಿಲ್ಲೆಯ ಜಾನ್ಸಿ ಇವರುಗಳಿಗೆ ಮಂಜೂರು ಆದೇಶ ಪತ್ರಗಳನ್ನು ಅಧ್ಯಕ್ಷರ ಕಛೇರಿಯಲ್ಲಿ ವಿತರಿಸಲಾಗಿದೆ. ಇನ್ನುಳಿದ ಅರ್ಜಿಗಳು ದಾಖಲಾತಿಗಳ ಪರಿಶೀಲನೆ ಹಂತದಲ್ಲಿದೆ. ಅವುಗಳನ್ನು ಸಹ ಪರಿಶೀಲಿಸಿ ಶೀಘ್ರದಲ್ಲಿ ವಿತರಿಸುತ್ತೇವೆ ಎಂದರು.

ಈ ಸಂತ್ರಸ್ಥರಿಗೆ ಕಂದಾಯ ಇಲಾಖೆಯಿಂದ 10 ಸಾವಿರ ರೂಪಾಯಿಗಳ ಪಿಂಚಣಿಯನ್ನು ಸಹ ನೀಡಲಾಗುತ್ತಿದೆ. ಇದರ ಜೊತೆಗೆ ಬೇರೆ ಇಲಾಖೆಗಳಲ್ಲಿಯೂ ಸಹ ಅರ್ಜಿ ಸಲ್ಲಿಸಿ ಸರ್ಕಾರದಿಂದ ಸಿಗುವ ಸಹಾಯ ಧನ ಪಡೆಯಬಹುದಾಗಿರುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀಮತಿ ಪುಷ್ಪಲತಾ ರವರು, ಯೋಜನೆ ವಿಭಾಗದ ಪ್ರಧಾನ ವ್ಯವಸ್ಥಾಪಕರಾದ ಶ್ರೀಮತಿ ಅಕ್ಕಮಹಾದೇವಿರವರು ಮತ್ತು ಆಡಳಿತ ವಿಭಾಗದ ಪ್ರಧಾನ ವ್ಯವಸ್ಥಾಪಕರಾದ ಶ್ರೀಮತಿ ಇಂದಿರಾರವರು ಉಪಸ್ಥಿತರಿದ್ದರು.

# ಸೌಲಭ್ಯ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ

**ಮೈಸೂರು:** ವೀರಶೈವ-ಲಿಂಗಾಯತ ಜಾತಿ ಹಾಗೂ ಉಪಜಾತಿಗೆ ಸೇರಿದ ಸಮುದಾಯದ ಜನರ) ಅಭಿವೃದ್ಧಿಗಾಗಿ 2024-25ನೇ ಸಾಲಿಗೆ ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಯೋಜನೆಯಡಿ ಶೈಕ್ಷಣಿಕ ಸಾಲ ಯೋಜನೆಗಳಾದ ಬಸವ ಬೆಳಗು ಯೋಜನೆ, ವಿದೇಶ ವಿದ್ಯಾವಿಕಾಸ ಯೋಜನೆ ಹಾಗೂ ಜೀವ ಜಲ ಯೋಜನೆ, ಭೋಜನಾಲಯ ಕೇಂದ್ರ, ವಿಭೂತಿ ನಿರ್ಮಾಣ ಘಟಕ, ಸ್ವಾವಲಂಭಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ, ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದು. ಸೌಲಭ್ಯ ಪಡೆಯಲು ಇಚ್ಛಿಸುವ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್‌ನಲ್ಲಿ ಗ್ರಾಮಒನ್, ಬೆಂಗಳೂರು ಒನ್, ಕರ್ನಾಟಕ ಒನ್ ನಾಗರೀಕ ಸೇವಾ ಕೇಂದ್ರಗಳಲ್ಲಿ ದಾಖಲೆಗಳೊಂದಿಗೆ ಆ.31ರೊಳಗೆ ಅರ್ಜಿ ಸಲ್ಲಿಸಬೇಕು. ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿಸಲ್ಲಿಸಲು ಅರ್ಹರಿರುವುದಿಲ್ಲ. 2023-24ನೇ ಸಾಲಿಗೆ ಅರ್ಜಿ ಸಲ್ಲಿಸಿ ಆಯ್ಕೆಯಾಗದವರು ಅದೇ ಯೋಜನೆಗೆ ಈ ವರ್ಷ ಮರು ಅರ್ಜಿ ಸಲ್ಲಿಸುವ ಅಗತ್ಯತೆ ಇರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ ಅಥವಾ ನಿಗಮದ ದೂ.ಸಂ: 08022865522, 9900012351, ಹಾಗೂ ಮೈಸೂರು ಜಿಲ್ಲಾ ಕಚೇರಿಯ ದೂ.ಸಂ: 0821-2341194ನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಹೆಚ್.ಎ.ಶೋಭ ತಿಳಿಸಿದ್ದಾರೆ.

# ಮೈಷುಗರ್ ವ್ಯಾಪ್ತಿಯ ರೈತರು ಕಬ್ಬಿನ ಹಣ ಪಾವತಿಯ ಬಗ್ಗೆ ಯಾವುದೇ ಆತಂಕ ಬೇಡ

**ಮಂಡ್ಯ:** ಮೈಸೂರು ಸಕ್ಕರೆ ಕಾರ್ಖಾನೆ ಕಂಪನಿಯು ಮಂಡ್ಯ ಜಿಲ್ಲೆಯ ಶತಮಾನದ ಭವ್ಯ ಇತಿಹಾಸವನ್ನು ಹೊಂದಿದ್ದು, ಸದರಿ ಸಕ್ಕರೆ ಕಾರ್ಖಾನೆಯನ್ನು ಉಳಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ದಿ ಮೈಸೂರು ಶುಗರ್ ಕಂಪನಿ ಲಿ ಮಂಡ್ಯ ಕಾರ್ಖಾನೆಯ ವ್ಯಾಪ್ತಿಯಲ್ಲಿನ ಕಬ್ಬನ್ನು ಒಪ್ಪಿಗೆ ಮತ್ತು ಒಪ್ಪಿಗೆ ರಹಿತ ಖಾಸಗಿ ಸಕ್ಕರೆ ಕಾರ್ಖಾನೆಗಳಿಗೆ ಪರಬಾರೆ ಯಾದರೆ ಕಾರ್ಖಾನೆಯನ್ನು ಪ್ರಾಂಭಿಸಲು ಸಾಧ್ಯವಾಗುವುದಿಲ್ಲ. ಪ್ರಸ್ತುತ



ಈ ಕಾರ್ಖಾನೆಯು ಈಗಾಗಲೇ ಆರ್ಥಿಕ ಸಂಕಷ್ಟದಲ್ಲಿದ್ದು ಹಣಕಾಸಿನ ಮುಗ್ಗಟ್ಟಿನಿಂದ ಯಾವುದೇ ರೀತಿಯ ಪರ್ಯಾಯ ವ್ಯವಸ್ಥೆ ಇಲ್ಲದೆ ಕಾರ್ಖಾನೆ ಪ್ರಾರಂಭಿಸಿ ಕಬ್ಬು ನುರಿಸಬೇಕಾದ ಅನಿವಾರ್ಯತೆ ಎದುರಾಗಿರುತ್ತದೆ. 2024-25ನೇ ಸಾಲಿನ ಹಂಗಾಮಿನಲ್ಲಿ ಮೈಶುಗರ್ ಕಾರ್ಖಾನೆ, ಮಂಡ್ಯ ವ್ಯಾಪ್ತಿಯ ರೈತರ ಕಬ್ಬನ್ನು ಇತರೆ ಕಾರ್ಖಾನೆಗಳಾದ ಎನ್ ಎಸ್‌ಎಲ್ ಷುರ್ಸ್, ಕೊಪ್ಪ, ಐಸಿಎಲ್ ಷುರ್ಸ್, ಕೆ.ಆರ್.ಪೇಟೆ, ಶ್ರೀ ಚಾಮುಂಡೇಶ್ವರಿ ಷುರ್ಸ್, ಕೆ.ಎಂ ದೊಡ್ಡಿ ಹಾಗೂ ಬನ್ನಾರಿ ಅಮ್ಮನ್ ಸಕ್ಕರೆ ಕಾರ್ಖಾನೆ, ಅಳಗಂಚಿ ಮತ್ತು ಕುಂತೂರು ಸಕ್ಕರೆ ಕಾರ್ಖಾನೆಗಳಿಗೆ ರೈತರಾಗಲೀ ಅಥವಾ ಕಾರ್ಖಾನೆಯಯವರಾಗಲೀ ಅನಧಿಕೃತ ಪರಭಾರೆ ಮಾಡಬಾರದೆಂದು ಸೂಚಿಸಿದೆ. ಹಾಗೂ ಅವರಿಗೆ ಮೈಷುಗರ್ ವ್ಯಾಪ್ತಿಯ ಕಬ್ಬು ಖರೀದಿಸದಂತೆ ನೋಟಿಸ್ ನೀಡಿ ಎಚ್ಚರಿಕೆ ನೀಡಿದೆ. ಮೈಷುಗರ್ ವ್ಯಾಪ್ತಿಯ ರೈತರು ತಮ್ಮ ಕಬ್ಬನ್ನು ಮೈಷುಗರ್ ಕಂಪನಿಗೆ ಸರಬರಾಜು ಮಾಡುವುದು ಮತ್ತು ಕಬ್ಬು ಸರಬರಾಜು ಸಂಬಂಧ ಹಣವನ್ನು ಸರ್ಕಾರ ನಿಯಮದಂತೆ 14 ದಿವಸಗಳ ಒಳಗಾಗಿ ರೈತರಿಗೆ ಕಬ್ಬಿನ ಹಣ ಪಾವತಿಸಲು ಮೈಷುಗರ್ ಸಕ್ಕರೆ ಕಾರ್ಖಾನೆ ಮಂಡ್ಯ ರವರ ವತಿಯಿಂದ ಕೊಡಿಸುವ ಸಂಬಂಧ ಜಿಲ್ಲಾಡಳಿತ ಸೂಕ್ತ ಕ್ರಮಕೈಗೊಳ್ಳಲಾಗುವುದು. ಆದ್ದರಿಂದ ಮೈಷುಗರ್ ವ್ಯಾಪ್ತಿಯ ರೈತರು ಕಬ್ಬಿನ ಹಣ ಪಾವತಿಯ ಬಗ್ಗೆ ಯಾವುದೇ ಆತಂಕಕ್ಕೆ ಒಳಗಾಗದೇ ತಮ್ಮ ಕಬ್ಬನ್ನು ಇತರೆ ಖಾಸಗಿ ಕಾರ್ಖಾನೆಗಳಿಗೆ ಪರಭಾರೆ ಮಾಡದೇ ಮೈಷುಗರ್ ಕಂಪನಿಗೆ ಸರಬರಾಜು ಮಾಡಿ ಮೈಷುಗರ್ ಕಾರ್ಖಾನೆಯ ಉಳಿವಿಗೆ ಕೈ ಜೋಡಿಸಬೇಕೆಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆಪ್ಟೆಂಬರ್ 14ರಂದು ರಾಷ್ಟ್ರೀಯ ಲೋಕ ಅದಾಲತ್

**ರಾಮನಗರ:** ಜಿಲ್ಲೆಯ ನ್ಯಾಯಾಲಯದಲ್ಲಿ ಬಾಕಿ ಇರುವ ಹಾಗೂ ರಾಜಿ ಆಗಬಹುದಾದ ಪ್ರಕರಣಗಳನ್ನು 2024ರ ಸೆಪ್ಟೆಂಬರ್ 14ರಂದು ನಡೆಯಲಿರುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಇತ್ಯರ್ಥಗೊಳಿಸಿಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಅಧ್ಯಕ್ಷರಾದ ನ್ಯಾ. ಬಿ.ವಿ. ರೇಣುಕ ಅವರು ಕರೆ ನೀಡಿದ್ದಾರೆ.



ಕಾನೂನುಸೇವೆಗಳಪ್ರಾಧಿಕಾರಮತ್ತುಕಾನೂನುಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಜಿಲ್ಲೆಯಾದ್ಯಂತ ಸೆ. 14 ರಂದು ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿದೆ. ಈ ಆದಾಲತ್‌ನಲ್ಲಿ ರಾಜಿ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶವಿದೆ. ಸಾರ್ವಜನಿಕರು ಇದರ ಲಾಭ ಪಡೆದುಕೊಳ್ಳಬಹುದಾಗಿದೆ ಎಂದವರು ತಿಳಿಸಿದ್ದಾರೆ. ಜಿಲ್ಲೆಯಾದ್ಯಂತ ಏಕಕಾಲಕ್ಕೆ ಸೆಪ್ಟೆಂಬರ್ 14ರಂದು ನಡೆಯುವ ಲೋಕ ಅದಾಲತ್‌ಗಾಗಿ ಸೆಪ್ಟೆಂಬರ್ 13ರವರೆಗೆ ಪ್ರಕರಣಗಳನ್ನು ನೋಂದಣಿ ಮಾಡಿಕೊಳ್ಳಲಾಗುತ್ತದೆ. ರಾಮನಗರ ಜಿಲ್ಲಾ ಹಾಗೂ ಅಧೀನ ನ್ಯಾಯಾಲಯಗಳಲ್ಲಿ ಕಲಾಪ ನಡೆಯಲಿದೆ. ನ್ಯಾಯಾಲಯದ ಕಲಾಪಗಳಲ್ಲಿ ವಕೀಲರು ಭಾಗವಹಿಸಬಹುದು, ಅವಶ್ಯಕತೆ ಇದ್ದಲ್ಲಿ ಕಕ್ಷಿದಾರರನ್ನು ಆನ್‌ಲೈನ್ ಮೂಲಕ ಸಂಪರ್ಕಿಸಲಾಗುವುದು. ಜಿಲ್ಲೆಯಲ್ಲಿ ಒಟ್ಟು 53,723 ಪ್ರಕರಣಗಳು ಬಾಕಿ ಇದ್ದು, ಅವುಗಳ ಪೈಕಿ ರಾಜಿಯಾಗಬಹುದಾದ ಎಲ್ಲಾ ಪ್ರಕರಣಗಳನ್ನು ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ರಾಜಿ ಪ್ರಕರಣಗಳನ್ನಾಗಿ ಪರಿಗಣಿಸಿ ಕೈಗೆತ್ತಿಕೊಳ್ಳಲಾಗುತ್ತದೆ. ವಕೀಲರು ಖುದ್ದಾಗಿ ಹಾಗೂ ಆನ್‌ಲೈನ್ ಮೂಲಕ ಭಾಗವಹಿಸಲು ಅವಕಾಶ ಮಾಡಿಕೊಡಲಾಗಿದೆ. ಎಲ್ಲರಿಗೂ ನ್ಯಾಯ ದೊರಕಿಸಿ ಕೊಡುವ ಉದ್ದೇಶದಿಂದ ಲೋಕ ಅದಾಲತ್‌ಗೆ ಚಾಲನೆ ನೀಡಲಾಗಿದೆ. ರಾಜಿಯಾಗಬಲ್ಲ ಕ್ರಿಮಿನಲ್ ಪ್ರಕರಣಗಳು, ನೆಗೋಷಬಲ್ ಇನ್ಸ್ಟ್ರುಮೆಂಟ್ ಕಾಯಿದೆ (ಎನ್ಐ ಆಕ್ಟ್) ಪ್ರಕರಣಗಳು, ಸಾಲ ವಸೂಲಾತಿ ಪ್ರಕರಣಗಳು, ಬ್ಯಾಂಕ್ ಸಾಲ ವಸೂಲಾತಿ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪ್ರಕರಣ, ಕಾರ್ಮಿಕ ವಿವಾದ ಪ್ರಕರಣಗಳು, ಗಣಿ ಮತ್ತು ಭೂ ವಿಜ್ಞಾನ ಪ್ರಕರಣಗಳು, ವೈವಾಹಿಕ ಪ್ರಕರಣಗಳು, ಭೂಸ್ವಾಧೀನ ಪ್ರಕರಣಗಳು, ಆಸ್ತಿ ವಿಭಾಗ ಪ್ರಕರಣಗಳು, ನಿರ್ದಿಷ್ಟ ಪ್ರಕರಣಗಳು, ಜಾರಿ ಪ್ರಕರಣಗಳು, ಹಕ್ಕು ಘೋಷಣೆ, ಶಾಶ್ವತ ನಿರ್ಬಂದಕಾಜ್ಞೆ ಹಾಗೂ ಇತರೆ, ಜನನ ಪ್ರಮಾಣ ಪತ್ರಕ್ಕೆ ಸಂಬಂಧಿಸಿದ ಪ್ರಕರಣಗಳು, ಲಘು ವ್ಯಾಜ್ಯ ಪ್ರಕರಣಗಳು, ಇತರೆ ಕ್ರಿಮಿನಲ್ ಪ್ರಕರಣಗಳು, ಭೂಸ್ವಾಧೀನ ಜಾರಿ ಪ್ರಕರಣಗಳು, ಜೀವನಾಂಶ ಪ್ರಕರಣಗಳು, ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆಗೆ ಸಂಬಂಧಿಸಿದ ಪ್ರಕರಣಗಳು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ. ಆದ್ದರಿಂದ ಸಾರ್ವಜನಿಕರು ರಾಷ್ಟ್ರೀಯ ಲೋಕ ಅದಾಲತ್‌ನ ಸದುಪಯೋಗ ಪಡಿಸಿಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತ ಪಿ.ಆರ್ ತಿಳಿಸಿದ್ದಾರೆ.

# ಕಲ್ಲಿನಿಂದ ದೇವಾಲಯ ನಿರ್ಮಾಣ ವಿಶೇಷ



**ಕೋಲಾರ:** ತಾಲೂಕಿನ ಚನ್ನಸಂದ್ರ ಗ್ರಾಮದಲ್ಲಿ ಶ್ರೀ ವಿನಾಯಕ ದೇವಸ್ಥಾನದ ನಿರ್ಮಾಣ ಕಾರ್ಯ ಬರದಿಂದ ಸಾಗಿದೆ

ಗ್ರಾಮಸ್ಥರೆಲ್ಲರೂ ಸೇರಿ ದೈವಪ್ರೇರಣೆಯಂತೆ ಸಿಮೆಂಟ್ ಮತ್ತು ಮಣ್ಣನ್ನು ಹೊರತುಪಡಿಸಿ ಕೇವಲ ಕಲ್ಲಿನಿಂದ ದೇವಾಲಯ ನಿರ್ಮಾಣವಾಗುತ್ತಿರುವುದು ವಿಶೇಷ .

ಊರಿನ ಹಿರಿಯರಾದ ನಾರಾಯಣಸ್ವಾಮಿಯವರು ಮಾತನಾಡಿ ನಮ್ಮೂರಿನ ಗ್ರಾಮದೇವರು ವೇಣುಗೋಪಾಲಸ್ವಾಮಿ ಈ ದೇವಾಲಯದ ಪಕ್ಕದಲ್ಲಿ ಖಾಲಿಜಾಗವಿದ್ದು ಇದು ದೇವಮೂಲೆಯಾಗಿದೆ ಇಲ್ಲಿ ಖಾಲಿಇರಿಸುವುದು ಗ್ರಾಮಕ್ಕೂ ಮತ್ತು ಜನರ ಏಳಿಗೆಯಲ್ಲಿ ವಿಳಂಬವಾಗುತ್ತಿದೆ ಎಂಬ ಹಿರಿಯರ ಅನಿಸಿಕೆಯಿಂದ ಗಣೇಶನ ದೇಗುಲ ನಿರ್ಮಾಣಕ್ಕೆ ಮುಂದಾಗಿದ್ದು ಎಲ್ಲರ ಸಹಕಾರದಿಂದ ನಿರ್ಮಾಣ ಕಾರ್ಯನಡೆಯುತ್ತಿದೆಯೆಂದರು.

ಚನ್ನಸಂದ್ರ ಗ್ರಾಮಪಂಚಾಯತಿಯ ಉಪಾಧ್ಯಕ್ಷರು ಮಾತನಾಡಿ ಗ್ರಾಮಸ್ಥರೆಲ್ಲರೂ ಒಟ್ಟಿಗೆ ಸೇರಿ ಗಣೇಶನ ಮಂದಿರ ಕಟ್ಟುವ ತೀರ್ಮಾನಕ್ಕೆ ಭದ್ಧವಾಗಿ ಬೇರೆ ಸ್ಥಳಗಳಲ್ಲಿರುವಂತೆ ನಮ್ಮ ಊರಿನಲ್ಲೂ ಉತ್ತಮ ವಾಸ್ತುಶಿಲ್ಪಗಳೊಂದಿಗೆ ಕಲ್ಲಿನ ದೇವಾಲಯ ನಿರ್ಮಾಣವಾಗುತ್ತಿದ್ದು ಎಲ್ಲರ ಸಹಕಾರದಿಂದ ಕಾರ್ಯ ಪ್ರಗತಿಯಲ್ಲಿದೆಯೆಂದರು.

ಮೇಸ್ತ್ರಿ ಸತ್ಯನಾರಾಯಣ ಮಾತನಾಡಿ ಊರಿನ ಹಿರಿಯರು ನನ್ನ ಕೆಲಸ ನೋಡಿ ದೇವಾಲಯ ನಿರ್ಮಾಣ ಕಾರ್ಯವನ್ನು ನನಗೆ ನೀಡಿದ್ದು ಅವರ ನಂಬಿಕೆಯನ್ನು ಉಳಿಸಿಕೊಂಡು ನಿಗದಿತ ಸಮಯಕ್ಕೆ ನಿರ್ಮಾಣಕಾರ್ಯ ಪೂರ್ತಿಗೊಳಿಸುತ್ತೇನೆಂದರು. ಚನ್ನಸಂದ್ರದ ನಾರಾಯಣಸ್ವಾಮಿ ,ದಾಸಪ್ಪ ,ದೇವರಾಜ್ ,ಸಿ ಎನ್ ರಮೇಶ್ ,ಮುರಳಿ ,ರಾಮಚಂದ್ರಗೌಡ ಸಿ ಡಿ ,ರಾಮಪ್ಪ ,ನಾಗೇಶ್ ,ಪಿಳ್ಳಪ್ಪ ,ಆನಂದ್ ,ಮಹೇಶ್ ,ಶಂಕರಪ್ಪ ,ಮುನಿಸ್ವಾಮಿರೆಡ್ಡಿ ,ಆಂಜಿನಪ್ಪ ,ಅಂಗಡಿ ಬೈರೇಗೌಡ ,ಎ ಸಿ ಎಲ್ ಎಂ ಲೋಕೇಶ್ ಬಾಬು ಇದ್ದರು.

# ಹರ್ಮನ್ ಮೊಗ್ಲಿಂಗ್ ಸರ್ವಕಾಲಕ್ಕೂ ಸಲ್ಲುವವರು

**ಕೋಲಾರ:** ಜರ್ಮನಿಯಿಂದ ಕ್ರೈಸ್ತಧರ್ಮ ಪ್ರಚಾರದ ಸಲುವಾಗಿ ಕನ್ನಡನಾಡಿಗೆ ಆಗಮಿಸಿದ ಹರ್ಮನ್ ಮೊಗ್ಲಿಂಗ್ ಮಂಗಳೂರ ಸಮಾಚಾರದ ಮೂಲಕ ಮೊದಲ ಕನ್ನಡ ಪತ್ರಿಕಾ ಸ್ಥಾಪಕ ಮಾತ್ರವಲ್ಲದೆ ಕರ್ನಾಟಕ ಏಕೀಕರಣದಲ್ಲಿ ಹೆಜ್ಜೆಗುರುತು ಮೂಡಿಸಿದ್ದಾರೆ. ಕನ್ನಡ ಪತ್ರಿಕೋದ್ಯಮ ಇರುವ ತನಕ ಕನ್ನಡ ಪತ್ರಿಕ್ಯೋದ್ಯಮದ ಪಿತಾಮಹ ರೆವರೆಂಡ್ ಮೊಗ್ಲಿಂಗ್ ರವರ ಹೆಸರು ಸರ್ವಕಾಲಕ್ಕೂ ಜೀವಂತವಾಗಿರಲಿದೆ ಎಂದು ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಕುಲಪತಿ ಡಾ. ನಿರಂಜನ ವಾನಳ್ಳಿ ಪ್ರತಿಪಾದಿಸಿದರು.



ಮಂಗಸಂದ್ರದ ಬೆಂಗಳೂರು ಉತ್ತರ ವಿ.ವಿ. ಸ್ನಾತಕೋತ್ತರ ಕೇಂದ್ರದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘಗಳ ಸಹಯೋಗದಲ್ಲಿ ಏರ್ಪಡಿಸಿದ್ದ ಪತ್ರಿಕಾ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

1811ರಲ್ಲಿ ಜರ್ಮನಿಯಲ್ಲಿ ಜನಿಸಿ ಧರ್ಮಪ್ರಚಾರಕನಾಗಿ ಆಗಮಿಸಿದ ಮೊಗ್ಲಿಂಗ್ ಬಾಸಿಲ್ ಮಿ?ನ್ ಪರವಾಗಿ ಕನ್ನಡ ಪತ್ರಿಕೆಯನ್ನು ಆರಂಭಿಸುವಾಗ ಹೊಂದಿದ್ದ ಭಾ?ಾ ಶುದ್ಧತೆ, ವೈಯಕ್ತಿಕ ನಿಂದನೆಯಿಂದ ದೂರ, ಧರ್ಮ ನಿರಪೇಕ್ಷತೆ, ಅನಾಮಧೇಯ ಪತ್ರಗಳಿಗೆ ಅವಕಾಶವಿಲ್ಲವೆಂಬ ಧ್ಯೇಯಗಳು ಇಂದಿನ ಪತ್ರಕರ್ತರಿಗೂ ಆದರ್ಶಪ್ರಾಯವಾಗಿವೆಯೆಂದರು.

ಆಶಯ ಭಾ?ಣವನ್ನು ಮಾಡಿದ ಸಂಯುಕ್ತ ಕರ್ನಾಟಕ ಪತ್ರಿಕೆಯ ವಿಶೇಷ ಪ್ರತಿನಿಧಿ ಎಚ್.ಆರ್. ಶ್ರೀಶ ಅವರು ಅಭಿವ್ಯಕ್ತಿ ಸ್ವಾತಂತ್ರ್ಯ ಪತ್ರಕರ್ತರಿಗೆ ಮಾತ್ರವಲ್ಲ, ಎಲ್ಲರಿಗೂ ಅನ್ವಯಿಸಲಿದೆ. ಪತ್ರಕರ್ತರು ಆಧುನಿಕ ತಂತ್ರಜ್ಞಾನವನ್ನು ನಿಯಮಾನುಸಾರ ಬಳಸಿಕೊಂಡು ಜ್ಞಾನಪ್ರಸಾರ ಮಾಡಬೇಕು. ಎ?ೇ ಆಧುನಿಕ ಮಾಧ್ಯಮಗಳಿದ್ದರೂ ಮುದ್ರಣ ಮಾಧ್ಯಮದಲ್ಲೇ ಜನತೆ ವಿಶ್ವಾಸ ಹೊಂದಿರುವುದರಿಂದ ಸತ್ಯಾಂಶಕ್ಕೆ ಒತ್ತು, ಸಮಾಜದ ಹಿತಕ್ಕೆ ಆದ್ಯತೆ, ವಿವೇಚನೆಯಿಂದ ಕೂಡಿದ ಬರವಣಿಗೆ, ಖಾಸಗಿತನಕ್ಕೆ ಗೌರವ ನೀಡಿಕೆ, ಹಣ ಸಂಪಾದನೆಗಿಂತ ಪತ್ರಿಕಾಧರ್ಮ ಪಾಲನೆ, ವೃತ್ತಿ ಮನೋಧರ್ಮ ಅನು?ಾನಗಳಿಗೆ ಗಮನ ಹರಿಸಬೇಕೆಂದು ಕಿವಿಮಾತು ಹೇಳಿದರು.

ಇದೇ ಸಂದರ್ಭದಲ್ಲಿ ಹಿರಿಯ ಪತ್ರಕರ್ತ ಎಂ.ಜಿ. ಪ್ರಭಾಕರ ಹಾಗೂ ಸಾಧಕ ಪತ್ರಕರ್ತ ಎಚ್.ಕೆ. ರಾಘವೇಂದ್ರ ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು. ಸನ್ಮಾನಿತರ ಪರವಾಗಿ ರಾಘವೇಂದ್ರ, ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ವಿ. ಗೋಪಿನಾಥ್ ಅವರು ಜ್ಞಾನವಿಕಾಸ, ನಿತ್ಯದ ಆಗುಹೋಗುಗಳ ಅರಿವು, ಭವಿಷ್ಯದ ದಾರಿ ನಿರ್ಧರಿಸುವ ಸಲುವಾಗಿ ಯುವಕರು ಪತ್ರಿಕೆಗಳನ್ನು ಓದಬೇಕೆಂದೂ, ಸಾರ್ವಜನಿಕ ಅಭಿಪ್ರಾಯವನ್ನು ಗಟ್ಟಿಯಾಗಿ ಬಿಂಬಿಸುವ ವ್ಯಕ್ತಿಗಳಾಗಿ ಹೊರಹೊಮ್ಮಬೇಕೆಂದೂ ಆಸಿಸಿದರು.

ಬೆಂಗಳೂರಪ್ಪರಿಂದ ಪ್ರಾರ್ಥನೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಬಿ.ವಿ. ಚೇತನ್ ಕುಮಾರ್‌ರಿಂದ ಸ್ವಾಗತ, ಗಾಯತ್ರಿರಿಂದ ನಿರೂಪಣೆ, ವಂದನೆಗಳಾಯಿತು

ವೇದಿಕೆ ಕಾರ್ಯಕ್ರಮದ ಬಳಿಕ ವಾರ್ತಾ ಇಲಾಖೆ ನಿರ್ಮಿಸಿರುವ ಡಿ.ವಿ.ಜಿ. ಕುರಿತ ಸಾಕ್ಷ್ಯಚಿತ್ರವನ್ನು ಪ್ರದರ್ಶಿಸಲಾಯಿತು.

# ಸಂಜೆ ಟಿಪ್ಸ್

## ಬೆಂಗಳೂರು ಕಾವ್ಯೋತ್ಸವದಲ್ಲಿ ಸರಳತೆಯನ್ನು ಉತ್ತೇಜಿಸಿದ ಡಿಜಿಟ್ ಇನ್ಶೂರೆನ್ಸ್




ಭಾರತದ ಪ್ರಮುಖ ಹೊಸ ಯುಗದ ವಿಮಾ ಕಂಪನಿಗಳಲ್ಲಿ ಒಂದಾದ ಗೋ ಡಿಜಿಟ್ ಜನರಲ್ ಇನ್ಶೂರೆನ್ಸ್ ಲಿಮಿಟೆಡ್, ಆಗಸ್ಟ್ 3 ಮತ್ತು ಆಗಸ್ಟ್ 4 ರಂದು ಗ್ರ್ಯಾಂಡ್ ಮೆರ್ಕ್ಯೂರ್ ಬೆಂಗಳೂರಿನಲ್ಲಿ ಬೆಂಗಳೂರು ಪೊಯೆಟ್ರಿ ಫೆಸ್ಟಿವಲ್ನ 8 ನೇ ಆವೃತ್ತಿಯಲ್ಲಿ ಸರಳತೆಯ ಕಲ್ಪನೆಯನ್ನು ಉತ್ತೇಜಿಸಿತು.

ಡಿಜಿಟ್ ಇನ್ಶೂರೆನ್ಸ್ ಸಂಸ್ಥೆಯು ಬೆಂಗಳೂರಿನಲ್ಲಿ ಪ್ರಧಾನ ಕಚೇರಿಯನ್ನು ಹೊಂದಿದ್ದು, ವಿಮೆಯನ್ನು ಸರಳಗೊಳಿಸುವ ಉದ್ದೇಶದಿಂದ 2017ರಲ್ಲಿ ಸ್ಥಾಪನೆಯಾಯಿತು.ಈ ಉತ್ಸವಗಳು ಸಾಹಿತ್ಯದ ಸ್ಥಳವನ್ನು ವಿಮಾಲೋಕದೊಂದಿಗೆ ಪರಿಪೂರ್ಣವಾಗಿ ಬೆಸೆದುಕೊಂಡವು, ವಿವಿಧ ಸೃಜನಶೀಲತೆಗಳು ಮತ್ತು ಚಟುವಟಿಕೆಗಳ ಮೂಲಕ ಭಾಗವಹಿಸುವವರು ಸರಳತೆಯ ಕಲ್ಪನೆಯನ್ನು ಪ್ರತಿಬಿಂಬಿಸಿದರು. 8 ಅಡಿ ಎತ್ತರದ ಗೋಡೆಯ ಮೇಲೆ ವಿಮೆ, ರಕ್ಷಣೆ, ಸರಳತೆ, ಸುರಕ್ಷತೆ ಮುಂತಾದ ವಿವಿಧ ಪರಿಕಲ್ಪನೆಗಳನ್ನು ಮಕ್ಕಳ ಮಕ್ಕಳಿಗೆ ಬಣ್ಣ ಹಚ್ಚುವ ಮತ್ತು ಬಣ್ಣ ಹಚ್ಚುವ ಡಿಜಿಟಲೀಕರಣವನ್ನು ರಚಿಸಲಾಗಿದೆ. ಈ ಬಗ್ಗೆ ಮಾತನಾಡಿದ ಡಿಜಿಟ್ ಇನ್ಶೂರೆನ್ಸ್ನ ಮಾರ್ಕೆಟಿಂಗ್ ಮತ್ತು ಕಾರ್ಪೊರೇಟ್ ಕಮ್ಯುನಿಕೇಷನ್ಸ್ ವಿಭಾಗದ ಮುಖ್ಯಸ್ಥೆ ತಾನ್ಯಾಮಾರ್ವಾ, ಎಟಿಡಿಜಿಟ್, ವೆಸ್ಟ್ವೆಟ್ಟೋಆಲ್ವೇಸ್ ಲುಕ್ ಫಾರ್ಮಾ ಧ್ಯಮಗಳು ಸರಳತೆ ಮತ್ತು ವಿಮೆಯ ಸಾರವನ್ನು ಪ್ರತಿನಿಧಿಸುತ್ತವೆ, ಇಲ್ಲದಿದ್ದರೆ ಕೆಲವೊಮ್ಮೆ ಇದು ಅರ್ಥವಾಗುವುದಿಲ್ಲ. ಮಾನವರೊಂದಿಗೆ ಬೆಸೆಯುವ ಅತ್ಯಂತ ಸ್ವಾಭಾವಿಕ ವಿಧಾನಗಳಲ್ಲಿ ಒಂದಾದ ಈ ಕೃತಿಯನ್ನು ಬಳಸಿಕೊಂಡು, ಬೆಂಗಳೂರು ಕಾವ್ಯೋತ್ಸವದೊಂದಿಗಿನ ನಮ್ಮ ಒಡನಾಟದ ಮೂಲಕ ನಾವು ಕಾವ್ಯದ ಮೂಲಕ ಸರಳತೆಯ ಬೀಜಗಳನ್ನು ಬಿತ್ತಲು ಸಾಧ್ಯವಾಯಿತು ಎಂದರು.ಬೆಂಗಳೂರು ಕಾವ್ಯೋತ್ಸವದ ನಿರ್ದೇಶಕಿ ಶೈನಿ ಆಂಟೋನಿ ಮಾತನಾಡಿ, ಕಾವ್ಯವು ಸ್ವ-ಅಭಿವ್ಯಕ್ತಿಯ ರೂಪವಾಗಿದ್ದು, ಇದು ಭಾರತದಲ್ಲಿ ಮಾತ್ರವಲ್ಲ, ಜಾಗತಿಕವಾಗಿಯೂ ಜನಪ್ರಿಯತೆಯನ್ನು ಹೆಚ್ಚಿಸುತ್ತದೆ. ಬೆಂಗಳೂರು ಕಾವ್ಯೋತ್ಸವವು ಎಲ್ಲಾ ರೀತಿಯ ಕಾವ್ಯೋತ್ಸವವನ್ನು ಆಚರಿಸುತ್ತದೆ, ಮತ್ತು ಬೆಂಗಳೂರು ಮೂಲದ ಸ್ಟಾರ್ಟ್ ಅಪ್ಗಳಾದ ಡಿಜಿಟ್ ಇನ್ಶೂರೆನ್ಸ್ ಜಾಯಿನಿಂಗ್ ಯುಸೊನಾವರ್ ಎಂಡೀವರ್ ಈ ಕಲಾ ಪ್ರಕಾರವನ್ನು ಉತ್ತೇಜಿಸಲು ಸಹಾಯ ಮಾಡುತ್ತದೆಎಂದು ತಿಳಿಸಿದರು.

## ಬ್ರೆಡ್ ದಹಿ ವಡಾ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

10 ಬ್ರೆಡ್ ತುಂಡುಗಳು, 250 ಗ್ರಾಂ ಮೊಸರು, ಸ್ವಲ್ಪ ಪನ್ನೀರ್, ಕರಿಯಲು ಎಣ್ಣೆ, ಪುದೀನ ಸ್ವಲ್ಪ, ಒಂದು ಚಿಟಕಿ ಜೀರಿಗೆ ಪುಡಿ, ರುಚಿಗೆ ತಕ್ಕಂತೆ ಉಪ್ಪು ಮತ್ತು ಮೆಣಸು, 1/2 ಚಮಚ ಕೆಂಪು ಮೆಣಸಿನ ಪುಡಿ, 1/2 ಚಮಚ ಆಮ್ಚೂರ್ ಪುಡಿ

### ಮಾಡುವ ವಿಧಾನ

ಬ್ರೆಡ್ನ ಅಂಚುಗಳನ್ನು ಕತ್ತರಿಸಿ ಬೇರ್ಪಡಿಸಿ. ಬ್ರೆಡನ್ನು ಸ್ವಲ್ಪ ನೀರಿನಲ್ಲಿ ನೆನೆಸಿ ತಕ್ಷಣ ಹಿಂಡಿರಿ. ಹಿಸುಕಿದ ಪನೀರ್ ಗೆ ಈ ಬ್ರೆಡ್ ತುಂಡುಗಳನ್ನು ಸೇರಿಸಿ ಮಿಕ್ಸ್ ಮಾಡಿ. ನಂತರ ಕೆಂಪು ಮೆಣಸಿನಕಾಯಿ, ಉಪ್ಪು ಮತ್ತು ಆಮ್ಚೂರ್ ಪುಡಿ ಸೇರಿಸಿ ಮಿಕ್ಸ್ ಮಾಡಿ.ಸ್ವಲ್ಪ ಮಿಶ್ರಣವನ್ನು ತೆಗೆದುಕೊಂಡು ಅದನ್ನು ಕೈಯಲ್ಲಿ ಚಪ್ಪಟೆ ಮಾಡಿ ಬಿಸಿ ಮಾಡಿದ ಎಣ್ಣೆಯಲ್ಲಿ ಕರಿಯಿರಿ. ಇನ್ನೊಂದು ಪಾತ್ರೆಗೆ ಮೊಸರನ್ನು ಹಾಕಿ, ಅದಕ್ಕೆ ಕೆಂಪು ಮೆಣಸಿನ ಪುಡಿ, ಉಪ್ಪು ಮತ್ತು ಹುರಿದ ಜೀರಿಗೆ ಪುಡಿ ಸೇರಿಸಿ ಮಿಕ್ಸ್ ಮಾಡಿ. ನಂತ್ರ ತಯಾರಾದ ವಡಾ ಮೇಲೆ ಮೊಸರು ಸುರಿಯಿರಿ. ಜೀರಿಗೆ ಪುಡಿ, ಪುದೀನ ಎಲೆಯಿಂದ ಅಲಂಕರಿಸಿ.

## ಸಮಂತಾ ಬೇಸರ: ಯಾಕೆ ಗೊತ್ತಾ?



ಟಾಲಿವುಡ್ ಬ್ಯೂಟಿ ನಟಿ ಸಮಂತಾ ಅವರ ಮಾಜಿ ಪತಿ ನಟ ನಾಗಚೈತನ್ಯ ನಟಿ ಶೋಭಿತಾ ಅವರೊಂದಿಗೆ ಎಂಗೇಜ್ ಮೆಂಟ್ ಮಾಡಿಕೊಂಡಿದ್ದಾರೆ. ಆ.8ರಂದು ನಾಗಚೈತನ್ಯ ಮನೆಯಲ್ಲಿ ಅಕ್ಕಿನೇನಿ ನಾಗಾರ್ಜುನ್ ಸಾರಥ್ಯದಲ್ಲಿ ನಿಶ್ಚಿತಾರ್ಥ ನಡೆದಿದೆ. ಮಾಜಿ ಗಂಡ ಬೇರೆ ನಟಿಯ ಜೊತೆ ಎಂಗೇಜ್ಮೆಂಟ್ ಮಾಡಿಕೊಂಡಿದ್ದರಿಂದ ಸಮಂತಾ ಯಾವ ರೀತಿ ಪ್ರತಿಕ್ರಿಯೆ ನೀಡಬಹುದು ಎಂಬ ಕುತೂಹಲ ಶುರುವಾಗಿತ್ತು. ಈ ಮಧ್ಯೆ ಸಮಂತಾ ಸೋಷಿಯಲ್ ಮೀಡಿಯಾದಲ್ಲಿ ಒಡೆದ ಹೃದಯದ ಇಮೋಜಿ ಹಾಕಿದ್ದರು. ಆದರೆ ಇದು ನಾಗಚೈತನ್ಯ ಎಂಗೇಜ್ ಮೆಂಟ್ ಮಾಡಿಕೊಂಡ ಕಾರಣದಿಂದಾಗಿ ಅಲ್ಲ.ಸಮಂತಾ ಸೋಷಿಯಲ್ ಮೀಡಿಯಾದಲ್ಲಿ ಸಖತ್ ಆಕ್ಟೀವ್ ಆಗಿದ್ದಾರೆ. ಇನ್ಸ್ಟಾಗ್ರಾಮ್ ಖಾತೆಯಲ್ಲಿ ನಟಿ ಸಾಕಷ್ಟು ವಿಚಾರಗಳನ್ನು ಶೇರ್ ಮಾಡಿಕೊಳ್ಳುತ್ತಿರುತ್ತಾರೆ. ಸಿನಿಮಾ, ರಾಜಕೀಯ ಮುಂತಾದ ಅನೇಕ ವಿಚಾರಗಳ ಬಗ್ಗೆ ಅವರು ಸೋಶಿಯಲ್ ಮೀಡಿಯಾ ಮೂಲಕ ಪ್ರತಿಕ್ರಿಯೆ ನೀಡುತ್ತಾರೆ. ಆಗಸ್ಟ್ 8ರಂದು ಅವರು ಇನ್ಸ್ಟಾಗ್ರಾಮ್ ಸ್ಟೋರಿಯಲ್ಲಿ ಒಡೆದ ಹೃದಯದ ಎಮೋಜಿಯನ್ನು ಪೋಸ್ಟ್ ಮಾಡಿದ್ದಾರೆ. ಹಾಗಂತ ಇದು ನಾಗ ಚೈತನ್ಯ ಅವರ ನಿಶ್ಚಿತಾರ್ಥಕ್ಕೆ ಸಂಬಂಧಿಸಿದ್ದಲ್ಲ. ಬದಲಾಗಿ ಕ್ರೀಡೆಗೆ ಸಂಬಂಧಿಸಿದ್ದು. ಭಾರತದ ಕ್ರೀಡಾಪ್ರೇಮಿಗಳಿಗೆ ಆಗಸ್ಟ್ 8 ಎಂದರೆ ಬೇಸರದ ದಿನವಾಗಿ ಪರಿಣಮಿಸಿದೆ. ಪ್ಯಾರಿಸ್ ಒಲಿಂಪಿಕ್ಸ್ನಲ್ಲಿ ಬಂಗಾರದ ಪದಕ ಗೆಲ್ಲುವ ಅವಕಾಶದಿಂದ ಕೊನೇ ಕ್ಷಣದಲ್ಲಿ ವಂಚಿತರಾದ ವಿನೇಶ್ ಫೋಗಟ್ ಅವರು ಕುಸ್ತಿಗೆ ವಿದಾಯ ಹೇಳಿದ್ದಾರೆ. ಈ ವಿಷಯವನ್ನು ಇನ್ಸ್ಟಾಗ್ರಾಮ್ನಲ್ಲಿ ಹಂಚಿಕೊಂಡಿರುವ ಸಮಂತಾ ಅವರು ಒಡೆದ ಹೃದಯದ ಎಮೋಜಿಯನ್ನು ಬಳಸಿದ್ದಾರೆ. ಸಮಂತಾ ರುತ್ ಪ್ರಭು ಮತ್ತು ನಾಗ ಚೈತನ್ಯ ಅವರು ಒಂದು ಕಾಲದಲ್ಲಿ ಪ್ರೇಮಿಗಳಾಗಿದ್ದರು. ಹಲವು ವರ್ಷ ಪ್ರೀತಿಸಿ ದಾಂಪತ್ಯ ಜೀವನಕ್ಕೂ ಕಾಲಿಟ್ಟರು. ಆದರೆ ನಾಲ್ಕು ವರ್ಷ ಕಳೆಯುವುದರಲ್ಲಿ ಸಂಸಾರದಲ್ಲಿ ಬಿರುಕು ಮೂಡಿ ಇಬ್ಬರು ಬೇರೆ ಬೇರೆಯಾದರು. ಬಳಿಕ ಸಮಂತಾ ಸಿನಿಮಾಗಳಲ್ಲಿ ಬ್ಯುಸಿಯಾದರು. ಆದರೆ ನಾಗಚೈತನ್ಯ ಹೆಸರು ಶೋಭಿತಾ ಜೊತೆ ಕೇಳಿ ಬಂದಿತ್ತು. ಇದೀಗ ನಟಿಯೊಂದಿಗೆ ಎಂಗೇಜ್ ಮೆಂಟ್ ಮಾಡಿಕೊಂಡಿದ್ದು ಇದು ಸಮಂತಾ ಅಭಿಮಾನಿಗಳಿಗೆ ಬೇಸರ ಮೂಡಿಸಿದೆ.

## ಮುಟ್ಟಿನ ನೋವು ಮತ್ತು ಸೆಳೆತ ನಿಯಂತ್ರಿಸಲು ಇಲ್ಲಿದೆ ಸರಳ ಸೂತ್ರ



### ಹೆಲ್ತ್ ಟಿಪ್ಸ್

ಪ್ರತಿ ತಿಂಗಳು ಕಾಡುವ ಮುಟ್ಟಿನ ನೋವನ್ನು ಸಹಿಸಿಕೊಳ್ಳೋದು ಮಹಿಳೆಯರಿಗೆ ಬಹಳ ಕಷ್ಟ. ವಾಕರಿಕೆ, ಹೊಟ್ಟೆ ಉಬ್ಬರಿಸೋದು, ಸೆಳೆತ, ನೋವು ಹೀಗೆ ಸಾಕಷ್ಟು ಸಮಸ್ಯೆಗಳಾಗುತ್ತವೆ. ಈ ಸಮಸ್ಯೆಗಳ ಮೂಲ ಕಾರಣ ಯಾವುದು ಅನ್ನೋದನ್ನು ಮೊದಲು ಅರ್ಥಮಾಡಿಕೊಳ್ಳಬೇಕು. ನಂತರ ಅದಕ್ಕೆ ಪರಿಹಾರ ಕಂಡುಕೊಳ್ಳಬಹುದು.

ವೈದ್ಯರೇ ಹೇಳುವ ಪ್ರಕಾರ ನಿಮ್ಮ ಋತುಚಕ್ರದ ವಿವಿಧ ಹಂತಗಳಲ್ಲಿ ನಿಮ್ಮ ದೇಹಕ್ಕೆ ಸರಿಹೊಂದುವ ದಿನಚರಿ ಮತ್ತು ವ್ಯಾಯಾಮವನ್ನು ನಿರ್ವಹಿಸುವುದು ಸಹ ಮುಖ್ಯ. ನೀವು ಕಒಖ ರೋಗಲಕ್ಷಣಗಳಿಂದ ಬಳಲುತ್ತಿದ್ದರೆ ಭಾರೀ ರಕ್ತಸ್ರಾವ, ತಲೆನೋವು ಇತ್ಯಾದಿ ಒತ್ತಡ ಹೆಚ್ಚಾಗಿರುತ್ತದೆ. ಹಾಗಾಗಿ ಶ್ರಮದಾಯಕ ವ್ಯಾಯಾಮಗಳನ್ನು ಮಾಡುವಂತಿಲ್ಲ.

ಆಯುರ್ವೇದದ ಪ್ರಕಾರ ಆರೋಗ್ಯಕರ ಮುಟ್ಟಿನ ಸಂಕೇತಗಳೆಂದರೆ ತಿಳಿ ಕೆಂಪು ಬಣ್ಣದ ರಕ್ತಸ್ರಾವ, ಕಲೆರಹಿತ ಮುಟ್ಟು, ದುರ್ವಾಸನೆ ಇರಬಾರದು. ಮುಟ್ಟಾದಾಗ ಹೆಚ್ಚಿನ ದೈಹಿಕ ಒತ್ತಡವಾಗುವಂಥ ಕೆಲಸಗಳನ್ನು ಮಾಡಬೇಡಿ. ನಿಮ್ಮ ಜೀರ್ಣಕ್ರಿಯೆಯ ಬಗ್ಗೆ ಹೆಚ್ಚು ಗಮನ ಕೊಡಿ. ನಿಮ್ಮ ಕರುಳಿನ ಚಲನೆ ಸರಿಯಾಗಿರಬೇಕು.

ದಿನವಿಡೀ ಬೆಚ್ಚಗಿನ ನೀರನ್ನು ಕುಡಿಯಿರಿ. ಅರಿಶಿನಕ್ಕೆ ಸ್ವಲ್ಪ ನೀರು ಸೇರಿಸಿ ಚಿಕ್ಕ ಚಿಕ್ಕ ಉಂಡೆಗಳನ್ನಾಗಿ ಮಾಡಿ. ಮುಟ್ಟಾದ ಮೊದಲ ದಿನದಿಂದ ಮೂರನೇ ದಿನದವರೆಗೆ ಖಾಲಿ ಹೊಟ್ಟೆಯಲ್ಲಿ ಅದನ್ನು ಸೇವಿಸಿ. ಮುಟ್ಟಿನ ನೋವಿದ್ದಾಗ ಚೆನ್ನಾಗಿ ವಿಶ್ರಾಂತಿ ತೆಗೆದುಕೊಳ್ಳಿ. ಸರಳವಾದ ಲಘು ಆಹಾರವನ್ನೇ ತಿನ್ನಿರಿ. ಅನ್ನ ತಿಳಿಸಾರು, ಸೂಪ್ ಹಾಗೂ ತರಕಾರಿಗಳನ್ನು ಸೇವಿಸುವುದರಿಂದ ಮುಟ್ಟಿನ ನೋವನ್ನು ನಿಯಂತ್ರಿಸಬಹುದು.

## ಷಷ್ಠಿಪೂರ್ತಿ ಆಚರಿಸಿಕೊಂಡ ಶಿವರಾಜ್‌ಕುಮಾರ್ ದಂಪತಿ



ಸ್ಯಾಂಡಲ್‌ವುಡ್ ನಟ ಶಿವರಾಜ್ ಕುಮಾರ್ ಮತ್ತು ಗೀತಾ ದಂಪತಿ ತಮಿಳುನಾಡಿನ ಪ್ರಸಿದ್ಧ ದೇವಾಲಯದಲ್ಲಿ ಷಷ್ಠಿಪೂರ್ತಿ ಆಚರಿಸಿಕೊಂಡಿದ್ದಾರೆ. ಬಾಲ್ಯದ ಗೆಳೆಯರೊಡನೆ ಈ ಕಾರ್ಯಕ್ರಮ ಸಂಭ್ರಮದಿಂದ ಜರುಗಿದೆ.

ಒಂದು ಸಾವಿರ ವರ್ಷಗಳ ಇತಿಹಾಸವಿರುವ ಅಭಿರಾಮಿ ಅಮೃತ ಕದೇಶ್ವರರ್ ದೇವಸ್ಥಾನದಲ್ಲಿ ಮಕ್ಕಳಾದ ನಿವೇದಿತಾ ಮತ್ತು ನಿರುಪಮಾ ಜೊತೆ ನಟ ಶಿವಣ್ಣ ದಂಪತಿ ಷಷ್ಠಿಪೂರ್ತಿ ಕಾರ್ಯಕ್ರಮ ಆಚರಿಸಿಕೊಂಡಿದ್ದಾರೆ. ಶಿವಣ್ಣ 60 ವರ್ಷ ಪೂರ್ಣಗೊಳಿಸಿದ ಹಿನ್ನೆಲೆ ಈ ಕಾರ್ಯಕ್ರಮ ನಡೆದಿದೆ. ಷಷ್ಠಿಪೂರ್ತಿ ಕಾರ್ಯಕ್ರಮದಲ್ಲಿ ಮದುವೆ ಮುಹೂರ್ತದಲ್ಲಿ ಮಾಡಲಾಗುವ ಎಲ್ಲಾ ಶಾಸ್ತ್ರಗಳನ್ನು ಮಾಡಿದ್ದಾರೆ. ಪತ್ನಿ ಗೀತಾಗೆ ಮತ್ತೊಮ್ಮೆ ಶಿವಣ್ಣ ಮಾಂಗಲ್ಯ ಧಾರಣೆ ಮಾಡಿದ್ದಾರೆ. ಅಂದಹಾಗೆ, ಮಾಜಿ ಸಿಎಂ ಬಂಗಾರಪ್ಪ ಅವರ ಪುತ್ರಿ, ಗೀತಾರನ್ನು 1986ರಲ್ಲಿ ಶಿವಣ್ಣ ಮದುವೆಯಾದರು.

## ರಾಷ್ಟ್ರೀಯ ಕೈಮಗ್ಗ ದಿನ: ಅಮೆಜಾನ್ ಇಂಡಿಯಾದಿಂದ ಸ್ಥಳೀಯ ಕುಶಲಕರ್ಮಿಗಳ ಉತ್ಪನ್ನಕ್ಕೆ ಉತ್ತೇಜನ



ಅಮೆಜಾನ್ ಇಂಡಿಯಾ ಮುಂಬರುವ 2024ರ ರಾಷ್ಟ್ರೀಯ ಕೈಮಗ್ಗ ದಿನವನ್ನು ಆಚರಿಸಲಿದ್ದು, ಕೈಮಗ್ಗ ಕುಶಲಕರ್ಮಿಗಳು ಮತ್ತು ಸುಸ್ಥಿರ ಫ್ಯಾಷನ್ಗೆ ವಿಶೇಷ ಒತ್ತು ನೀಡಲಿದೆ. ಕೈಮಗ್ಗ ಉದ್ಯಮದ ಪ್ರಾಮುಖ್ಯತೆಯ ಬಗ್ಗೆ ನಿರಂತರವಾಗಿ ಜಾಗೃತಿ ಮೂಡಿಸಲು, ದೇಶಾದ್ಯಂತ ಸೊಗಸಾದ ಕೈಮಗ್ಗ ಉತ್ಪನ್ನಗಳನ್ನು ಪ್ರದರ್ಶಿಸಲು ಮತ್ತು ಅಳಿವಿನ ಅಂಚಿನಲ್ಲಿರುವ ನೇಯ್ಗೆ ಸಮುದಾಯಗಳಿಗೆ ಆರ್ಥಿಕ ಅವಕಾಶಗಳನ್ನು ಒದಗಿಸಲು ಇದು ಮಾರಾಟಗಾರರಿಗೆ ಅದರ ಪ್ರಮುಖ ಕಾರ್ಯಕ್ರಮಗಳಲ್ಲಿ ಒಂದಾದ ಅಮೆಜಾನ್ ಕರಿಗರ್ ಅನ್ನು ಬಳಸಿಕೊಳ್ಳುತ್ತದೆ.

ಗ್ರಾಹಕರು ಭಾರತದ ಪ್ರಾದೇಶಿಕ ವಿವಿಧ ಕರಕೌಶಲ್ಯಗಳನ್ನು ಹೊಂದಿರುವ 25 ರಾಜ್ಯಗಳಿಂದ ವೈಶಿಷ್ಟ್ಯಗೊಳಿಸಿದ 1.5 ಲಕ್ಷ ಉತ್ಪನ್ನಗಳಿಗಾಗಿ ಶಾಪಿಂಗ್ ಮಾಡಬಹುದು. ಬಿಸ್ವಾ ಬಾಂಗ್ಲಾ, ಪಂಥೋಯಿಬಿ, ಗರ್ವಿ ಗುರ್ಜರಿ, ಹೌಸ್ ಆಫ್ ಹಿಮಾಲಯಸ್ ಮತ್ತು ಹೆಚ್ಚಿನವುಗಳನ್ನು ಒಳಗೊಂಡಂತೆ 35 ಕ್ಕೂ ಹೆಚ್ಚು ರಾಜ್ಯ ಎಂಪೋರಿಯಮ್ಗಳಿಂದ ಅಮೆಜಾನ್ ಆಯ್ಕೆಗಳ ಪ್ರದರ್ಶನವನ್ನು ಪ್ರಾರಂಭಿಸುತ್ತದೆ. ಅಮೆಜಾನ್ ಕರಿಗರ್ ಕಾರ್ಯಕ್ರಮವು ದೇಶಾದ್ಯಂತದ 470+ ಅನನ್ಯ ಕಲೆಗಳು ಮತ್ತು ಕರಕುಶಲಗಳನ್ನು ಒಳಗೊಂಡಂತೆ 2 ಲಕ್ಷಕ್ಕೂ ಹೆಚ್ಚು ಕೈಗಳಿಂದ ತಯಾರಿಸಲಾದ ವಿಶಾಲವಾದ ಶ್ರೇಣಿಯ ಉತ್ಪನ್ನಗಳ ಆಯ್ಕೆಯೊಂದಿಗೆ 18 ಲಕ್ಷಕ್ಕೂ ಹೆಚ್ಚು ಕುಶಲಕರ್ಮಿಗಳ ಜೀವನದ ಮೇಲೆ ಧನಾತ್ಮಕವಾಗಿ ಪರಿಣಾಮ ಬೀರುತ್ತದೆ., ಜವಳಿ, ಗುಡಿ ಕೈಗಾರಿಕೆಗಳು, ಬುಡಕಟ್ಟು ಕಲ್ಯಾಣ ಮುಂತಾದ ವಿವಿಧ ಸಚಿವಾಲಯಗಳ ಅಡಿಯಲ್ಲಿ 2,500 ಕ್ಕೂ ಹೆಚ್ಚು ಮಾಸ್ಟರ್ ನೇಕಾರರು, ಸಹಕಾರಿಗಳು, ಕುಶಲಕರ್ಮಿಗಳು ಮತ್ತು ಸರ್ಕಾರಿ ಸಂಸ್ಥೆಗಳು ಆನ್ಲೈನ್ನಲ್ಲಿ ಮಾರಾಟ ಮಾಡಲು ಅಮೆಜಾನ್ ಡಾಟ್ ಇನ್ ನಲ್ಲಿ ವೇದಿಕೆ ಒದಗಿಸಲಾಗಿದೆ.ಈ ಕುರಿತು ಅಮೆಜಾನ್ ಇಂಡಿಯಾದ ಮಾರಾಟ ವಿಭಾಗದ ನಿರ್ದೇಶಕ ಗೌರವ್ ಭಟ್ನಾಗರ್ ಮಾತನಾಡಿ, ''ದೇಶದ ಜವಳಿ ಸಂಪ್ರದಾಯಗಳನ್ನು ಪೋಷಿಸಿದ ಮತ್ತು ಅನೇಕ ತಲೆಮಾರುಗಳವರೆಗೆ ಜೀವಂತವಾಗಿಟ್ಟಿರುವ ಭಾರತದ ಸ್ಥಳೀಯ ಕುಶಲಕರ್ಮಿಗಳು ಮತ್ತು ಕೈಮಗ್ಗ ನೇಕಾರರ ಅದ್ಭುತ ಪ್ರತಿಭೆ ಮತ್ತು ಸ್ಥಿತಿಸ್ಥಾಪಕತ್ವವನ್ನು ಗೌರವಿಸಲು ರಾಷ್ಟ್ರೀಯ ಕೈಮಗ್ಗ ದಿನವು ಒಂದು ಅಮೂಲ್ಯವಾದ ಅವಕಾಶವಾಗಿದೆ.. ಅಮೆಜಾನ್ನಲ್ಲಿ, ಕುಶಲಕರ್ಮಿಗಳು ಮತ್ತು ನೇಕಾರ ಸಮುದಾಯಗಳನ್ನು ಇ-ಕಾಮರ್ಸ್ನೊಂದಿಗೆ ಸಬಲೀಕರಣಗೊಳಿಸಲು ನಾವು ಬದ್ಧರಾಗಿದ್ದೇವೆ, ಅವರ ಉತ್ಪನ್ನಗಳ ಸುಸ್ಥಿರ ಬಳಕೆಯನ್ನು ಉತ್ತೇಜಿಸುವ ಜೊತೆಗೆ ಅವರ ವ್ಯಾಪಾರವನ್ನು ವೃದ್ಧಿಸುವ ಮೂಲಕ ಅವರಿಗೆ ಸಹಾಯ ಮಾಡಲು ನಾವು ಬದ್ಧರಾಗಿದ್ದೇವೆ ಎಂದರು.

ಸ್ಥಳೀಯ ಕರಕುಶಲತೆಯನ್ನು ಉತ್ತೇಜಿಸುವ ಭಾರತ ಸರ್ಕಾರದ ದೃಷ್ಟಿಗೆ ಅನುಗುಣವಾಗಿ, ಕೈಮಗ್ಗ ಕುಶಲಕರ್ಮಿಗಳನ್ನು ಬೆಂಬಲಿಸಲು ಅಮೆಜಾನ್ ಇಂಡಿಯಾ 2017 ರಲ್ಲಿ ಕರಿಗರ್ ಕಾರ್ಯಕ್ರಮವನ್ನು ಹೊರತಂದಿದೆ. ಇದು ಭಾರತದಾದ್ಯಂತದ ಕುಶಲಕರ್ಮಿಗಳಿಗೆ ಮೀಸಲಾದ ಇ-ಕಾಮರ್ಸ್ ಕಾರ್ಯಕ್ರಮ, ಕೌಶಲ್ಯ ಅಭಿವೃದ್ಧಿ ಕಾರ್ಯಾಗಾರಗಳು ಮತ್ತು ಮಾರುಕಟ್ಟೆ ಸಹಾಯವನ್ನು ಒಳಗೊಂಡಿದೆ. ಸ್ಥಳೀಯ ಮಾರಾಟಗಾರರಿಗೆ ತಮ್ಮ ಸರಕುಗಳನ್ನು ಆನ್ಲೈನ್ನಲ್ಲಿ ದೊಡ್ಡ ಗ್ರಾಹಕ ಮೂಲದಲ್ಲಿ ಪಟ್ಟಿ ಮಾಡಲು ಮತ್ತು ಮಾರಾಟ ಮಾಡಲು ವೇದಿಕೆಯನ್ನು ಒದಗಿಸುವಾಗ ಇದು ಸ್ಥಳೀಯ ಕಲೆ ಮತ್ತು ಕರಕುಶಲಗಳ ಪುನರುಜ್ಜೀವನವನ್ನು ಮತ್ತಷ್ಟು ಸಕ್ರಿಯಗೊಳಿಸುತ್ತದೆ. ಈ ಪ್ರಯತ್ನಗಳು ಕೈಮಗ್ಗ ಕ್ಷೇತ್ರದ ದೀರ್ಘಾವಧಿಯ ಕಾರ್ಯಸಾಧ್ಯತೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ಭಾರತದ ಶ್ರೀಮಂತ ಜವಳಿ ಪರಂಪರೆಯನ್ನು ಸಂರಕ್ಷಿಸಲು ನೇಕಾರರನ್ನು ಸಬಲೀಕರಣಗೊಳಿಸುವ ಗುರಿಯನ್ನು ಹೊಂದಿವೆ.ಅಮೆಜಾನ್ ಡಾಟ್ ಇನ್ ನಲ್ಲಿನ ಕರಿಗರ್ ಸ್ಟೋರ್ ಕರಿಗರ್ ಕಾರ್ಯಕ್ರಮದ ಅಡಿಯಲ್ಲಿ ಮಾರಾಟಗಾರರಿಗೆ ಮೀಸಲಾದ ಅಂಗಡಿ ಮುಂಭಾಗವಾಗಿದ್ದು, ಇದು ನೇಕಾರರು ಮತ್ತು ಕುಶಲಕರ್ಮಿಗಳು ಗ್ರಾಹಕರಿಗೆ 'ಮೇಡ್ ಇನ್ ಇಂಡಿಯಾ' ಉತ್ಪನ್ನಗಳನ್ನು ಪ್ರದರ್ಶಿಸಲು ಅನುವು ಮಾಡಿಕೊಡುತ್ತದೆ. ಇದು ದೇಶಾದ್ಯಂತದ ಕೈಮಗ್ಗ ಮತ್ತು ಕರಕುಶಲ ವಸ್ತುಗಳನ್ನು ಉತ್ತೇಜಿಸುವುದಲ್ಲದೆ, ಸಾಂಪ್ರದಾಯಿಕ ಕರಕುಶಲ ವಸ್ತುಗಳ ಬಗ್ಗೆ ಗ್ರಾಹಕರಿಗೆ ತಿಳಿಸುತ್ತದೆ ಮತ್ತು ಅಮೆಜಾನ್ ಡಾಟ್ ಇನ್ ನಲ್ಲಿ ಅವುಗಳನ್ನು ಖರೀದಿಸಲು ಅನುವು ಮಾಡಿಕೊಡುತ್ತದೆ.

## ಕೂದಲು-ಚರ್ಮದ ಆರೈಕೆ

### ಬ್ಯೂಟಿ ಟಿಪ್ಸ್

ಆರೋಗ್ಯದ ಜೊತೆಗೆ ಕೂದಲು ಹಾಗೂ ಚರ್ಮದ ಕೆಲ ಸಮಸ್ಯೆಗಳು ಮಳೆಗಾಲದಲ್ಲಿ ಕಾಡುತ್ತವೆ. ಹಾಗಾಗಿ ಮಳೆಗಾಲದಲ್ಲಿ ಚರ್ಮ ಹಾಗೂ ಕೂದಲಿಗೆ ವಿಶೇಷ ಆರೈಕೆ ಬೇಕು. ವಾರದಲ್ಲಿ ಎರಡರಿಂದ ಮೂರು ದಿನ ಕೂದಲು ಸ್ವಚ್ಛಗೊಳಿಸಬೇಕು. ಹಾಗೆ ಮುಖವನ್ನು ಸ್ವಚ್ಛವಾಗಿ ತೊಳೆದು ಒಣಗಿದ ಬಟ್ಟೆಯಲ್ಲಿ ಒರೆಸಿಕೊಳ್ಳಬೇಕು. ಮಳೆಯಿಂದ ನಿಮ್ಮ ಬಟ್ಟೆ ಒದ್ದೆಯಾಗಿದ್ದರೆ ತುಂಬಾ ಸಮಯದವರೆಗೆ ಒದ್ದೆ ಬಟ್ಟೆಯಲ್ಲಿರಬೇಡಿ. ಸ್ವಚ್ಛ ನೀರಿನಲ್ಲಿ ಸ್ನಾನ ಮಾಡಿ. ಒಣಗಿದ ಬಟ್ಟೆಯನ್ನು ಆದಷ್ಟು ಬೇಗ ಧರಿಸಿ. ಸಾಮಾನ್ಯವಾಗಿ ಮಳೆಗಾಲದಲ್ಲಿ ಬಿಸಿಬಿಸಿ ಕರಿದ ತಿಂಡಿ ತಿನ್ನಲು ಮನಸ್ಸು ಬಯಸುತ್ತದೆ. ಎಣ್ಣೆಯುಕ್ತ ತಿಂಡಿಗಳು ಚರ್ಮದ ಮೇಲೆ ಪರಿಣಾಮ ಬೀರುತ್ತವೆ. ಹಾಗಾಗಿ ಎಣ್ಣೆಯುಕ್ತ ತಿಂಡಿಯಿಂದ ದೂರವಿರುವುದು ಒಳ್ಳೆಯದು. ಚರ್ಮದ ತೇವಾಂಶ ಕಾಪಾಡಿಕೊಂಡು ನೈಸರ್ಗಿಕ ಹೊಳಪು ಪಡೆಯಲು ಹೆಚ್ಚಿನ ಪ್ರಮಾಣದಲ್ಲಿ ನೀರು ಕುಡಿಯಿರಿ. ಮಳೆಗಾಲದಲ್ಲಿ ಕೂದಲು ಒಣಗಿ ತುರಿಕೆ ಕಾಣಿಸಿಕೊಳ್ಳುತ್ತದೆ. ಇದು ಸಾಮಾನ್ಯ ಸಮಸ್ಯೆ. ಹಾಗಾಗಿ ಎಂಟಿ ಡ್ಯಾಂಡ್ರಫ್ ಶ್ಯಾಂಪೂ ಬಳಸಿ. ತಲೆ ಸ್ನಾನ ಮಾಡಲು ಒಂದು ಗಂಟೆ ಮೊದಲು ಎಣ್ಣೆಯಿಂದ ತಲೆಗೆ ಮಸಾಜ್ ಮಾಡಿಕೊಳ್ಳಿ.



ಒದ್ದೆಯಾಗಿರುವ ಕೂದಲನ್ನು ಕಟ್ಟಬೇಡಿ. ಹೇರ್ ಡ್ರೈಯರ್ ಬಳಕೆಯನ್ನು ಮಳೆಗಾಲದಲ್ಲಿ ಕಡಿಮೆ ಮಾಡಿ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ :** ಅಧಿಕ ನಷ್ಟ, ಸರ್ಕಾರಿ ಅಧಿಕಾರಿಗಳಿಂದ ಅನುಕೂಲ, ಶತ್ರು ದಮನ, ಕೋರ್ಟ್ ಕೇಸುಗಳಲ್ಲಿ ಜಯ

**ವೃಷಭ:** ಆಸ್ತಿ ಸಮಸ್ಯೆಗಳು ಬಗೆಹರಿಯುವುದು, ಸಹೋದರಿಯಿಂದ ಅನುಕೂಲ, ರಾಜಕೀಯ ವ್ಯಕ್ತಿಗಳ ಭೇಟಿ

**ಮಿಥುನ:** ಉದ್ಯೋಗ ಸ್ಥಳ, ಗೃಹ ಬದಲಾವಣೆ ಆಲೋಚನೆ, ಮಾತಿನಿಂದ ಕುಟುಂಬಸ್ಥರಿಗೆ ನೋವು, ಗುಪ್ತ ಧನಾಗಮನ

**ಕಟಕ:** ಅಧಿಕ ಧನಾಗಮನ, ಅನಗತ್ಯ ತಿರುಗಾಟ, ಅಧಿಕ ಧೈರ್ಯ ದಕ್ಷತೆ, ಶೌರ್ಯ ದಿಟ್ಟತನ

**ಸಿಂಹ:** ಆದಾಯ ಮತ್ತು ನಷ್ಟ ಸಮ, ಉತ್ತಮ ಹೆಸರು ಗೌರವ ಕೀರ್ತಿ, ಅಭಿವೃದ್ಧಿ ಹೊಂದಬೇಕೆನ್ನುವ ಹಂಬಲ, ಆರ್ಥಿಕ ಒತ್ತಡಗಳಿಂದ ನಿದ್ರಾಭಂಗ

**ಕನ್ಯಾ:** ಒತ್ತಡಕ್ಕೆ ಸಿಲುಕುವಿರಿ, ಉದ್ಯೋಗ ಒತ್ತಡದಿಂದ ನಿದ್ರಾಭಂಗ, ನಷ್ಟದ ಪ್ರಮಾಣ ಅಧಿಕ, ಸರ್ಕಾರಿ ಅಧಿಕಾರಿಗಳಿಂದ ಸಂಕಷ್ಟ

**ತುಲಾ:** ಉದ್ಯೋಗ ಲಾಭ, ಲಾಭದ ಪ್ರಮಾಣ ಕುಂಠಿತ, ಅದೃಷ್ಟ ವಂಚಿತರು ಎನ್ನುವ ಭಾವನೆ

**ವೃಶ್ಚಿಕ:** ರಾಜಕೀಯ ವ್ಯಕ್ತಿಗಳಿಂದ ಅನುಕೂಲ, ಅನುಕೂಲಕರ ದಿನ, ಮಿತ್ರರಿಂದ ಅದೃಷ್ಟ, ಉತ್ತಮ ಹೆಸರು ಗೌರವ ಕೀರ್ತಿ ಪ್ರತಿಷ್ಠೆ

**ಧನಸ್ಸು:** ಅನಿರೀಕ್ಷಿತ ಗಣ್ಯರ ಭೇಟಿ, ಪೂರ್ವಿಕರ ಕಾರ್ಯದಲ್ಲಿ ತೊಡಗುವಿರಿ, ಪ್ರಯಾಣದಲ್ಲಿ ತೊಂದರೆ ಎಚ್ಚರಿಕೆ, ಉದ್ಯೋಗ ಸಮಸ್ಯೆಗಳು

**ಮಕರ:** ಸಂಗಾತಿಯೊಂದಿಗೆ ಕಲಹ, ಪಾಲುದಾರಿಕೆಯಲ್ಲಿ ಸಮಸ್ಯೆ, ಮಾನಸಿಕ ಒತ್ತಡ,

**ಕುಂಭ:** ಆರೋಗ್ಯ ಸಮಸ್ಯೆ ಕಾಡುವುದು, ನೀರಿನಿಂದ ಮತ್ತು ಆಹಾರದಿಂದ ಸಮಸ್ಯೆ , ಅಧಿಕಾರಿಗಳಿಂದ ಸರ್ಕಾರದಿಂದ ಸಮಸ್ಯೆ,

**ಮೀನ:** ಪ್ರೀತಿ ಪ್ರೇಮ ವಿಷಯಗಳಲ್ಲಿ ಸಮಸ್ಯೆ, ಮಕ್ಕಳೊಂದಿಗೆ ವಾಗ್ವಾದ ಮತ್ತು ಬೇಸರ, ಸಾಲದ ಸಮಸ್ಯೆ ಶತ್ರು ಬಾಧೆ, ನಷ್ಟದ ಪ್ರಮಾಣ ಅಧಿಕ

## ನಾಗ ಪಂಚಮಿ




ಈ ವರ್ಷ ನಾಗ ಪಂಚಮಿಯನ್ನು ಶುಕ್ಲ ಪಕ್ಷದ ಪಂಚಮಿ ತಿಥಿಯಂದು ಶ್ರಾವಣ ಮಾಸದ ಅಂದರೆ ಆಗಸ್ಟ್ 9ರಂದು ಆಚರಿಸಲಾಗುತ್ತದೆ.

ಈ ನಾಗರ ಪಂಚಮಿ ದಿನದಂದು ಶುಭ ಮುಹೂರ್ತದಲ್ಲಿ ಸರ್ಪ ದೇವರನ್ನು ಪೂಜಿಸುವುದರಿಂದ ವಿಶೇಷವಾದ ಲಾಭಗಳು ದೊರೆಯುತ್ತವೆ ಮತ್ತು ಜೀವನದ ವಿವಿಧ ಸಮಸ್ಯೆಗಳನ್ನು ನಿವಾರಿಸಲು ಸಹಾಯ ಮಾಡುತ್ತದೆ ಎನ್ನುವ ನಂಬಿಕೆ ಇದೆ. ಅನೇಕ ಜನರು ನಾಗರ ಪಂಚಮಿಯಂದು ಉಪವಾಸವನ್ನು ಆಚರಿಸುತ್ತಾರೆ. ಈ ದಿನದಂದು ಉಪವಾಸವನ್ನು ಆಚರಿಸುವುದು ಮತ್ತು ವ್ರತ ಕಥಾವನ್ನು ಪಠಿಸುವುದು ಸಂತೋಷ ಮತ್ತು ಸಮೃದ್ಧಿಯನ್ನು ತರುತ್ತದೆ.

ವೈದಿಕ ಪಂಚಾಂಗದ ಪ್ರಕಾರ, ಶ್ರಾವಣ ಮಾಸದ ಶುಕ್ಲ ಪಕ್ಷದ ಪಂಚಮಿ ತಿಥಿಯು ಆಗಸ್ಟ್ 9 ರಂದು ಮಧ್ಯರಾತ್ರಿ 12:36 ಕ್ಕೆ ಪ್ರಾರಂಭವಾಗಿ ಆಗಸ್ಟ್ 10 ರಂದು ಬೆಳಗ್ಗೆ 03:14 ಕ್ಕೆ ಕೊನೆಗೊಳ್ಳುತ್ತದೆ.

ಶ್ರಾವಣ ಶುಕ್ಲಪಕ್ಷದ ಪಂಚಮಿ ತಿಥಿಯ ದಿನ ಬೆಳಗ್ಗೆ ಬೇಗ ಎದ್ದು ಸ್ನಾನ ಮಾಡಿ, ಧ್ಯಾನ ಮಾಡಿ, ಉಪವಾಸ ಮಾಡುವ ಪ್ರತಿಜ್ಞೆ ಮಾಡಿ. ಪೂಜೆಯ ಸಮಯದಲ್ಲಿ, ನಾಗದೇವತೆಯ ಚಿತ್ರ ಅಥವಾ ಜೇಡಿಮಣ್ಣಿನಿಂದ ಮಾಡಿದ ಹಾವಿನ ವಿಗ್ರಹವನ್ನು ಸ್ವಚ್ಛವಾದ ಸ್ಟೂಲ್ನಲ್ಲಿ ಇರಿಸಿ. ನಂತರ, ಹಾಲು, ತುಪ್ಪ ಮತ್ತು ಸಕ್ಕರೆಯ ಮಿಶ್ರಣದ ಜೊತೆಗೆ ನಾಗದೇವತೆಗೆ ಅರಿಶಿನ, ಅಕ್ಕಿ ಮತ್ತು ಹೂವುಗಳನ್ನು ಅರ್ಪಿಸಿ. ಈ ಅರ್ಪಣೆಗಳ ನಂತರ, ನಾಗ ಪಂಚಮಿ ವ್ರತ ಕಥಾವನ್ನು ಕೇಳಿ ಮತ್ತು ಆರತಿಯೊಂದಿಗೆ ಪೂಜೆಯನ್ನು ಮುಗಿಸಿ.

ನಂಬಿಕೆಗಳ ಪ್ರಕಾರ ಶ್ರಾವಣ ಶುಕ್ಲ ಪಕ್ಷದ ಐದನೇ ದಿನದಂದು ನಾಗ್ ಲೋಕದಲ್ಲಿ ಭವ್ಯವಾದ ಹಬ್ಬವನ್ನು ಆಚರಿಸಲಾಗುತ್ತದೆ. ಈ ಪಂಚಮಿ ತಿಥಿಯಂದು ಹಸುವಿನ ಹಾಲಿನಿಂದ ಹಾವುಗಳನ್ನು ಸ್ನಾನ ಮಾಡುವವರು ಎಲ್ಲಾ ಹಾವುಗಳ ಕಡಿತದಿಂದ ರಕ್ಷಣೆಯನ್ನು ಪಡೆಯುತ್ತಾರೆ, ಕುಟುಂಬದ ಸದಸ್ಯರಿಗೆ ಸಹ ಹಾವಿನ ಭಯ ಇರುವುದಿಲ್ಲ ಎನ್ನಲಾಗುತ್ತದೆ. ಇದರ ಜೊತೆಗೆ ಕಾಳಸರ್ಪ ದೋಷದಿಂದ ಸಹ ಮುಕ್ತಿ ಸಿಗುತ್ತದೆ.

ಪಂಚಮಿ ತಿಥಿ ಆರಂಭ – 9 ಆಗಸ್ಟ್ 2024 – 12:36 AM
ಪಂಚಮಿ ತಿಥಿ ಅಂತ್ಯ – 10 ಆಗಸ್ಟ್ 2024 – 03:14 AM
ಪೂಜೆ ಮುಹೂರ್ತ – 9 ಆಗಸ್ಟ್ 2024 – 05:25 AM ನಿಂದ 08:00 AM





# ಕಂಗನಾ ಮೇಲೆ ಮಾನನಷ್ಟ ಕೇಸ್!

**ದೆಹಲಿ:** ನಟಿ ಕಂಗನಾ ರಣಾವತ್ ವಿರುದ್ಧ 40 ಕೋಟಿ ರೂಪಾಯಿ ಮಾನನಷ್ಟ ಮೊಕದ್ದಮೆ ಹೂಡಲಾಗಿದೆ. ಸಂಸತ್ನಲ್ಲಿ ರಾಹುಲ್ ಗಾಂಧಿಗೂ ಮಾತಾಡಿದ ಮಾತನ್ನು ವಿರೋಧಿಸಲು ನಟಿ ಸೋಶಿಯಲ್ ಮೀಡಿಯಾದಲ್ಲಿ ಒಂದು ಫೋಟೋವನ್ನು ಶೇರ್ ಮಾಡಿದ್ದಾರೆ. ಇದು ಮಾರ್ಫ್ ಮಾಡಿದ ಫೋಟೋ ಆಗಿದ್ದು, ಸಿಕ್ಕಾಪಟ್ಟೆ ವೈರಲ್ ಆಗ್ತಿದೆ.

ಆ ಫೋಟೋದಲ್ಲಿ ರಾಹುಲ್ ಗಾಂಧಿ ತಲೆಗೆ ಮುಸ್ಲಿಂ ಟೋಪಿ ಹಾಕಿದ್ದು, ಕತ್ತಿಗೆ ಕ್ರಿಸ್ಚಿಯನ್ ಕ್ರಾಸ್ ಹಾಗೂ ಹಣೆಗೆ ಹಿಂದೂಗಳ ತಿಲಕ ಇಟ್ಟು ಎಡಿಟ್ ಮಾಡಿದ ಫೋಟೋ ಇದಾಗಿದೆ. ಈ ಫೋಟೋ ವೈರಲ್ ಆಗಿದ್ದು, ಇದ್ರಿಂದ ರಾಹುಲ್ ಗಾಂಧಿ ಅವರಿಗೆ ಅಪಮಾನವಾಗಿದೆ ಎಂದು ಅನೇಕರು ಕಂಗನಾ ವಿರುದ್ಧ ಕಿಡಿಕಾರಿದ್ದಾರೆ. ಕಂಗನಾ ರಣಾವತ್ ವಿರುದ್ಧ ಸುಪ್ರೀಂ ಕೋರ್ಟ್ ಲಾಯರ್ ನರೇಂದ್ರ ಮಿಶ್ರಾ ಅವರು ಮಾನನಷ್ಟ ಕೇಸ್ ಹಾಕಿದ್ದಾರೆ. ಯಾವುದೇ ವ್ಯಕ್ತಿಯ ಫೋಟೋವನ್ನು ತಿರುಚಿ ಸೋಶಿಯಲ್ ಮೀಡಿಯಾದಲ್ಲಿ ಶೇರ್ ಮಾಡುವುದು ಮಾಹಿತಿ-ತಂತ್ರಜ್ಞಾನ ಕಾಯ್ದೆ ಅಡಿಯಲ್ಲಿ ಅಪರಾಧ ಆಗುತ್ತದೆ. ರಾಹುಲ್ ಅವರಿಗೆ ಅವಮಾಸಿ ದಂತೆ ಆಗಿದೆ ಎಂದು ನರೇಂದ್ರ ಮಿಶ್ರಾ ಹೇಳಿದ್ದಾರೆ.

# ಜಪಾನ್‌ನಲ್ಲಿ 7.1 ತೀವ್ರತೆಯ ಪ್ರಬಲ ಭೂಕಂಪ

**ಜಪಾನ್:** ಜಪಾನ್‌ನ ಕ್ಯೂಶು ಪ್ರದೇಶದ ಮಿಯಾಝಾಕಿ ಪ್ರಾಂತ್ಯದ ಕರಾವಳಿಯಲ್ಲಿ ರಿಕ್ಟರ್ ಮಾಪಕದಲ್ಲಿ 7.1 ತೀವ್ರತೆಯ ಪ್ರಬಲ ಭೂಕಂಪನವು ಗುರುವಾರ ಸಂಭವಿಸಿದೆ. ಭೂಕಂಪನದ ಜೊತೆ ಸುನಾಮಿ ಎಚ್ಚರಿಕೆಯನ್ನು ಕೂಡ ನೀಡಲಾಗಿದ್ದು, ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸುವಂತೆ ಸೂಚನೆ ನೀಡಲಾಗಿದೆ.

ದಕ್ಷಿಣ ಜಪಾನಿನ ಕ್ಯೂಶು ದ್ವೀಪದಾದ್ಯಂತ ಭೂಕಂಪನದ ಅನುಭವವಾಗಿದ್ದು, ನಿವಾಸಿಗಳಲ್ಲಿ ವ್ಯಾಪಕ ಆತಂಕಕ್ಕೆ ಕಾರಣವಾಗಿದೆ. ಜನರನ್ನು ಎತ್ತರದ ಪ್ರದೇಶಗಳಿಗೆ ತೆರಳಲು ಮತ್ತು ಹೆಚ್ಚಿನ ನವೀಕರಣಗಳಿಗಾಗಿ ಜಾಗರೂಕರಾಗಿರಲು ಅಧಿಕಾರಿಗಳು ಒತ್ತಾಯಿಸುತ್ತಿದ್ದಾರೆ.ತುರ್ತು ಸೇವೆಗಳು ಹೆಚ್ಚಿನ ಎಚ್ಚರಿಕೆ ವಹಿಸಿವೆ ಮತ್ತು ಸ್ಥಳೀಯ ಅಧಿಕಾರಿಗಳು ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ. ಹಾನಿ ಮತ್ತು ಸಾವುನೋವುಗಳ ವರದಿಗಳು ಸೇರಿದಂತೆ ಹೆಚ್ಚಿನ ವಿವರಗಳನ್ನು ನಿರೀಕ್ಷಿಸಲಾಗಿದೆ.



# ಬಾಂಗ್ಲಾದೇಶದಲಿ ಮುಂದುವರೆದ 'ಹಿಂಸಾಚಾರ' ; ಖ್ಯಾತ ನಟ ಬರ್ಬರ ಹತ್ಯೆ!

**ಬಾಂಗ್ಲಾದೇಶ:** ದೇಶದಲ್ಲಿ ಭಾರಿ ಅಶಾಂತಿಯ ನಡುವೆ ಬಾಂಗ್ಲಾದೇಶದ ನಟ ಮತ್ತು ಅವರ ತಂದೆಯನ್ನು ಥಳಿಸಿ ಹತ್ಯೆ ಮಾಡಲಾಗಿದೆ. ಬಾಂಗ್ಲಾದೇಶದ ಖ್ಯಾತ ನಿರ್ಮಾಣ ಸಂಸ್ಥೆಯ ಮಾಲೀಕ ನಟ ಶಾಂಟೋ ಖಾನ್ ಮತ್ತು ಅವರ ತಂದೆ ಸೆಲೀಮ್ ಖಾನ್ ಅವರನ್ನು ಗುಂಪೊಂದು ಹತ್ಯೆ ಮಾಡಿದೆ ಎಂದು ವರದಿ ತಿಳಿಸಿದೆ. ತಂದೆ-ಮಗನ ಕ್ರೂರ ಹತ್ಯೆಯ ಹಿಂದೆ ಯಾವುದೇ ದೃಢಪಡಿಸಿದ ಕಾರಣಗಳಿಲ್ಲ. ಸೆಲೀಮ್ ಖಾನ್ ಅವಾಮಿ ಲೀಗ್ ಉಚ್ಚಾಟಿತ ನಾಯಕ ಎಂದು ವರದಿಯಾಗಿದೆ, ಅದರ ಬೆಂಬಲಿಗರು ಇತ್ತೀಚಿನ ವಾರಗಳಲ್ಲಿ ಹಿಂಸಾತ್ಮಕ ಸರ್ಕಾರಿ ವಿರೋಧಿ ಪ್ರದರ್ಶನಗಳ ನಡುವೆ ನಿರಂತರ ದಾಳಿ ನಡೆಸುತ್ತಿದ್ದಾರೆ. ಬಾಂಗ್ಲಾದೇಶದ ಪ್ರಧಾನಿ ಹುದ್ದೆಗೆ ಶೇಖ್ ಹಸೀನಾ ರಾಜೀನಾಮೆ ನೀಡಿ ತಮ್ಮ ಸಹೋದರಿಯೊಂದಿಗೆ ಭಾರತಕ್ಕೆ ಪಲಾಯನ ಮಾಡಿದ್ದಾರೆ. ಶೇಖ್ ಹಸೀನಾ ಫಲಾಯನದ ನಂತರವೂ ಕೂಡ ಬಾಂಗ್ಲಾದೇಶದಲ್ಲಿ ಹಿಂಸಾಚಾರ ನಿಂತಿಲ್ಲ. ಬಾಂಗ್ಲಾದೇಶದಲ್ಲಿ ಸಾವಿನ ಸಂಖ್ಯೆ 400 ಕ್ಕೆ ಏರಿಕೆಯಾಗಿದೆ.





# ವಕ್ಫ್ ತಿದ್ದುಪಡಿ ಮಸೂದೆಯನ್ನು ಜಂಟಿ ಸಂಸದೀಯ ಸಮಿತಿಗೆ ಕಳುಹಿಸಲು ಸರ್ಕಾರ ಪ್ರಸ್ತಾಪ

**ನವದೆಹಲಿ:** ಪ್ರತಿಪಕ್ಷಗಳ ವಿರೋಧದ ನಡುವೆಯೇ ಬಹುಚರ್ಚಿತ ವಕ್ಫ್ ತಿದ್ದುಪಡಿ ಮಸೂದೆಯನ್ನು ಸಂಸತ್ನಲ್ಲಿ ಮಂಡನೆಯಾಗಿದೆ. ಇದೀಗ ಈ ಮದೂದೆಯ ಪರಿಶೀಲನೆಗಾಗಿ ಜಂಟಿ ಸಂಸದೀಯ ಸಮಿತಿಗೆ ಕೇಂದ್ರ ಸರ್ಕಾರ ಕಳುಹಿಸಿದೆ. ಇಂದು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮಸೂದೆಯನ್ನು ಮಂಡಿಸಿದ್ದಾರೆ.

ವಕ್ಫ್ ಕಾಯ್ದೆ 1995ಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಹಾಗೂ ವಕ್ಫ್ ಕಾಯಿದೆ, 1995 ಅನ್ನು ಏಕೀಕೃತ ವಕ್ಫ್ ನಿರ್ವಹಣೆ, ಸಬಲೀಕರಣ, ದಕ್ಷತೆ ಮತ್ತು ಅಭಿವೃದ್ಧಿ ಕಾಯಿದೆ-1995 ಎಂದು ಮರುನಾಮಕರಣ ಮಾಡುವ ಗುರಿಯೊಂದಿಗೆ ಇಂದು ಕೇಂದ್ರ ಸರ್ಕಾರ



ಮಸೂದೆ ಮಂಡನೆ ಮಾಡಿದೆ.

ಇನ್ನು ಈ ಮಸೂದೆಗೆ ವಿರೋಧ ಪಕ್ಷಗಳು ಭಾರೀ ವಿರೋಧ ವ್ಯಕ್ತಪಡಿಸಿದ್ದು, ತಕ್ಷಣ ಇದನ್ನು ಹಿಂಪಡೆಯುವಂತೆ ಆಗ್ರಹಿಸಿವೆ. ಕಾಂಗ್ರೆಸ್ ಸಂಸದ ಕೆ.ಸಿ. ವೇಣುಗೋಪಾಲ್ ಮಾತನಾಡಿ, ನಾವು ಹಿಂದೂಗಳು. ಆದರೆ ನಮ್ಮ ಧರ್ಮದ ಜೊತೆಗೆ ನಾವು ಇತರ ಧರ್ಮಗಳ ನಂಬಿಕೆಯನ್ನು ಗೌರವಿಸುತ್ತೇವೆ. ಈ ಮಸೂದೆಯು ಮಹಾರಾಷ್ಟ್ರ, ಹರಿಯಾಣ ಚುನಾವಣೆಗಳ ದೃಷ್ಟಿಯಿಂದ ಮಂಡನೆ ಮಾಡಲಾಗಿದೆ.

ಕಳೆದ ಬಾರಿ ಭಾರತದ ಜನತೆ ನಿಮಗೆ ಪಾಠ ಕಲಿಸಿದ್ದು ನಿಮಗೆ ಅರ್ಥವಾಗುತ್ತಿಲ್ಲ. ಇದು ಒಕ್ಕೂಟ ವ್ಯವಸ್ಥೆಯ ಮೇಲಿನ ದಾಳಿ. ಈ ಮಸೂದೆಯು ಸಂವಿಧಾನದ ಮೇಲಿನ ಮೂಲಭೂತ ದಾಳಿಯಾಗಿದೆ. ಈ ಮಸೂದೆಯ ಮೂಲಕ, ಅವರು ಮುಸ್ಲಿಮೇತರರೂ ವಕ್ಫ್ ಆಡಳಿತ ಮಂಡಳಿಯ ಸದಸ್ಯರಾಗಬೇಕೆಂಬ ನಿಬಂಧನೆಯನ್ನು ಹಾಕುತ್ತಿದ್ದಾರೆ. ಇದು ಧಾರ್ಮಿಕ ಸ್ವಾತಂತ್ರ್ಯದ ಮೇಲಿನ ನೇರ ದಾಳಿಯಾಗಿದೆ ಎಂದು ಕಿಡಿ ಕಾರಿದ್ದಾರೆ.

# ಡೊನಾಲ್ಡ್ ಟ್ರಂಪ್ ಕೊಲೆಗೆ ಸಂಚು ಪ್ರಕರಣ; ಪಾಕಿಸ್ತಾನಿ ಪ್ರಜೆಯ ಸೆರೆ

**ವಾಷಿಂಗ್ಟನ್ (ಅಮೇರಿಕಾ):** ಅಮೆರಿಕಾದ ಅಧ್ಯಕ್ಷೀಯ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಹತ್ಯೆಗೆ ಸಂಚು ರೂಪಿಸಿದ ಆರೋಪದ ಮೇಲೆ ಪಾಕಿಸ್ತಾನಿ ವ್ಯಕ್ತಿಯೊಬ್ಬನನ್ನು ಅಮೆರಿಕದಲ್ಲಿ ಬಂಧಿಸಲಾಗಿದೆ. ಆತನ ಹೆಸರು ಆಸಿಫ್ ಮರ್ಚೆಂಟ್ (ವಯಸ್ಸು 46 ವರ್ಷ) ಎಂದಿದೆ. ಇರಾನ್ನ ರೆವಲ್ಯೂಷನರಿ ಗಾರ್ಡ್ಗಳ ಸರ್ವೋಚ್ಚ ಕಮಾಂಡರ್ ಕಾಸಿಮ್ ಸುಲೆಮಾನಿ ಹತ್ಯೆಗೆ ಸೇಡು ತೀರಿಸಿಕೊಳ್ಳಲು ಆಸಿಫ್ ಮರ್ಚೆಂಟ್ ವರ್ಷ 2020 ರಲ್ಲಿ ಅಮೇರಿಕಾದ ನಾಯಕರ ಹತ್ಯೆಗೆ ಸಂಚು ರೂಪಿಸಿದ್ದನು.ಈ ಮಾಹಿತಿ ಬೆಳಕಿಗೆ ಬಂದ ನಂತರ, ಅಮೆರಿಕಾ ಸರಕಾರವು ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಇತರ ಅಧಿಕಾರಿಗಳ ಭದ್ರತೆಯನ್ನು ಹೆಚ್ಚಿಸಿದೆ. ಅಮೆರಿಕಕ್ಕೆ ಹೋಗುವ ಮುನ್ನ ಆಸಿಫ್ ಮರ್ಚೆಂಟ್ ಅನೇಕ ದಿನಗಳ ಕಾಲ ಇರಾನ್ ನಲ್ಲಿ ವಾಸಿಸುತ್ತಿದ್ದನು. ಅವನು ಏಪ್ರಿಲ್ನಲ್ಲಿ ಪಾಕಿಸ್ತಾನದಿಂದ ಅಮೆರಿಕಾಕ್ಕೆ ಬಂದಿದ್ದಾನೆ. ಇಲ್ಲಿಗೆ ಬಂದ ನಂತರ ಅವನು ನ್ಯೂಯಾರ್ಕ್ನಲ್ಲಿ ಹತ್ಯೆಗಾಗಿ ಶೂಟರ್ ನನ್ನು ಹುಡುಕುವ ಪ್ರಯತ್ನ ಮಾಡಿದ್ದನು.



# ಬಾಹ್ಯಾಕಾಶದಲ್ಲಿರುವ ಸುನೀತಾ ವಿಲಿಯಮ್ಸ್ ವಾಪಾಸ್ ಯಾವಾಗ?

**ದೆಹಲಿ:** ಭಾರತ ಮೂಲದ ವಿಶ್ವವಿಖ್ಯಾತ ಗಗನಯಾತ್ರಿ ಸುನೀತಾ ವಿಲಿಯಮ್ಸ್ ಅವರು ಮೂರನೇ ಬಾರಿಗೆ ಬಾಹ್ಯಾಕಾಶ ಯಾನ ಕೈಗೊಂಡಿದ್ದಾರೆ. ಇದೀಗ ಸುನೀತಾ ವಿಲಿಯಮ್ಸ್ ಹಾಗೂ ಮತ್ತೊಬ್ಬ ಗಗನಯಾತ್ರಿ ಬುಚ್ ವಿಲ್ಮೋರ್ ಅವರು ಬಾಹ್ಯಾಕಾಶದಲ್ಲಿಯೇ ಸಿಲುಕಿದ್ದು, ಇವರು 2025ರ ಫೆಬ್ರವರಿಯಲ್ಲಿ ವಾಪಸಾಗಲಿದ್ದಾರೆ ಎಂದು ಅಮೆರಿಕ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ನಾಸಾ ತಿಳಿಸಿದೆ.

ಬುಚ್ ವಿಲ್ಮೋರ್ ಮತ್ತು ಸುನೀತಾ ವಿಲಿಯಮ್ಸ್ ಅವರು ಬೋಯಿಂಗ್ ಸಂಸ್ಥೆಯ ಸ್ಟಾರ್ಲೈನರ್ ಬಾಹ್ಯಾಕಾಶ ನೌಕೆಯ ಮೊದಲ ಮಾನವ ಸಹಿತ ಬಾಹ್ಯಾಕಾಶ ಯಾನವನ್ನು ಜೂನ್ 5ರಂದು ಆರಂಭಿಸಿದ್ದರು. ಜೂನ್ 6ರಂದು ಅಂತಾರಾಷ್ಟ್ರೀಯ ಬಾಹ್ಯಾಕಾಶ ಸ್ಟೇಷನ್ ತಲುಪಿದ್ದ ಅವರು ಒಂದು ವಾರ ಸಂಶೋಧನೆ ನಡೆಸಿ ವಾಪಸಾಗಬೇಕಿತ್ತು. ಆದರೆ, ತಾಂತ್ರಿಕ ಕಾರಣದಿಂದ ಅವರು ಅಲ್ಲಿಯೇ ಸಿಲುಕಿದ್ದಾರೆ. ಇವರು ಯಾವಾಗ ಬರುತ್ತಾರೆ ಎಂಬುದರ ಕುರಿತು ನಾಸಾ ಈಗ ಮಾಹಿತಿ ನೀಡಿದೆ.

ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಸಿಲುಕಿರುವ ಸುನೀತಾ ವಿಲಿಯಮ್ಸ್ ಅವರು 2025ರ ಫೆಬ್ರವರಿಯಲ್ಲಿ ವಾಪಸಾಗಲಿದ್ದಾರೆ. ಇವರು ಬೋಯಿಂಗ್ ಸ್ಟಾರ್ಲೈನರ್ ಬದಲು ಸ್ಪೇಸ್‌ಎಕ್ಸ್‌ನ ಕ್ರ್ಯೂ ಡ್ರ್ಯಾಗನ್ನಲ್ಲಿ ವಾಪಸಾಗಲಿದ್ದಾರೆ. ಸ್ಟಾರ್ಲೈನರ್ನಲ್ಲಿ ಹಲವು ತಾಂತ್ರಿಕ ದೋಷಗಳು ಉಂಟಾಗಿರುವ ಕಾರಣ ಕ್ರ್ಯೂ ಡ್ರ್ಯಾಗನ್ನಲ್ಲಿ ಕರೆದುಕೊಂಡು ಬರಲು ತೀರ್ಮಾನಿಸಲಾಗಿದೆ' ಎಂಬುದಾಗಿ ನಾಸಾ ತಿಳಿಸಿದೆ.

# ಶೋಭಾ ಕ್ಷಮೆ ಕೇಳಿದರೆ ಕೇಸ್ ರದ್ದು



**ಚೆನ್ನೈ:** ಕೆಲ ತಿಂಗಳುಗಳ ಹಿಂದೆ ನಡೆದಿದ್ದ ಬೆಂಗಳೂರಿನ ರಾಮೇಶ್ವರಂ ಕೆಫೆ ಸ್ಫೋಟಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ತಮಿಳಿಗರ ಬಗ್ಗೆ ವಿವಾದಿತ ಹೇಳಿಕೆ ನೀಡಿ ಸಂಕಷ್ಟಕ್ಕೆ ಸಿಲುಕಿದ್ದರು. ಇದೀಗ ಶೋಭಾ ಕ್ಷಮೆ ಕೇಳಿದರೆ ಅವರ ವಿರುದ್ಧ ದಾಖಲಾಗಿರುವ ಪ್ರಕರಣವನ್ನು ರದ್ದುಗೊಳಿಸಬಹುದು ಎಂದು ಅಡ್ವೋಕೇಟ್ ಜನರಲ್ ಮದ್ರಾಸ್ ಹೈಕೋರ್ಟ್ಗೆ ತಿಳಿಸಿದ್ದಾರೆ.

ಈ ಹಿಂದೆ ಶೋಭಾ, ನಮ್ಮ ಬೆಂಗಳೂರಿನ ಕೆಫೆಗೆ ತಮಿಳುನಾಡಿನ ಯಾರೋ ಬಂದು ಬಾಂಬ್ ಹಾಕುತ್ತಾರೆ ಎಂದು ಹೇಳಿದ್ದರು. ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಇಟ್ಟಿದ್ದ ವ್ಯಕ್ತಿ ತಮಿಳಿಗ ಎಂಬ ಅರ್ಥದಲ್ಲಿ ಶೋಭಾ ಹೇಳಿಕೆ ನೀಡಿದ್ದು, ಇದು ತಮಿಳುನಾಡಿನವರನ್ನು ಕೆರಳಿಸಿತು. ಇದಕ್ಕೆ ಸಂಬಂಧಿಸಿದಂತೆ ಶೋಭಾ ಕರಂದ್ಲಾಜೆ ವಿರುದ್ಧ ತಮಿಳುನಾಡಿನಲ್ಲಿ ಎಫ್ಐಆರ್ ದಾಖಲಾಗಿದೆ.

ಇಂದು ಮದ್ರಾಸ್ ಹೈಕೋರ್ಟ್ನಲ್ಲಿ ಈ ಪ್ರಕರಣದ ಕುರಿತು ವಿಚಾರಣೆ ನಡೆದಿದ್ದು, ಈ ವೇಳೆ ಅಡ್ವೋಕೇಟ್ ಜನರಲ್ ಪಿಎಸ್ ರಾಮನ್ ಅವರು, ಸಚಿವೆ ಶೋಭಾ ಕರಂದ್ಲಾಜೆ ಅವರು ತಮ್ಮ ಹೇಳಿಕೆ ಕುರಿತು ಸುದ್ದಿಗೋಷ್ಠಿ ಕರೆದು ಸ್ಪಷ್ಟನೆ ಕೊಟ್ಟು ಕ್ಷಮೆ ಕೇಳಿದರೆ ಪ್ರಕರಣ ರದ್ದುಗೊಳಿಸಬಹುದು ಎಂದು ಹೈಕೋರ್ಟ್‌ಗೆ ತಿಳಿಸಿದ್ದಾರೆ.

# ಮುಹಮ್ಮದ್ ಯೂನುಸ್ ಪ್ರಮಾಣ ವಚನ ಸ್ವೀಕಾರ

**ಬಾಂಗ್ಲಾದೇಶ:** ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಮುಖ್ಯಸ್ಥರಾಗಿ ಮುಹಮ್ಮದ್ ಯೂನುಸ್ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ನೊಬೆಲ್ ಪ್ರಶಸ್ತಿ ವಿಜೇತ ಮುಹಮ್ಮದ್ ಯೂನುಸ್ ಅವರು ಶೇಖ್ ಹಸೀನಾ ಅವರನ್ನು ಪದಚ್ಯುತಗೊಳಿಸಿದ ನಂತರ ಮಧ್ಯಂತರ ಸರ್ಕಾರದ ಮುಖ್ಯಸ್ಥರಾಗಿ ಪ್ರಮಾಣ ವಚನ ಸ್ವೀಕರಿಸಲು ಪ್ಯಾರಿಸ್ ನಿಂದ ಪ್ರತಿಭಟನಾ ಪೀಡಿತ ಬಾಂಗ್ಲಾದೇಶಕ್ಕೆ ಮರಳುತ್ತಿದ್ದಂತೆ ತನ್ನ ನಾಗರಿಕರಿಗೆ ಸುರಕ್ಷತೆಯ ಭರವಸೆ ನೀಡುವ ಸರ್ಕಾರವನ್ನು ನೀಡುವುದಾಗಿ ಗುರುವಾರ ಭರವಸೆ ನೀಡಿದ್ದಾರೆ. ಮೈಕ್ರೋಲೆಂಡಿಂಗ್ನಲ್ಲಿ ಮಾಡಿದ ಪ್ರವರ್ತಕ ಕೆಲಸಕ್ಕಾಗಿ 2006 ರಲ್ಲಿ ನೊಬೆಲ್ ಶಾಂತಿ ಪ್ರಶಸ್ತಿಯನ್ನು ಗೆದ್ದ 84 ವರ್ಷದ ಯೂನುಸ್ ಅವರನ್ನು ಅಧ್ಯಕ್ಷ ಮೊಹಮ್ಮದ್ ಶಹಾಬುದ್ದೀನ್ ಮಂಗಳವಾರ ಪ್ರಧಾನಿ ಹುದ್ದೆಗೆ ರಾಜೀನಾಮೆ ನೀಡಿ ಅವರ ಆಡಳಿತದ ವಿರುದ್ಧ ವ್ಯಾಪಕ ಪ್ರತಿಭಟನೆಯ ನಂತರ ದೇಶದಿಂದ ಪಲಾಯನ ಮಾಡಿದ ನಂತರ ಅಧ್ಯಕ್ಷ ಮೊಹಮ್ಮದ್ ಶಹಾಬುದ್ದೀನ್ ಮಂಗಳವಾರ ಸಂಸತ್ತನ್ನು ವಿಸರ್ಜಿಸಿದ ನಂತರ ಮಧ್ಯಂತರ ಸರ್ಕಾರದ ಮುಖ್ಯಸ್ಥರಾಗಿ ನೇಮಿಸಲಾಯಿತು. ಅರ್ಥಶಾಸ್ತ್ರಜ್ಞ ಮುಹಮ್ಮದ್ ಯೂನುಸ್ ಗುರುವಾರ ಮಧ್ಯಾಹ್ನ ದುಬೈನಿಂದ ರಾಜಧಾನಿ ಢಾಕಾಗೆ ಆಗಮಿಸಿದರು.ಯೂನುಸ್ ಅವರನ್ನು ಸೇನಾ ಮುಖ್ಯಸ್ಥ ಜನರಲ್ ವೇಕರ್-ಉಜ್-ಜಮಾನ್ ಮತ್ತು ತಾರತಮ್ಯದ ವಿರುದ್ಧ ವಿದ್ಯಾರ್ಥಿಗಳ ಆಂದೋಲನದ ಸಂಯೋಜಕರು ವಿಮಾನ ನಿಲ್ದಾಣದಲ್ಲಿ ಸ್ವಾಗತಿಸಿದರು ಎಂದು ವರದಿ ತಿಳಿಸಿದೆ.





# 20 ಲಕ್ಷ ಲಂಚ ಪಡೆಯುವಾಗ ರೆಡ್‌ಹ್ಯಾಂಡ್ ಆಗಿ ಸಿಕ್ಕಿಬಿದ್ದ ಇ.ಡಿ ಅಧಿಕಾರಿ

**ನವದೆಹಲಿ:** 20 ಲಕ್ಷ ರೂ. ಲಂಚ ಸ್ವೀಕರಿಸಿದ ಜಾರಿ ನಿರ್ದೇಶನಾಲಯದ ಸಹಾಯಕ ನಿರ್ದೇಶಕನನ್ನು ಕೇಂದ್ರ ತನಿಖಾ ದಳ ಗುರುವಾರ ಬಂಧಿಸಿದೆ.

ಬಂಧಿತ ಇ.ಡಿ ಅಧಿಕಾರಿಯನ್ನು ಸಂದೀಪ್ ಸಿಂಗ್ ಯಾದವ್ ಎಂದು ಗುರುತಿಸಲಾಗಿದೆ. ಪ್ರಕರಣವೊಂದರ ವಿಚಾರವಾಗಿ ಆಭರಣ ವ್ಯಾಪಾರಿಯಿಂದ ಇ.ಡಿ ಅಧಿಕಾರಿ ಲಂಚ ಸ್ವೀಕರಿಸುತ್ತಿದ್ದರು. ಈ ಬಗ್ಗೆ ಖಚಿತ ಮಾಹಿತಿ ಮೇರೆಗೆ ಸಿಬಿಐ ಅಧಿಕಾರಿಗಳು ಬಲೆ ಬೀಸಿದ್ದರು. ಈ ವೇಳೆ ಸಂದೀಪ್ ಸಿಂಗ್ ರೆಡ್‌ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ.

ಇಡಿ ಅಧಿಕಾರಿಯನ್ನು ದೆಹಲಿಯ ಲಜಪತ್ ನಗರ ಪ್ರದೇಶದಲ್ಲಿ ಬಂಧಿಸಲಾಗಿದೆ ಎಂದು ಸಿಬಿಐ ಹಿರಿಯ ಅಧಿಕಾರಿಯೊಬ್ಬರು ಖಚಿತಪಡಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಎಫ್ಐಆರ್ ದಾಖಲಾಗಿದ್ದು, ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ. ಆಗಸ್ಟ್ 2023ರಲ್ಲಿ, ದೆಹಲಿ ಮದ್ಯ ಹಗರಣ ಪ್ರಕರಣದಲ್ಲಿ ದೆಹಲಿಯ ಉದ್ಯಮಿ ಅಮನ್ ಧಾಲ್ ಅವರನ್ನು ರಕ್ಷಿಸಲು 5 ಕೋಟಿ ರೂ. ಲಂಚ ಸ್ವೀಕರಿಸಿದ್ದಕ್ಕಾಗಿ ಇಡಿಯ ಸಹಾಯಕ ನಿರ್ದೇಶಕ ಮತ್ತು ಇತರ ಆರು ಅಧಿಕಾರಿಗಳನ್ನು ಸಿಬಿಐ ಬಂಧಿಸಿತ್ತು.

# ಹಿಂದೂಗಳ ಮೇಲೆ ಹಲ್ಲೆ ನಡೆದರೂ ಮೂಕ ಪ್ರೇಕ್ಷಕರಾದ ಸೇನೆ, ಪೊಲೀಸ್; ತೀವ್ರವಾಗುತ್ತಿದೆ ಹಿಂಸಾಚಾರ

**ಬಾಂಗ್ಲಾದೇಶ:** ದೇವರ ವಿಗ್ರಹಗಳು ಮತ್ತು ದೇವಾಲಯಗಳನ್ನು ನಾಶಪಡಿಸಲಾಗಿದೆ. ಸೇನೆ ಭರವಸೆ ನೀಡಿದರೂ ಬಾಂಗ್ಲಾದೇಶದಲ್ಲಿ ಹಿಂದೂಗಳನ್ನು ರಕ್ಷಿಸುವ ಪ್ರಯತ್ನ ನಡೆದಿಲ್ಲ ಎಂದು ವರದಿಯಾಗಿದೆ.

ಕಲಹ ಪೀಡಿತ ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲೆ ದಾಳಿಗಳು ಹೆಚ್ಚುತ್ತಿವೆ, ಪೊಲೀಸರು ಮತ್ತು ಸೇನೆಯು ಯಾವುದೇ ಕ್ರಮ ಕೈಗೊಳ್ಳಲು ಹಿಂದೇಟು ಹಾಕುತ್ತಿವೆ ಎಂದು ಉನ್ನತ ಗುಪ್ತಚರ ಮೂಲಗಳು ತಿಳಿಸಿವೆ ಎಂದು ವರದಿ ಮಾಡಿದೆ. ಶೇಖ್ ಹಸೀನಾ ಅವರ ರಾಜೀನಾಮೆ ಮತ್ತು ನಿರ್ಗಮನದ ನಂತರ ಬಾಂಗ್ಲಾದೇಶದಲ್ಲಿ ಅಶಾಂತಿ ಮುಂದುವರಿದಿದ್ದು, ಉದ್ರಿಕ್ತ ಪ್ರತಿಭಟನಾಕಾರರು ಎಲ್ಲೆಡೆ ಹಿಂಸಾಚಾರ ನಡೆಸುತ್ತಿದ್ದಾರೆ. 'ದೇವರ ವಿಗ್ರಹಗಳು ಮತ್ತು ದೇವಾಲಯಗಳನ್ನು ನಾಶಪಡಿಸಲಾಗಿದೆ. ಸೇನೆಯಿಂದ ಭರವಸೆ ನೀಡಿದರೂ ಬಾಂಗ್ಲಾದೇಶದಲ್ಲಿ ಹಿಂದೂಗಳನ್ನು ರಕ್ಷಿಸುವ ಪ್ರಯತ್ನ ನಡೆದಿಲ್ಲ. ವಾಸ್ತವವಾಗಿ, ಸೇನೆ ಮತ್ತು ಪೊಲೀಸರು ಮನೆಗಳನ್ನು ಲೂಟಿ ಮಾಡುತ್ತಿದ್ದಾರೆ' ಎಂದು ವರದಿಗಳು ತಿಳಿಸಿವೆ. ಹಿಂದೂ ಫ್ಯಾಮಿಲಿ ಮೇಲೆ ಹಲ್ಲೆ ಮಾಡಲಾಗುತ್ತಿದೆ. ಒಬ್ಬ ಹಿಂದೂ ಪ್ರಾಧ್ಯಾಪಕನನ್ನು ಕಟ್ಟಿಗೆಯಿಂದ ಹೊಡೆದು ಬರ್ಬರವಾಗಿ ಕೊಲ್ಲಲಾಯಿತು. ಬಾಂಗ್ಲಾದೇಶದಲ್ಲಿ ಹಿಂದೂ ಕುಟುಂಬಗಳು ಎಲ್ಲವನ್ನೂ ಕಳೆದುಕೊಂಡಿವೆ. ಈಗಲೂ ಹಿಂದೂ ಸಂಘಟನೆಗಳು ಬಹಿರಂಗವಾಗಿ ಮಾತನಾಡಲು ಹೆದರುತ್ತಿವೆ ಎಂದು ವರದಿಯಾಗಿದೆ. ಈ ದಾಳಿಗಳು ಮೂಲಭೂತವಾದಿಗಳಿಂದ ಆಗುತ್ತಿಲ್ಲ, ಪ್ರತಿಭಟನೆಯು ಭಯೋತ್ಪಾದಕ ಚಳುವಳಿಯಾಗುತ್ತಿದೆ ಎಂದು ಮೂಲಗಳು ತಿಳಿಸಿವೆ. ಯಾವುದೇ ನಾಯಕತ್ವವು ಅವರನ್ನು ನಿಯಂತ್ರಿಸಲು ಸಾಧ್ಯವಿಲ್ಲ ಏಕೆಂದರೆ ಇದು ಹಲವು ವರ್ಷಗಳಿಂದ ನಡೆಯುತ್ತಿದೆ. 2013 ರಿಂದ ಹಿಂದೂಗಳ ಮೇಲೆ 4,000 ಕ್ಕೂ ಹೆಚ್ಚು ದಾಳಿಗಳು ನಡೆದಿವೆ. ಸೌದಿ ಹಣ ಮತ್ತು ಹಳೆಯ ಬಾಂಗ್ಲಾದೇಶಿಗರನ್ನು ಗಲ್ಫ್‌ನಿಂದ ಅಪಾರ ಹಣ ಕೊಟ್ಟು ಹಿಂದಿರುಗಿಸುವುದು ಇಸ್ಲಾಮಿಸ್ಟ್ ಗುಂಪುಗಳಿಗೆ ಉತ್ತೇಜನ ನೀಡುತ್ತಿದೆ. ಈ ಇಸ್ಲಾಮಿಸ್ಟ್‌ಗಳನ್ನು ಮುಕ್ತವಾಗಿ ಓಡಾಡಲು ಸೇನೆ ಮತ್ತು ಪೊಲೀಸರು ಬಿಡುತ್ತಿದ್ದು, ಅವರೂ ಈ ಗೂಂಡಾಗಳನ್ನು ಬೆಂಬಲಿಸುತ್ತಿದ್ದಾರೆ ಎಂಬುದಕ್ಕೆ ಸ್ಪಷ್ಟ ಸೂಚನೆಯಾಗಿದೆ ಎಂದು ಮೂಲಗಳು ಹೇಳಿವೆ. ಇನ್ನು ಬಾಂಗ್ಲಾದಲ್ಲಿ ಹಿಂದುಗಳ ಮೇಲೆ ನಡೆಯುತ್ತಿರುವ ಹಿಂಸಾಚಾರದ ಬಗ್ಗೆ ಸಾಮಾಜಿಕ ಮಾಧ್ಯಮಗಳಲ್ಲಿ ಆಕ್ರೋಶ ವ್ಯಕ್ತವಾಗುತ್ತಿದೆ.

**97 ಸ್ಥಳಗಳ ಮೇಲೆ ದಾಳಿ:** ಹಿಂದೂಗಳ ಮೇಲಿನ ದಾಳಿಗಳು ಭಾರತ ಸರ್ಕಾರದ ಕಳವಳಕ್ಕೆ ಪ್ರಮುಖ ಕಾರಣವಾಗಿದೆ. ಸ್ಥಳೀಯ ಮಾಧ್ಯಮಗಳ ವರದಿಗಳ ಪ್ರಕಾರ ಮತ್ತು ಢಾಕಾದ ಹಿಂದೂ ಅಲ್ಪಸಂಖ್ಯಾತ ಗುಂಪುಗಳ ಕಾರ್ಯಕರ್ತರ ಸುಮಾರು 97 ಸ್ಥಳಗಳ ಮೇಲೆ ದಾಳಿ ನಡೆದಿದೆ. 'ಇಸ್ಕಾನ್ ದೇವಾಲಯ ಮತ್ತು ಕಾಳಿ ಮಂದಿರದ ಮೇಲೆ ದಾಳಿ ಮಾಡಲಾಗಿದೆ ಮತ್ತು ಹಿಂದೂಗಳ ಮನೆಗಳಿಗೆ ಹಾನಿ ಮಾಡಲಾಗಿದೆ. ಈ ದಾಳಿಯಲ್ಲಿ ಹಿಂದೂ ಕೌನ್ಸಿಲರ್ ಹರದನ್ ರಾಯ್ ಅವರನ್ನು ಪ್ರತಿಭಟನಾಕಾರರು ಹತ್ಯೆ ಮಾಡಿದ್ದಾರೆ. ಖ್ಯಾತ ಸಂಗೀತಗಾರ ರಾಹುಲ್ ಆನಂದ ಅವರ ಮನೆಯನ್ನು ಧ್ವಂಸಗೊಳಿಸಲಾಗಿದ್ದು, ಬರಿ ಬಟ್ಟೆಯ ತುಂಡನ್ನು ಬಿಟ್ಟು ಹೋಗಿದ್ದಾರೆ. ಅತ್ಯಂತ ವ್ಯವಸ್ಥಿತವಾಗಿದ್ದ ಇಂದಿರಾಗಾಂಧಿ ಸಾಂಸ್ಕೃತಿಕ ಕೇಂದ್ರ ಮತ್ತು ಭಾಗಬಂಧು ಸ್ಮಾರಕ ವಸ್ತುಸಂಗ್ರಹಾಲಯವನ್ನು ಮೂಲಭೂತವಾದಿಗಳು ಸುಟ್ಟುಹಾಕಿದ್ದಾರೆ ಎಂದು ವರದಿ ತಿಳಿಸಿದೆ.



# ಯೆಮನ್‌ನಲ್ಲಿ ಪ್ರವಾಹ: 30 ಮಂದಿ ಬಲಿ

**ಸನಾ:** ಯೆಮನ್ ನಲ್ಲಿ ಹಲವು ದಿನಗಳಿಂದ ಸುರಿಯುತ್ತಿರುವ ಭಾರೀ ಮಳೆ, ಪ್ರವಾಹದಿಂದಾಗಿ 30 ಮಂದಿ ಸಾವನ್ನಪ್ಪಿದ್ದು ನೂರಾರು ಜನರು ನಿರಾಶ್ರಿತರಾಗಿರುವುದಾಗಿ ಅಧಿಕಾರಿಗಳು ಹೇಳಿದ್ದಾರೆ.

ದಕ್ಷಿಣದ ಹೊಡೆಡಾ ನಗರದಲ್ಲಿ ಸುಮಾರು 500 ಮನೆಗಳ ಜನರನ್ನು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಿಸಲಾಗಿದೆ.

15 ಮಂದಿ ಮೃತಪಟ್ಟಿದ್ದು 5 ಮಂದಿ ನಾಪತ್ತೆಯಾಗಿದ್ದಾರೆ ಎಂದು ವರದಿಯಾಗಿದೆ. ನೈಋತ್ಯ ನಗರ ತೈಜ್ ಮತ್ತು ವಾಯವ್ಯ ನಗರ ಹಜ್ಜಾದಲ್ಲಿ ಈ ವಾರದ ಆರಂಭದಿಂದ ಮಳೆಯಾಗುತ್ತಿದ್ದು ಹಲವಾರು ಮನೆಗಳು ಜಲಾವೃತಗೊಂಡಿವೆ. ಪ್ರವಾಹದಿಂದ ತೈಜ್ ನಗರದಲ್ಲಿ 15 ಮಂದಿ ಮೃತಪಟ್ಟಿದ್ದಾರೆ ಎಂದು ವಿಶ್ವಸಂಸ್ಥೆಯ ಮಾನವೀಯ ವ್ಯವಹಾರ ಏಜೆನ್ಸಿ ಗುರುವಾರ ಹೇಳಿದೆ.

ಯೆಮನ್ ನ ತಿಹಾಮಾ ಕರಾವಳಿ ಪ್ರದೇಶದಲ್ಲಿ ವ್ಯಾಪಕ ಪ್ರಾಣಹಾನಿ, ಬೆಳೆ ನಷ್ಟ ಸಂಭವಿಸಿದೆ. ಪ್ರವಾಹದಿಂದ ಹಲವು ಪ್ರದೇಶಗಳಲ್ಲಿ ರಾಶಿಬಿದ್ದಿರುವ ಕೆಸರು-ಮಣ್ಣಿನಲ್ಲಿ ಸಿಲುಕಿ ಹಲವು ಜಾನುವಾರುಗಳು ಸಾವನ್ನಪ್ಪಿವೆ ಎಂದು ವರದಿಯಾಗಿದೆ.

# ಯೆಮನ್‌ನಲ್ಲಿ ಹೌದಿ ನೆಲೆಗಳ ಮೇಲೆ ಅಮೆರಿಕ ದಾಳಿ

**ಸನಾ:** ಯೆಮನ್ ನಲ್ಲಿ ಹೌದಿಗಳ ನಿಯಂತ್ರಣದ ಪ್ರದೇಶಗಳಲ್ಲಿರುವ ನೆಲೆಗಳ ಮೇಲೆ ಅಮೆರಿಕದ ಮಿಲಿಟರಿ ಪಡೆಗಳು ದಾಳಿ ನಡೆಸಿ ಎರಡು ಡ್ರೋನ್ ಗಳನ್ನು ಮತ್ತು ಮೂರು ಹಡಗು ವಿರೋಧಿ ಕ್ಷಿಪಣಿಗಳನ್ನು ಹೊಡೆದುರುಳಿಸಿದೆ ಎಂದು ಅಮೆರಿಕದ ಸೆಂಟ್ರಲ್ ಕಮಾಂಡ್ ಹೇಳಿದೆ.

ಇದಕ್ಕೂ ಮುನ್ನ, ಬುಧವಾರ ಏಡನ್ ಕೊಲ್ಲಿಯಲ್ಲಿ ಅಮೆರಿಕದ ಎರಡು ಸಮರ ನೌಕೆಗಳು ಹಾಗೂ ಕೆಂಪು ಸಮುದ್ರದ ಮೂಲಕ ಸಾಗುತ್ತಿದ್ದ ಕಂಟೈನರ್ ಹಡಗಿನ ಮೇಲೆ ದಾಳಿ ನಡೆಸಿರುವುದಾಗಿ ಇರಾನ್ ಬೆಂಬಲಿತ ಹೌದಿ ಸಶಸ್ತ್ರ ಹೋರಾಟಗಾರರ ಗುಂಪು ಹೇಳಿತ್ತು.

ಬುಧವಾರ ಅಮೆರಿಕದ ಸಮರ ನೌಕೆಗಳಾದ ಕೋಲ್ ಮತ್ತು ಲಬೂನ್ನ ಮೇಲೆ ಹಲವಾರು ಬ್ಯಾಲಿಸ್ಟಿಕ್ ಕ್ಷಿಪಣಿ ದಾಳಿ ನಡೆಸಲಾಗಿದೆ. ಕೆಂಪು ಸಮುದ್ರದಲ್ಲಿ ಸಾಗುತ್ತಿದ್ದ ಲೈಬೀರಿಯಾ ಧ್ವಜ ಹೊಂದಿರುವ ಕಂಟೈನರ್ ಹಡಗಿನ ಮೇಲೆ ಬ್ಯಾಲಿಸ್ಟಿಕ್



ಕ್ಷಿಪಣಿ ಹಾಗೂ ಡ್ರೋನ್ ದಾಳಿ ನಡೆಸಿರುವುದನ್ನು ಹೌದಿ ಮಿಲಿಟರಿ ವಕ್ತಾರರು ದೃಢಪಡಿಸಿದ್ದರು.

ಈ ದಾಳಿಗೆ ಪ್ರತಿಯಾಗಿ ಹೌದಿ ನೆಲೆಗಳ ಮೇಲೆ ದಾಳಿ ನಡೆಸಿರುವುದಾಗಿ ಅಮೆರಿಕದ ಸೆಂಟ್ರಲ್ ಕಮಾಂಡ್ ಹೇಳಿದೆ. ಹೌದಿಗಳ ಬಳಿಯಿರುವ ಶಸ್ತ್ರಾಸ್ತ್ರಗಳು ಅಮೆರಿಕ ಮತ್ತು ಮಿತ್ರರಾಷ್ಟ್ರಗಳ ಪಡೆಗಳಿಗೆ ಹಾಗೂ ಈ ವಲಯದಲ್ಲಿ ವ್ಯಾಪಾರಿ ಹಡಗುಗಳಿಗೆ ಸ್ಪಷ್ಟ ಮತ್ತು ಸನ್ನಿಹಿತ ಬೆದರಿಕೆಯನ್ನು ಪ್ರಸ್ತುತಪಡಿಸಿವೆ. ಹೌದಿಗಳ ಈ ಬೇಜವಾಬ್ದಾರಿ ಮತ್ತು ಅಪಾಯಕಾರಿ ನಡವಳಿಕೆಯು ಪ್ರಾದೇಶಿಕ ಸ್ಥಿರತೆಗೆ ಬೆದರಿಕೆಯೊಡ್ಡಿದೆ ಎಂದು ಅಮೆರಿಕದ ಸೇನಾಪಡೆ ಹೇಳಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ದರ್ಶನ್ ಪ್ರಕರಣದ ಬಗ್ಗೆ ಇತ್ತೀಚೆಗೆ ಗೊತ್ತಾಯ್ತು



ಕೊಲೆ ಪ್ರಕರಣದಲ್ಲಿ ಜೈಲು ಪಾಲಾಗಿರುವ ದರ್ಶನ್ ಬಗ್ಗೆ ಮೊದಲ ಬಾರಿಗೆ ನಟಿ ಶರ್ಮಿಳಾ ಮಾಂಡ್ರೆ ಮಾತನಾಡಿದ್ದಾರೆ. ದರ್ಶನ್ ಪ್ರಕರಣವನ್ನು ಕಾನೂನು ನಿರ್ಧಾರ ಮಾಡುತ್ತದೆ ಎಂದು ನಟಿ ಮಾತನಾಡಿದ್ದಾರೆ.

'ನವಗ್ರಹ' ಟೈಮ್‌ನಲ್ಲಿ ದರ್ಶನ್ ಅವರ ಜೊತೆ ಕೆಲಸ ಮಾಡಿರುವ ಅನುಭವ ಚೆನ್ನಾಗಿತ್ತು. ದರ್ಶನ್ ಅವರ ಫುಲ್ ಫ್ಯಾಮಿಲಿ ನನಗೆ ಚೆನ್ನಾಗಿ ಗೊತ್ತು. 'ನವಗ್ರಹ' ಚಿತ್ರವನ್ನು ದರ್ಶನ್ ತಮ್ಮ ದಿನಕರ್ ಸರ್ ಡೈರೆಕ್ಷನ್ ಮಾಡುತ್ತಿದ್ದರು. ಸೆಟ್‌ನಲ್ಲಿ ದರ್ಶನ್ ಸರ್ ಚೆನ್ನಾಗಿರುತ್ತಿದ್ದರು. 2007ರಲ್ಲಿ 'ನವಗ್ರಹ' ಶೂಟಿಂಗ್ ಆಗಿತ್ತು ಎಂದಿದ್ದಾರೆ.

ಇನ್ನೂ ಈ ಪ್ರಕರಣದ ಬಗ್ಗೆ ನನಗೆ ವಿಷಯ ಗೊತ್ತಿರಲಿಲ್ಲ. ಆದರೆ ಇತ್ತೀಚೆಗೆ ಗೊತ್ತಾಯ್ತು. ಆದರೆ ಇದರ ಬಗ್ಗೆ ಕಾನೂನು ನಿರ್ಧರಿಸಲಿ ಎಂದಷ್ಟೇ ಶರ್ಮಿಳಾ ಮಾಂಡ್ರೆ ಮಾತನಾಡಿದ್ದಾರೆ.



# ವಿನಯ್ ರಾಜ್‌ಕುಮಾರ್ ನಟನೆಯ ಪೆಪೆ ಸಿನಿಮಾದ ಜೇನು ಕುರುಬ ಸಾಂಗ್ ರಿಲೀಸ್



ಪ್ರತಿ ಸಿನಿಮಾದಲ್ಲಿಯೂ ತಾನೊಬ್ಬ ಕ್ಲಾಸ್ ಆ್ಯಕ್ಟರ್ ಅನ್ನೋದನ್ನು ಸಾಬೀತುಪಡಿಸಿಕೊಂಡು ಬಂದಿರುವ ದೊಡ್ಮನೆ ಕುಡಿ ವಿನಯ್ ರಾಜ್‌ಕುಮಾರ್ 'ಪೆಪೆ' ಸಿನಿಮಾ ಮೂಲಕ ಮಾಸ್ ಅವತಾರ ತಾಳಿದ್ದಾರೆ. 'ಪೆಪೆ' ಚಿತ್ರದ ಟೀಸರ್ ಈಗಾಗಲೇ ಹಿಟ್ ಲೀಸ್ಟ್ ಸೇರಿದ್ದು, ಇದೀಗ ಬಿಡುಗಡೆಯಾಗಿರುವ ಹಾಡು ಭಾರೀ ಸದ್ದು ಮಾಡುತ್ತಿದೆ.

'ಪೆಪೆ' ಚಿತ್ರತಂಡ ಪ್ರಿಸೆಟ್ ಎಂಬ ಟ್ಯಾಗ್ ಲೈನ್ ಅಡಿ ಚಿತ್ರ ಹಾಡೊಂದನ್ನು ಅನಾವರಣ ಮಾಡಿದೆ. ಪಿಆರ್‌ಕೆ ಆಡಿಯೋದಲ್ಲಿ ರಿಲೀಸ್ ಆಗಿರುವ ಗಾನಬಜಾನ ವಿಭಿನ್ನತೆಯಿಂದ ಕೂಡಿದೆ. ಜೇನು ಕುರುಬ ಬುಡಗಟ್ಟು ಜನಾಂಗದ ಆಚಾರ ವಿಚಾರ ತೆರೆದಿಡುವ ಗೀತೆಗೆ ಗಿರಿಜನ ಸಮಗ್ರ ಅಭಿವೃದ್ಧಿ ಕಲಾ ಸಂಸ್ಥೆ ಹಾಗೂ ಜೆ.ಜಿ.ಕುಮಾರ ಧ್ವನಿಯಾಗಿದ್ದು, ಪೂರ್ಣಚಂದ್ರ ತೇಜಸ್ವಿ ಟ್ಯೂನ್ ಹಾಕಿದ್ದಾರೆ. ಇನ್ನೂ ಚಿತ್ರತಂಡ ಖುದ್ದು ಹೇಳಿಕೊಂಡಂತೆ ಇಡೀ ಚಿತ್ರದ ಸೌಂಡ್ ಡಿಸೈನ್ ಬೇರೆ ರೀತಿ ಇದೆ ಅನ್ನೋದಕ್ಕೆ ಬಿಡುಗಡೆಯಾಗಿರುವ ಈ ಹಾಡು ಸೂಕ್ತ ಉದಾಹರಣೆ. ಶ್ರೀಲೇಶ್ ಎಸ್ ನಾಯರ್ ನಿರ್ದೇಶನ ಮೂಡಿ ಬರುತ್ತಿರುವ 'ಪೆಪೆ' ಒಂದು ರೀತಿ ಪರಿಪೂರ್ಣ ವಿಭಿನ್ನ ಸಿನಿಮಾ. ಈ ಚಿತ್ರದಲ್ಲಿ ನಾಯಕಿಯಾಗಿ ಕಾಜಲ್ ಕುಂದರ್ ನಟಿಸಿದ್ದು, ಮಯೂರ್ ಪಟೇಲ್, ಯಶ್ ಶೆಟ್ಟಿ, ಬಲ ರಾಜ್‌ವಾಡಿ, ಮೇದಿನಿ ಕೆಳಮನೆ, ಅರುಣಾ ಬಾಲರಾಜ್, ನವೀನ್ ಡಿ. ಪಡೀಲ್‌ರನ್ನು ಒಳಗೊಂಡ ತಾರಾಬಳಗವಿದೆ. 'ಪೆಪೆ' ಚಿತ್ರಕ್ಕೆ ಅಭಿಷೇಕ್ ಜಿ. ಕಾಸರಗೋಡು ಕ್ಯಾಮೆರಾ ವರ್ಕ್, ಪೂರ್ಣಚಂದ್ರ ತೇಜಸ್ವಿಯವರ ಸಂಗೀತ ನಿರ್ದೇಶನವಿದೆ.

ಡಾ. ರವಿವರ್ಮ, ಚೇತನ್ ಡಿಸೋಜಾ, ಡಿಫ್ರೆಂಟ್ ಡ್ಯಾನಿ, ನರಸಿಂಹ ಅವರ ತಂಡ ಚಿತ್ರದ ಸಾಹಸ ದೃಶ್ಯಗಳನ್ನು ನಿರ್ದೇಶನ ಮಾಡಿದೆ. ಬೆಂಗಳೂರು, ಮೈಸೂರು, ಕೊಡಗು, ಸಕಲೇಶಪುರಗಳಲ್ಲಿ 'ಪೆಪೆ' ಸಿನಿಮಾವನ್ನು ಸೆರೆಹಿಡಿಯಲಾಗಿದೆ. ಉದಯ್ ಸಿನಿ ವೆಂಚರ್, ದೀಪ ಫಿಲ್ಮ್ಸ್ ಬ್ಯಾನರ್‌ನಡಿ ಉದಯ್ ಶಂಕರ್.ಎಸ್ ಹಾಗೂ ಕೋಲಾರದ ಬಿ.ಎಮ್.ಶ್ರೀರಾಮ್ ಚಿತ್ರಕ್ಕೆ ಬಂಡವಾಳ ಹೂಡಿದ್ದು, ಸದ್ಯದಲ್ಲೇ ಸಿನಿಮಾ ತೆರೆಗೆ ಬರಲಿದೆ.



# ಶೋಭಿತಾ ಜೊತೆ ಸಮಂತಾ ಮಾಜಿ ಪತಿ ನಿಶ್ಚಿತಾರ್ಥ



ಟಾಲಿವುಡ್ ನಟ ನಾಗಚೈತನ್ಯ ಹೈದರಾಬಾದ್‌ನ ತಮ್ಮ ನಿವಾಸದಲ್ಲಿ ನಟಿ ಶೋಭಿತಾ ಜೊತೆ ನಿಶ್ಚಿತಾರ್ಥ ಮಾಡಿಕೊಂಡಿದ್ದಾರೆ. ಈ ಸಿಹಿಸುದ್ದಿಯನ್ನು ನಾಗಾರ್ಜುನ ಅಕ್ಕಿನೇನಿ ಸೋಷಿಯಲ್ ಮೀಡಿಯಾದಲ್ಲಿ ತಿಳಿಸಿದ್ದಾರೆ.

ನಮ್ಮ ಮಗ ನಾಗಚೈತನ್ಯ ಮತ್ತು ಶೋಭಿತಾ ಅವರೊಂದಿಗೆ ನಿನ್ನೆ ಬೆಳಗ್ಗೆ 9:42ಕ್ಕೆ ನಡೆದ ನಿಶ್ಚಿತಾರ್ಥವನ್ನು ಘೋಷಿಸಲು ನಾವು ಸಂತೋಷಪಡುತ್ತೇವೆ. ಶೋಭಿತಾಳನ್ನು ನಮ್ಮ ಕುಟುಂಬಕ್ಕೆ ಸ್ವಾಗತಿಸಲು ಖುಷಿಯಾಗುತ್ತಿದೆ. ಈ ಜೋಡಿಗೆ ಅಭಿನಂದನೆಗಳು. ಅವರಿಗೆ ಜೀವನಪೂರ್ತಿ ಸಂತೋಷ ಮತ್ತು ಪ್ರೀತಿಯಿಂದ ಕೂಡಿರಲಿ ಎಂದು ಹಾರೈಸುತ್ತೇನೆ. ದೇವರು ಒಳ್ಳೆಯದು ಮಾಡಲಿ. 8-8-8 ಪ್ರೀತಿಯ ಆರಂಭ ಎಂದು ಈ ಜೋಡಿಗೆ ನಾಗಾರ್ಜುನ ಶುಭಕೋರಿದ್ದಾರೆ.

ಸಮಂತಾ ಜೊತೆಗಿನ ಡಿವೋರ್ಸ್ ನಂತರ ಶೋಭಿತಾ ಜೊತೆ ನಾಗಚೈತನ್ಯ ಹೆಸರು ಕೇಳಿ ಬಂದಿತ್ತು. ಆಗಾಗ ಶೋಭಿತಾ ಜೊತೆ ನಾಗಚೈತನ್ಯ ವಿದೇಶಕ್ಕೆ ತೆರಳುತ್ತಿದ್ದರು. ಆ ಫೋಟೋಗಳು ವೈರಲ್ ಆಗಿತ್ತು. ಈಗ ನಿಶ್ಚಿತಾರ್ಥ ಸುದ್ದಿ ಮೂಲಕ ಕ್ಲ್ಯಾರಿಟಿ ಸಿಕ್ಕಿದೆ. ಸದ್ಯ ಈ ವಿಷ್ಯ ಕೇಳಿ ಸಮಂತಾ ಫ್ಯಾನ್ಸ್ ಶಾಕ್ ಆಗಿದ್ದಾರೆ.

ಅಂದಹಾಗೆ, ಸಮಂತಾ ಜೊತೆಗಿನ ಹಲವು ವರ್ಷಗಳ ಪ್ರೀತಿಗೆ ನಾಗಚೈತನ್ಯ 2021ರಲ್ಲಿ ಡಿವೋರ್ಸ್ ಪಡೆಯುವ ಮೂಲಕ ಬೇರೆಯಾದರು.

# ಮತ್ತೆ ಬಂತು 99 ರೂಪಾಯಿ ಟಿಕೆಟ್

ಭಾರತದ ಮಲ್ಟಿಪ್ಲೆಕ್ಸ್ ಚೈನ್ ಗಳು ಆಗಾಗ ಸಿನಿಮಾ ಟಿಕೆಟ್ ಗಳ ಮೇಲೆ ಆಫರ್ ಗಳನ್ನು ನೀಡುತ್ತಾರೆ. ಈಗ 'ಸಿನಿಮಾ ಲವರ್ಸ್ ವೀಕೆಂಡ್' ಆಫರ್ ಬಂದಿದೆ. ಆಗಸ್ಟ್ 9ರಿಂದ ಆಗಸ್ಟ್ 11ರವರೆಗೆ ಈ ಆಫರ್ ಇರಲಿದೆ. 9ನೇ ತಾರೀಕು ಟಿಕೆಟ್ ಬೆಲೆ 99 ರೂಪಾಯಿ ಇದೆ. 10 ಹಾಗೂ 11ರಂದು 199 ರೂಪಾಯಿ ಇರಲಿದೆ. ಆದರೆ, ನೋಡಲು ಯಾವುದೇ ಸಿನಿಮಾಗಳು ಇಲ್ಲ ಎಂದು ಸಿನಿಪ್ರಿಯರು ಬೇಸರ ಮಾಡಿಕೊಳ್ಳುತ್ತಿದ್ದಾರೆ.

ಪಿವಿಆರ್ ಹಾಗೂ ಐನಾಕ್ಸ್ 'ಸಿನಿಮಾ ಲವರ್ಸ್ ಡೇ' ಆಚರಣೆ ಮಾಡುತ್ತಿದೆ. ಇದರ ಅಡಿಯಲ್ಲಿ ಸಿನಿಮಾ ಪ್ರಿಯರು ಮೂರು ದಿನ ಸಿನಿಮಾನ ಎಂಜಾಯ್ ಮಾಡಬಹುದಾಗಿದೆ. ಇನ್ನು, ಐಮ್ಯಾಕ್ಸ್, 4ಡಿಎಕ್ಸ್, ಎಂ ಎಕ್ಸ್ 4ಡಿ ಸ್ಕ್ರೀನ್ ಗಳಲ್ಲಿ ಆಗಸ್ಟ್ 9ರಂದು 199 ರೂಪಾಯಿ ಹಾಗೂ 10-11ರಂದು 299 ರೂಪಾಯಿ ಟಿಕೆಟ್ ಬೆಲೆ ಇರಲಿದೆ. ಇನ್ನು ಗೋಲ್ಡ್, ಲಕ್ಸ್, ಡೈರೆಕ್ಟರ್ಸ್ ಕಟ್, ಇನ್ ಸಿಗ್ನಿಯಾ ಥಿಯೇಟರ್ ಗಳಲ್ಲಿ 9ರಂದು 299 ರೂಪಾಯಿ ಹಾಗೂ 10-11ರಂದು 499 ರೂಪಾಯಿ ಟಿಕೆಟ್ ಬೆಲೆ ಇರಲಿದೆ.

ಕೆಲವರಿಗೆ ಗೋಲ್ಡ್, ಲಕ್ಸ್, ಡೈರೆಕ್ಟರ್ಸ್ ಕಟ್ ಥಿಯೇಟರ್ ಗಳನ್ನು ಎಕ್ಸ್ ಪೀರಿಯನ್ಸ್ ಮಾಡಬೇಕು ಎಂದಿರುತ್ತದೆ. ಆದರೆ, ದುಬಾರಿ ಟಿಕೆಟ್ ದರದಿಂದ ಅದು ಸಾಧ್ಯವಾಗಿರುವುದಿಲ್ಲ. ಆದರೆ, ಈಗ ಆಫರ್ ಇರುವುದರಿಂದ ಕಡಿಮೆ ಬೆಲೆಯಲ್ಲಿಯೇ ಇಲ್ಲಿ ಸಿನಿಮಾ ನೋಡಬಹುದು.



# ಜಾವೆಲಿನ್‌ನಲ್ಲಿ ಬೆಳ್ಳಿ ಗೆದ್ದು ದಾಖಲೆ ಬರೆದ ನೀರಜ್

ಟೋಕಿಯೋ ಒಲಿಂಪಿಕ್ಸ್‌ನಲ್ಲಿ ಚಿನ್ನ ಗೆದ್ದಿದ್ದ ಭಾರತದ ನೀರಜ್ ಚೋಪ್ರಾ ಪ್ಯಾರಿಸ್ ಒಲಿಂಪಿಕ್ಸ್‌ನ ಜಾವೆಲಿನ್ ಎಸೆತದಲ್ಲಿ ಬೆಳ್ಳಿ ಗೆದ್ದಿದ್ದಾರೆ. ಈ ಮೂಲಕ ಸತತ ಎರಡು ಒಲಿಂಪಿಕ್ಸ್‌ನಲ್ಲಿ ಚಿನ್ನ ಮತ್ತು ಬೆಳ್ಳಿ ಗೆದ್ದ ಭಾರತದ ಮೊದಲ ಕ್ರೀಡಾಪಟು ಎಂಬ ದಾಖಲೆ ಬರೆದಿದ್ದಾರೆ.

ನೀರಜ್ ಚೋಪ್ರಾ 89.45 ಮೀಟರ್ ದೂರ ಎಸೆದರೆ ಪಾಕಿಸ್ತಾನದ ಅರ್ಶದ್ ನದೀಂ 92.97 ಮೀಟರ್ ದೂರ ಎಸೆದು ಚಿನ್ನದ ಪದಕ ಪಡೆದರು. ಗ್ರೆನೆಡಾದ ಆ್ಯಂಡರ್ಸನ್‌ಪೀಟರ್ 88.54 ಮೀಟರ್ಸ್ ದೂರ ಥ್ರೋ ಮಾಡಿ ಕಂಚು ಪಡೆದರು.

2020ರ ಟೋಕಿಯೊ ಒಲಿಂಪಿಕ್ಸ್‌ನಲ್ಲಿ ಚಿನ್ನದ ಪದಕ ಗೆದ್ದಿದ್ದ ನೀರಜ್ ಈ ಬಾರಿ ಚಿನ್ನದ ಪದಕದ ಮೇಲೆ ಕಣ್ಣಿಟ್ಟಿದ್ದರು. 6 ಅವಕಾಶಗಳ ಪೈಕಿ 5 ಪ್ರಯತ್ನಗಳಲ್ಲಿ ಫೌಲ್ ಆಗಿದ್ದ ನೀರಜ್ ಎರಡನೇ ಪ್ರಯತ್ನದಲ್ಲಿ 89.45 ಮೀಟರ್ ದೂರ ಎಸೆದರು.

ನೀರಾಜ್ ಬೆಳ್ಳಿ ಗೆಲ್ಲುವುದರೊಂದಿಗೆ ಭಾರತ ಈ ಕೂಟದಲ್ಲಿ ಒಟ್ಟು ಐದು ಪದಕ ಗೆದ್ದಿದೆ. ಉಳಿದ ನಾಲ್ಕು ಕಂಚಿನ ಪದಕವಾಗಿದ್ದು ಗುರುವಾರ ಹಾಕಿಯಲ್ಲಿ ಸ್ಪೇನ್ ಸೋಲಿಸಿ ಮೂರನೇ ಸ್ಥಾನ ಪಡೆದುಕೊಂಡಿತ್ತು. ಅರ್ಶದ್ ನದೀಂ ಅವರು ಚಿನ್ನ ಗೆಲ್ಲುವುದರೊಂದಿಗೆ ಪಾಕಿಸ್ತಾನ ಈ ಒಲಿಂಪಿಕ್ಸ್ ಟೂರ್ನಿಯಲ್ಲಿ ಮೊದಲ ಪದಕ ಪಡೆಯಿತು.




## ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಭಾರತಕ್ಕೆ ಮತ್ತೊಂದು ಪದಕ

# ಭಾರತ ಪುರುಷರ ಹಾಕಿ ತಂಡಕ್ಕೆ ಕಂಚು

2024ರ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಭಾರತಕ್ಕೆ ಮತ್ತೊಂದು ಪದಕ ದಕ್ಕಿದೆ. ಭಾರತೀಯ ಪುರುಷರ ಹಾಕಿ ತಂಡವು ಕಂಚಿನ ಪದಕ ಗೆದ್ದು ಬೀಗಿದೆ.

2-1 ಗೋಲುಗಳಿಂದ ಸ್ಪೇನ್ ಮಣಿಸಿದ ಭಾರತ ತಂಡವು ಕಂಚಿನ ಪದಕಕ್ಕೆ ಕೊರಳೊಡ್ಡಿದೆ. 2020 ರ ಟೋಕಿಯೋ ಒಲಿಂಪಿಕ್ಸ್‌ನಲ್ಲೂ ಭಾರತ ಪುರುಷರ ಹಾಕಿ ತಂಡ ಕಂಚು ಗೆದ್ದಿತ್ತು.

ಜರ್ಮನ್ ವಿರುದ್ಧ ಸೆಮಿಫೈನಲ್ ತಲುಪಲು ವಿಫಲವಾಗಿ ಭಾರತ ತಂಡ ನಿರಾಸೆ ಅನುಭವಿಸಿತ್ತು. ಕಂಚಿನ ಹೋರಾಟದಲ್ಲಿ ಸ್ಪೇನ್ ವಿರುದ್ಧ 2-1 ಅಂತರ ಗೋಲುಗಳ ಜಯ ದಾಖಲಿಸಿದೆ. ಭಾರತದ ಪರ ತನ್ನ ಅಂತಿಮ ಪಂದ್ಯವನ್ನು ಆಡಿದ ಅನುಭವಿ ಗೋಲ್ಕೀಪರ್ ಪಿ.ಆರ್.ಶ್ರೀಜೇಶ್ ಉತ್ತಮ ಪ್ರದರ್ಶನ ತೋರಿದರು.

1968 ಮತ್ತು 1972 ರಲ್ಲಿ ಭಾರತವು ಕೊನೆಯ ಬಾರಿಗೆ ಒಲಂಪಿಕ್ಸ್‌ನಲ್ಲಿ ಬ್ಯಾಕ್ ಟು ಬ್ಯಾಕ್ ಹಾಕಿ ಪದಕಗಳನ್ನು ಗೆದ್ದಿತ್ತು. ಅದಾದ 52 ವರ್ಷಗಳ ಬಳಿಕ ಈಗ ಮತ್ತೊಮ್ಮೆ ಒಲಿಂಪಿಕ್ಸ್‌ನಲ್ಲಿ ಬ್ಯಾಕ್ ಟು ಬ್ಯಾಕ್ ಪದಕ ಗೆದ್ದು ಇತಿಹಾಸ ಬರೆದಿದೆ.

ಸದ್ಯ ಇಲ್ಲಿವರೆಗೆ ಒಲಿಂಪಿಕ್ಸ್‌ನಲ್ಲಿ ಹಾಕಿ ಇತಿಹಾಸದಲ್ಲಿ 8 ಚಿನ್ನ, 1 ಬೆಳ್ಳಿ, 3 ಕಂಚು ಸೇರಿದಂತೆ 12 ಪದಕಗಳನ್ನು ಭಾರತದ ಹಾಕಿ ತಂಡ ಗೆದ್ದಿದೆ.




# ಖುದ್ದು ವಿಚಾರಣೆಗೆ ಹಾಜರಾಗುವಂತೆ ಸಿದ್ದರಾಮಯ್ಯ, ಡಿಕೆ ಶಿವಕುಮಾರ್‌ಗೆ ಕೋರ್ಟ್ ಸಮನ್ಸ್

**ಬೆಂಗಳೂರು:** ರಾಹುಲ್ ಗಾಂಧಿ ವಿರುದ್ಧ ಇಡಿ ವಿಚಾರಣೆ ಖಂಡಿಸಿ ಪ್ರತಿಭಟನೆ ಮಾಡಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಡಿಕೆ ಶಿವಕುಮಾರ್ ಅವರಿಗೆ ಕೋರ್ಟ್ ಸಮನ್ಸ್ ನೀಡಿದೆ. ಆಗಸ್ಟ್ 29ರಂದು ಖುದ್ದು ಹಾಜರಾಗುವಂತೆ ಸಿಎಂ, ಡಿಸಿಎಂಗೆ ಬೆಂಗಳೂರಿನ 42ನೇ ಎಸಿಎಂಎಂ ಕೋರ್ಟ್ ಸಮನ್ಸ್ ಜಾರಿ ಮಾಡಿದೆ. ನ್ಯಾಷನಲ್ ಹೆರಾಲ್ಡ್ ಪತ್ರಿಕೆ ಹೆಸರಿನಲ್ಲಿ ಹಣ ಅಕ್ರಮ ವರ್ಗಾವಣೆ ಮಾಡಲಾಗಿದೆ ಎಂದು ಆರೋಪಿಸಲಾದ ಪ್ರಕರಣದಲ್ಲಿ ಇಡಿ (ಜಾರಿ ನಿರ್ದೇಶನಾಲಯ) ರಾಹುಲ್ ಗಾಂಧಿಗೆ ಅನಗತ್ಯವಾಗಿ ಕಿರುಕುಳ ನೀಡುತ್ತಿದೆ ಎಂದು ಆರೋಪಿಸಿ ಡಿಕೆ ಶಿವಕುಮಾರ್, ಸಿದ್ದರಾಮಯ್ಯ ಸೇರಿದಂತೆ ಹಲವು ಕಾಂಗ್ರೆಸ್ ನಾಯಕರು ಬೆಂಗಳೂರಿನಲ್ಲಿ ಪ್ರತಿಭಟನೆ ಮಾಡಿದ್ದರು. ಕಾನೂನುಬಾಹಿರವಾಗಿ ಪ್ರತಿಭಟನೆ ಮಾಡಿದ್ದಾರೆಂದು 2022ರಲ್ಲಿ ವಿಲ್ಸನ್ ಗಾರ್ಡನ್ ಪೊಲೀಸ್ ಠಾಣೆಯಲ್ಲಿ ಡಿಕೆ ಶಿವಕುಮಾರ್, ಸಿದ್ದರಾಮಯ್ಯ ವಿರುದ್ಧ ದೂರು ದಾಖಲಾಗಿತ್ತು.



2022ರಲ್ಲಿ ರಾಹುಲ್ ಗಾಂಧಿಯವರನ್ನು ಇಡಿ ವಿಚಾರಣೆಗೊಳಪಡಿಸಿರುವುದನ್ನು ಪ್ರತಿಭಟನೆ ಮಾಡಿದ್ದಕ್ಕೆ ಶಿವಾಜಿನಗರ ಹಾಗೂ ವಿಲ್ಸನ್ ಗಾರ್ಡ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದವು. ಆದ್ರೆ, ಡಿಕೆ ಶಿವಕುಮಾರ್ ವಿರುದ್ಧ ಶಿವಾಜಿನಗರ ಪೊಲೀಸ್ ಠಾಣೆಯಲ್ಕಿ ದಾಖಲಾಗಿದ್ದ ಪ್ರಕರಣವನ್ನು ಹೈಕೋರ್ಟ್ ವಜಾಗೊಳಿಸಿತ್ತು. ಆದ್ರೆ, ಇದೀಗ ವಿಲ್ಸನ್ ಗಾರ್ಡನ್ ಕೇಸ್‌ನಲ್ಲಿ ಬೆಂಗಳೂರಿನ 42ನೇ ಎಸಿಎಂಎಂ ಕೋರ್ಟ್, ಸಿಎಂ ಸಿದ್ದರಾಮಯ್ಯ, ಡಿಕೆ ಶಿವಕುಮಾರ್ ಅವರಿಗೆ ಆಗಸ್ಟ್ 29ರಂದು ಖುದ್ದು ಹಾಜರಾಗುವಂತೆ ಸಮನ್ಸ್ ನೀಡಿದೆ.

**ಪ್ರಕರಣದ ಹಿನ್ನೆಲೆ ಏನು ?:** ವಿಚಾರಣೆ ನೆಪದಲ್ಲಿ ಜಾರಿ ನಿರ್ದೇಶನಾಲಯವು ರಾಹುಲ್ ಗಾಂಧಿಗೆ ಅನಗತ್ಯವಾಗಿ ಕಿರುಕುಳ ನೀಡುತ್ತಿದೆ ಎಂದು ಆರೋಪಿಸಿ ಕೆಪಿಸಿಸಿ ವತಿಯಿಂದ 2022 ರ ಜೂ.16ರಂದು ರಾಜಭವನ ಚಲೋ ಹಮ್ಮಿಕೊಳ್ಳಲಾಗಿತ್ತು. ಅದರಲ್ಲಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಭಾಗವಹಿಸಿ ಪ್ರತಿಭಟನೆ ನಡೆಸಿದ್ದರು. ಈ ಸಂಬಂಧ ವಿಲ್ಸನ್ ಗಾರ್ಡನ್ ಮತ್ತು ಶಿವಾಜಿನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. 42ನೇ ಎಸಿಎಂಎಂ ನ್ಯಾಯಾಲಯಕ್ಕೆ ಶಿವಾಜಿನಗರ ಠಾಣೆಯ ಸಬ್ ಇನ್ಸ್‌ಪೆಕ್ಟರ್ ಅವರು ಕರ್ನಾಟಕ ಪೊಲೀಸ್ ಕಾಯ್ದೆಯಡಿ ಖಾಸಗಿ ದೂರು ದಾಖಲಿಸಿದ್ದರು.

ಬೆಂಗಳೂರು ನಗರದ ಸ್ವಾತಂತ್ರ್ಯ ಉದ್ಯಾನದಲ್ಲಿ ಮಾತ್ರ ಪ್ರತಿಭಟನೆ ಮಾಡಬೇಕೆಂದು ಕಡ್ಡಾಯಗೊಳಿಸಿ ನಗರ ಪೊಲೀಸ್ ಆಯುಕ್ತರು ಆದೇಶ ಮಾಡಿದ್ದರು. ಈ ಆದೇಶ ಉಲ್ಲಂಘಿಸಿ ಡಿ.ಕೆ.ಶಿವಕುಮಾರ್ ನಗರದ ಕ್ವೀನ್ಸ್ ರಸ್ತೆಯ ಕೆಪಿಸಿಸಿ ಕಚೇರಿಯಿಂದ ಪ್ರತಿಭಟನೆ ನಡೆಸಿದ್ದರು. ಆ ಮೂಲಕ ಸಾರ್ವಜನಿಕ ನೆಮ್ಮದಿಗೆ ಭಂಗ ಉಂಟು ಮಾಡಿದ್ದಾರೆ. ಮತ್ತೊಂದೆಡೆ ಪ್ರತಿಭಟನೆ ನಡೆಸಲು ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿ ಸಹ ಪಡೆದಿಲ್ಲ ಎಂದು 2022ರ ಜೂ.16ರಂದು ದಾಖಲಿಸಿದ ಖಾಸಗಿ ದೂರಿನಲ್ಲಿ ದೂರುದಾರರು ಆರೋಪಿಸಿದ್ದರು. ಪ್ರಕರಣ ಸಂಬಂಧ ಕಾಗ್ನಿಜೆನ್ಸ್ ತೆಗೆದುಕೊಂಡಿದ್ದ 42ನೇ ಎಸಿಎಂಎಂ ನ್ಯಾಯಾಲಯ, ಡಿ.ಕೆ.ಶಿವಕುಮಾರ್‌ಗೆ ಸಮನ್ಸ್ ಜಾರಿ ಮಾಡಿತ್ತು. ಇನ್ನೊಂದೆಡೆ ಈ ಪ್ರಕರಣ ರದ್ದುಪಡಿಸಲು ಕೋರಿ ಡಿಕೆ ಶಿವಕುಮಾರ್ ಅವರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಡಿಕೆಶಿ ಅರ್ಜಿ ಪುರಸ್ಕರಿಸಿದ್ದ ಹೈಕೋರ್ಟ್ ಡಿಕೆ ಶಿವಕುಮಾರ್ ವಿರುದ್ಧ ಪ್ರಕರಣವನ್ನು ರದ್ದುಗೊಳಿಸಿ ಆದೇಶ ಹೊರಡಿಸಿತ್ತು. ಆದ್ರೆ, ಇದೀಗ ವಿಲ್ಸನ್ ಗಾರ್ಡನ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ಕೋರ್ಟ್, ಸಿಎಂ, ಡಿಸಿಎಂಗೆ ಸಮನ್ಸ್ ಜಾರಿ ಮಾಡಿದೆ.

## ಪ್ರವಾಸೋದ್ಯಮ ಇಲಾಖೆ ಹಣ ವಂಚನೆ ಪ್ರಕರಣ

# 19 ಆರೋಪಿಗಳ ಬಂಧನ

**ಬಾಗಲಕೋಟೆ:** ಬಾಗಲಕೋಟೆ ಪ್ರವಾಸೋದ್ಯಮ ಇಲಾಖೆಯ 2 ಕೋಟಿ 47 ಲಕ್ಷ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿ ಮತ್ತಷ್ಟು ಆರೋಪಿಗಳು ಬಲೆಗೆ ಬಿದ್ದಿದ್ದಾರೆ. ಇದುವರೆಗೂ ಒಟ್ಟು 19 ಜನರನ್ನು ಬಂಧಿಸಲಾಗಿದೆ. ಅತಿ ಶೀಘ್ರದಲ್ಲೇ ಸಿಐಡಿಗೆ ಈ ಪ್ರಕರಣವನ್ನು ಹಸ್ತಾಂತರಿಸಲು ತಯಾರಿ ನಡೆದಿದೆ.

2021 ರಿಂದ 2024 ರವರೆಗೆ 54 ಬಾರಿ 33 ಖಾತೆಗೆ ಅಕ್ರಮ ಹಣ ವರ್ಗಾವಣೆ ಮಾಡಲಾಗಿದೆ. ಈ ಪ್ರಕರಣದಲ್ಲಿ ಬಾಗಲಕೋಟೆ ಐಡಿಬಿಐ ಬ್ಯಾಂಕ್ ಗುತ್ತಿಗೆ ನೌಕರ ಸೇಲ್ಸ್ ಎಕ್ಸಿಕ್ಯೂಟಿವ್, ಕಿಂಗ್ ಪಿನ್ ಸೂರಜ್ ಸಗರ, ಐಡಿಬಿಐ ಬ್ಯಾಂಕ್ ಅಸಿಸ್ಟೆಂಟ್ ಮ್ಯಾನೇಜರ್ ಗಳಾದ ನಿಶಾ ಹಾಗೂ ಸರಸ್ವತಿ, ಬ್ಯಾಂಕ್ ಪಬ್ಲಿಕ್ ರಿಲೇಷನ್ಶಿಪ್ ಆಫಿಸರ್ ವಿದ್ಯಾಧರ ಹಿರೆಮಠ, ಲೋನ್ ವಿಭಾಗದ ಅಸಿಸ್ಟೆಂಟ್ ಮ್ಯಾನೇಜರ್ ರೋಹಿತ್, ಹಣ ಹಾಕಿಸಿಕೊಂಡ 14 ಜನ ಸೇರಿ ಒಟ್ಟು 19 ಜನರನ್ನು ಬಂಧಿಸಲಾಗಿದೆ.



ಹಣ ಹಾಕಿಸಿಕೊಂಡ ಖಾತೆದಾರರು 30%, 50% ಕಮಿಷನ್ ಪಡೆದು ಹಣ ಸೂರಜ್‌ಗೆ ಮರಳಿಸುತ್ತಿದ್ದರು. ನಂತರ ಸೂರಜ್ ಹಾಗೂ ಆರೋಪಿ ಬ್ಯಾಂಕ್ ಸಿಬ್ಬಂದಿ ಹಣ ಹಂಚಿಕೊಳ್ಳಿದ್ದರು. ಸದ್ಯ ಇದೀಗ ಈ ಘಟನೆ ಸಂಬಂಧ 19 ಜನರನ್ನು ಬಂಧಿಸಿ ವಿಚಾರಣೆ ನಡೆಸಲಾಗುತ್ತಿದೆ.

ಇನ್ನು ಬಂಧಿತ ಆರೋಪಿಗಳು ಪ್ರವಾಸೋದ್ಯಮ ಇಲಾಖೆ ಜೊತೆಗೆ ಇತರೆ ನಾಲ್ಕು ಇಲಾಖೆ ಹಣ ಕೂಡ ಅಕ್ರಮ ವರ್ಗಾವಣೆ ಮಾಡಿದ್ದಾರೆ ಎಂಬ ಮಾಹಿತಿ ಸಿಕ್ಕಿದೆ. ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಿಂದ 79 ಲಕ್ಷ 75 ಸಾವಿರ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ 86 ಲಕ್ಷದ 40 ಸಾವಿರ, ಕೈಮಗ್ಗ ಮತ್ತು ಜವಳಿ ಇಲಾಖೆಯ 18 ಲಕ್ಷದ 15 ಸಾವಿರ, ಹಿಂದುಳಿದ ವರ್ಗ ಕಲ್ಯಾಣ ಇಲಾಖೆಯ 1 ಕೋಟಿ 76 ಲಕ್ಷದ 58 ಸಾವಿರ ಸೇರಿ ಒಟ್ಟು ಐದು ಇಲಾಖೆಯ 6 ಕೋಟಿ ವಂಚನೆ ನಡೆದಿದೆ. ಇತರೆ ಖಾತೆಗಳ ವಂಚನೆಯಲ್ಲೂ ಇವರದ್ದೇ ಕೈವಾಡ ಇರುವುದು ಬಹುತೇಕ ಖಚಿತವಾಗಿದೆ. ವಂಚನೆ ಹಣ ಆರು ಕೋಟಿಗೆ ತಲುಪಿದ ಹಿನ್ನೆಲೆ ಸಿಐಡಿಗೆ ಪ್ರಕರಣವನ್ನು ಹಸ್ತಾಂತರಿಸುವ ಸಾಧ್ಯತೆ ಇದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com